ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಆಗಸ್ಟ್ 7 ಬುಧವಾರ 2024

45

ಸಂಪುಟ: 45 | ಸಂಚಿಕೆ: 113 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಮುಡಾ ಹಗರಣ: ದೂರುದಾರ ಅಬ್ರಹಾಂಗೆ ರಾಜಭವನ ಬುಲಾವ್

ಮತ್ತಷ್ಟು ಮಾಹಿತಿ ಪಡೆದ ರಾಜ್ಯಪಾಲರು

ನಿರಂತರವಾಗಿ ಕಾನೂನು ತಜ್ಞರೊಂದಿಗೆ ರಾಜ್ಯಪಾಲರ ಸಮಾಲೋಚನೆ



ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್

ಬೆಂಗಳೂರು, ಆ.6(ಕೆಎಂಶಿ)–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಿಂದ ಶೇ.50:50 ಅನುಪಾತದಡಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕುಟುಂಬ ಪಡೆದ ನಿವೇಶನಕ್ಕೆ ಸಂಬಂಧಿಸಿದಂತೆ ದೂರುದಾರ ಟಿ.ಜೆ.ಅಬ್ರಹಾಂ ಅವರಿಂದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಇಂದು ಮತ್ತಷ್ಟು ಮಾಹಿತಿ ಪಡೆದಿದ್ದಾರೆ.

ಅಬ್ರಹಾಂ ಅವರನ್ನು ರಾಜಭವನಕ್ಕೆ ಕರೆಸಿಕೊಂಡ ರಾಜ್ಯಪಾಲರು, ಸುಮಾರು 90 ನಿಮಿಷಗಳ ಕಾಲ ಮುಡಾ ಹಗರಣ ಹಾಗೂ ಅಬ್ರಹಾಂ ವಿರುದ್ಧ ಮುಖ್ಯಮಂತ್ರಿ ಮತ್ತು ಸರ್ಕಾರ ಮಾಡಿರುವ ದೂರಿನ ಬಗ್ಗೆಯೂ ವಿವರಣೆ ಪಡೆದರು. ಪ್ರಕರಣಕ್ಕೆ ಸಂಬಂಧಿಸಿದಂತೆ ಅಬ್ರಹಾಂ ನೀಡಿದ ಮತ್ತಷ್ಟು ದಾಖಲೆ ಹಾಗೂ ಆತ ಮುಡಾಗೆ ನೀಡಿರುವ ಅರ್ಜಿ ಮತ್ತು ಲೋಕಾಯುಕ್ತರಿಗೆ ನೀಡಿರುವ ದೂರಿಗೆ ಸಂಬಂಧಿಸಿದಂತೆಯೂ ಮಾಹಿತಿ ಪಡೆದುಕೊಂಡರು.



ಟಿ.ಜೆ.ಅಬ್ರಹಾಂ


ಅಬ್ರಹಾಂ ದೂರಿನ ಮೇಲೆ ಸರ್ಕಾರಕ್ಕೆ ನೀಡಿದ್ದ ನೋಟಿಸ್‌ಗೆ ಬಂದಿರುವ ಎರಡು ಪತ್ರಗಳಲ್ಲಿ ತಮಗೆ ಎದುರಾದ ಸಂಶಯಗಳ ಬಗ್ಗೆ ರಾಜ್ಯಪಾಲರು ವಿವರಣೆ ಪಡೆದರೆನ್ನಲಾಗಿದೆ. ಈ ಸಂದರ್ಭದಲ್ಲಿ ಕಾನೂನು ತಜ್ಞರು ಮತ್ತು ಅಧಿಕಾರಿಗಳು ಉಪಸ್ಥಿತರಿದ್ದು, ಅವರ ನಡುವೆ ನಡೆದ ಕಲಾಪದ ಪೂರ್ಣ ವಿವರ ಲಭ್ಯವಾಗಿಲ್ಲ. ರಾಜ್ಯಪಾಲರನ್ನು ಭೇಟಿ ಮಾಡಿ ರಾಜಭವನದಿಂದ ಹೊರಬಂದ ಅಬ್ರಹಾಂ, ಸುದ್ದಿಗಾರರೊಂದಿಗೆ ಮಾತನಾಡಿ, ನಾನು ಮಾಡಿರುವ ಆರೋಪಕ್ಕೆ ಸಂಬಂಧಿಸಿದಂತೆ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಡುತ್ತಾರೆಂಬ ವಿಶ್ವಾಸವಿದೆ. ಭೇಟಿ ಸಂದರ್ಭದಲ್ಲಿ ನಾನು ಸಾಕಷ್ಟು ವಿವರಣೆ ನೀಡಿದ್ದೇನೆ, ಅದಕ್ಕೆ ರಾಜ್ಯಪಾಲರಿಂದ ನ್ಯಾಯ ದೊರೆಯಲಿದೆ. ನನ್ನಿಂದ ಪ್ರಕರಣಕ್ಕೆ ಸಂಬಂಧಿಸಿದಂತೆ ■ 9ನೇ ಪುಟಕ್ಕೆ

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರಿಗೆ ಮತ್ತೊಂದು ದೂರು

■ ಡಿ ನೋಟಿಫಿಕೇಷನ್ ಆರೋಪದಲ್ಲಿ ಸಾಮಾಜಿಕ ಹೋರಾಟಗಾರ ಸ್ನೇಹಮಯಿ ಕೃಷ್ಣ ದಾಖಲೆ ಸಹಿತ ದೂರು ಸಲ್ಲಿಕೆ ■ ನಕಲಿ ದಾಖಲೆ ಸೃಷ್ಟಿಸಿ ಡಿ ನೋಟಿಫೈ ಆರೋಪ



ಸ್ನೇಹಮಯಿ ಕೃಷ್ಣ



ಮುಡಾ ಕಚೇರಿ



ಸಿದ್ದರಾಮಯ್ಯ

ಬೆಂಗಳೂರು, ಆ.6(ಕೆಎಂಶಿ)–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಅಧಿಕಾರ ದುರ್ಬಳಕೆ ಮಾಡಿಕೊಂಡು ಈ ಹಿಂದೆ ಡಿ–ನೋಟಿಫೈ ಮಾಡಿಸಿರುವ ಆರೋಪ ರಾಜಭವನದ ಅಂಗಳಕ್ಕೆ ತಲುಪಿದೆ. ಪ್ರಾಧಿಕಾರದ ವತಿಯಿಂದಲೇ ಮುಖ್ಯಮಂತ್ರಿ ಅವರು ತಮ್ಮ ಕುಟುಂಬಕ್ಕೆ ಕೋಟ್ಯಾಂತರ ರೂ. ಬೆಲೆ ಬಾಳುವ ನಿವೇಶನಗಳನ್ನು ಪಡೆದಿದ್ದಾರೆ ಎಂಬ ಎರಡು ಪ್ರತ್ಯೇಕ ದೂರುಗಳು ದಾಖಲಾಗಿ ರಾಜ್ಯಪಾಲರು, ಮುಖ್ಯಮಂತ್ರಿ ಅವರಿಂದ ವಿವರಣೆ ಕೇಳಿದ ಬೆನ್ನಲ್ಲೇ ಮತ್ತೊಂದು ದೂರು ದಾಖಲಾಗಿದೆ.

ಡಿ–ನೋಟಿಫಿಕೇಶನ್ ಪ್ರಕರಣಕ್ಕೆ ಸಂಬಂಧಿಸಿದಂತೆ ತಮ್ಮ ವಿರುದ್ಧ ದೂರು ಸಲ್ಲಿಸುತ್ತಾರೆಂಬ ಮಾಹಿತಿ ಬರುತ್ತಿದ್ದಂತೆ ಮುಖ್ಯಮಂತ್ರಿ ಅವರು ಇಂದು ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೈಗೊಳ್ಳಲಿದ್ದ ಮೂರು ದಿನದ ಪ್ರವಾಸ ರದ್ದು ಮಾಡಿ, ಸೋಮವಾರ ರಾತ್ರಿಯೇ ದಿಢೀರನೆ ಮೈಸೂರಿಗೆ ತೆರಳಿದ್ದರು. ಮೈಸೂರು ತಾಲೂಕು ವರುಣಾದ ಉತ್ತನಹಳ್ಳಿಯಲ್ಲಿ ಆಶ್ರಯ ಮನೆಗಳಿಗಾಗಿ ಭೂಸ್ವಾಧೀನ ಮಾಡಿದ್ದ ಜಮೀನನ್ನು ಮೂವತ್ತು ವರ್ಷದ ಬಳಿಕ ಡಿ–ನೋಟಿಫೈ ಮಾಡುವಂತೆ ಸಿದ್ದರಾಮಯ್ಯ ಪತ್ರ ಬರೆದಿದ್ದರು ಎನ್ನುವುದೇ ಗುರುತರ ಆರೋಪ. ಸಾಮಾಜಿಕ ಹೋರಾಟಗಾರ ಸ್ನೇಹಮಯಿ ಕೃಷ್ಣ ಎಂಬುವರು ಪ್ರಕರಣಕ್ಕೆ ಸಂಬಂಧಿಸಿದಂತೆ ದಾಖಲೆ ಸಮೇತ ರಾಜ್ಯಪಾಲರಿಗೆ ಇಂದು ದೂರು ನೀಡಿದ್ದಾರೆ. ಮರಪ್ಪ ಎಂಬುವರ ಹೆಸರಿಗೆ 1.39 ಎಕರೆ ಜಮೀನು ಡಿ–ನೋಟಿಫೈ ಮಾಡುವಂತೆ ಸಿದ್ದರಾಮಯ್ಯ ಶಿಫಾರಸು ಮಾಡಿದ್ದರು. ಈ ಜಮೀನಿಗೂ ಮರಪ್ಪ ಎಂಬುವವರಿಗೂ ಯಾವುದೇ ಸಂಬಂಧ ಇಲ್ಲ. ನಕಲಿ ದಾಖಲೆ ಸೃಷ್ಟಿಸಿ ನಂತರ ಅವರ ಹೆಸರಿನಲ್ಲಿ ಡಿ–ನೋಟಿಫೈ ಮಾಡಲಾಗಿದೆ.

ಸಿದ್ದರಾಮಯ್ಯ ಅವರ ಪತ್ರ ಆಧರಿಸಿ 14 ತಿಂಗಳ ಬಳಿಕ 1.39 ಎಕರೆಯನ್ನು ಅಂದಿನ ಮೈಸೂರು ಜಿಲ್ಲಾಧಿಕಾರಿ ಅವರು ಡಿ–ನೋಟಿಫೈ ಮಾಡಿದ್ದಾರೆ. ನಕಲಿ ದಾಖಲೆ ಆಧಾರದ ಮೇಲೆ ವಾರಸುದಾರರಲ್ಲದವರಿಗೆ ಡಿ–ನೋಟಿಫೈ ಮಾಡಿಸುವಲ್ಲಿ ಸಿದ್ದರಾಮಯ್ಯ ಭಾಗಿಯಾಗಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಹಾಗೂ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ದೂರುದಾರರು ರಾಜ್ಯಪಾಲರಿಗೆ ಮನವಿ ಮಾಡಿದ್ದಾರೆ.

ಕೆಬಿಜೆಯವರ ಭೂಮಂತ್ರ...



ಹಳ್ಳಿ ಹಕ್ಕಿ ಹಾಡುತ್ತಿದೆ... ಕೇಳಿದಿರಾ?

■ ಪುಟ–4

ಒಲಿಂಪಿಕ್ ಕ್ರೀಡಾಕೂಟ: ಜಾವೆಲಿನ್‌ನಲ್ಲಿ ನೀರಜ್ ಚೋಪ್ರಾ, ಕುಸ್ತಿಯಲ್ಲಿ ವಿನೇಶ್ ಪೋಗಟ್ ಫೈನಲ್‌ಗೆ





ಪ್ಯಾರಿಸ್: ಪ್ಯಾರಿಸ್ ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಭಾರತದ ಜಾವೆಲಿನ್ ತಾರೆ ನೀರಜ್ ಚೋಪ್ರಾ, ಕುಸ್ತಿಯಲ್ಲಿ ವಿನೇಶ್ ಪೋಗಟ್ ಅವರು ಚಿನ್ನದ ಪದಕ ಭರವಸೆ ಮೂಡಿಸಿದ್ದಾರೆ.

ಮಂಗಳವಾರ ನಡೆದ ಪುರುಷರ ಜಾವೆಲಿನ್ ಥ್ರೋ 'ಬಿ' ಗುಂಪಿನ ಅರ್ಹತಾ ಸುತ್ತಿಗೆ ಟೋಕಿಯೋ ಒಲಿಂಪಿಕ್ ಚಿನ್ನದ ಪದಕ ವಿಜೇತ ನೀರಜ್ ಚೋಪ್ರಾ ವಿಶ್ವಾಸದಿಂದ ಕಣಕ್ಕೆ ಇಳಿದರು. ಅಲ್ಲದೇ ಅವರು ತಮ್ಮ ಮೊದಲ ಪ್ರಯತ್ನದಲ್ಲೇ ಬರೋಬ್ಬರಿ 89.34 ಮೀಟರ್ ಜಾವೆಲಿನ್ ಎಸೆಯುವ ಮೂಲಕ ದಾಖಲೆ ಬರೆದರು. ಆ ಮೂಲಕ ಅಗ್ರಸ್ಥಾನ ಪಡೆದು ಫೈನಲ್‌ಗೆ ಅರ್ಹತೆ ಪಡೆದರು.

ಉಳಿದಂತೆ, ಅರ್ಹತಾ ಪಂದ್ಯದಲ್ಲಿ ಎರಡು ಬಾರಿಯ ಮಾಜಿ ವಿಶ್ವ ಚಾಂಪಿಯನ್ ಆಂಡರ್ಸನ್ ಪೀಟರ್ಸ್ 88.63 ಮೀಟರ್ ದೂರಕ್ಕೆ ಭರ್ಜಿ ಎಸೆದು 2ನೇ ಸ್ಥಾನ ಪಡೆದರೆ, ಜರ್ಮನಿಯ ವೆಬರ್ ಜೂಲಿಯನ್ 87.76 ಮೀ ಎಸೆತದೊಂದಿಗೆ 3ನೇ ಸ್ಥಾನ ಪಡೆದರು. ಪಾಕಿಸ್ತಾನದ ಅರ್ಷದ್ ನದೀಮ್ 86.59 ದೂರಕ್ಕೆಸೆದು 4ನೇ ಸ್ಥಾನದಲ್ಲಿದ್ದಾರೆ.

ಭಾರತದ ಕಿಶೋರ್ ಜೆನಗೆ ಭಾರೀ ನಿರಾಸೆ: ಇದಕ್ಕೂ ಮುನ್ನ ನಡೆದ ಜಾವೆಲಿನ್ ಥ್ರೋ 'ಎ' ಗುಂಪಿನ ಅರ್ಹತಾ ಸುತ್ತಿನಲ್ಲಿ ಭಾರತದ ಕಿಶೋರ್ ಜೆನ ಅವರು ಫೈನಲ್‌ಗೆ ಅರ್ಹತೆ ಪಡೆಯುವಲ್ಲಿ ವಿಫಲರಾದರು. ಅವರು 80.73 ಮೀಟರ್ ಜಾವೆಲಿನ್ ಎಸೆಯುವ ಮೂಲಕ 9ನೇ ಸ್ಥಾನಕ್ಕೆ ತೃಪ್ತಿ ಪಟ್ಟರು.

ಆ.8 ರಂದು ಫೈನಲ್: ಜಾವೆಲಿನ್ ಥ್ರೋ ಸ್ಪರ್ಧೆ ಫೈನಲ್ ಪಂದ್ಯ ಗುರುವಾರ (ಆ.8) ಭಾರತೀಯ ಕಾಲಮಾನ ರಾತ್ರಿ 11:55ಕ್ಕೆ ನಡೆಯಲಿದೆ.

ಕುಸ್ತಿಯಲ್ಲಿ ಫೈನಲ್ ತಲುಪಿದ ಪೋಗಟ್: ಭಾರತದ ತಾರಾ ಕುಸ್ತಿಪಟು ವಿನೇಶ್ ಪೋಗಟ್ ಅವರು ಪ್ಯಾರಿಸ್ ಒಲಿಂಪಿಕ್ಸ್ ಕುಸ್ತಿ ಸ್ಪರ್ಧೆಯಲ್ಲಿ ಫೈನಲ್ ತಲುಪಿದ್ದಾರೆ. ಈ ಮೂಲಕ ಭಾರತಕ್ಕೆ ಮತ್ತೊಂದು ಪದಕ ಖಚಿತಪಡಿಸಿದ್ದಾರೆ.


ಮಂಗಳವಾರ ನಡೆದ ಮಹಿಳೆಯರ 50 ಕೆಜಿ ವಿಭಾಗದಲ್ಲಿ ನಡೆದ ಸೆಮಿಫೈನಲ್ ಪಂದ್ಯದಲ್ಲಿ ಕ್ಯೂಬಾದ ಯುಸ್ನೆಲಿಸ್ ಗುಜ್ಮನ್ ಲೋಪೆಜ್ ವಿರುದ್ಧ ಭಾರತದ ವಿನೇಶಾ 5–0 ಅಂತರದಲ್ಲಿ ಜಯಗಳಿಸಿದರು. ಈ ಗೆಲುವಿನೊಂದಿಗೆ ಒಲಿಂಪಿಕ್ಸ್‌ನಲ್ಲಿ ಕುಸ್ತಿಯಲ್ಲಿ ಫೈನಲ್ ಪ್ರವೇಶಿಸಿದ ಮೊದಲ ■ 9ನೇ ಪುಟಕ್ಕೆ

ವರಮಹಾಲಕ್ಷ್ಮಿ ಹಬ್ಬಕ್ಕೆ ಗೃಹಲಕ್ಷ್ಮಿ ಹಣ ಜಮೆ

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಘೋಷಣೆ

■ ಪುಟ–3

ಉಚ್ಛಾಟಿತ ಪ್ರಧಾನಿ ಶೇಖ್ ಹಸೀನಾಗೆ ಭಾರತದ ನೆರವು; ಸರ್ವಪಕ್ಷ ಸಭೆಯಲ್ಲಿ ಮಹತ್ವದ ನಿರ್ಣಯ!



ಶೇಖ್ ಹಸೀನಾ

ನವದೆಹಲಿ, ಆ.6– ಬಾಂಗ್ಲಾದೇಶದಲ್ಲಿ ನಡೆಯುತ್ತಿರುವ ಸರ್ಕಾರಿ ವಿರೋಧಿ ಪ್ರತಿಭಟನೆ ಮತ್ತು ಹಿಂಸಾಚಾರದ ಹಿನ್ನಲೆಯಲ್ಲಿ ದೆಹಲಿಯಲ್ಲಿ ಮಂಗಳವಾರ ನಡೆದ ಮಹತ್ವದ ಸರ್ವಪಕ್ಷ ಸಭೆಯಲ್ಲಿ ಬಾಂಗ್ಲಾದೇಶ ಉಚ್ಛಾಟಿತ ಪ್ರಧಾನಿ ಶೇಖ್ ಹಸೀನಾಗೆ ಭಾರತದ ನೆರವು ನೀಡುವ ಕುರಿತು ಮಹತ್ವದ ನಿರ್ಣಯ ಕೈಗೊಳ್ಳಲಾಗಿದೆ.

ಸೋಮವಾರ ಸಂಜೆ ಭಾರತಕ್ಕೆ ಆಗಮಿಸಿದ ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರಿಗೆ ಭಾರತ ಸಕಲ ರೀತಿಯ ನೆರವು ನೀಡುವುದಾಗಿ ಭರವಸೆ ನೀಡಿದ್ದು, ಮುಂದಿನ ಕ್ರಮವನ್ನು ನಿರ್ಧರಿಸಲು ಸಮಯ ನೀಡಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಎಸ್ ಜೈಶಂಕರ್ ಮಂಗಳವಾರ ಸರ್ವಪಕ್ಷ ಸಭೆಯಲ್ಲಿ ತಿಳಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಸಂಸತ್ ಭವನದಲ್ಲಿ ಎಲ್ಲ ರಾಜಕೀಯ ಪಕ್ಷದ ನಾಯಕರಿಗೆ ಮಾಹಿತಿ ನೀಡಿದ ವಿದೇಶಾಂಗ ಸಚಿವ ಎಸ್ ಜೈಶಂಕರ್, 'ಬಾಂಗ್ಲಾದೇಶದಲ್ಲಿರುವ 10,000ಕ್ಕೂ ಹೆಚ್ಚು ಭಾರತೀಯ ವಿದ್ಯಾರ್ಥಿಗಳ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಭಾರತ ಸರ್ಕಾರವು ಬಾಂಗ್ಲಾದೇಶ ಸೇನೆಯೊಂದಿಗೆ ನಿರಂತರ ಸಂಪರ್ಕದಲ್ಲಿದೆ. ಬಾಂಗ್ಲಾದೇಶದಲ್ಲಿ ನಡೆಯುತ್ತಿರುವ ಬೆಳವಣಿಗೆಗಳ ಬಗ್ಗೆ ಇಂದು ಸಂಸತ್ತಿನಲ್ಲಿ ■ 9ನೇ ಪುಟಕ್ಕೆ

ಬಾಂಗ್ಲಾ ಬಿಕ್ಕಟ್ಟು: ನೊಬೆಲ್ ಪ್ರಶಸ್ತಿ ಪುರಸ್ಕೃತ ಮುಹಮ್ಮದ್ ಯೂನಸ್ ಮಧ್ಯಂತರ ಸರ್ಕಾರದ ಮುಖ್ಯ ಸಲಹೆಗಾರ

ಢಾಕಾ: ನೊಬೆಲ್ ಪ್ರಶಸ್ತಿ ಪುರಸ್ಕೃತ ಡಾ.ಮುಹಮ್ಮದ್ ಯೂನಸ್ ಅವರು ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಮುಖ್ಯ ಸಲಹೆಗಾರರಾಗಿದ್ದಾರೆ ಎಂದು ತಾರತಮ್ಯ ವಿರೋಧಿ ವಿದ್ಯಾರ್ಥಿ ಚಳವಳಿಯ ಸಂಯೋಜಕರು ತಿಳಿಸಿದ್ದಾರೆ. ಈ ಸಂಬಂಧ ಸಾಮಾಜಿಕ ಮಾಧ್ಯಮದಲ್ಲಿ ವೀಡಿಯೋ ಪೋಸ್ಟ್ ಮಾಡಿದ್ದಾರೆ. ದೇಶವನ್ನು ಉಳಿಸಲು ವಿದ್ಯಾರ್ಥಿ ಸಮುದಾಯದ ಒತ್ತಾಯದ ಮೇರೆಗೆ ಪ್ರೊ ಯೂನಸ್ ಈ ನಿರ್ಣಾಯಕ ಜವಾಬ್ದಾರಿಯನ್ನು ತೆಗೆದುಕೊಳ್ಳಲು ಒಪ್ಪಿಕೊಂಡಿದ್ದಾರೆ ಎಂದು ಆಂದೋಲನದ ಪ್ರಮುಖ ಸಂಯೋಜಕರಲ್ಲಿ ಒಬ್ಬರಾದ ನಹಿದ್ ಇಸ್ಲಾಂ ಹೇಳಿದ್ದಾರೆ ಎಂದು ಡೈಲಿ ಸ್ಟಾರ್ ಪತ್ರಿಕೆ ವರದಿ ಮಾಡಿದೆ.

ಮಧ್ಯಂತರ ಸರ್ಕಾರಕ್ಕೆ ಚೌಕಟ್ಟನ್ನು ಘೋಷಿಸಲು ನಾವು 24 ಗಂಟೆಗಳನ್ನು ತೆಗೆದುಕೊಂಡಿದ್ದೇವೆ. ಆದರೆ, ತುರ್ತು ಪರಿಸ್ಥಿತಿಯನ್ನು ಪರಿಗಣಿಸಿ, ನಾವು ಅದನ್ನು ಈಗ ಘೋಷಿಸುತ್ತಿದ್ದೇವೆ ಎಂದು ನಹಿದ್ ಹೇಳಿದರು. ನಾವು ಮಧ್ಯಂತರ ಸರ್ಕಾರವನ್ನು ರಚಿಸಲು ನಿರ್ಧರಿಸಿದ್ದೇವೆ. ಇದರಲ್ಲಿ ಎಲ್ಲರಿಗೂ ಇಷ್ಟವಾಗುವ ಎಲ್ಲರೂ ಇಷ್ಟಪಡುವ ಹೆಸರಾಂತ ನೊಬೆಲ್ ಪ್ರಶಸ್ತಿ ಪುರಸ್ಕೃತ ಡಾ ಮೊಹಮ್ಮದ್ ಯೂನಸ್ ಮುಖ್ಯ ಸಲಹೆಗಾರರಾಗಿದ್ದಾರೆ ಎಂದು ನಹಿದ್ ಹೇಳಿದರು. ಸಂಸತ್ತನ್ನು ಆದಷ್ಟು ಬೇಗ ವಿಸರ್ಜಿಸಿ ಮಧ್ಯಂತರ ಸರ್ಕಾರ ರಚಿಸಲಾಗುವುದು ಎಂದು ಅಧ್ಯಕ್ಷ ಮೊಹಮ್ಮದ್ ಶಹಾಬುದ್ದೀನ್ ಹೇಳಿದ ಕೆಲವೇ ಗಂಟೆಗಳ ನಂತರ ಅವರ ಘೋಷಣೆ ಬಂದಿದೆ. ಸೋಮವಾರ ತಡರಾತ್ರಿ ರಾಷ್ಟ್ರವನ್ನುದ್ದೇಶಿಸಿ ದೂರದರ್ಶನದ ಭಾಷಣದಲ್ಲಿ ಮಾತನಾಡಿದ ಅಧ್ಯಕ್ಷರು ಹಲವಾರು ಪ್ರಕರಣಗಳಲ್ಲಿ ಶಿಕ್ಷೆಗೊಳಗಾದ ನಂತರ ಗೃಹಬಂಧನದಲ್ಲಿರುವ ಮಾಜಿ ಪ್ರಧಾನಿ ಖಲೀದಾ ಜಿಯಾ ಅವರನ್ನು ಬಿಡುಗಡೆ ಮಾಡಲು ಆದೇಶಿಸಿದರು.




ಡಾ.ಮುಹಮ್ಮದ್ ಯೂನಸ್

ಡಾ ಯೂನಸ್ ನೇತೃತ್ವದ ಮಧ್ಯಂತರ ಸರ್ಕಾರವನ್ನು ರಚಿಸಲು ಸಾಧ್ಯವಾದಷ್ಟು ಬೇಗ ಕ್ರಮಗಳನ್ನು ತೆಗೆದುಕೊಳ್ಳುವಂತೆ ನಹಿದ್ ಅಧ್ಯಕ್ಷರನ್ನು ಒತ್ತಾಯಿಸಿದರು. ದೇಶದಲ್ಲಿ ಅರಾಜಕತೆ ಮತ್ತು ಜನರ ಜೀವನದ ಮೇಲೆ ಅಭದ್ರತೆ ಇರುವುದರಿಂದ, ಕಾನೂನು ಮತ್ತು ಸುವ್ಯವಸ್ಥೆಯನ್ನು ಪುನಃಸ್ಥಾಪಿಸಲು ತ್ವರಿತ ಮತ್ತು ಪರಿಣಾಮಕಾರಿ ಕ್ರಮಗಳನ್ನು ತೆಗೆದುಕೊಳ್ಳುವಂತೆ ನಾವು ಅಧ್ಯಕ್ಷರನ್ನು ಒತ್ತಾಯಿಸುತ್ತೇವೆ ಮತ್ತು ಸ್ವಾತಂತ್ರ್ಯ ಬಯಸುವ ವಿದ್ಯಾರ್ಥಿಗಳು ಸಹ ಕಾನೂನಿನ ಸಹಾಯಕ್ಕಾಗಿ ಬೀದಿಗಿಳಿಯುತ್ತಾರೆ ಎಂದು ಅವರು ಹೇಳಿದರು.

ವಿದ್ಯಾರ್ಥಿಗಳು ಪ್ರಸ್ತಾಪಿಸಿದ ಸರ್ಕಾರವನ್ನು ಹೊರತುಪಡಿಸಿ ಬೇರೆ ಯಾವುದೇ ಸರ್ಕಾರವನ್ನು ಸ್ವೀಕರಿಸಲಾಗುವುದಿಲ್ಲ. ನಾವು ಹೇಳಿದಂತೆ, ಯಾವುದೇ ಮಿಲಿಟರಿ ಸರ್ಕಾರ ಅಥವಾ ಮಿಲಿಟರಿ ಬೆಂಬಲಿತ ಸರ್ಕಾರ ಅಥವಾ ಫ್ಯಾಸಿಸ್ಟ್ ಸರ್ಕಾರವನ್ನು ಒಪ್ಪಿಕೊಳ್ಳುವುದಿಲ್ಲ" ಎಂದು ನಹಿದ್ ಹೇಳಿದರು.

ಕುಮಾರಸ್ವಾಮಿ, ವಿಜಯೇಂದ್ರಗೆ ಕಾಂಗ್ರೆಸ್ ಸರ್ಕಾರ ತೆಗೆಯೋ ಧಮ್ಮಿಲ್ಲ; ಧೈರ್ಯವಿಲ್ಲ

ಕಾಂಗ್ರೆಸ್ ಜನಾಂದೋಲನ ಸಮಾವೇಶದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ವಾಗ್ದಾಳಿ; ಕಾರ್ಯಕ್ರಮದಲ್ಲಿ 12 ಮಂದಿ ಕ್ಯಾಬಿನೆಟ್ ಸಚಿವರು ಭಾಗಿ




ಕಾಂಗ್ರೆಸ್ ಪಕ್ಷದ ವತಿಯಿಂದ ನಡೆದ ಬೃಹತ್ ಜನಾಂದೋಲನ ಸಮಾವೇಶವನ್ನು ಡಿಸಿಎಂ ಡಿ.ಕೆ.ಶಿವಕುಮಾರ್ ಉದ್ಘಾಟಿಸಿದರು.

ಮಂಡ್ಯ, ಆ.6(ಮೋಹನ್‌ರಾಜ್)– ಬಿಜೆಪಿ– ಜೆಡಿಎಸ್ ನಡೆಸುತ್ತಿರುವ ಪಾದಯಾತ್ರೆ ನನ್ನ ಹಾಗೂ ಸಿದ್ದರಾಮಯ್ಯ ವಿರುದ್ಧ ಅಲ್ಲ. ಬದಲಾಗಿ ಕರ್ನಾಟಕದ ಜನರ ಆಶೀರ್ವಾದದಿಂದ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರವನ್ನು ಮುಗಿಸಬೇಕೆಂಬುದೇ ಎರಡು ಪಕ್ಷಗಳ ಧ್ಯೇಯವಾಗಿದೆ. ಆದರೆ ಇದು ಯಶಸ್ವಿಯಾಗುವುದಿಲ್ಲ. ಏಕೆಂದರೆ, ಹೆಚ್.ಡಿ. ಕುಮಾರಸ್ವಾಮಿ ಹಾಗೂ ಬಿ.ವೈ. ವಿಜಯೇಂದ್ರಗೆ ಈ ಸರ್ಕಾರವನ್ನು ತೆಗೆಯುವ ಧಮ್ಮು ಮತ್ತು ಧೈರ್ಯವಿಲ್ಲ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಾಗ್ದಾಳಿ ನಡೆಸಿದರು.

ಮಂಗಳವಾರ ನಗರದ ಡಾ.ರಾಜ್‌ಕುಮಾರ್ ಬಡಾವಣೆಯ ಮೈಶುಗರ್ ಮೈದಾನದಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ನಡೆದ ಬೃಹತ್ ಜನಾಂದೋಲನ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ಸರ್ಕಾರ ಬೀಳಿಸುವುದು ನಿಮ್ಮ ಹಣೆಯಲ್ಲೂ ಬರೆದಿಲ್ಲ. ಕೇವಲ ಸುಳ್ಳು, ಷಡ್ಯಂತ್ರಗಳನ್ನು ಮಾಡುತ್ತಾ ನಮ್ಮ ವಿರುದ್ಧ ಮಾತನಾಡಬಹುದಷ್ಟೇ. ಇನ್ನು ಹತ್ತು ವರ್ಷ ನಮ್ಮ ಸರ್ಕಾರವೇ ಅಧಿಕಾರದಲ್ಲಿರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ನಿಮ್ಮದು ಪಾದಯಾತ್ರೆಯಲ್ಲ ಪಾಪ ವಿಮೋಚನಾ ಯಾತ್ರೆಯಾಗಿದೆ. ■ 9ನೇ ಪುಟಕ್ಕೆ

ಸಿಎಂ ಸಿದ್ದರಾಮಯ್ಯ ಸರ್ಕಾರ ಕಿತ್ತಾಕುವುದೇ ನಮ್ಮ ಮೈಸೂರು ಚಲೋ ಗುರಿ

● ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಆಕ್ರೋಶ ● ಮಂಡ್ಯದ ಬೂದನೂರು ತಲುಪಿದ ಬಿಜೆಪಿ–ಜೆಡಿಎಸ್ ಪಾದಯಾತ್ರೆ ● ವಿಜಯೇಂದ್ರ, ನಿಖಿಲ್, ಅಶ್ವತ್ಥ್‌ನಾರಾಯಣ, ಶ್ರೀರಾಮುಲು, ಅರವಿಂದ್ ಬೆಲ್ಲದ್ ಸೇರಿ ಹಲವು ನಾಯಕರು ಭಾಗಿ



ಮದ್ದೂರು ತಾಲೂಕಿನ ನಿಡಘಟ್ಟದಿಂದ ಮಂಡ್ಯದ ಬೂದನೂರುವರೆಗೆ ಜಂಟಿ ಪಾದಯಾತ್ರೆ ಮಂಗಳವಾರ ಯಶಸ್ವಿಯಾಗಿ ಸಾಗಿತು.

ಮದ್ದೂರು, ಆ.6(ಮೋಹನ್ ರಾಜ್)– ಮೈಸೂರು ಮುಡಾದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಕ್ರಮವಾಗಿ ತಮ್ಮ ಪತ್ನಿ ಹೆಸರಿನಲ್ಲಿ ನಿವೇಶನ ಪಡೆದಿದ್ದಾರೆಂದು ಆರೋಪಿಸಿ ಬೆಂಗಳೂರಿನಿಂದ ಮೈಸೂರಿಗೆ ರಾಜ್ಯ ಬಿಜೆಪಿ ಮತ್ತು ಜೆಡಿಎಸ್ ಹಮ್ಮಿಕೊಂಡಿರುವ ಜಂಟಿ ಪಾದಯಾತ್ರೆ ಮಂಗಳವಾರ ತಾಲೂಕಿನ ನಿಡಘಟ್ಟದಿಂದ ಮಂಡ್ಯದ ಬೂದನೂರುವರೆಗೆ ಯಶಸ್ವಿಯಾಗಿ ನಡೆಯಿತು. ನಿನ್ನೆ ಚನ್ನಪಟ್ಟಣದಿಂದ ಆರಂಭವಾಗಿದ್ದ ಪಾದಯಾತ್ರೆ ಮದ್ದೂರಿನ ನಿಡಘಟ್ಟ ಬಳಿ ಸ್ಥಗಿತಗೊಂಡಿತ್ತು. ಮಂಗಳವಾರ ಬೆಳಿಗ್ಗೆ ನಿಡಘಟ್ಟದಿಂದ ನಾಲ್ಕನೇ ದಿನದ ಪಾದಯಾತ್ರೆ ಆರಂಭವಾಗಿ ಮಂಡ್ಯ ತಾಲೂಕಿನ ಬೂದನೂರು ಬಳಿಗೆ ಬಂದು ಸ್ಥಗಿತಗೊಂಡಿದ್ದು, ಬುಧವಾರ ಮಂಡ್ಯ ನಗರ ಪ್ರವೇಶಿಸಲಿದೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹಾಗೂ ಜೆಡಿಎಸ್ ಯುವಘಟಕದ ಅಧ್ಯಕ್ಷ ನಿಖಿಲ್‌ಕುಮಾರಸ್ವಾಮಿ ನೇತೃತ್ವದಲ್ಲಿ ಆರಂಭವಾದ ಪಾದಯಾತ್ರೆಗೆ ಬೆಂಗಳೂರು–ಮೈಸೂರು ಹೆದ್ದಾರಿಯಲ್ಲಿ ಅದ್ದೂರಿ ಸ್ವಾಗತ ದೊರೆಯಿತು. ಪ್ರತಿ ಗ್ರಾಮಗಳ ಗೇಟ್‌ನಲ್ಲಿ ಬೃಹತ್ ಹಾರಗಳನ್ನು ಹಾಕುತ್ತಾ ಉಭಯ ಪಕ್ಷಗಳ ನಾಯಕರಿಗೆ ಅದ್ದೂರಿ ಸ್ವಾಗತ ನೀಡಲಾಯಿತು. ಕೆಲವೆಡೆ ಆರತಿ ಬೆಳಗಿ, ಕಲಾ ಮತ್ತು ಸಾಂಸ್ಕೃತಿಕ ತಂಡಗಳೊಂದಿಗೆ ಸ್ವಾಗತಿಸಿ, ಪಟಾಕಿ ಸಿಡಿಸಲಾಯಿತು.

ಮದ್ದೂರು ಪಟ್ಟಣದ ಟಿ.ಬಿ.ವೃತ್ತದಲ್ಲಿ ಸಾರ್ವಜನಿಕರನ್ನುದ್ದೇಶಿಸಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ನಮ್ಮ ಪಾದಯಾತ್ರೆ ■ 6ನೇ ಪುಟಕ್ಕೆ

ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್ ವೇನಲ್ಲಿ ಎಐ ಕ್ಯಾಮರಾ ಕಣ್ಣು

ಸಂಚಾರ ನಿಯಮ ಉಲ್ಲಂಘಿಸುವ ಸರ್ಕಾರಿ ವಾಹನಗಳಿಗೂ ದಂಡ

ಎಡಿಜಿಪಿ ಅಲೋಕ್‌ಕುಮಾರ್



ಫೈಲ್ ಚಿತ್ರ

ಮೈಸೂರು,ಆ.6(ಪಿಎಂ)- ಸಂಚಾರ ನಿಯಮ ಉಲ್ಲಂಘನೆ ಮಾಡಿದಲ್ಲಿ ಕೆಎಸ್‌ಆರ್‌ಟಿಸಿ ಬಸ್‌ಗಳೂ ಸೇರಿದಂತೆ ಎಲ್ಲಾ ಸರ್ಕಾರಿ ವಾಹನಗಳೂ ದಂಡ ಪಾವತಿಗೆ ಗುರಿಯಾಗಬೇಕಾಗುತ್ತದೆ. ಕೃತಕ ಬುದ್ಧಿಮತ್ತೆ (ಎಐ) ಆಧಾರಿತ ಆಟೋಮ್ಯಾಟಿಕ್ ನಂಬರ್ ಪ್ಲೇಟ್ ರೆಕಗ್ನಿಷನ್ (ಎಎನ್‌ಪಿಆರ್) ಕ್ಯಾಮರಾಗಳ ಸಹಾಯದಿಂದ ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್ ವೇನಲ್ಲಿ ಸಂಚಾರ ನಿಯಮ ಉಲ್ಲಂಘನೆಗೆ ದಂಡ ವಿಧಿಸುವ ಪ್ರಕ್ರಿಯೆ ಆರಂಭಗೊಂಡಿದ್ದು, ಇದಕ್ಕೆ ಸರ್ಕಾರಿ ವಾಹನಗಳೂ ಹೊರತಲ್ಲ.



ಅಲೋಕ್‌ಕುಮಾರ್

ಈ ಹಿಂದೆ ಸದರಿ ವಾಹನಗಳು ಸಂಚಾರ ನಿಯಮಗಳನ್ನು ಬಹಿರಂಗವಾಗಿ ಉಲ್ಲಂಘಿಸುತ್ತಿದ್ದ ದೃಶ್ಯ ಸರ್ವೇಸಾಮಾನ್ಯವಾಗಿತ್ತು. ಆದರೆ ಈಗ ಮೈಸೂರು ಮತ್ತು ಬೆಂಗಳೂರಿನಾದ್ಯಂತ ಅಳವಡಿಸಲಾಗಿರುವ ಎಐ ಆಧಾರಿತ ಆಟೋಮ್ಯಾಟಿಕ್ ನಂಬರ್ ಪ್ಲೇಟ್ ರೆಕಾಗ್ನಿಷನ್ (ಎಎನ್‌ಪಿಆರ್) ವ್ಯವಸ್ಥೆ ಹೊಸ ಬದಲಾವಣೆಗೆ ಕಾರಣವಾಗಿದೆ. ಜೊತೆಗೆ ಇಂಟಿಗ್ರೇಟೆಡ್ ಟ್ರಾಫಿಕ್ ಮ್ಯಾನೇಜ್‌ಮೆಂಟ್

> ತಂತ್ರಜ್ಞಾನವು ಸಂಚಾರ ನಿಯಮಗಳನ್ನು ಉಲ್ಲಂಘಿಸಿದವರನ್ನು ಪ್ರತ್ಯೇಕಿಸುವುದಿಲ್ಲ. ಅದಕ್ಕೆ ಎಲ್ಲವೂ ಒಂದೇ. ಸರ್ಕಾರಿ ವಾಹನವಾಗಲಿ ಅಥವಾ ಖಾಸಗಿ ವಾಹನವಾಗಲೀ ಸಂಚಾರ ನಿಯಮ ಉಲ್ಲಂಘನೆ ಮಾಡಿದಲ್ಲಿ ದಂಡಕ್ಕೆ ಗುರಿಯಾಗಬೇಕಾಗುತ್ತದೆ. ವಾಹನವು ಯಾರ ಹೆಸರಿನಲ್ಲಿ ನೋಂದಾಯಿಸಲ್ಪಟ್ಟಿದೆಯೋ ಅವರಿಗೆ ಅಥವಾ ಅಧಿಕಾರಿಯ ನೋಂದಾಯಿತ ಮೊಬೈಲ್ ಸಂಖ್ಯೆಗೆ ಸಂಚಾರ ನಿಯಮ ಉಲ್ಲಂಘನೆಯ ಸಂದೇಶ ಕಳುಹಿಸಲಾಗುತ್ತದೆ.
>
> -ಅಲೋಕ್‌ಕುಮಾರ್, ಎಡಿಜಿಪಿ (ಸಂಚಾರ ಮತ್ತು ರಸ್ತೆ ಸುರಕ್ಷತೆ)

ಸಿಸ್ಟಮ್ (ಐಟಿಎಂಎಸ್) ವ್ಯವಸ್ಥೆಯು ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್ ವೇನಲ್ಲೂ ಕ್ರಾಂತಿಕಾರಿ ಬದಲಾವಣೆ ತಂದಿದೆ.

ಎಐ ಆಧಾರಿತ ಎಎನ್‌ಪಿಎಆರ್ ಕ್ಯಾಮೆರಾಗಳು ಸೀಟ್‌ಬೆಲ್ಟ್ ಧರಿಸದೇ ಇರುವುದು, ಸಿಗ್ನಲ್ ಜಂಪ್ ಮಾಡುವುದು ಹಾಗೂ ಅತಿವೇಗ ಸೇರಿದಂತೆ ವಿವಿಧ ಸಂಚಾರ ನಿಯಮ ಉಲ್ಲಂಘನೆಗಳನ್ನು ದಾಖಲಿಸಲಿವೆ. ಸಂಚಾರ ನಿಯಮ ಉಲ್ಲಂಘಿಸಿದ್ದಲ್ಲಿ ಅಂತಹ ಚಿತ್ರಗಳನ್ನು ನೇರವಾಗಿ ಚಾಲಕರ ಮೊಬೈಲ್ ಫೋನ್‌ಗಳಿಗೆ ಇಲ್ಲವೇ ವಾಹನದ ಉಸ್ತುವಾರಿ ಹೊಂದಿರುವವರಿಗೆ ಅಥವಾ ಸಂಬಂಧಿಸಿದ ನಿಗಮಕ್ಕೆ ಕಳುಹಿಸುವ ವ್ಯವಸ್ಥೆ ಮಾಡಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಸಂಘದಿಂದ ಪ್ರತಿಭಾ ಪುರಸ್ಕಾರ, ಅಭಿನಂದನಾ ಸಮಾರಂಭ

ಸಮಾಜಮುಖಿ ವರದಿ ಮೂಲಕ ನೊಂದವರ ಧ್ವನಿಯಾಗಿ ಕೆಲಸ ಮಾಡಿ

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಸಲಹೆ

ಮೈಸೂರು, ಆ.6(ಎಂಟಿವೈ)- ಪತ್ರಕರ್ತರು ಸಮಾಜಮುಖಿ ವರದಿಯ ಮೂಲಕ ನೊಂದವರ ಧ್ವನಿಯಾಗಿ ಕೆಲಸ ಮಾಡಬೇಕು ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಸಲಹೆ ನೀಡಿದ್ದಾರೆ.

ಮೈಸೂರಿನ ಶಿವರಾಂಪೇಟೆಯಲ್ಲಿರುವ ಆಲಮ್ಮ ಕಲ್ಯಾಣ ಮಂಟಪದಲ್ಲಿ ಮೈಸೂರು ಜಿಲ್ಲಾ ಪತ್ರಕರ್ತರ ಸಂಘ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ, ಅಭಿನಂದನಾ ಸಮಾರಂಭ ಹಾಗೂ ಸ್ನೇಹ ಭೋಜನ ಕೂಟ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪತ್ರಿಕೋದ್ಯಮ, ಪತ್ರಕರ್ತರು ಜನರ ಸಮಸ್ಯೆಗಳನ್ನು ಸರ್ಕಾರಕ್ಕೆ ಮುಟ್ಟಿಸುವಂತಹ ಕಾರ್ಯ ನಿರ್ವಹಿಸಬೇಕು ಎಂದರು.

ಪತ್ರಕರ್ತರ ಹಿತಕಾಯುವಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬದ್ಧರಾಗಿದ್ದಾರೆ. 2013ರಲ್ಲಿ ಪತ್ರಕರ್ತರಿಗೆ ಕೇವಲ 3 ಸಾವಿರ ಪಿಂಚಣಿ ಸಿಗುತ್ತಿತ್ತು. ಅದನ್ನು ಗಮನಿಸಿದ ಸಿಎಂ ಸಿದ್ದರಾಮಯ್ಯ ಪಿಂಚಣಿ ಮೊತ್ತವನ್ನು 12 ಸಾವಿರ ರೂ.ಗೆ ಹೆಚ್ಚಳ ಮಾಡಿದ್ದಾರೆ. ಇದೀಗ ಗ್ರಾಮೀಣ ಭಾಗದ ಪತ್ರಕರ್ತರಿಗೆ ಬಸ್‌ಪಾಸ್ ನೀಡುವ ಹಲವು ವರ್ಷದ ಬೇಡಿಕೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಈಡೇರಿಸಿದ್ದು, ಮಾಸಾಂತ್ಯಕ್ಕೆ ಗ್ರಾಮೀಣ ಪತ್ರಕರ್ತರಿಗೆ ಬಸ್‌ಪಾಸ್ ನೀಡುವ ಪ್ರಕ್ರಿಯೆ ಆರಂಭವಾಗಲಿದೆ. ಪತ್ರಕರ್ತರಿಗೆ ಆರೋಗ್ಯ ಕಾರ್ಡ್ ಬೇಡಿಕೆ ಸಂಬಂಧ ಸರ್ಕಾರ ಪರಿಶೀಲಿಸುತ್ತಿದ್ದು,



ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ವತಿಯಿಂದ ಮಂಗಳವಾರ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಲಾಯಿತು.

ಈಗಾಗಲೇ ಪತ್ರಕರ್ತರ ಆರೋಗ್ಯ ಕಾಪಾಡಲು ಮೀಸಲಿಟ್ಟಿರುವ ಅನುದಾನ ಬಳಕೆಗೆ ಹಾಕಿರುವ ಕಠಿಣ ನಿಯಮವನ್ನು ಸಡಿಲಗೊಳಿಸಲು ಸಿಎಂ ಸೂಚನೆ ನೀಡಿದ್ದಾರೆ. ಪತ್ರಕರ್ತರು ತಮ್ಮ ಹಾಗೂ ಕುಟುಂಬದ ಸದಸ್ಯರ ಆರೋಗ್ಯ ಬಗ್ಗೆ ಕಾಳಜಿ ವಹಿಸಬೇಕು ಎಂದು ಸಲಹೆ ನೀಡಿದರು.

ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ, ಪತ್ರಕರ್ತರ ಹೆಸರಲ್ಲಿ ಕೆಲವು ಯೂಟ್ಯೂಬ್ ಚಾನೆಲ್‌ಗಳು ಜನರನ್ನು ದಾರಿ ತಪ್ಪಿಸುತ್ತಿವೆ. ಇಂತಹವರ ವಿರುದ್ಧ ನೈಜ ಕಾರ್ಯನಿರತ ಪತ್ರಕರ್ತರು ಸಂಘಟಿತರಾಗಿ ಪತ್ರಿಕೋದ್ಯಮಕ್ಕೆ ಅಂಟಿಕೊಳ್ಳುತ್ತಿರುವ ಕೆಟ್ಟ ಹೆಸರನ್ನು ತೊಡೆದು ಹಾಕಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್ ಮಾತನಾಡಿ, ಶಿಕ್ಷಣ ಎಂಬುದು ಕೇವಲ ಮಾಹಿತಿ ತುಂಬುವುದಲ್ಲ. ಮಾನವೀಯತೆಯ ವಿಕಾಸ. ಶಿಕ್ಷಣದಿಂದ ಇಡೀ ಸಮಾಜ ಸದೃಢವಾಗುತ್ತದೆ. ಇಂದಿನ ಮಕ್ಕಳು ಜ್ಞಾನ ವೃದ್ಧಿಯೊಂದಿಗೆ, ದೇಶದ ಅಭಿವೃದ್ಧಿಯೆಡೆಗೆ ಆಲೋಚಿಸಬೇಕು. ಜೊತೆಗೆ ಪತ್ರಿಕೋದ್ಯಮವೆಂಬುದು ಸವಿಸ್ತಾರವಾಗಿ ಸಾಗಲು ಸರ್ವರ ಸಹಕಾರ ಅವಶ್ಯಕ ಎಂದರು.

ಇದೇ ವೇಳೆ ಜಿಲ್ಲಾ ಪತ್ರಕರ್ತರ ಸಂಘದ ನಿಕಟಪೂರ್ವ ಪದಾಧಿಕಾರಿಗಳು, ಚುನಾವಣಾ ಕರ್ತವ್ಯ ನಿರ್ವಹಿಸಿದ ಬನ್ನೂರು ಕೆ.ರಾಜು, ಕಾಶಿನಾಥ್, ಅಡಾಕ್ ಕಮಿಟಿಯ ಬಿ.ಎಸ್.ಪ್ರಭುರಾಜನ್, ಬಾಲಕೃಷ್ಣ ಮದ್ದೂರು ಅವರನ್ನು ಸನ್ಮಾನಿಸಲಾಯಿತು. ಇದೇ ವೇಳೆ ನಟ ಮಂಡ್ಯ ರಮೇಶ್ ಮಾತನಾಡಿದರು. ಕಾರ್ಯಕ್ರಮದಲ್ಲಿ ವಾರ್ತಾ-ಸಾರ್ವಜನಿಕ ಸಂಪರ್ಕ ಇಲಾಖೆ ಉಪನಿರ್ದೇಶಕ ಡಿ.ಅಶೋಕ್ ಕುಮಾರ್, ಹಿರಿಯ ಪತ್ರಕರ್ತ ಶಿವಕುಮಾರ ಬೆಳ್ಳಿತಟ್ಟೆ, ಜಿಲ್ಲಾ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಧರ್ಮಾಪುರ ನಾರಾಯಣ್, ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ಪತ್ರಕರ್ತರು ಉಪಸ್ಥಿತರಿದ್ದರು.

ಪ್ರತಿಭಾ ಪುರಸ್ಕಾರ

ಎಸ್‌ಎಸ್‌ಎಲ್‌ಸಿಯಲ್ಲಿ ಹೆಚ್ಚು ಅಂಕ ಪಡೆದು ಉತ್ತೀರ್ಣರಾದ ಐಶ್ವರ್ಯ ವಿ ಗೌಡ, ಶ್ರಾವಣಿ ಎಸ್.ಸದಾಶಿವ, ಸಿಂಚನ ಎಂ.ಟಿ.ಮಹದೇವ, ಕೃತಿಕಾ ಕೆ.ಕೃಷ್ಣೇಗೌಡ, ಎಸ್.ಎನ್.ಅಕ್ಷರ ನರಸಿಂಹಮೂರ್ತಿ, ಎಸ್.ಡಿ.ಭರತ್ ದೊಡ್ಡಸಿದ್ದು, ಸಮರ್ಥ್ ಪುರುಷೋತ್ತಮ್, ಜಿ.ಎಸ್ ಸಮ್ಮೃದ್ ಸತೀಶ್, ಆರ್.ಯಶಸ್ವಿನಿ ರಮೇಶ್, ತೃಪ್ತಿ ಆರ್.ರಾಜೇಶ್, ಗ್ರೀಷ್ಮ ಎಂ.ಮಹದೇವ್, ಯಶಸ್ವಿನಿ ಆನಂದ್, ಅಪ್ರಮೇಯ ಪಿ.ಆರ್.ರಘುರಾಮ್, ಆಶಿತ್ ಸುಜಯ್ ವೀರಭದ್ರಪ್ಪ, ಚಿರಾಗ್ ಎಸ್.ಗೌಡ ಹಾಗೂ ದ್ವಿತೀಯ ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ಸ್ಪಂದನ ಎನ್.ನಾಗೇಗೌಡ, ನಿರ್ಮಲ್, ನಿಸರ್ಗ ಸತೀಶ್ ಆರಾಧ್ಯ, ಡಿ.ಎನ್.ಮನೋಜ್ ನಾರಾಯಣ್, ಎಸ್.ಪ್ರೇಕ್ಷ ಸ್ವಾಮಿಗೌಡ, ಇಂದುಶ್ರೀ ಸ್ವಾಮಿ, ಹೆಚ್.ಎಸ್.ಕುಶಾಲ್‌ಕುಮಾರ್ ಹುಲ್ಲಹಳ್ಳಿ ಶ್ರೀನಿವಾಸ್, ಹೆಚ್.ಎನ್.ಧನ್ಯತಾ ನಂದೀಶ್, ರೋಹಿತ್ ಉದಯ್‌ಕುಮಾರ್, ಬಿ.ಎಲ್.ಶಿವಾನಿ ಲವ ಕುಮಾರ್, ಹೆಚ್.ಕೆ. ಶರ್ಮಿತ ಕೃಷ್ಣ ಶೆಟ್ಟಿ, ಕೆ.ಹೆಚ್.ರಜತ ಹರೇಂದ್ರ ಅವರನ್ನು ಪುರಸ್ಕರಿಸಲಾಯಿತು.

ವಾಕ್‌ಮೇಟ್ ಕಂಪನಿಯಿಂದ ಮೃಗಾಲಯಕ್ಕೆ ಪರಿಸರ ಸ್ನೇಹಿ ಬ್ಯಾಟರಿಚಾಲಿತ ವಾಹನ ಕೊಡುಗೆ



ಮೈಸೂರಿನ ವಾಕ್‌ಮೇಟ್ ಪಾದರಕ್ಷೆ ಕಂಪನಿಯಿಂದ ಶ್ರೀ ಚಾಮರಾಜೇಂದ್ರ ಮೃಗಾಲಯಕ್ಕೆ ಪರಿಸರ ಸ್ನೇಹಿ ಬ್ಯಾಟರಿಚಾಲಿತ ವಾಹನ ನೀಡಲಾಯಿತು.

ಮೈಸೂರು, ಆ. 6- ನಗರದ ವಾಕ್‌ಮೇಟ್ ಪಾದರಕ್ಷೆ ಕಂಪನಿಯಿಂದ ಸಿಎಸ್‌ಆರ್ ಚಟುವಟಿಕೆಗಳ ಅಡಿಯಲ್ಲಿ ಶ್ರೀ ಚಾಮರಾಜೇಂದ್ರ ಮೃಗಾಲಯಕ್ಕೆ ಪರಿಸರ ಸ್ನೇಹಿ ಬ್ಯಾಟರಿ ಚಾಲಿತ ವಾಹನವನ್ನು ಕೊಡುಗೆಯಾಗಿ ನೀಡಲಾಯಿತು.

ವಾಕ್‌ಮೇಟ್ ಕಂಪನಿಯ ವ್ಯವಸ್ಥಾಪಕ ನಿರ್ದೇಶಕ ಬಾಸ್ಟಿಯನ್ ಜೋಸೆಫ್ ಮತ್ತು ನಿರ್ದೇಶಕ ರೋಷನ್ ಬಾಸ್ಟಿಯನ್ ಅವರು ವಾಹನದ ಕೀಯನ್ನು ಆರ್‌ಎಫ್‌ಓ ಎಂ.ಟಿ.ರಾಮಚಂದ್ರಪ್ಪ ಮತ್ತು ಮೃಗಾಲಯದ ಭದ್ರತಾ ಅಧಿಕಾರಿ ಜಿ.ವಿ.ಪ್ರಸಾದ್ ಅವರಿಗೆ ಹಸ್ತಾಂತರಿಸಿದರು.

ಆರ್‌ಎಫ್‌ಓ ರಾಮಚಂದ್ರಪ್ಪ ಎಂ.ಟಿ. ಮಾತನಾಡಿ, ಕಂಪನಿಯ ಈ ಕೊಡುಗೆಯಿಂದ ಇತರೆ ಕಾರ್ಪೊರೇಟ್ ಸಂಸ್ಥೆಗಳು ಮತ್ತು ದತ್ತಿ ಸಂಸ್ಥೆಗಳು ಸಹ ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಪ್ರೇರೇಪಣೆಯಾಗಿದೆ ಎಂದರು.

ಅರ್ಜಿ ಆಹ್ವಾನ

ಮೈಸೂರು,ಆ.6-ವಿಕಲಚೇತನರ ರಾಷ್ಟ್ರೀಯ ವಿದ್ಯಾರ್ಥಿವೇತನ ಯೋಜನೆಯಡಿ 2024-25ನೇ ಸಾಲಿಗೆ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಂದ NSP ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿಕಲಚೇತನ ಪ್ರೀ-ಮೆಟ್ರಿಕ್ ವಿದ್ಯಾರ್ಥಿಗಳು ಆ.31ರೊಳಗೆ ಹಾಗೂ ಪೋಸ್ಟ್ ಮೆಟ್ರಿಕ್ ಮತ್ತು ಟಾಪ್ ಕ್ಲಾಸ್ ವಿದ್ಯಾರ್ಥಿಗಳು ಅ.31ರೊಳಗೆ ಅಗತ್ಯ ದಾಖಲೆಗಳೊಂದಿಗೆ https://scholarships. gov.inನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಯಾಯ ತಾಲೂಕಿನ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರನ್ನು ಸಂಪರ್ಕಿಸುವುದು. ಹೆಚ್.ಡಿ.ಕೋಟೆ-961151 9719, ಸರಗೂರು-7090994492, ಹುಣಸೂರು-9739644342, ಕೆ.ಆರ್.ನಗರ-9480253203, ಮೈಸೂರು-959113 6015, 6360483 829, ನಂಜನಗೂಡು-8951113120, ಪಿರಿಯಾಪಟ್ಟಣ- 720 4151852, ತಿ.ನರಸೀಪುರ 8050829685 ಹಾಗೂ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ ವಿಕಲಚೇತನರ ಸಹಾಯವಾಣಿ ಕೇಂದ್ರ ದೂ.ಸಂ.0821-2490333 ಅನ್ನು ಸಂಪರ್ಕಿಸಬಹುದು.

ಶಾಸಕ ಕೆ.ಹರೀಶ್‌ಗೌಡರಿಗೆ ಹುಟ್ಟುಹಬ್ಬದ ಶುಭಾಶಯ....



ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡರಿಗೆ ಕನ್ನಡ ಸ್ನೇಹ ಬಳಗದ ವತಿಯಿಂದ ಭಾರೀ ಗಾತ್ರದ ಹೂವಿನ ಹಾರ ಹಾಕಿ, ಆತ್ಮೀಯವಾಗಿ ಅಭಿನಂದಿಸಿ, ಹುಟ್ಟುಹಬ್ಬದ ಶುಭಾಶಯ ಕೋರಲಾಯಿತು. ಈ ವೇಳೆ ಸಂಘದ ಅಧ್ಯಕ್ಷ ಬಂಡಿಗೌಡ, ಉಪಾಧ್ಯಕ್ಷ ರಾಜ್‌ಕುಮಾರ್ (ದತ್ತು), ಚಂದ್ರು, ಬಾಬು, ದೇವೇಗೌಡ, ಕೃಷ್ಣಪ್ಪ, ರಮೇಶ್, ಸೀನು, ಮೋಹನ್‌ಕುಮಾರ್, ಮಹದೇವು, ರಾಜಪ್ಪ, ಶಂಭು, ಲೋಕೇಶ್, ರಾಮು, ಗುರು, ಬಾಲು ಇನ್ನಿತರರು ಉಪಸ್ಥಿತರಿದ್ದರು.

ಮುಂದುವರೆದ ಮೈಸೂರು ವಿವಿ ಅತಿಥಿ ಉಪನ್ಯಾಸಕರ ಧರಣಿ

ಮೂರ್ನಾಲ್ಕು ಬಾರಿ ಸಂದರ್ಶನ ಮುಗಿಸಿದ್ದರೂ ಮತ್ತೆ ಮತ್ತೆ ಸಂದರ್ಶನದ ನೆಪದಲ್ಲಿ ಅಪಮಾನ

ಮೈಸೂರು, ಆ.6(ಜಿಎ)- ಮೈಸೂರು ವಿಶ್ವವಿದ್ಯಾನಿಲಯದಲ್ಲಿ ದಶಕದಿಂದ ಕೆಲಸ ಮಾಡುತ್ತಿರುವ ಅತಿಥಿ ಉಪನ್ಯಾಸಕರನ್ನು ಸೇವೆಯಲ್ಲಿ ಮುಂದುವರಿಸುವಂತೆ ಒತ್ತಾಯಿಸಿ ಮೈಸೂರು ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರ ಸಂಘದ ಸದಸ್ಯರು ಕ್ರಾಫರ್ಡ್ ಭವನದ ಮುಂಭಾಗ ನಡೆಸುತ್ತಿರುವ ಅಹೋರಾತ್ರಿ ಧರಣಿ ಮಂಗಳವಾರವೂ ಮುಂದುವರಿಯಿತು.



ಮೈಸೂರು ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರ ಸಂಘದ ಸದಸ್ಯರು ಕ್ರಾಫರ್ಡ್ ಭವನದ ಮುಂಭಾಗ ನಡೆಸುತ್ತಿರುವ ಅಹೋರಾತ್ರಿ ಧರಣಿ ಮಂಗಳವಾರವೂ ಮುಂದುವರಿಯಿತು.

ಕಳೆದ ಹತ್ತಾರು ವರ್ಷಗಳಿಂದ ವಿವಿಯಲ್ಲಿ ಅತಿಥಿ ಉಪನ್ಯಾಸಕರಾಗಿ ಕೆಲಸ ಮಾಡುತ್ತಿದ್ದೇವೆ. ಆದರೆ, ನಮಗೆ ಸಿಗಬೇಕಾದ ಸೌಲಭ್ಯ, ಅರ್ಹತೆ ಸಿಗುತ್ತಿಲ್ಲ. ಹತ್ತಾರು ವರ್ಷದಿಂದ ಅರ್ಹತೆಯ ಆಧಾರದ ಮೇಲೆ ಕೆಲಸ ಮಾಡುತ್ತಿದ್ದರೂ ಸೇವೆಯಲ್ಲಿ ಮುಂದುವರಿಯುವ ಭರವಸೆ ಇಲ್ಲದಂತಾಗಿದೆ. ಈಗಾಗಲೇ ಮೂರ್ನಾಲ್ಕು ಸಂದರ್ಶನ ನೀಡಿಯೇ ನೌಕರಿ ಮುಂದುವರಿಸಿದ್ದೇವೆ. ಈಗ ಮರು ಸಂದರ್ಶನ ಮಾಡಿ ಅವಮಾನಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನೆಟ್, ಕೆ-ಸೆಟ್ ಪರೀಕ್ಷೆಯಲ್ಲಿ ಉತ್ತೀರ್ಣರಾದವರು, ಪಿಎಚ್.ಡಿ ಪದವಿ ಪಡೆದ 600ಕ್ಕೂ ಹೆಚ್ಚು ಅತಿಥಿ ಉಪನ್ಯಾಸಕರಿದ್ದು, ಎಲ್ಲರನ್ನೂ ಮುಂದುವರಿಸಬೇಕು. ಯಾರು ಸರಿಯಾಗಿ ಕೆಲಸ ಮಾಡುತ್ತಿಲ್ಲವೋ ಅವರನ್ನು ತೆಗೆದುಹಾಕಿ, ಅವರಿಗೆ ಸಂದರ್ಶನದಲ್ಲಿ ಪಾಲ್ಗೊಳ್ಳುವಂತೆ ಸೂಚಿಸಲಿ. ಆದರೆ, ಎಲ್ಲರನ್ನೂ ಒಂದೇ ಎಂದು ಪರಿಗಣಿಸಿರುವುದು ಸರಿಯಲ್ಲ. ಹೀಗಾಗಿ ಅರ್ಹರನ್ನು ಯಾವುದೇ ಸಂದರ್ಶನ ಮಾಡದೆ ಮುಂದುವರಿಸಬೇಕು. ಸಂದರ್ಶನ ಮಾಡಿ ಅವಮಾನ ಮಾಡಬಾರದು ಎಂದು ಒತ್ತಾಯಿಸಿದರು.


ಸಂಘದ ಅಧ್ಯಕ್ಷ ಪಾಪಣ್ಣ, ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ, ಉಪಾಧ್ಯಕ್ಷರಾದ ದಿನಮಣಿ, ರಾಘವೇಂದ್ರ, ಕಾರ್ಯದರ್ಶಿ ಹರ್ಷ, ಅತಿಥಿ ಉಪನ್ಯಾಸಕ ಡಾ.ಕೆ.ಪಿ.ರಮೇಶ್ ಸೇರಿದಂತೆ ಹಲವರು ಭಾಗವಹಿಸಿದ್ದರು.

ಉಚಿತ ಆರೋಗ್ಯ ತಪಾಸಣಾ ಶಿಬಿರ

ಮೈಸೂರು,ಆ.6-ಸುಯೋಗ್ ಆಸ್ಪತ್ರೆ ವತಿಯಿಂದ ಆ.6ರಿಂದ 10ರವರೆಗೆ ಬೆಳಗ್ಗೆ 10ರಿಂದ ಸಂಜೆ 6ರವರೆಗೆ ಜೀರ್ಣಾಂಗ ಕಾಯಿಲೆಗಳ ಉಚಿತ ತಪಾಸಣಾ ಶಿಬಿರ ಏರ್ಪಡಿಸಲಾಗಿದೆ. ಅಜೀರ್ಣ, ಮಲಬದ್ಧತೆ, ಹೊಟ್ಟೆನೋವು ಮುಂತಾದ ಸಮಸ್ಯೆಗಳಿರುವ ರೋಗಿಗಳು 0821-2566966, 9986399862 ಸಂಪರ್ಕಿಸಿ, ಹೆಸರನ್ನು ನೋಂದಾಯಿಸಿಕೊಳ್ಳಬಹುದು.

ಜೀವನದಲ್ಲಿ ವ್ಯಕ್ತಿ ಎಂದೂ ಸ್ವಾರ್ಥಿಯಾಗಬಾರದು

ಕೆ.ಆರ್.ಆಸ್ಪತ್ರೆ ನಿವೃತ್ತ ವೈದ್ಯ ಡಾ.ಲಕ್ಷ್ಮೀಗೌಡ ಅಭಿಪ್ರಾಯ



ಕೆ.ಆರ್.ಆಸ್ಪತ್ರೆ ನಿವೃತ್ತ ವೈದ್ಯ ಡಾ.ಲಕ್ಷ್ಮೀಗೌಡ ಅವರನ್ನು ಸನ್ಮಾನಿಸಲಾಯಿತು.

ಮೈಸೂರು, ಆ. 6- ಗೆಳೆಯರ ಬಳಗ ಅಭಿವೃದ್ಧಿ ಸಹಕಾರ ಸಂಘದ 3ನೇ ವಾರ್ಷಿಕ ಸರ್ವ ಸದಸ್ಯರ ಸಭೆಯನ್ನು ಇತ್ತೀಚೆಗೆ ಏರ್ಪಡಿಸಲಾಗಿತ್ತು. ಈ ವೇಳೆ ಕೆ.ಆರ್.ಆಸ್ಪತ್ರೆಯಲ್ಲಿ ಜನಾನುರಾಗಿ ವೈದ್ಯರಾಗಿ ನಿವೃತ್ತರಾಗಿರುವ ಡಾ.ಲಕ್ಷ್ಮೀಗೌಡ ಅವರನ್ನು ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ.ಲಕ್ಷ್ಮೀಗೌಡರು, ನನ್ನ ವೃತ್ತಿ ಜೀವನದಲ್ಲಿ ವೃತ್ತಿಯನ್ನು ಬಿಟ್ಟು ಬೇರೆ ಯಾವ ಕಡೆ ಗಮನಹರಿಸಲಿಲ್ಲ. ಗ್ರಾಮೀಣ ಹಿನ್ನೆಲೆ, ಬಡಕುಟುಂಬದಿಂದ ಬಂದ ನಾನು ಎಸ್‌ಎಸ್‌ಎಲ್‌ಸಿವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ, ಎಂಬಿಬಿಎಸ್ ಪದವಿಯಲ್ಲಿ ಇಂಗ್ಲಿಷ್ ಓದುವುದು ತೊಡಕಾಗಿದ್ದು ನಿಜ. ಆದರೆ ನನ್ನಲ್ಲಿದ್ದ ಆಸಕ್ತಿ, ಆತ್ಮಸ್ಥೈರ್ಯ, ಸಾಮಾಜಿಕ ಬದ್ಧತೆ ಮತ್ತು ವೈದ್ಯವೃತ್ತಿಯ ಬಗೆಗಿನ ಗೌರವ ಅದಕ್ಕೆ ಎದೆಗುಂದದಿರಲು ಕಾರಣವಾಯಿತು ಎಂದರು.

ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಡಾ. ವಸಂತ ವಹಿಸಿದ್ದರು. ಉಪಾಧ್ಯಕ್ಷ ಡಾ. ಚಂದ್ರಕುಮಾರ್, ಕಾರ್ಯನಿರ್ವಹಣಾಧಿಕಾರಿ ಕೃಷ್ಣೇಗೌಡ, ಡಾ.ಎಚ್.ಆರ್. ತಿಮ್ಮೇಗೌಡ, ಹನುಮಂತೇಗೌಡ, ಡಾ. ಟಿ.ಕೆ.ಕೆಂಪೇಗೌಡ, ಕಮಲಮೂರ್ತಿ, ಸಂಘದ ನಿರ್ದೇಶಕರು ಹಾಗೂ ಸದಸ್ಯರು ಪಾಲ್ಗೊಂಡಿದ್ದರು.

ವಯನಾಡಿನ ಸಂತ್ರಸ್ತರಿಗೆ ನೆರವು



ಮೈಸೂರಿನ ಅಶೋಕಪುರಂ ಜೈರಾಜ್ ಗ್ರೂಪ್ಸ್ ವತಿಯಿಂದ ಕೇರಳದ ವಯನಾಡಿನ ಭೂಕುಸಿತದಿಂದ ದುರಂತಕ್ಕೀಡಾದ ಕುಟುಂಬಗಳಿಗೆ 300 ಹೊದಿಕೆಗಳನ್ನು ಮೈಸೂರು ನಗರಪಾಲಿಕೆ ಸಹಾಯಕ ಆಯುಕ್ತ ನಾಗರಾಜು ಅವರಿಗೆ ಹಸ್ತಾಂತರಿಸಲಾಯಿತು. ಈ ವೇಳೆ ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಮಾಜಿ ಉಪ ಮೇಯರ್ ಸಿದ್ದರಾಜು, ಸಮಾಜ ಸೇವಕ ಜೈರಾಜ್, ಪ್ರಸಾದ್, ಉಪತಹಸೀಲ್ದಾರ್ ತನುರಾಜ್, ಸುನೀಲ್, ಶಿವಕುಮಾರ್, ಪ್ರದೀಪ್,ಚೆಲುವರಾಜು, ಸುರೇಶ್ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

7.08.2024 ಬುಧವಾರ, ಮಳೆ ನಕ್ಷತ್ರ: ಆಶ್ಲೇಷ 03.08.2024 ರಿಂದ 12.08.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಶ್ರಾವಣ ಮಾಸ, ಶುಕ್ಲ ಪಕ್ಷ, ತಿಥಿ: ಬಿದಿಗೆ, ನಕ್ಷತ್ರ: ಪುಬ್ಬ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಬೆಳಗ್ಗೆ 6.30ರಿಂದ 7.30ರವರೆಗೆ ದೇಹ-ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ಮತ್ತು ಬೆಳಗ್ಗೆ 9 ಗಂಟೆಯಿಂದ ಕರ್ನಾಟಕ ಚಿಕಿತ್ಸಾ (ಮಾನ್‌ಸೂನ್) ವರ್ಷ ಋತುವಿನ ಕಾಲದ ವಿಶೇಷ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ.
- **ಹರಿ ವಿದ್ಯಾಲಯ :** ವಿದ್ಯಾರ್ಥಿ ಯೋಗ ಚಾಂಪಿಯನ್‌ಶಿಪ್, ಮುಖ್ಯ ಅತಿಥಿಗಳು: ಯೋಗಗುರು ಡಾ.ರಾಘವೇಂದ್ರ ಪೈ, ಅಧ್ಯಕ್ಷತೆ : ಹರಿ ವಿದ್ಯಾಲಯ ಅಧ್ಯಕ್ಷ ಶ್ರೀನಿವಾಸ ಹೊಸಮನೆ, ಮುಖ್ಯ ಅತಿಥಿಗಳು : ಹರಿವಿದ್ಯಾಲಯ ಪ್ರಿನ್ಸಿಪಾಲ್ ಹೆಚ್.ಆರ್. ಭಗವಾನ್, ಸ್ಥಳ: ವಿದ್ಯಾಲಯ ಆವರಣ, ಬೆಳಗ್ಗೆ 10ಕ್ಕೆ.
- **ಜನಸ್ಪಂದನ ಟ್ರಸ್ಟ್ :** ಕರ್ನಾಟಕದ ಅಪರೂಪದ ಜನನಾಯಕನಿಗೆ ಜನಪರತೆಯೇ ದ್ವೇಷವಾಯಿತೆ ಕುರಿತು ವಿಚಾರ ಸಂಕಿರಣ, ಉದ್ಘಾಟನೆ : ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ, ಮುಖ್ಯ ಭಾಷಣಕಾರರು : ಕಾರ್ಮಿಕ ಸಚಿವ ಸಂತೋಷ್ ಲಾಡ್, ಮುಖ್ಯ ಭಾಷಣಕಾರರು : ಮಾಜಿ ಸಭಾಪತಿ ಬಿ.ಎಲ್. ಶಂಕರ್, ಕೆಪಿಸಿಸಿ ವಕ್ತಾರರಾದ ರಮೇಶ್‌ಬಾಬು, ನಿಕೇತ್ ರಾಜ್ ಮೌರ್ಯ, ಅಧ್ಯಕ್ಷತೆ : ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ಸ್ಥಳ: ಮೈಬಿಲ್ಡ್ ಸಭಾಂಗಣ, ತ್ರಿಪುರ ಸುಂದರಿ ಕಲ್ಯಾಣ ಮಂಟಪದ ಪಕ್ಕ, ಜೆ.ಪಿ.ನಗರ, ಸಂಜೆ 4.30ಕ್ಕೆ.
- **ಶರಣ ಸಾಹಿತ್ಯ ಪರಿಷತ್ತು (ಮೈಸೂರು ನಗರ ಘಟಕ), ಕದಳಿ ಮಹಿಳಾ ವೇದಿಕೆ (ಮೈಸೂರು) :** ವಚನ ಶ್ರಾವಣ-ಮನೆ ಮನೆಗೆ ಶ್ರಾವಣ ಮಾಸದ ಶರಣ ಸಂದೇಶ, ಜೆಎಸ್‌ಎಸ್ ಮಹಿಳಾ ಪದವಿ ಕಾಲೇಜು ಅಧ್ಯಾಪಕ ಹೆಚ್.ಎನ್. ಸಿದ್ದಮಲ್ಲಿಕಾರ್ಜುನಸ್ವಾಮಿ ಅವರಿಂದ ಗುಣದೋಷ ಸಂಪಾದನೆ ಮಾಡುವುದನ್ನಕ್ಕ-ಅಕ್ಕಮಹಾದೇವಿ ಕುರಿತು ಉಪನ್ಯಾಸ, ಸ್ಥಳ: ಶ್ರೀಮತಿ ವೇದಾವತಿ ಮಹೇಶ್, ನಂ. 1614, ಕಂಠಿಮಲ್ಲಣ್ಣ ಕಲ್ಯಾಣ ಮಂಟಪ, ಮಂಡಿ ಪೊಲೀಸ್ ಠಾಣೆ, ಸಂಜೆ 5.30ಕ್ಕೆ.
- **ಬಸವ ಭಾರತ ಪ್ರತಿಷ್ಠಾನ, ಸಮಸ್ತ ಬಸವ ಪರ ಸಂಘಟನೆಗಳು:** ಬಸವ ಧರ್ಮ ಜಾಗೃತಿ ಅಭಿಯಾನ, ಇಷ್ಟಲಿಂಗಧಾರಣೆ ಶಿವಯೋಗ, ವಚನ ಪಠಣ, ಶ್ರಾವಣ ಮಾಸದ ಪ್ರವಚನ ಕಾರ್ಯಕ್ರಮ, ಪೂಜ್ಯಶ್ರೀ ಇಮ್ಮಡಿ ಉದ್ಧಾನಸ್ವಾಮಿಗಳವರು, ಸಾಹಿತಿ ಸಚಿನ್ ಎಸ್ ಅವರಿಂದ ಬಸವ ಧರ್ಮ ಪ್ರಚಾರದಲ್ಲಿ ಮಠಗಳ ಪಾತ್ರ, ಬಸವ ಧರ್ಮದ ನಿಜಾಚರಣೆಗಳು ಕುರಿತು ಉಪನ್ಯಾಸ, ಸ್ಥಳ: ಬಸವೇಶ್ವರ ಮಂದಿರ, ಮಡಹಳ್ಳಿ, ಗುಂಡ್ಲುಪೇಟೆ, ಸಂಜೆ 5ಕ್ಕೆ.
- **ಜಗದ್ಗುರು ಶ್ರೀಮನ್ಮಧ್ವಾಚಾರ್ಯರ ಮೂಲ ಮಹಾ ಸಂಸ್ಥಾನ, ಶ್ರೀ ರಾಜೇಂದ್ರ ತೀರ್ಥರ ಪೂರ್ವಾಧಿ ಮಠ, ಶ್ರೀ ಮುನಿತ್ರಯ ಪೀಠ, ಶ್ರೀ ವ್ಯಾಸರಾಜ ಮಠ (ಸೋಸಲೆ):** ಶ್ರೀ ವಿದ್ಯಾ ಕರ್ನಾಟಕ ಸಿಂಹಾಸನಾಧೀಶ್ವರರಾದ ಶ್ರೀ ಶ್ರೀ 1008 ಶ್ರೀ ವಿದ್ಯಾಶ್ರೀಶ ತೀರ್ಥ ಶ್ರೀಪಾದಂಗಳವರ 8ನೇ ಚಾತುರ್ಮಾಸ್ಯ, ಸ್ಥಳ: ಶ್ರೀ ವ್ಯಾಸರಾಜ ಮಠ, ಸೋಸಲೆ ಕ್ಷೇತ್ರ, ಸಂಜೆ.
- **ಜಗದ್ಗುರು ಶ್ರೀ ವೀರಸಿಂಹಾಸನ ಮಹಾ ಸಂಸ್ಥಾನ ಮಠ, ಶ್ರೀ ಸುತ್ತೂರು ಮಠ, ಮೈಸೂರು :** ಶ್ರಾವಣ ಮಾಸ ಪೂಜಾನುಷ್ಠಾನ ಮತ್ತು ಪ್ರವಚನ ಕಾರ್ಯಕ್ರಮ, ಬೆಳಗ್ಗೆ ವಿಶೇಷ ಪೂಜೆ, ಸಂಜೆ 6 ರಿಂದ ಸಾಮೂಹಿಕ ಪ್ರಾರ್ಥನೆ, ಡಾ.ಕೆ.ಅನಂತರಾಮು ಅವರಿಂದ ಲಕ್ಕಣ್ಣ ದಂಡೇಶ ವಿರಚಿತ 'ಶಿವತತ್ವ ಚಿಂತಾಮಣಿ' ಕುರಿತು ಪ್ರವಚನ, ವಿದುಷಿ ಎಂ.ವಿ.ಶುಭಾ ರಾಘವೇಂದ್ರ ಅವರಿಂದ ವಾಚನ, ಸ್ಥಳ: ಮೈಸೂರು ಶ್ರೀ ಸುತ್ತೂರು ಶಾಖಾ ಮಠ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 'ವಾದ್ಯ ವೈಭವ' ಸಂಗೀತ ವಾದ್ಯಗಳ ಪರಿಚಯ ಮಾಲಿಕೆ, ಪ್ರಸ್ತುತಿ: ಚೈತ್ರಿಕಾ. ಎಸ್, 6.40 ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 9.15 ಮನೋನಂದನ-ಪ್ರಾಯೋಜಿತ ಮಾನಸಿಕ ಆರೋಗ್ಯ ಕಾರ್ಯಕ್ರಮ, ವಿಷಯ : 'ಅತಿ ಒತ್ತಡದ ಮಾನಸಿಕ ಸಮಸ್ಯೆ ಅಂದರೆ ಸೈಕಲಾಜಿಕಲ್ ಬರ್ನ್ ಔಟ್ ತಡೆಗಟ್ಟುವುದು ಹೇಗೆ?' ವಿಷಯ ತಜ್ಞರು : ಮಾನಸಿಕ ರೋಗ ತಜ್ಞರಾದ ಡಾ. ಅಭಿಜಿತ್. ಎಚ್. ಆರ್ ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, ಈ ಕಾರ್ಯಕ್ರಮದ ಪ್ರಾಯೋಜಕರು : ಪ್ರೇರಣಾ ಆಸ್ಪತ್ರೆ ಮತ್ತು ಪ್ರೇರಣಾ ಫರ್ಟಿಲಿಟಿ, ಕುವೆಂಪುನಗರ, ಮೈಸೂರು, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಬಸವರಾಜ ರಾಜಗುರು – ಗಾಯನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ ಮಧ್ಯಾಹ್ನ: 12.30 ದೇವರನಾಮ-ಜ್ಯೋತಿ. ವಿ, 12.45 ಜನಪದ ಸಂಗೀತ, 1.20 ಭಾವಗೀತೆಗಳು: ಕಾವ್ಯಾನಂದ ಅವರ ರಚನೆಗಳು, 2.40 ಭಾರತ ಹಾಗೂ ಶ್ರೀಲಂಕಾ ತಂಡಗಳ ನಡುವೆ ಶ್ರೀಲಂಕಾದ ಕೊಲಂಬೊದಲ್ಲಿರುವ ಆರ್. ಪ್ರೇಮದಾಸ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿರುವ ಮೂರನೇ ಏಕದಿನ ಪಂದ್ಯದ ವೀಕ್ಷಕ ವಿವರಣೆ. 8.15 ಸಂಸತ್ತಿನ ಉಭಯ ಕಲಾಪಗಳ ಸಮೀಕ್ಷೆ, 8.30 ಭಾರತ ಹಾಗೂ ಶ್ರೀಲಂಕಾ ತಂಡಗಳ ನಡುವೆ ಶ್ರೀಲಂಕಾದ ಕೊಲಂಬೊದಲ್ಲಿರುವ ಆರ್. ಪ್ರೇಮದಾಸ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿರುವ ಮೂರನೇ ಏಕದಿನ ಪಂದ್ಯದ ವೀಕ್ಷಕ ವಿವರಣೆ ಮುಂದು ವರೆಯಲಿದೆ. 10.00 ಸಂಸತ್ತಿನ ಪ್ರಶ್ನೋತ್ತರ ಕಲಾಪಗಳ ಧ್ವನಿ ಮುದ್ರಣ, 10.30 ಸವಿನೆನಪು

ಕಾಂಗ್ರೆಸ್ ಜನಾಂದೋಲನ ಸಮಾವೇಶ ವಿಪಕ್ಷಗಳಿಗೆ ಒಂದು ಸ್ಪಷ್ಟ ಎಚ್ಚರಿಕೆ ಸಂದೇಶವಾಗಬೇಕಿದೆ

● ರಾಜ್ಯಸಭಾ ಸದಸ್ಯ ಜಿ.ಸಿ.ಚಂದ್ರಶೇಖರ್ ಕಾಂಗ್ರೆಸ್ ಕಾರ್ಯಕರ್ತರಿಗೆ ಕಿವಿಮಾತು ● ಸಮಾವೇಶ ಯಶಸ್ಸಿಗೆ ಪ್ರತಿಯೊಬ್ಬರೂ ಶ್ರಮಿಸಲು ಕರೆ

ಮೈಸೂರು, ಆ.6(ಎಸ್‌ಬಿಡಿ)–ಮೈಸೂರಿನಲ್ಲಿ ನಡೆಯಲಿರುವ ಬೃಹತ್ ಕಾಂಗ್ರೆಸ್ ಜನಾಂದೋಲನ ಸಮಾವೇಶದಲ್ಲಿ ಹೊರಹೊಮ್ಮುವ ಸಂದೇಶವನ್ನು ಇಡೀ ದೇಶವೇ ಎದುರು ನೋಡುತ್ತಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷರೂ ಆದ ರಾಜ್ಯಸಭಾ ಸದಸ್ಯ ಜಿ.ಸಿ.ಚಂದ್ರಶೇಖರ್ ಹೇಳಿದರು.

ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಕಾಂಗ್ರೆಸ್ ಭವನದಲ್ಲಿ ಮಂಗಳವಾರ ಆಯೋಜಿಸಿದ್ದ ಆ.9ರ ಕಾಂಗ್ರೆಸ್ ಜನಾಂದೋಲನ ಸಮಾವೇಶದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪತ್ನಿಗೆ ನಿಯಮಬದ್ಧವಾಗಿ ನಿವೇಶನ ಮಂಜೂರು ಮಾಡಿದ್ದರೂ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಕೂಟ ಸಿಎಂ ವಿರುದ್ಧ ಇಲ್ಲಸಲ್ಲದ ಆರೋಪ ಮಾಡಿ, ಪಾದಯಾತ್ರೆ ಕೈಗೊಳ್ಳುವ ಮೂಲಕ ಸರ್ಕಾರವನ್ನು ಅಸ್ಥಿರಗೊಳಿಸುವ ವಿಫಲ ಯತ್ನಕ್ಕೆ ಮುಂದಾಗಿದೆ. ಈ ವಿಚಾರ ಗಂಭೀರ ಸ್ವರೂಪ ಪಡೆದಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್ ಯಾವ ರೀತಿ ಪ್ರತ್ಯುತ್ತರ ನೀಡಲಿದೆ ಎಂದು ಇಡೀ ದೇಶವೇ ಕಾತುರವಾಗಿದೆ ಎಂದರು.

ಸಿದ್ದರಾಮಯ್ಯನವರ ಹಿನ್ನೆಲೆ, ವ್ಯಕ್ತಿತ್ವ, ಅವರ ಆಡಳಿತ ವೈಖರಿ ಎಲ್ಲರಿಗೂ ತಿಳಿದಿದೆ. ಮುಡಾ ವಿಚಾರದ ಬಗ್ಗೆಯೂ ಮಾಹಿತಿ ಇದೆ. ಹಾಗಾಗಿ ಎಲ್ಲರೂ ಒಗ್ಗಟ್ಟಿನಿಂದ ಬಿಜೆಪಿ–ಜೆಡಿಎಸ್ ಮೈತ್ರಿಕೂಟಕ್ಕೆ ಪ್ರತ್ಯುತ್ತರ ನೀಡಬೇಕಿದೆ. ಬಿಡದಿ, ರಾಮನಗರ, ಚನ್ನಪಟ್ಟಣ, ಮದ್ದೂರಲ್ಲಿ ಸಮಾವೇಶ ಯಶಸ್ವಿಯಾಗಿದೆ. ಆ.9ರಂದು ಮೈಸೂರಿನಲ್ಲಿ ನಡೆಯುವ ಸಮಾವೇಶ ಇತಿಹಾಸ ಸೃಷ್ಟಿಸಲಿದೆ. ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು, ಸಚಿವರು, ವಿಧಾನಸಭೆ ಹಾಗೂ ವಿಧಾನಪರಿಷತ್‌ನ ಕಾಂಗ್ರೆಸ್ ಸದಸ್ಯರು, ಸಂಸದರು, ರಾಜ್ಯ ಸಭೆ ಸದಸ್ಯರು, ರಾಜ್ಯದ ಎಲ್ಲಾ ವಿಧಾನಸಭಾ ಕ್ಷೇತ್ರಗಳ ಮುಖಂಡರು ಸೇರಿದಂತೆ ಇಡೀ ಕಾಂಗ್ರೆಸ್ ಪಕ್ಷವೇ ಸಮಾವೇಶದ ವೇದಿಕೆಯಲ್ಲಿರಲಿದೆ. ಕರ್ನಾಟಕದಲ್ಲಾಗುತ್ತಿರುವ ಬೆಳವಣಿಗೆಯನ್ನು ಗಮನಿಸುತ್ತಿರುವ ಇತರ ರಾಜ್ಯಗಳು, ಸರ್ಕಾರಗಳನ್ನು ಅಸ್ಥಿರಗೊಳಿಸುವ ಗೋಸುಂಬೆ ಬಿಜೆಪಿಗೆ ಯಾವ ರೀತಿಯಲ್ಲಿ ಪ್ರತ್ಯುತ್ತರ ನೀಡಲಿದ್ದಾರೆ ಎಂದು ಎದುರು ನೋಡುತ್ತಿವೆ. ಯಾವುದೇ ರಾಜ್ಯ ಸರ್ಕಾರವನ್ನು ಮುಟ್ಟಿದರೆ ಕರ್ನಾಟಕದಲ್ಲಾದ ಗತಿಯೇ ಆಗುತ್ತದೆ ಎಂಬ ಎಚ್ಚರಿಕೆ ನೀಡಬೇಕಿದೆ ಎಂದು ತಿಳಿಸಿದರು.

ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸುವ ಪ್ರಯತ್ನ ಸಫಲವಾಗುವುದಿಲ್ಲ. ರಾಜ್ಯಪಾಲರು ತುಂಬಾ ಆತುರದ ನಿರ್ಧಾರ ತೆಗೆದುಕೊಂಡಿದ್ದಾರೆ. ಅವರು ಸ್ವಲ್ಪ ವಿವೇಚನೆಯಿಂದ ಯೋಚಿಸಬೇಕಿತ್ತು. ಸಿಎಂಗೆ ತರಾತುರಿಯಲ್ಲಿ ನೋಟಿಸ್ ನೀಡಿ, ಅವರೂ ಸಿಕ್ಕಿಹಾಕಿಕೊಂಡಿದ್ದಾರೆ. ಬಿಜೆಪಿಯವರು ಮೊದಲು ಅವರ ಪಕ್ಷದವರೇ ಆದ ಯತ್ನಾಳ್ ಹಾಗೂ ರಮೇಶ್ ಜಾರಕಿಹೊಳಿಗೆ ಉತ್ತರಿಸಲಿ. ಬಿಜೆಪಿ–ಜೆಡಿಎಸ್ ಭ್ರಷ್ಟಕೂಟದ ಹುನ್ನಾರ ಖಂಡಿಸುವ ಸಮಾವೇಶ ಯಶಸ್ವಿಯಾಗಬೇಕು ಎಂದು ಆಶಿಸಿದರು.

ನಾಯಕರ ಗೈರಿಗೆ ಅಸಮಾಧಾನ: ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಶಾಸಕ ತನ್ವೀರ್ ಸೇಠ್, ಎಂಎಲ್‌ಸಿ ಡಾ.ಯತೀಂದ್ರ ಮತ್ತಿತರರು ಗೈರಾಗಿದ್ದರ ಬಗ್ಗೆ ಚಂದ್ರಶೇಖರ್ ಯಾರ ಹೆಸರೇಳದೆ ಅಸಮಾಧಾನ ವ್ಯಕ್ತಪಡಿಸಿದರು. ಪಕ್ಷಕ್ಕಿಂತ ದೊಡ್ಡವರು ಯಾರೂ ಇಲ್ಲ. ಕಾರ್ಯಕರ್ತರಿಲ್ಲದೆ ಯಾರೂ ನಾಯಕರಾಗಲು ಸಾಧ್ಯವಿಲ್ಲ. ಈ ಪೂರ್ವಭಾವಿ ಸಭೆ ಮಹತ್ವವಾದುದು. ಎಲ್ಲಾ ನಾಯಕರೂ ಭಾಗವಹಿಸಬೇಕಿತ್ತು. ಮುಂದಿನ ದಿನಗಳಲ್ಲಾದರೂ ಸರಿಹೋಗಬೇಕು. ನಾಯಕರೆನಿಸಿಕೊಂಡವರು ಸಮಾವೇಶಕ್ಕೆ ಹೆಚ್ಚು ಜನರನ್ನು ಕರೆತರಬೇಕು. ಗುಂಪಲ್ಲಿ ಗೋವಿಂದ ಎನ್ನುವುದು ಬೇಡ. ಯಾರು ಎಷ್ಟು ಜನರನ್ನು ಕರೆತಂದಿದ್ದಾರೆ ಎಂಬ ಲೆಕ್ಕವಿಡೋಣ. ಅಂತಹವರಿಗೆ ಮುಂದಿನ ದಿನಗಳಲ್ಲಿ ಜವಾಬ್ದಾರಿ ನೀಡಲು ಅನುವಾಗುತ್ತದೆ ಎಂದು ಪಕ್ಷದ ಪದಾಧಿಕಾರಿಗಳಿಗೆ ತಿಳಿಸಿದರು.



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಮಂಗಳವಾರ ನಡೆದ ಕಾಂಗ್ರೆಸ್ ಜನಾಂದೋಲನ ಸಮಾವೇಶದ ಪೂರ್ವಭಾವಿ ಸಭೆಯಲ್ಲಿ ಮುಡಾ ಅಧ್ಯಕ್ಷ ಕೆ.ಮರೀಗೌಡ ಮಾತನಾಡಿದರು.

> **ನಾನು ಮುಡಾ ಅಧ್ಯಕ್ಷನಾಗಿ ಹೇಳುತ್ತಿದ್ದೇನೆ, ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪತ್ನಿಗೆ ಕಾನೂನುಬದ್ಧವಾಗಿಯೇ ನಿವೇಶನ ಮಂಜೂರಾಗಿದೆ. ಆದರೆ ಕೇಂದ್ರದ ಕೈಗೊಂಬೆಯಾಗಿ ರಾಜ್ಯಪಾಲರು ನೋಟಿಸ್ ನೀಡಿದ್ದಾರೆ. ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಸಿದ್ದರಾಮಯ್ಯನವರಿಗೆ ತೊಂದರೆ ನೀಡುವ ಮೂಲಕ ಕಾಂಗ್ರೆಸ್ ತೆಗೆಯುವ ಹುನ್ನಾರ ನಡೆಸಿವೆ. ಇಂದು ಕಾಂಗ್ರೆಸ್ ಸರ್ಕಾರದ ಅಸ್ತಿತ್ವದ ಪ್ರಶ್ನೆ ಎದುರಾಗಿದೆ. ಸಿದ್ದರಾಮಯ್ಯನವರಿಗೆ ಕಳಂಕ ತರುವ ಅವರ ಕುತಂತ್ರಕ್ಕೆ ಆ.9ರ ಸಮಾವೇಶವನ್ನು ಯಶಸ್ವಿಗೊಳಿಸುವ ಮೂಲಕ ಪ್ರತ್ಯುತ್ತರ ನೀಡಬೇಕು. ಚಾಮುಂಡೇಶ್ವರಿ ಕ್ಷೇತ್ರ ಸೇರಿದಂತೆ ಪ್ರತಿ ಕ್ಷೇತ್ರದಿಂದಲೂ ಕನಿಷ್ಠ 10 ಸಾವಿರ ಜನ ಪಾಲ್ಗೊಳ್ಳಬೇಕು.** –ಕೆ.ಮರೀಗೌಡ, ಮುಡಾ ಅಧ್ಯಕ್ಷ

> **ಬಿಜೆಪಿ–ಜೆಡಿಎಸ್ ಪಕ್ಷದವರು ಜನರಿಗೆ ತಪ್ಪು ಸಂದೇಶ ರವಾನಿಸುತ್ತಿದ್ದಾರೆ. ಮುಡಾ ವಿಚಾರದಲ್ಲಿ ಸಿದ್ದರಾಮಯ್ಯನವರ ತಪ್ಪೇನಿದೆ?. ಶುದ್ಧ ಆಡಳಿತ ನೀಡುತ್ತಿರುವ ಅವರ ವಿರುದ್ಧ ಆಧಾರರಹಿತ ಆರೋಪ ಮಾಡಿ, ತೇಜೋವಧೆಗೆ ಮುಂದಾಗಿದ್ದಾರೆ. ರಕ್ತಕ್ರಾಂತಿಯಾದರೂ ಸರಿ ನಾವು ಅನ್ಯಾಯದ ವಿರುದ್ಧ ಹೋರಾಡಬೇಕಿದೆ.** –ಡಾ.ಡಿ.ತಿಮ್ಮಯ್ಯ, ಎಂಎಲ್‌ಸಿ

ಕಾಂಗ್ರೆಸ್ ಅಸ್ತಿತ್ವದ ಸಭೆ: ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಮಾತನಾಡಿ, ಆ.9ರ ಬೃಹತ್ ಸಮಾವೇಶ ಕಾಂಗ್ರೆಸ್ ಅಸ್ತಿತ್ವ ತೋರಿಸುವ ಸಭೆ. ಕಾಂಗ್ರೆಸ್ ಸರ್ವನಾಶಕ್ಕೆ ನಡೆಸಿರುವ ಹುನ್ನಾರಕ್ಕೆ ಪ್ರತ್ಯುತ್ತರವಾಗಬೇಕು. ಸುಳ್ಳನ್ನು ನಿರಂತರವಾಗಿ ಹೇಳಿ ಅದನ್ನೇ ನಿಜವನ್ನಾಗಿ ಬಿಂಬಿಸುವ ಕುತಂತ್ರ ವಿಫಲವಾಗಬೇಕು. ಬಿಜೆಪಿಯವರು ದೇಶದ ಹಲವು ನಾಯಕರನ್ನು ಸುಳ್ಳು ಆರೋಪದಡಿ ಜೈಲಿಗೆ ಹಾಕುವ ಮೂಲಕ ಹಲವು ರಾಜ್ಯ ಸರ್ಕಾರಗಳನ್ನು ಅಸ್ಥಿರಗೊಳಿಸಿದ್ದಾರೆ. ಆದರೆ ಕರ್ನಾಟಕದಲ್ಲಿ ಅದು ಸಾಧ್ಯವಿಲ್ಲ. ಕಾಂಗ್ರೆಸ್ ಅಸ್ಥಿರವಾದರೆ ಜನತೆಗೆ ಕಷ್ಟ, ಹಾಗಾಗಿ ಕಾಂಗ್ರೆಸ್ ಪಕ್ಷದ ಅಸ್ತಿತ್ವ ಉಳಿಸಿಕೊಳ್ಳಲು ಎಲ್ಲರೂ ಕೈಜೋಡಿಸಬೇಕು. ಸಮಾವೇಶಕ್ಕೆ ಹತ್ತು ರಾಜ್ಯಗಳಿಂದ ಪ್ರತಿನಿಧಿಗಳು ಬರುತ್ತಾರೆ. ಇಲ್ಲಿಂದಲೇ ಇಡೀ ದೇಶಕ್ಕೆ ದೊಡ್ಡ ಸಂದೇಶ ರವಾನೆಯಾಗಬೇಕು ಎಂದರು.

ಸಭೆಯಲ್ಲಿ ಎಂಎಲ್‌ಸಿ ಡಾ.ಡಿ.ತಿಮ್ಮಯ್ಯ, ಮುಡಾ ಅಧ್ಯಕ್ಷ ಕೆ.ಮರೀಗೌಡ, ಎಐಸಿಸಿ ಮಾಧ್ಯಮ ವಕ್ತಾರೆ ಐಶ್ವರ್ಯಾ ಮಹದೇವು, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್ ಕುಮಾರ್, ಮಾಜಿ ಎಂಎಲ್‌ಸಿ ಆರ್.ಧರ್ಮಸೇನಾ, ಕೆಪಿಸಿಸಿ ಉಪಾಧ್ಯಕ್ಷ ವೆಂಕಟೇಶ್, ಮಾಜಿ ಸಚಿವ ಶಿವಣ್ಣ, ಮಾಜಿ ಮೇಯರ್‌ಗಳಾದ ಮೋದಾಮಣಿ, ಪುಷ್ಪಲತಾ ಚಿಕ್ಕಣ್ಣ, ಟಿ.ಬಿ.ಚಿಕ್ಕಣ್ಣ, ಜಿಪಂ ಮಾಜಿ ಅಧ್ಯಕ್ಷ ಕೂರ್ಗಳ್ಳಿ ಮಹದೇವು, ಮಾಜಿ ಸದಸ್ಯ ಬೀರಿಹುಂಡಿ ಬಸವಣ್ಣ, ಮಂಜುಳಾ ಮಾನಸ, ಸುಶೀಲಾ ನಂಜಪ್ಪ, ಗುರುಸ್ವಾಮಿ, ಬಿ.ಎಂ.ರಾಮು, ಸತೀಶ್ ಮತ್ತಿತರರ ಮುಖಂಡರು ಉಪಸ್ಥಿತರಿದ್ದರು.

ವರಮಹಾಲಕ್ಷ್ಮಿ ಹಬ್ಬಕ್ಕೆ ಗೃಹಲಕ್ಷ್ಮಿ ಹಣ ಜಮೆ

ಬೆಂಗಳೂರು, ಆ. 6(ಕೆಎಂಶಿ)–



ಲಕ್ಷ್ಮೀ ಹೆಬ್ಬಾಳ್ಕರ್

ವರಮಹಾಲಕ್ಷ್ಮಿ ಹಬ್ಬಕ್ಕೆ ರಾಜ್ಯದ ಮಹಿಳೆಯರಿಗೆ ಗೃಹಲಕ್ಷ್ಮಿ ಯೋಜನೆಯ ಎರಡು ತಿಂಗಳ ಹಣ ಜಮೆ ಆಗಲಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಖಾತೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಇಂದಿಲ್ಲಿ ತಿಳಿಸಿದ್ದಾರೆ.

ಕಾಂಗ್ರೆಸ್ ಜನಾಂದೋಲನ ಸಮಾವೇಶದಲ್ಲಿ ಮಾತನಾಡಿದ ಅವರು, ತಾಂತ್ರಿಕ ಕಾರಣಗಳಿಂದ ಕಳೆದ ಎರಡು–ಮೂರು ತಿಂಗಳಿಂದ ಗೃಹಲಕ್ಷ್ಮಿ ಯೋಜನೆಯ ಮಾಸಿಕ ತಲಾ 2000 ರೂ. ಸಹಾಯಧನ ಮನೆಯೊಡತಿಯ ಬ್ಯಾಂಕ್ ಖಾತೆಗೆ ಜಮೆ ಆಗಿರಲಿಲ್ಲ, ಇವತ್ತಿನಿಂದ ಜೂನ್, ಜುಲೈ ತಿಂಗಳ ಹಣ ಜಮೆ ಆಗಲಿದೆ ಎಂದು ಘೋಷಿಸಿದರು. ಗೃಹಲಕ್ಷ್ಮಿ ಯೋಜನೆಯ ಜೂನ್ ತಿಂಗಳ ಹಣ ಬಿಡುಗಡೆ ಪ್ರಕ್ರಿಯೆ ಆರಂಭವಾಗಿದೆ, ನಾಳೆಯೊಳಗೆ 26.65 ಲಕ್ಷ ಅರ್ಹ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಹಣ ಸಂದಾಯವಾಗಲಿದೆ.

ಮೊದಲ ಹಂತದಲ್ಲಿ ಬೆಳಗಾವಿ, ಕಲಬುರಗಿ, ಬೀದರ್, ವಿಜಯಪುರ, ಬಳ್ಳಾರಿ, ರಾಯಚೂರು, ಗದಗ, ಬಾಗಲಕೋಟೆ, ಹಾವೇರಿ, ಕೊಪ್ಪಳ, ಯಾದಗಿರಿ, ಚಿತ್ರದುರ್ಗ, ಬೆಂಗಳೂರು, ಕೋಲಾರ ಜಿಲ್ಲೆಗಳ ಫಲಾನುಭವಿಗಳಿಗೆ 533 ಕೋಟಿ ರೂ. ಪಾವತಿಯಾಗಲಿದೆ.

ಲೋಕಸಭಾ ಚುನಾವಣಾ ನೀತಿ ಸಂಹಿತೆಯಿಂದಾಗಿ ಗೃಹಲಕ್ಷ್ಮಿ ಯೋಜನೆಯ ಜೂನ್ ಮತ್ತು ಜುಲೈ ತಿಂಗಳ ಕಂತಿನ ಹಣ ತಡವಾಗಿದೆ. ಆದರೆ, ಶೀಘ್ರದಲ್ಲೇ ಬಿಡುಗಡೆಯಾಗಲಿದೆ ಎಂದು ಲಕ್ಷ್ಮಿ ಹೆಬ್ಬಾಳ್ಕರ್ ಇತ್ತೀಚೆಗೆ ತಿಳಿಸಿದ್ದರು.

ಇದೀಗ ಗೃಹಲಕ್ಷ್ಮಿ ಯೋಜನೆ ಹಣ ಬಿಡುಗಡೆ ಮೂಲಕ ವರಮಹಾಲಕ್ಷ್ಮಿ ಹಬ್ಬಕ್ಕೆ ರಾಜ್ಯದ ಮನೆಯೊಡತಿಗೆ ಕಾಂಗ್ರೆಸ್ ಸರ್ಕಾರ ಶುಭ ಸುದ್ದಿ ನೀಡಿದೆ.

ಲೋಕಸಭೆ ಚುನಾವಣೆ ಫಲಿತಾಂಶ ಪ್ರಕಟವಾದ ನಂತರ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆ ಹಣ ಜಮೆ ಆಗದಿರುವುದಕ್ಕೆ ಮಹಿಳೆಯರು ತೀವ್ರ ಅಸಮಾಧಾನಗೊಂಡಿದ್ದರು.

ಇದೀಗ ಕಳೆದ ಎರಡು ತಿಂಗಳ ಹಣವನ್ನು ಒಮ್ಮೆಲೆ ಜಮೆ ಮಾಡುವುದಾಗಿ ಸರ್ಕಾರ ತಿಳಿಸಿದೆ. ಗೃಹಲಕ್ಷ್ಮಿ ಹಣ ಬಿಡುಗಡೆ ಮಾಡದಿರುವುದಕ್ಕೆ ವಿರೋಧ ಪಕ್ಷಗಳು ಕಾಂಗ್ರೆಸ್ ಸರ್ಕಾರವನ್ನು ಟೀಕಿಸುತ್ತಿದ್ದವು. ಗ್ಯಾರಂಟಿ ಭರವಸೆಗಳನ್ನು ಈಡೇರಿಸುವಲ್ಲಿ ಸರ್ಕಾರ ಆರ್ಥಿಕ ದಿವಾಳಿಯಾಗಿದೆ, ಯೋಜನೆಗಳನ್ನು ಮುಂದುವರೆಸಲು ಸಾಧ್ಯವಾಗುತ್ತಿಲ್ಲ ಎಂದು ಸರ್ಕಾರವನ್ನು ಬಿಜೆಪಿ ನಾಯಕರು ಟೀಕಿಸಿದ್ದರು.

ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ, ಸರ್ಕಾರ ಹಣ ಹೊಂದಿಸುತ್ತದೆ, ಎರಡು ತಿಂಗಳ ಹಣ ಗೃಹಲಕ್ಷ್ಮಿಯರ ಖಾತೆಗೆ ಜಮೆಯಾಗಲಿದೆ ಎಂದು ಕಾಂಗ್ರೆಸ್ ನಾಯಕರು ಹೇಳಿದ್ದರು.

ಮುಡಾ ಹಗರಣ; ಸಂಬಂಧಿಸಿದ ಎಲ್ಲರ ವಿರುದ್ಧ ಕ್ರಮಕ್ಕೆ ರಂಗಕರ್ಮಿ ಅಡ್ಡಂಡ ಕಾರ್ಯಪ್ಪ ಪೊಲೀಸರಿಗೆ ದೂರು



ಅಡ್ಡಂಡ ಕಾರ್ಯಪ್ಪ



ಮೈಸೂರು, ಆ.6(ಎಸ್‌ಬಿಡಿ)–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿನ ಹಗರಣದಿಂದ ನಾನೂ ಸೇರಿದಂತೆ ಸಾರ್ವಜನಿಕರಿಗೆ ನಷ್ಟವಾಗಿದೆ. ಇದಕ್ಕೆ ಕಾರಣರಾದವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಮೈಸೂರು ರಂಗಾಯಣದ ಮಾಜಿ ನಿರ್ದೇಶಕರಾದ ಹಿರಿಯ ರಂಗಕರ್ಮಿ ಅಡ್ಡಂಡ ಸಿ.ಕಾರ್ಯಪ್ಪ, ಲಕ್ಷ್ಮೀಪುರಂ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಸದ್ಯ ಸದ್ದು ಮಾಡುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪತ್ನಿ ಪಾರ್ವತಿ ಅವರಿಗೆ ನಿವೇಶನ ಮಂಜೂರಾತಿ ಪ್ರಕರಣ ಸಂಬಂಧ ಮಾಹಿತಿ ಹಕ್ಕು ಅಡಿಯಲ್ಲಿ ದಾಖಲೆ ಪಡೆದು ಪರಿಶೀಲಿಸಿದ ವೇಳೆ ಇದರಲ್ಲಿ ಅಕ್ರಮ ನಡೆದಿರುವುದು ಕಂಡುಬರುತ್ತದೆ. ಹಾಗಾಗಿ ಅಕ್ರಮದಲ್ಲಿ ಭಾಗಿಯಾಗಿರುವ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವಿರುದ್ಧವೂ ಕ್ರಮ ಕೈಗೊಳ್ಳಬೇಕು ಎಂದು ದೂರಿನಲ್ಲಿ ತಿಳಿಸಿದ್ದಾರೆ.

ಮೈಸೂರಿನಲ್ಲಿ ರಂಗ ಚಟುವಟಿಕೆ ಉದ್ದೇಶದಿಂದ ಬಾಡಿಗೆ ಮನೆಯಲ್ಲಿ ವಾಸವಿದ್ದೇನೆ. ರಂಗ ಚಟುವಟಿಕೆ ಮುಂದುವರೆಸಲೆಂದು ಖಾಯಂ ನಿವೇಶನ ಪಡೆದು, ಮನೆ ನಿರ್ಮಿಸಬೇಕೆಂಬ ಉದ್ದೇಶದಿಂದ ರಂಗಭೂಮಿ ಸೇವೆ ಹಾಗೂ ಹಿರಿಯ ನಾಗರಿಕ ಕೋಟಾದಡಿ 2023ರ ಫೆಬ್ರವರಿ 27ರಂದು ಮುಡಾಗೆ ನಿವೇಶನಕ್ಕಾಗಿ ಅರ್ಜಿ ಸಲ್ಲಿಸಿ, 1,04,600 ರೂ. ಪಾವತಿಸಿ ರಶೀದಿ ಪಡೆದಿದ್ದೇನೆ.

ಇದೀಗ ಮುಡಾದಲ್ಲಿ ವಂಚನೆ ನಡೆದಿರುವ ಬಗ್ಗೆ ನನ್ನ ಸ್ನೇಹಿತ ಸ್ನೇಹಮಯಿ ಕೃಷ್ಣನ ಮೂಲಕ ಮಾಹಿತಿ ಸಿಂಧು ಅಧಿನಿಯಮದಡಿ ದಾಖಲೆ ಪಡೆದಿದ್ದೇನೆ. ಅದರಂತೆ ಮೈಸೂರು ಕಂದಾಯ ಇಲಾಖೆ ದೇವನೂರು ಕೆಸರೆ ಗ್ರಾಮಕ್ಕೆ ಸಂಬಂಧಿಸಿದಂತೆ 2008ರ ಆ.10ರಿಂದ ಸತತವಾಗಿ ಸುಳ್ಳು ದಾಖಲೆ ಸೃಷ್ಟಿಸಿಕೊಂಡು ಮುಡಾಕ್ಕೆ ಕೋಟ್ಯಾಂತರ ರೂ. ನಷ್ಟ ಮಾಡಿದ್ದಾರೆ. ಕೆಸರೆ ಗ್ರಾಮದ ಸರ್ವೆ ನಂಬರ್ 464ರ 3.16 ಎಕರೆ ಜಾಗವನ್ನು ದೇವರಾಜು ನಂತರ ಬಿ.ಎಂ.ಮಲ್ಲಿಕಾರ್ಜುನಸ್ವಾಮಿ ಬಳಿಕ 2010ರಲ್ಲಿ ಪಾರ್ವತಿ ಸಿದ್ದರಾಮಯ್ಯ ನಕಲಿ ದಾಖಲೆ ಸೃಷ್ಟಿಸಿ ವರ್ಗಾಯಿಸಿಕೊಂಡಿದ್ದಾರೆ. ಆ ಭೂಮಿಯನ್ನು ಮುಡಾ ಬಳಸಿಕೊಂಡಿದೆ ಎಂದು ರಾಜಕೀಯ ಪ್ರಭಾವದಿಂದ 2022ರಲ್ಲಿ ವಿಜಯನಗರ ಬಡಾವಣೆಯಲ್ಲಿ ಬೆಲೆಬಾಳುವ 14 ನಿವೇಶನಗಳನ್ನು ಪಡೆದಿದ್ದಾರೆ. ಈ ವಂಚನೆಯಲ್ಲಿ ಮುಡಾದ ಆಗಿನ ಆಯುಕ್ತರೂ ಶಾಮೀಲಾಗಿದ್ದಾರೆ. ಈ ಪ್ರಕರಣದಿಂದ ತೆರಿಗೆದಾರನಾಗಿರುವ ಹಾಗೂ ನಿವೇಶನಕ್ಕಾಗಿ ಮುಡಾಗೆ ಅರ್ಜಿ ಹಾಕಿರುವ ನಾನೂ ಅನ್ಯಾಯಕ್ಕೆ ಒಳಗಾಗಿದ್ದೇನೆ. ಅಲ್ಲದೆ ಸಾರ್ವಜನಿಕರಿಗೆ ನಿವೇಶನ ಹಂಚಿಕೆಗೂ ಅಡ್ಡಿಯಾಗಿದೆ. ಆದ್ದರಿಂದ ಮೇಲೆ ಹೆಸರಿಸಿದವರು ಮತ್ತು ಆ ಸಂದರ್ಭದಲ್ಲಿನ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ದೂರಿನಲ್ಲಿ ಮನವಿ ಮಾಡಿದ್ದಾರೆ.

ಠಾಣಾಧಿಕಾರಿ ಹಿಂಬರಹ

ಅಡ್ಡಂಡ ಸಿ.ಕಾರ್ಯಪ್ಪ ಅವರ ದೂರು ಸ್ವೀಕರಿಸಿದ ಲಕ್ಷ್ಮೀಪುರಂ ಪೊಲೀಸ್ ಠಾಣಾಧಿಕಾರಿ, ನೀವು ಸಲ್ಲಿಸಿದ ದೂರು ಅರ್ಜಿಯನ್ನು ಪರಿಶೀಲನೆ ನಡೆಸಲಾಗಿದೆ. ಜು.1ರಂದು ಸರ್ಕಾರದ ಆದೇಶದಂತೆ ಮುಡಾ ನಿವೇಶನ ಹಂಚಿಕೆಯಲ್ಲಿ ಅಕ್ರಮ ನಡೆದಿದೆ ಎಂಬ ವಿಚಾರಕ್ಕೆ ಸಂಬಂಧಿಸಿದಂತೆ ಕೂಲಂಕುಷವಾಗಿ ಪರಿಶೀಲಿಸಿ, ಸಮಗ್ರ ವರದಿ ಸಲ್ಲಿಸಲು ತನಿಖಾ ತಂಡ ಹಾಗೂ ನಿವೃತ್ತ ನ್ಯಾಯಮೂರ್ತಿಗಳ ಆಯೋಗ ರಚನೆ ಮಾಡಲಾಗಿದೆ. ನೀವು ನೀಡಿರುವ ದೂರು ಸದರಿ ವಿಚಾರಕ್ಕೆ ಸಂಬಂಧಪಟ್ಟಿರುವುದರಿಂದ ನಿಮ್ಮ ದೂರು ಅರ್ಜಿಯನ್ನು ತನಿಖಾಧಿಕಾರಿಗಳಿಗೆ ವಿಲೇ ಮಾಡಲಾಗಿದೆ ಎಂದು ಹಿಂಬರಹ ನೀಡಿದ್ದಾರೆ.

'ಮೈಸೂರು ಚಲೋ' ಬೆನ್ನಲ್ಲೇ ವಾಲ್ಮೀಕಿ ಹಗರಣ ವಿರೋಧಿಸಿ ಬಳ್ಳಾರಿ ಪಾದಯಾತ್ರೆ



ಶ್ರೀರಾಮುಲು

ಬೆಂಗಳೂರು: ಮುಡಾ ಹಗರಣದ ಆರೋಪದ ಮೇಲೆ ಕಾಂಗ್ರೆಸ್ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಗುರಿಯಾಗಿಸಿಕೊಂಡು ಬಿಜೆಪಿಯು ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ ನಡೆಸುತ್ತಿದೆ. ಇದರ ಬೆನ್ನಲ್ಲೇ ಈ ಬಾರಿ ಉತ್ತರ ಕರ್ನಾಟಕದಲ್ಲಿ ಮತ್ತೊಂದು ಬೃಹತ್ ಸಮಾವೇಶ ನಡೆಸುವ ಸಾಧ್ಯತೆಯಿದೆ.

ಮಹರ್ಷಿ ವಾಲ್ಮೀಕಿ ಎಸ್‌ಟಿ ಅಭಿವೃದ್ಧಿ ನಿಗಮ ಅಕ್ರಮಗಳನ್ನು ಎತ್ತಿ ತೋರಿಸುವ ನಿಟ್ಟಿನಲ್ಲಿ ಮುಂದಿನ ಕೆಲವು ವಾರಗಳಲ್ಲಿ ಬಳ್ಳಾರಿಯಲ್ಲಿ ಈ ರ‍್ಯಾಲಿ ನಡೆಯುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ. ಬಳ್ಳಾರಿ ಭಾಗದಲ್ಲಿ ಮತ್ತೊಮ್ಮೆ ಪಾದಯಾತ್ರೆ ನಡೆಸಲು ಬಿಜೆಪಿ ಉತ್ಸುಕವಾಗಿದೆ ಎಂದು ಬಿಜೆಪಿ ಮುಖಂಡ ಬಿ.ಶ್ರೀರಾಮುಲು ಹೇಳಿದ್ದಾರೆ. ನಮಗೆ ಬೀದರ್‌ನಿಂದ ಬಳ್ಳಾರಿಗೆ ಅಥವಾ ಬಳ್ಳಾರಿಯಿಂದ ಚಿತ್ರದುರ್ಗಕ್ಕೆ ಪಾದಯಾತ್ರೆ ನಡೆಸಬೇಕು. ಅದನ್ನು ಅಂತಿಮಗೊಳಿಸುವ ಮೊದಲು ನಾವು ದೆಹಲಿಯಲ್ಲಿರುವ ನಮ್ಮ ಪಕ್ಷದ ನಾಯಕರು ಮತ್ತು ರಾಜ್ಯ ಕೋರ್–ಕಮಿಟಿ ನಾಯಕರೊಂದಿಗೆ ಸಮಾಲೋಚಿಸುತ್ತೇವೆ ಎಂದು ಅವರು ಹೇಳಿದರು.

ಇತ್ತೀಚೆಗೆ ಯಾದಗಿರಿಯಲ್ಲಿ ನಡೆದ ಪಿಎಸ್‌ಐ ಪರಶುರಾಮ್ ಆತ್ಮಹತ್ಯೆ ಪ್ರಕರಣ ಸೇರಿದಂತೆ ಕಲ್ಯಾಣ ಕರ್ನಾಟಕ ಭಾಗಕ್ಕೆ ಸಂಬಂಧಿಸಿದಂತೆ ಹಲವು ಸಮಸ್ಯೆಗಳಿವೆ. ರಾಜ್ಯ ಸರ್ಕಾರವು ಎಸ್‌ಸಿ/ಎಸ್‌ಟಿಗಳಿಗೆ ಮೀಸಲಾದ 25,000 ಕೋಟಿ ರೂ.ಗಳನ್ನು ದುರುಪಯೋಗಪಡಿಸಿಕೊಂಡಿದೆ. ನ್ಯಾಯಕ್ಕಾಗಿ ನಾವು ಈ ವಿಷಯವನ್ನು ಪ್ರಸ್ತಾಪಿಸುತ್ತೇವೆ ಎಂದು ಶ್ರೀರಾಮುಲು ತಿಳಿಸಿದ್ದಾರೆ.

ಅಮೆರಿಕದ ಡಾಲರ್ ಎದುರು ರೂಪಾಯಿ ಮೌಲ್ಯ 16 ಪೈಸೆ ಏರಿಕೆ

ನವದೆಹಲಿ: ಕರೆನ್ಸಿ ವಿನಿಮಯ ಮಾರುಕಟ್ಟೆಯಲ್ಲಿ ಮಂಗಳವಾರದ ವಹಿವಾಟಿನಲ್ಲಿ ಅಮೆರಿಕದ ಡಾಲರ್ ಎದುರು ರೂಪಾಯಿ ಮೌಲ್ಯವು 16 ಪೈಸೆ ಏರಿಕೆಯಾಗಿದೆ. ವಹಿವಾಟಿನ ಅಂತ್ಯಕ್ಕೆ 83.93ಕ್ಕೆ ತಲುಪಿದೆ.

ಗುರುವಾರ ಭಾರತೀಯ ರಿಸರ್ವ್ ಬ್ಯಾಂಕ್‌ನ ಹಣಕಾಸು ನೀತಿ ಸಮಿತಿ ಸಭೆಯ ನಿರ್ಧಾರ ಪ್ರಕಟವಾಗಲಿದೆ. ಇದರಿಂದ ರೂಪಾಯಿ ಮೌಲ್ಯವು ಏರಿಕೆಯಾಗಿದೆ ಎಂದು ಮಾರುಕಟ್ಟೆ ತಜ್ಞರು ಹೇಳಿದ್ದಾರೆ. ಅಮೆರಿಕದಲ್ಲಿ ಆರ್ಥಿಕ ಹಿಂಜರಿತದ ಭೀತಿ ಮತ್ತು ಮಧ್ಯಪ್ರಾಚ್ಯ ಬಿಕ್ಕಟ್ಟಿನಿಂದಾಗಿ ಸೋಮವಾರದ ವಹಿವಾಟಿನಲ್ಲಿ ದೇಶದ ಷೇರು ಸೂಚ್ಯಂಕಗಳು ಕುಸಿತ ಕಂಡಿದ್ದವು. ಡಾಲರ್ ಎದುರು ರೂಪಾಯಿ ಮೌಲ್ಯ 37 ಪೈಸೆ ಕುಸಿದಿತ್ತು.

ಸರ್ಕಾರ ವಿಫಲ: ಕಳೆದ ಹತ್ತು ವರ್ಷಗಳ ಅವಧಿಯಲ್ಲಿ ರೂಪಾಯಿ ಮೌಲ್ಯವು ಶೇ 30ರಷ್ಟು ಕುಸಿದಿದೆ. ಸೋಮವಾರದಂದು ಸಾರ್ವಕಾಲಿಕ ಕನಿಷ್ಠಕ್ಕೆ ತಲುಪಿದೆ. ಇದು ಕೇಂದ್ರ ಸರ್ಕಾರದ ಆರ್ಥಿಕ ಪ್ರಮಾದ ಮತ್ತು ನಿರ್ವಹಣೆಯಲ್ಲಿನ ವೈಫಲ್ಯವನ್ನು ಸೂಚಿಸುತ್ತದೆ' ಎಂದು ಕಾಂಗ್ರೆಸ್‌ನ ಮಾಧ್ಯಮ ಮತ್ತು ಪ್ರಚಾರ ಸಮಿತಿ ಮುಖ್ಯಸ್ಥ ಪವನ್ ಖೇರಾ 'ಎಕ್ಸ್'ನಲ್ಲಿ ಟೀಕಿಸಿದ್ದಾರೆ.

ಕಾಂಗ್ರೆಸ್ ಜನಾಂದೋಲನ ಸಮಾವೇಶ ಯಶಸ್ಸಿಗೆ ಸಹಕರಿಸಲು ಶಾಸಕ ಹರೀಶ್‌ಗೌಡ ಮನವಿ



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಜನಾಂದೋಲನ ಸಮಾವೇಶ ಪೂರ್ವಭಾವಿಯಾಗಿ ಮಂಗಳವಾರ ನಡೆದ ಚಾಮರಾಜ ಕ್ಷೇತ್ರದ ಮುಖಂಡರ ಸಭೆಯಲ್ಲಿ ಶಾಸಕ ಕೆ.ಹರೀಶ್‌ಗೌಡ ಮಾತನಾಡಿದರು.

ಮೈಸೂರು, ಆ.6(ಎಸ್‌ಬಿಡಿ)–ಮೈಸೂರಿನಲ್ಲಿ ಶುಕ್ರವಾರ ನಡೆಯಲಿರುವ ಕಾಂಗ್ರೆಸ್ ಜನಾಂದೋಲನ ಸಮಾವೇಶದ ಯಶಸ್ವಿಗೆ ಸಹಕರಿಸುವಂತೆ ಶಾಸಕ ಕೆ.ಹರೀಶ್‌ಗೌಡ, ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ನಗರದ ಕಾಂಗ್ರೆಸ್ ಭವನದಲ್ಲಿ ಸಮಾವೇಶದ ಪೂರ್ವಭಾವಿಯಾಗಿ ಮಂಗಳವಾರ ಚಾಮರಾಜ ಕ್ಷೇತ್ರದ ಮುಖಂಡರು ಹಾಗೂ ಕಾರ್ಯಕರ್ತರ ಸಭೆ ನಡೆಸಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜನಪರ ಆಡಳಿತ ಸಹಿಸಲಾಗದೆ ಅವರ ವಿರುದ್ಧ ಮುಡಾ ವಿಚಾರದಲ್ಲಿ ಇಲ್ಲಸಲ್ಲದ ಆರೋಪ ಮಾಡಲಾಗುತ್ತಿದೆ. ಇದಕ್ಕೆ ಯಶಸ್ವಿ ಸಮಾವೇಶದ ಮೂಲಕ ಪ್ರತ್ಯುತ್ತರ ನೀಡಬೇಕಿದೆ ಎಂದರು. ಮುಡಾ ನಿರ್ಣಯದಡಿಯಲ್ಲೇ ಸಿದ್ದರಾಮಯ್ಯ ಅವರ ಶ್ರೀಮತಿಯವರಿಗೆ 50:50 ಅನುಪಾತದಲ್ಲಿ ನಿವೇಶನ ಮಂಜೂರು ಮಾಡಲಾಗಿದೆ. ಇದರಲ್ಲಿ ಯಾವುದೇ ಅಕ್ರಮವಾಗಿಲ್ಲ ಎಂಬುದು ವಿಪಕ್ಷದವರಿಗೂ ಗೊತ್ತಿದೆ. ಆದರೂ ಸಿಎಂ ವಿರುದ್ಧ ಆರೋಪ ಮಾಡುವ ಮೂಲಕ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸುವ ರಾಜಕೀಯ ದುರುದ್ದೇಶದಿಂದ ಬಿಜೆಪಿ–ಜೆಡಿಎಸ್ ಪಾದಯಾತ್ರೆ ನಡೆಸುತ್ತಿವೆ. ಆದರೆ ಅವರ ಉದ್ದೇಶ ಈಡೇರುವುದಿಲ್ಲ. ಆ.9ರಂದು ನಡೆಯಲಿರುವ ಐತಿಹಾಸಿಕ ಜನಾಂದೋಲನ ಸಮಾವೇಶದಲ್ಲಿ ಚಾಮರಾಜ ಕ್ಷೇತ್ರದಿಂದ ಕನಿಷ್ಠ 10 ಸಾವಿರ ಮಂದಿ ಪಾಲ್ಗೊಳ್ಳಬೇಕು. ಈ ಮೂಲಕ ಮುಖ್ಯಮಂತ್ರಿಗಳು ಹಾಗೂ ಸರ್ಕಾರದೊಂದಿಗೆ ನಿಂತು ವಿಪಕ್ಷದವರಿಗೆ ತಕ್ಕ ಪ್ರತ್ಯುತ್ತರ ನೀಡಬೇಕು ಎಂದು ಮನವಿ ಮಾಡಿದರು.

ರಾಜ್ಯಾದ್ಯಂತ ತಾತ್ಕಾಲಿಕವಾಗಿ ಚಾರಣಕ್ಕೆ ನಿರ್ಬಂಧ

ಚಿಕ್ಕಬಳ್ಳಾಪುರ, ಆ. 6–ಪ್ರಕೃತಿ ಸೊಬಗು ಹಾಗೂ ಚಾರಣಕ್ಕೆ ಖ್ಯಾತಿಯಾಗಿರುವ ಸ್ಕಂದಗಿರಿ, ಕೈವಾರಬೆಟ್ಟ, ಮಾಕಳಿದುರ್ಗ, ಅಂತರಗಂಗೆ, ಸಾವನದುರ್ಗ, ಬಿದರುಕಟ್ಟೆ, ರಾಮದೇವರಬೆಟ್ಟ, ಚಿನಾಗ್‌ಬೆಟ್ಟ, ಸಿದ್ದರಬೆಟ್ಟ ಸೇರಿದಂತೆ ರಾಜ್ಯಾದ್ಯಂತ ಇರುವ 21ಕ್ಕೂ ಹೆಚ್ಚು ಚಾರಣ ಸ್ಥಳಗಳಿಗೆ ರಾಜ್ಯ ಅರಣ್ಯ ಇಲಾಖೆ ತಾತ್ಕಾಲಿಕವಾಗಿ ನಿರ್ಬಂಧ ವಿಧಿಸಿದೆ. ಚಾರಣದ ಟಿಕೆಟ್ ಬುಕಿಂಗ್ ಇಕೋ ಟೂರಿಸಂ ಮಾಡುತ್ತಿತ್ತು. ಇದೀಗ ಇಕೋ ಟೂರಿಸಂ ಬದಲು ಅರಣ್ಯ ಇಲಾಖೆ ಚಾರಣ ನಿರ್ವಹಣೆ ಮಾಡಲು ಮುಂದಾಗಿದೆ. ಇದರಿಂದ ಸೂಕ್ತ ಮೂಲಸೌಕರ್ಯಗಳನ್ನು ಕಲ್ಪಿಸಲು ಆಗಸ್ಟ್1, 2024 ರಿಂದ ತಾತ್ಕಾಲಿಕವಾಗಿ ಚಾರಣ ತಡೆಹಿಡಿಯಲಾಗಿದೆ ಎಂದು ಚಿಕ್ಕಬಳ್ಳಾಪುರ ಉಪಅರಣ್ಯ ಸಂರಕ್ಷಣಾಧಿಕಾರಿ ರಮೇಶ್ ತಿಳಿಸಿದ್ದಾರೆ.

ಕರ್ನಾಟಕ ಇಎಸ್‌ಡಿಎಂ ಬ್ರ್ಯಾಂಡ್ ಲೋಕಾರ್ಪಣೆ; ಸೆ.18, 19ರಂದು ಮೈಸೂರು ಬಿಗ್ ಟೆಕ್ ಶೋ

ಇಎಸ್‌ಡಿಎಂ ವಲಯದಲ್ಲಿ ಜಾಗತಿಕವಾಗಿ ಕರ್ನಾಟಕ ಅಗ್ರಸ್ಥಾನಕ್ಕೇರಿಸುವ ಗುರಿ, 20ಕ್ಕೂ ಹೆಚ್ಚು ಇಎಸ್‌ಡಿಎಂ ಕಂಪನಿ ಮೈಸೂರು ಕ್ಲಸ್ಟರ್‌ಗೆ ಸೇರ್ಪಡೆ ; ಸಚಿವ ಪ್ರಿಯಾಂಕ್ ಖರ್ಗೆ



ಪ್ರಿಯಾಂಕ್ ಖರ್ಗೆ

ಮೈಸೂರು,ಆ.6(ಪಿಎಂ)– ಎಲೆಕ್ಟ್ರಾನಿಕ್ಸ್ ಸಿಸ್ಟಮ್ಸ್‌ನ ವಿನ್ಯಾಸ ಮತ್ತು ಉತ್ಪಾದನಾ ವಲಯದಲ್ಲಿ (ಇಎಸ್‌ಡಿಎಂ) ಕರ್ನಾಟಕವನ್ನು ಜಾಗತಿಕವಾಗಿ ಅಗ್ರಸ್ಥಾನಕ್ಕೇರಿಸುವ ಗುರಿ ಹೊಂದಿದ್ದು, ಈ ನಿಟ್ಟಿನಲ್ಲಿ ಸೆಮಿಕಂಡಕ್ಟರ್, ಎಲಿಮೆಂಟ್ ಮ್ಯಾನೇಜ್‌ಮೆಂಟ್ ಸಿಸ್ಟಂ ಸೇರಿದಂತೆ 20ಕ್ಕೂ ಹೆಚ್ಚು ಇಎಸ್‌ಡಿಎಂ ಕಂಪನಿಗಳು ಮೈಸೂರು ಕ್ಲಸ್ಟರ್‌ಗೆ ಸೇರ್ಪಡೆಯಾಗಲಿವೆ. ಆ ಮೂಲಕ ಸುಮಾರು 600 ಕೋಟಿ ರೂ.ಗಳ ಹೊಸ ಹೂಡಿಕೆ ಹರಿದು ಬರಲಿದೆ ಎಂದು ಐಟಿ–ಬಿಟಿ ಮತ್ತು ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಮೈಸೂರಿನ ವಿನೋಬಾ ರಸ್ತೆಯ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಕರ್ನಾಟಕ ಸರ್ಕಾರ, ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ (ಕೆಡಿಇಎಂ) ಮತ್ತು ಇಂಡಿಯಾ ಎಲೆಕ್ಟ್ರಾನಿಕ್ಸ್ ಅಂಡ್ ಸೆಮಿಕಂಡಕ್ಟರ್ ಅಸೋಸಿಯೇಷನ್ (ಐಇಎಸ್‌ಎ) ಸಂಯುಕ್ತಾಶ್ರಯದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಮುಂಬರುವ ಸೆ.18 ಮತ್ತು 19ರಂದು ನಡೆಸಲು ಉದ್ದೇಶಿಸಿರುವ 'ಮೈಸೂರು ಬಿಗ್ ಟೆಕ್ ಶೋ 2024'ರ ಅನಾವರಣ ಹಾಗೂ ಕರ್ನಾಟಕ ಇಎಸ್‌ಡಿಎಂ ಬ್ರಾಂಡ್ ಲೋಕಾರ್ಪಣೆ ಸಮಾರಂಭದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ತಮ್ಮ ಅನುಪಸ್ಥಿತಿಯ ಕಾರಣ ಅವರು ಕಳುಹಿಸಿರುವ ಈ ಸಂದೇಶವನ್ನು ಪ್ರಕಟಿಸಲಾಯಿತು. 150 ಎಕರೆಗಳಷ್ಟು ಪಿಸಿಬಿ ಕ್ಲಸ್ಟರ್ ಸ್ಥಾಪಿಸುವ ಉದ್ದೇಶವಿದ್ದು, ಪ್ರಸ್ತುತ ಪರೀಕ್ಷಾ ಸೌಲಭ್ಯವನ್ನು ವಿಸ್ತರಿಸಲು ಮಲ್ಟಿಟೆನೆನ್ಸಿ ಕ್ಲೀನ್ ರೂಮ್ ಅನ್ನು ಸೇರಿಸಲು ಉದ್ದೇಶಿಸಿದ್ದೇವೆ. ಇದು 5000 ಹೊಸ ಉದ್ಯೋಗಗಳಿಗೆ ಅವಕಾಶ ಕಲ್ಪಿಸಲಿದೆ. ವಿಶೇಷವಾಗಿ ಮಹಿಳೆಯರಿಗೆ ಹೆಚ್ಚಿನ ಉದ್ಯೋಗಾವಕಾಶಗಳು ದೊರೆಯಲಿವೆ. ಈ ಎಲ್ಲಾ ಬೆಳವಣಿಗೆಯಿಂದ ಜಾಗತಿಕ ಕಂಪನಿಗಳು ಮೈಸೂರಿನಲ್ಲಿ ಬೆಳೆಯಲು ವೇದಿಕೆ ಸಜ್ಜುಗೊಳ್ಳಲಿದೆ ಎಂದು ಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಮಂಗಳವಾರ ಕರ್ನಾಟಕ ಇಎಸ್‌ಡಿಎಂ ಬ್ರ್ಯಾಂಡ್ ಬಿಡುಗಡೆ ಮಾಡಲಾಯಿತು.

ಇಂದಿನ ಕಾರ್ಯಕ್ರಮದಲ್ಲಿ ಮಾತನಾಡಿದ ರಾಜ್ಯ ಸರ್ಕಾರದ ವಿದ್ಯುನ್ಮಾನ ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಕಾರ್ಯದರ್ಶಿ ಡಾ.ಏಕರೂಪ್ ಕೌರ್, ಸ್ಥಳೀಯ ಸಂಸ್ಥೆಗಳ ಜೊತೆ ಕೈಜೋಡಿಸಿರುವುದು ಮೈಸೂರು–ಬೆಂಗಳೂರನ್ನು ಸೆಮಿಕಾನ್ ಹಬ್ ಆಗಿ ಮಾಡುವಲ್ಲಿ ಬಹುಮುಖ್ಯ ಪಾತ್ರವಹಿಸಲಿದೆ. ಮೈಸೂರು ಸೆಮಿಕಾನ್ ತಯಾರಿಕೆ ಕ್ಷೇತ್ರದಲ್ಲಿ ಹಾಗೂ ಬೆಂಗಳೂರು ಸೆಮಿಕಾನ್ ವಿನ್ಯಾಸ ಕ್ಷೇತ್ರದಲ್ಲಿ ಜಾಗತಿಕ ಮಟ್ಟದಲ್ಲಿ ಬೆಳೆಯಲಿವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸರ್ಕಾರದ ನೀತಿಗಳನ್ನು ಕ್ಲಸ್ಟರ್‌ಗಳಿಗೆ ಪ್ರಯೋಜನವಾಗುವಂತೆ ವಿನ್ಯಾಸ ಮಾಡಲಾಗಿದೆ. ಸಬ್ಸಿಡಿ, ಉತ್ತೇಜನ ಮತ್ತು ಮೂಲಸೌಕರ್ಯಗಳನ್ನು ಒದಗಿಸಿ ಸಂಪೂರ್ಣ ಬೆಂಬಲ ನೀಡುವ ಮೂಲಕ ಉದ್ಯಮಗಳ ಅಭಿವೃದ್ಧಿ ಹಾಗೂ ರಾಜ್ಯದ ಆರ್ಥಿಕ ಬೆಳವಣಿಗೆಗೆ ಪೂರಕ ವಾತಾವರಣ ನಿರ್ಮಿಸಲಾಗಿದೆ. ಎಲಿವೇಟ್ ಪ್ರೋಗ್ರಾಂ ಮೂಲಕ ರಾಜ್ಯಾದ್ಯಂತ 223 ಕೋಟಿ ರೂ. ಅನುದಾನದಲ್ಲಿ 923 ಸ್ಟಾರ್ಟ್‌ಅಪ್‌ಗಳಿಗೆ ಉತ್ತೇಜನ ನೀಡಲಾಗಿದೆ. ಈ ಪೈಕಿ ಮೈಸೂರು ಕ್ಲಸ್ಟರ್‌ನ 40ಕ್ಕೂ ಹೆಚ್ಚು ಸ್ಟಾರ್ಟ್‌ಅಪ್ ಪ್ರಯೋಜನ ಪಡೆದಿವೆ ಎಂದು ತಿಳಿಸಿದರು.

ಕೆಡಿಇಎಂ ಅಧ್ಯಕ್ಷ ಬಿ.ವಿ.ನಾಯ್ಡು ಮಾತನಾಡಿ, ರಾಜ್ಯ ಸರ್ಕಾರದ ಪ್ರಮುಖ ಯೋಜನೆಯಾದ 'ಗ್ಲೋಬಲ್ ಟೆಕ್ನಾಲಜಿ ಸೆಂಟರ್' ಮೈಸೂರಿನಲ್ಲಿ 160,000 ಚದರ ಅಡಿಯ ವಿಸ್ತೀರ್ಣದಲ್ಲಿ ನಿರ್ಮಾಣಗೊಳ್ಳುತ್ತಿದೆ. ಇದು 2024ರ ಅಂತ್ಯದ ವೇಳೆಗೆ ಕಾರ್ಯ ನಿರ್ವಹಿಸಲು ಲಭ್ಯವಾಗಲಿದೆ ಎಂದು ಮಾಹಿತಿ ನೀಡಿದರು.

ಅಲ್ಲದೆ, ವಿವಿಧ ಕಂಪನಿಗಳ ಪ್ರತಿನಿಧಿಗಳೊಂದಿಗೆ ಸುದೀರ್ಘವಾಗಿ ಚರ್ಚಿಸಲಾಯಿತು. ಐಇಎಸ್‌ಎ ಅಧ್ಯಕ್ಷ ಡಾ.ವಿ.ವೀರಪ್ಪನ್, ಕೆಡಿಇಎಂ ಸಿಇಓ ಸಂಜೀವ್ ಗುಪ್ತಾ, ಗ್ಲೋಬಲ್ ಫೌಂಡ್ರೀಸ್‌ನ ವಿಪಿ ಮತ್ತು ಕಂಟ್ರಿ ಹೆಡ್ ಜಿತೇಂದ್ರ ಚಡ್ಡಾ ಸೇರಿದಂತೆ ಮತ್ತಿತರರು ಹಾಜರಿದ್ದರು. ಇದಕ್ಕೂ ಮುನ್ನ ಮೈಸೂರಿನ ಕೈಗಾರಿಕ ಪ್ರದೇಶಗಳಿಗೆ ಭೇಟಿ ನೀಡುವ ಮೂಲಕ ಭಾರತದ ಮೊದಲ ಇಎಸ್‌ಡಿಎಂ ಟೆಕ್ ಯಾತ್ರೆ ಸಹ ನಡೆಸಲಾಯಿತು.

ನಕ್ಕರೆ ಅದೇ ಸ್ವರ್ಗ

ಗುಂಡ : ದೇವರೆ ನನಗೆ ಒಂದು ವರ ಕೊಡು.
ದೇವರು : ಯಾವ ವರ?
ಗುಂಡ : ಜನ ಕೆಲಸ ಮುಗಿಸಿ ನನಗೆ ಹಣ ಕೊಟ್ಟು ಹೋಗಬೇಕು. ಅಂತಹ ವರ ಕೊಡು.
ದೇವರು : ತಥಾಸ್ತು... ಹಾಗಾದರೆ ನೀನು 'ಸುಲಭ್' ಶೌಚಾಲಯ ಪ್ರಾರಂಭಿಸು..!

ಮೈಸೂರು ಮಿತ್ರ

ಬುಧವಾರ, 7 ಆಗಸ್ಟ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ.........

ಜೀವನ ಇರುವುದೇ ಎರಡು ದಿನ. ಒಂದು ನಿನ್ನ ಪರವಾದ ದಿನ. ಮತ್ತೊಂದು ನಿನ್ನ ವಿರುದ್ಧವಾದ ದಿನ. ಪರವಾದ ದಿನದಲ್ಲಿ ಅಹಂಕಾರ ತೋರಿಸಬೇಡ. ವಿರುದ್ಧವಾದ ದಿನದಲ್ಲಿ ತಾಳ್ಮೆ ಕಳೆದುಕೊಳ್ಳಬೇಡ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಭರಣಿ ಮಳೆ ಬಿದ್ರೆ ಧರಣಿಯೆಲ್ಲಾ ಭೂಮಿ

ನಿಮ್ಮ ಪತ್ರಗಳು

■ ಮೈಸೂರಿಗೆ ಸ್ವಾಗತಿಸುತ್ತಿವೆ ಗುಂಡಿಮಯ ರಸ್ತೆಗಳು!



ಮಾನ್ಯರೆ,

ನಾಡಹಬ್ಬ ದಸರಾ ಸಮೀಪಿಸುತ್ತಿದ್ದಂತೆ ಮೈಸೂರಿನ ಶೋಭೆಯು ಹೆಚ್ಚಾಗುತ್ತದೆ. ಅದರಂತೆಯೇ ಮೈಸೂರಿನ ಹಲವೆಡೆ ವಿಜೃಂಭಣೆಯ ಸಡಗರ ನಡೆಯುವುದುಂಟು. ಆದರೆ ಅರಮನೆಗೆ ಸಮೀಪದಲ್ಲಿರುವ ಪ್ರಮುಖ ವೃತ್ತವಾದ ಜಯಚಾಮರಾಜೇಂದ್ರ ವೃತ್ತ (ಹಾರ್ಡಿಂಜ್) ಸುತ್ತ ರಸ್ತೆಯು ಗುಂಡಿಮಯವಾಗಿ ನಗರದ ಸೌಂದರ್ಯಕ್ಕೆ ಕಪ್ಪುಚುಕ್ಕೆ ಇಟ್ಟಂತಾಗಿದೆ. ಮೃಗಾಲಯ, ಇಟ್ಟಿಗೆಗೂಡು, ಕೆ.ಆರ್. ವೃತ್ತ, ಅರಮನೆ ಬಲರಾಮ ದ್ವಾರ ಹಾಗೂ ನಂಜನಗೂಡು ರಸ್ತೆಗಳಂತಹ ಬಹು ಮಾರ್ಗಗಳು ಸಂಪರ್ಕ ಕಲ್ಪಿಸುವ ರಸ್ತೆ ಇದಾಗಿದ್ದು, ಸಂಚಾರ ದಟ್ಟಣೆ ಅಧಿಕ ಪ್ರಮಾಣದಲ್ಲಿರುವ ಕಾರಣ ಈ ರೀತಿ ಹಳ್ಳಗಳಿದ್ದರೆ ಸರಣಿ ಅಪಘಾತಗಳು ಸಂಭವಿಸುವ ಸಾಧ್ಯತೆ ಹೆಚ್ಚಿರುತ್ತದೆ. ಅತ್ತ ನಗರದ ಗ್ರಾಮಾಂತರ ಬಸ್ ನಿಲ್ದಾಣದ ಎದುರುಗಡೆ ಮೃತ್ಯುಕೂಪವಾಗಿ ಪರಿಣಮಿಸುವ ರಸ್ತೆಯು ವರ್ಷವೇ ಕಳೆದರೂ ಮರು ಡಾಂಬರೀಕರಣ ಕಾರ್ಯ ಶುರುವಾಗಿಲ್ಲ. ಇವುಗಳ ಸ್ಥಿತಿ ನೋಡಿದಲ್ಲಿ ಪಾಲಿಕೆ ಅಧಿಕಾರಿಗಳು ರಸ್ತೆಗಳು ಪಾತಾಳಕ್ಕಿಳಿಯುವ ತನಕ ಕಾಯುತ್ತಿರುವಂತೆ ಕಂಡು ಬರುತ್ತಿದೆ. ನಗರದ ಸ್ಮಾರಕಗಳನ್ನು ಸಂರಕ್ಷಿಸುವ ಜೊತೆಗೆ ಅವುಗಳನ್ನು ಸಂಪರ್ಕಿಸುವ ರಸ್ತೆಗಳನ್ನೂ ಸಹ ಸುಸ್ಥಿತಿಯಲ್ಲಿ ನೋಡಿಕೊಳ್ಳುವುದು ಅಧಿಕಾರಿಗಳ ಜವಾಬ್ದಾರಿಯಾಗಿರುತ್ತದೆ. ಇಲ್ಲವಾದಲ್ಲಿ ನಗರದ ಗೌರವವು ಅಧಃಪತನಗೊಳ್ಳುವ ದಾರಿಯಂತೆ ಮಾರ್ಪಾಡಾಗಿ ಮೈಸೂರಿನ ಬಗ್ಗೆ ಪ್ರವಾಸಿಗರಲ್ಲಿ ಅಪಾರ ಅಪನಂಬಿಕೆಗಳು ಹುಟ್ಟಿಕೊಳ್ಳುತ್ತವೆ. ಆದ್ದರಿಂದ ಕೂಡಲೇ ರಸ್ತೆ ಮರು ಡಾಂಬರೀಕರಣದ ಕಾರ್ಯ ಪ್ರಾರಂಭಿಸಬೇಕೆಂದು ಮನವಿ.

–ಯಶಸ್. ಆರ್, ಸಾಮಾಜಿಕ ಕಾರ್ಯಕರ್ತ, ಮೈಸೂರು.

■ ಸಮಯಪ್ರಜ್ಞೆ ಮೆರೆದ ಸ್ಯಾನಿಟರಿ ಸೂಪರ್‌ವೈಸರ್!!

ಮಾನ್ಯರೆ,

ಇತ್ತೀಚೆಗೆ ಮೈಸೂರಿನ ವಿ.ವಿ.ಮೊಹಲ್ಲಾದ ಪೊಲೀಸ್ ಸ್ಟೇಷನ್ ಪಕ್ಕದಲ್ಲಿರುವ ಕನ್ಸರ್‌ವೆನ್ಸಿಯಲ್ಲಿ ಪ್ರತಿನಿತ್ಯ ಅಕ್ಕಪಕ್ಕದ ಮನೆಯವರು ಹಾಗೂ ಒಂಟಿಕೊಪ್ಪಲ್ ಕ್ಲಬ್‌ನವರು ಕಸ, ಪ್ಲಾಸ್ಟಿಕ್, ಹಾಲಿನ ಕವರ್ ಇತ್ಯಾದಿ ಚೆಲ್ಲುತ್ತಿದ್ದು, ಪರಿಸರವನ್ನು ಹಾಳು ಮಾಡುತ್ತಿದ್ದರು. ಇದರ ಜೊತೆಗೆ ಇಲ್ಲಿ ಮೂತ್ರ ವಿಸರ್ಜನೆಯನ್ನೂ ಮಾಡಿ, ಅನೈರ್ಮಲ್ಯವನ್ನು ಸೃಷ್ಟಿಸಿದ್ದರು. ಮೈಸೂರು ಮಹಾನಗರಪಾಲಿಕೆ ವಾರ್ಡ್ ನಂ.19ರ ಸ್ಯಾನಿಟರಿ ಸೂಪರ್‌ವೈಸರ್ ಲಕ್ಷ್ಮಣ್ ಸಮಯಪ್ರಜ್ಞೆ ಉಪಯೋಗಿಸಿ ಆ ಜಾಗದಲ್ಲಿ ಒಂದು ನಾಮಫಲಕ ಅಳವಡಿಸಿದ್ದಾರೆ. ಅದರಲ್ಲಿ 'ಇದು ಕಸ ಹಾಕುವ ಸ್ಥಳವಲ್ಲ, ಕಸ ಹಾಕಿದರೆ ದಂಡ ವಿಧಿಸಲಾಗುವುದು' ಎಂದು ಬರೆದಿತ್ತು. ಇದನ್ನು ಅರಿತ ಸಾರ್ವಜನಿಕರು ಎಚ್ಚೆತ್ತುಕೊಂಡು ಆ ಸ್ಥಳದಲ್ಲಿ ಕಸವನ್ನು ಹಾಕುವುದನ್ನು ನಿಲ್ಲಿಸಿದ್ದಾರೆ. ಅದಲ್ಲದೇ ಮೂತ್ರ ವಿಸರ್ಜನೆ ಯನ್ನೂ ಮಾಡುತ್ತಿಲ್ಲ. ಇದೇ ರೀತಿ ಬೇರೆ ವಾರ್ಡ್‌ಗಳಲ್ಲಿ ಇಂತಹ ನಾಮಫಲಕ ಗಳನ್ನು ಅಳವಡಿಸಿದರೆ ಸಾರ್ವಜನಿಕರು ಕಸ ಚೆಲ್ಲುವ ಪ್ರವೃತ್ತಿಗೆ ತಡೆ ಹಿಡಿಯ ಬಹುದು. ಲಕ್ಷ್ಮಣ್ ಅವರ ಈ ಜಾಣ್ಮೆಗೆ ಅಭಿನಂದನೆಗಳು.

– ಜಿ.ಪಿ.ಹರೀಶ್, ವಿ.ವಿ.ಮೊಹಲ್ಲಾ, ಮೈಸೂರು.

■ ಸಾರಿಗೆ ಸಂಸ್ಥೆಯ ಗಮನಕ್ಕೆ...

ಮಾನ್ಯರೆ,

ಭಾನುವಾರ ಮತ್ತು ಇತರ ರಜೆ ಇರುವ ದಿನಗಳಲ್ಲಿ ಅದರಲ್ಲೂ ಮಧ್ಯಾಹ್ನದ ಮೇಲೆ ಮೈಸೂರಿನಿಂದ ಬೆಂಗಳೂರಿಗೆ ಪ್ರಯಾಣಿಸುವುದು ಬಹಳ ಕಷ್ಟಕರವಾಗಿದೆ. ಪ್ರಯಾಣಿಕರ ಸಂಖ್ಯೆಗೆ ಅನುಗುಣವಾಗಿ ಬಸ್ಸುಗಳ ಸೌಕರ್ಯ ಇಲ್ಲ. ಹೆಚ್ಚು ಕಡಿಮೆ ಮೈಸೂರಿನಿಂದ ಬೆಂಗಳೂರಿಗೆ ಪ್ರಯಾಣಕ್ಕೆ ಬೇಕಾಗುವ ಸಮಯ ಮೈಸೂರು ನಿಲ್ದಾಣದಲ್ಲೇ ಪ್ರಯಾಣಿಕರು ಕಳೆಯಬೇಕಾದ ಪರಿಸ್ಥಿತಿ ಇದೆ.ಕಾದು ಕಾದು ಬೇಸತ್ತು ಹೆಚ್ಚುವರಿ ಹಣ ತೆತ್ತು ಐರಾವತ ಏರಿ ಹೋಗಬೇಕಾದ ಅನಿವಾರ್ಯತೆ ಕೆಲವರಿಗೆ ಉಂಟಾಗುತ್ತದೆ. ಭಾನುವಾರ, ರಜೆಯ ದಿನ ಪ್ರಯಾಣಿಕರ ಸಂಖ್ಯೆ ಹೆಚ್ಚಿದ್ದಾಗ ಸಾರಿಗೆ ಸಂಸ್ಥೆಗೆ ಕೆಲವು ಸಲಹೆಗಳು.

1) ಹೆಚ್ಚಿನ ಸಾರಿಗೆ ಬಸ್ಸುಗಳ ವ್ಯವಸ್ಥೆ ಮಾಡಬೇಕು.

2) ಎರಡು ಟಿಕೆಟ್ ಕೌಂಟರ್ ತೆರೆಯಲಿ ಅಥವಾ ಮಹಿಳೆಯರಿಗೆ ಫ್ರೀ ಟಿಕೆಟ್ ನೀಡುವುದಕ್ಕೆ ಬೇರೆ ಕೌಂಟರ್ ತೆರೆಯಬೇಕು.

3) ನಿಗದಿತ ಸಮಯಕ್ಕೆ ಕೆಲವು ಬಸ್ಸುಗಳು ಹೊರಡಲಿ ಮತ್ತು ಆ ಬಸ್ಸಿನಲ್ಲಿ ಮುಂಗಡ ಟಿಕೆಟ್ ವ್ಯವಸ್ಥೆ ಇರಲಿ.

4) ಬೇರೆ ಊರಿನಿಂದ ಮೈಸೂರು ಮೂಲಕ ಬೆಂಗಳೂರಿಗೆ ಹೋಗುವ ಕೆಲವು ಬಸ್ಸುಗಳನ್ನಾದರೂ ತಡೆರಹಿತ ಬಸ್ಸುಗಳನ್ನಾಗಿ ಬಳಸಲಿ.

–ರಾಘವೇಂದ್ರ ಜೋಯಿಸ್, ಮೈಸೂರು

■ ಕೆಆರ್‌ಎಸ್ ರೈಲು ನಿಲ್ದಾಣದ ದುಸ್ಥಿತಿ ಸರಿಪಡಿಸಿ



ಮಾನ್ಯರೆ,

ಒಂದು ಕಾಲಕ್ಕೆ ವಿಜೃಂಭಿಸಿದ ಕೆಆರ್‌ಎಸ್ ರೈಲು ನಿಲ್ದಾಣದ ಈಗಿನ ಸ್ಥಿತಿ ಗತಿಯನ್ನು ನೋಡಿದರೆ ಮನಸ್ಸಿಗೆ ಬೇಸರವಾಗುತ್ತದೆ. ಎಲ್ಲೆಂದರಲ್ಲಿ ಬಿದ್ದಿರುವ ಕಸದ ರಾಶಿ, ರೈಲ್ವೆ ಸಿಬ್ಬಂದಿಗಳ ನೆಲಕಚ್ಚಿದ ಮನೆಗಳ ಅವಶೇಷಗಳು, ಬೆಳೆದು ನಿಂತ ಕಳ್ಳಿಯ ಗಿಡಗಳು, ಸಾರ್ವಜನಿಕ ಶೌಚಾಲಯವಾದ ರೈಲ್ವೇ ಸ್ವತ್ತು. ಇದು ಸುತ್ತಮುತ್ತ ಇರುವ ನಿವಾಸಿಗಳಿಗೆ ಪಿಡುಗಾಗಿ ಪರಿಣಮಿಸಿದೆ. ರೈಲ್ವೆಯವರು ತಮ್ಮ ಸ್ವತ್ತನ್ನು ಸರಿಯಾಗಿ ನಿರ್ವಹಣೆ ಮಾಡದ ಕಾರಣ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ.

–ಕೊ.ಸು.ನರಸಿಂಹ ಮೂರ್ತಿ, ಹಿರಿಯ ನಾಗರಿಕ, ಮೈಸೂರು



ಕೆಬಿಜಿಯವರ

ಭೂಮಂತ್ರ... ಭೂಮಂತ್ರ... ಭೂಮಂತ್ರ...

ಹಳ್ಳಿ ಹಕ್ಕಿ ಹಾಡುತ್ತಿದೆ... ಕೇಳಿದಿರಾ?



ಎ.ಹೆಚ್.ವಿಶ್ವನಾಥ್, ವಿಧಾನಪರಿಷತ್ ಸದಸ್ಯ



ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಕಚೇರಿ.

ಕರ್ನಾಟಕ ರಾಜ್ಯ ರಾಜಕಾರಣದಲ್ಲಿ ಎ.ಹೆಚ್.ವಿಶ್ವನಾಥ್‌ರವರ ಹೆಸರು ಕೇಳದವರಿರಲಾರರು. ಅಲ್ಲೆಲ್ಲೋ ಹಳ್ಳಿಯಿಂದ ಬಂದು ಮೈಸೂರು ಜಿಲ್ಲೆಯ ಕೆ.ಆರ್.ನಗರದಲ್ಲಿ ವಕೀಲರಾಗಿ ವೃತ್ತಿರಂಗಕ್ಕೆ ಪಾದಾರ್ಪಣೆ ಮಾಡಿ ನಂತರ ರಾಜಕೀಯಕ್ಕೆ ಧುಮುಕಿದವರು. ಏನೇನೂ ಅಲ್ಲದ ಇವರನ್ನು ರಾಜಕೀಯಕ್ಕೆ ತಂದವರೇ ಕಾಂಗ್ರೆಸ್‌ನ ಮಾಜಿ ಮುಖ್ಯಮಂತ್ರಿ **ಡಿ. ದೇವರಾಜ ಅರಸು–1978**. ನಂತರ ಅವರು ತಿರುಗಿ ನೋಡಲೇ ಇಲ್ಲ. ಅನೇಕ ಚುನಾಯಿತ ರಾಜಕೀಯ ಅಧಿಕಾರವನ್ನು–ಮಂತ್ರಿ, ಎಂಪಿ–ಮೊದಲಾಗಿ ಅಲಂಕರಿಸಿ ಇದೀಗ ಬಿಜೆಪಿಯ ವಿಧಾನ ಪರಿಷತ್ ಸದಸ್ಯರಾಗಿದ್ದಾರೆ.

ಇವರು ಮೊನ್ನೆ ಆ. 5ರಂದು ನಗರದಲ್ಲಿ ಒಂದು ಸುದ್ದಿಗೋಷ್ಠಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬಗ್ಗೆ ಪ್ರಸ್ತಾಪಿಸಿದ್ದಾರೆ. ನಮ್ಮಲ್ಲಿರುವ ರಾಜಕಾರಣಿಗಳಲ್ಲಿ ಎ.ಎಚ್.ವಿಶ್ವನಾಥರು ತಮ್ಮ ವಿದ್ಯೆಗೆ ತಕ್ಕಂತೆ ಬುದ್ಧಿವಂತರೂ, ಚಿಂತಕರೂ ರಾಜಕೀಯ ವಿಶ್ಲೇಷಣಕಾರರೂ ಆಗಿದ್ದಾರೆ ಎಂದರೆ ತಪ್ಪಾಗಲಾರದು. ರಾಜಕೀಯ ಸಾಗರದಲ್ಲಿ ತಿಮಿಂಗಿಲಗಳ ಮಧ್ಯೆ ಈಜಿ ಗೆದ್ದು ಬದುಕಿ ಬಂದವರು. ಆದುದರಿಂದ ಅವರು ಮೊನ್ನೆ ಪತ್ರಿಕಾಗೋಷ್ಠಿಯಲ್ಲಿ ಈಗ ನಡೆಯುತ್ತಿರುವ ಕಾಂಗ್ರೆಸ್ ಸರಕಾರದ ಎರಡು ಅತೀ ದೊಡ್ಡ ಹಗರಣಗಳಾದ ವಾಲ್ಮೀಕಿ ಅಭಿವೃದ್ಧಿ ನಿಗಮ, ಬೆಂಗಳೂರು ಮತ್ತು ಮುಡಾ, ಮೈಸೂರು ಕುರಿತಂತೆ ಮಾತನಾಡಿದ್ದು ಅರ್ಥಗರ್ಭಿತವಾಗಿತ್ತು. ಅದು ಅನುಭವ ಹಾಗೂ ಬುದ್ಧಿವಂತಿಕೆಯ ಮಾತುಗಳೆಂದೆನಿಸಿತು. ಅವರು ಸಿದ್ದರಾಮಯ್ಯ ಅವರಿಗೆ ಕೊಟ್ಟ ಸಲಹೆ ಕೂಡ ಸಂದರ್ಭೋಚಿತವಾಗಿದೆ ಅನ್ನಿಸಿತು. **"ಪಂಚೆಗೆ ಅಂಟಿರುವ ಮಸಿ ಮುಖಕ್ಕೆ ತಾಗುವ ಮುನ್ನ ನಿವೇಶನ ಹಿಂದಕ್ಕೆ ಕೊಟ್ಟು ಬಿಡಿ"**. ಹೌದು ಬೆಂಕಿಯನ್ನು ಕೈಯ್ಯಲ್ಲಿ ಇಟ್ಟುಕೊಂಡು ಕೈ ಸುಟ್ಟು ಕೊಳ್ಳುವುದರ ಬದಲು, ಬೆಂಕಿಯನ್ನು ತಕ್ಷಣ ಕೈಯಿಂದ ಬಿಸಾಡುವುದು ಒಳ್ಳೆಯದಲ್ಲವೆ? ಬಾಕಿ ವಿಷಯ ನಂತರ ನೋಡಬಹುದು. ಸುಟ್ಟಗಾಯಕ್ಕೆ ಮುಲಾಮು ಹಚ್ಚಿ, ಗಾಯ ವಾಸಿಯಾದ ಮೇಲೆ ಗಾಯದ ಕಲೆ, ನೋವು ತಾನಾಗಿಯೇ ಮರೆಯಾಗುತ್ತೆ.

ವಿಶ್ವನಾಥ್ ಅವರ ಇನ್ನೊಂದು ಮಾತು : "ಇರುವ ಒಬ್ಬ ಮಗನಿಗೆ ಇನ್ನೆಷ್ಟು ಬೇಕು ಹೇಳಿ..." ಇದನ್ನು ನಿನ್ನೆ ಪತ್ರಿಕೆಯಲ್ಲಿ ಓದಿದಾಗ ನನಗೆ ನೆನಪಾಗಿದ್ದು ನೋಬೆಲ್ ಪದವಿ ಪಡೆದ ರಷ್ಯಾದ ಹೆಸರಾಂತ ಬರಹಗಾರ ಲಿಯೋ ಟಾಲ್‌ಸ್ಟಾಯ್ ಅವರ ಒಂದು ಸಣ್ಣ ಕಥೆ: **"How much Land Does a Man Need? (1886)–" 'ಅದೆಷ್ಟು ಭೂಮಿ ಒಬ್ಬ ಮನುಷ್ಯನಿಗೆ ಬೇಕು?'**

ಅದೇನೇ ಇರಲಿ. ವಿಶ್ವನಾಥ್ ಅವರು ಇನ್ನೊಂದು ಬುದ್ಧಿ ಮಾತು ಹೇಳಿದ್ದಾರೆ. "ಪ್ರತಿಷ್ಠೆ ಬಿಟ್ಟು ನಿವೇಶನ ವಾಪಸ್ಸು ಕೊಟ್ಟು ದೊಡ್ಡತನ ಮೆರೆಯಿರಿ." ಹೌದು ಆ ಕಾರಣಕ್ಕಾಗಿಯೇ ಗ್ರೀಸ್‌ನ ತತ್ವಜ್ಞಾನಿ ಪ್ಲೇಟೋ ಹೇಳಿದ್ದು ಆಡಳಿತಗಾರ ತತ್ವಜ್ಞಾನಿಯಾಗಿ (Philosopher - King) ವರ್ತಿಸಬೇಕು. ಸಾರ್ವಜನಿಕ ಜೀವನದಲ್ಲಿರುವವರು, ರಾಜಕಾರಣಿಗಳು ಮತ್ತು ಸಾರ್ವಜನಿಕ ಕ್ಷೇತ್ರದಲ್ಲಿ ಕೆಲಸ ಮಾಡುವವರು ನೈತಿಕವಾಗಿಯೂ, ಕಾನೂನುಬದ್ಧವಾಗಿಯೂ ಕೆಲಸ ಮಾಡಬೇಕು ಎನ್ನುತ್ತಾರೆ ವಿಶ್ವನಾಥ್‌ರವರು. ಅದರಲ್ಲೂ ಮುಖ್ಯಮಂತ್ರಿಯಾಗಿರುವವರಿಗೆ ಇದು ಹೆಚ್ಚು ಅನ್ವಯವಾಗುತ್ತದೆ. ನಮ್ಮ ಕರ್ನಾಟಕದಲ್ಲಿ ಅನೇಕ ಸಾಮಾನ್ಯ ಜನರು ಪರೋಪಕಾರಕ್ಕೆ ತಮ್ಮಲ್ಲಿ ಇರುವ ಸ್ವಲ್ಪ ಜಾಗದಲ್ಲೇ ಅಲ್ಪ–ಸ್ವಲ್ಪ ಭಾಗವನ್ನು ಅನಾಥಾಶ್ರಮ, ಶಾಲೆ, ಯಾತ್ರಿಕರ ತಂಗುದಾಣ, ಆಸ್ಪತ್ರೆ, ವಾಚನಾಲಯಗಳಿಗೆ ಕೊಟ್ಟಿದ್ದನ್ನು ನೋಡಿದ್ದೇವೆ. ಆ ಆದರ್ಶವನ್ನು ಗಮನದಲ್ಲಿಟ್ಟುಕೊಂಡು, ವಿಶ್ವನಾಥರು ಈಗ ಹಗರಣದಲ್ಲಿ ಅಂಟಿಕೊಂಡಿರುವ, ಹಿಂದುಳಿದ ವರ್ಗದ ಜನರೇ ಅಧಿಕ ಸಂಖ್ಯೆಯಲ್ಲಿರುವ ಭಾಗದ, 3.16 ಎಕರೆ ಜಾಗವನ್ನು ಶಾಲೆ ತೆರೆಯಲು ಅಥವಾ ಬೇರೆ ಬೇರೆ ಕಲ್ಯಾಣ ಯೋಜನೆಗಳಿಗೆ ಕೊಡಬಹುದಲ್ಲವೆ? ಎಂದು ಕೇಳಿದ್ದಾರೆ. **ಅಂದ ಹಾಗೆ ಈ ಜಾಗವೂ ಸಿದ್ದರಾಮಯ್ಯನವರ ಪತ್ನಿ ಬಿ.ಎಂ. ಪಾರ್ವತಿಯವರಿಗೆ ಕಾನೂನುಬದ್ಧವಾಗಿ ಬಂದಿಲ್ಲ ಎಂಬ ವಾದವೂ ಇದೆ.**

> **"** ನಮ್ಮ ಕರ್ನಾಟಕದಲ್ಲಿ ಅನೇಕ ಸಾಮಾನ್ಯ ಜನರು ಪರೋಪಕಾರಕ್ಕೆ ತಮ್ಮಲ್ಲಿ ಇರುವ ಸ್ವಲ್ಪ ಜಾಗದಲ್ಲೇ ಅಲ್ಪ–ಸ್ವಲ್ಪ ಭಾಗವನ್ನು ಅನಾಥಾಶ್ರಮ, ಶಾಲೆ, ಯಾತ್ರಿಕರ ತಂಗುದಾಣ, ಆಸ್ಪತ್ರೆ, ವಾಚನಾಲಯಗಳಿಗೆ ಕೊಟ್ಟಿದ್ದನ್ನು ನೋಡಿದ್ದೇವೆ. ಆ ಆದರ್ಶವನ್ನು ಗಮನದಲ್ಲಿಟ್ಟುಕೊಂಡು, ವಿಶ್ವನಾಥರು ಈಗ ಹಗರಣದಲ್ಲಿ ಅಂಟಿಕೊಂಡಿರುವ, ಹಿಂದುಳಿದ ವರ್ಗದ ಜನರೇ ಅಧಿಕ ಸಂಖ್ಯೆಯಲ್ಲಿರುವ ಭಾಗದ, 3.16 ಎಕರೆ ಜಾಗವನ್ನು ಶಾಲೆ ತೆರೆಯಲು ಅಥವಾ ಬೇರೆ ಬೇರೆ ಕಲ್ಯಾಣ ಯೋಜನೆಗಳಿಗೆ ಕೊಡಬಹುದಲ್ಲವೆ? ಎಂದು ಕೇಳಿದ್ದಾರೆ.

ವಿಶ್ವನಾಥ್‌ರವರು ಮುಡಾದ ಅಧಿಕಾರಿಗಳ ಬಗ್ಗೆಯೂ ಮಾತಾಡಿದ್ದಾರೆ. ಈ ಸಂದರ್ಭದಲ್ಲಿ ಇಲ್ಲಿಗೆ ಅಧಿಕಾರಿಗಳನ್ನು ನೇಮಿಸಿದ ರೀತಿ, ಅವರ ಆಯ್ಕೆ, ಅವರ ವರ್ಗಾವಣೆ ಕೂಡ ಒಂದು ಕೆಟ್ಟ ಸಂದೇಶವನ್ನು ಜನರಿಗೆ, ಪ್ರಾಧಿಕಾರದ 80,000 ನಿವೇಶನ ಆಕಾಂಕ್ಷಿಗಳಿಗೆ ಕಳುಹಿಸಿದಂತಾಗುತ್ತದೆ.

ಅದೇನೆ ಇರಲಿ, ಈ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಹಗರಣಗಳು ಈಗ ನಾವು ಕೇಳಿರುವುದಷ್ಟಕ್ಕೇ ಬಹುಶಃ ನಿಲ್ಲಲಿಕ್ಕಿಲ್ಲ. ಇದು ಹಗರಣದ ಮೇಲ್ಮೈ ಅಷ್ಟೆ. Tip of the Iceberg. ಮುಂದೆ ಬಗೆದರೆ ನಾವು ಭ್ರಷ್ಟಾಚಾರ ಹಾಗೂ ಹಗರಣದ ಅನ್ಯಾಯದ ದುರ್ವಾಸನೆಯ ಪ್ರಪಂಚವನ್ನು ನೋಡಬಹುದು. ಉದಾಹರಣೆಗೆ, **ದಟ್ಟಗಳ್ಳಿ ಗ್ರಾಮದ ಸುಮಾರು** 27 ಎಕರೆ 34 ಗುಂಟೆ ಜಮೀನು, **ದೇವನೂರು ಬಡಾವಣೆಯ** 5.02 ಎಕರೆ ಜಾಗ. ಇದರಲ್ಲಿ ದೇವನೂರು ಸರ್ವೆ ನಂ.180ರ ಜಾಗಕ್ಕೆ ಶೇ.50:50ರ ಅನುಪಾತದಡಿ ಜಮೀನು ಕೊಟ್ಟವರಿಗೆ ಆರ್.ಟಿ.ನಗರ (19 ನಿವೇಶನ) ಮತ್ತು ನಾಚನಹಳ್ಳಿ–ಕುಪ್ಪಲೂರು ಬಡಾವಣೆ (ಜೆ.ಪಿ.ನಗರ ಸಮೀಪ)ಯಲ್ಲಿ 6 ನಿವೇಶನಗಳನ್ನು ಕೊಡಲಾಗಿದೆ. ಅಚ್ಚರಿ ಎಂದರೆ, ಈ ಎಲ್ಲಾ 25 ನಿವೇಶನಗಳನ್ನು ಒಂದೇ ದಿನ, 2023ರ ಸೆಪ್ಟೆಂಬರ್ ಒಂದರಂದು ಮಂಜೂರು ಮಾಡಿರುವುದು.

Email: voice@starofmysore.com

ಬೆಂಗಳೂರು ವಿಮಾನ ನಿಲ್ದಾಣದಲ್ಲಿ 6,626 ಸಮುದ್ರ ಕುದುರೆ ವಶ; ಮೂವರ ಬಂಧನ



ಬೆಂಗಳೂರು: ಇಲ್ಲಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ 6,626 ಸಮುದ್ರ ಕುದುರೆಗಳೊಂದಿಗೆ ತಮಿಳುನಾಡಿನ ಮೂವರನ್ನು ಬಂಧಿಸುವ ಮೂಲಕ ಕಂದಾಯ ಗುಪ್ತಚರ ನಿರ್ದೇಶನಾಲಯವು ಒಣಗಿದ ಸಮುದ್ರ ಕುದುರೆಗಳ ಕಳ್ಳಸಾಗಣೆ ದಂಧೆಯನ್ನು ಭೇದಿಸಿದೆ.

ಇದರೊಂದಿಗೆ ಒಣಗಿದ ಸಮುದ್ರ ಕುದುರೆಗಳ ಅಕ್ರಮ ವ್ಯಾಪಾರದಲ್ಲಿ ತೊಡಗಿಸಿಕೊಂಡಿದ್ದ ಕಳ್ಳಸಾಗಣೆ ಜಾಲವೊಂದನ್ನು ಬೇಧಿಸಲಾಗಿದೆ ಎಂದು ಡಿಆರ್‌ಐ ಅಧಿಕಾರಿಯೊಬ್ಬರು ಹೇಳಿದ್ದಾರೆ.

ಖಚಿತ ಮಾಹಿತಿ ಮೇರೆಗೆ ಆಗಸ್ಟ್ 3 ರಂದು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ 1ರಲ್ಲಿ ಕಾರ್ಯಪ್ರವೃತ್ತರಾದ ನಗರದ ಡಿಆರ್‌ಐ ಅಧಿಕಾರಿಗಳು ಮೂವರು ವ್ಯಕ್ತಿಗಳನ್ನು ಬಂಧಿಸಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಖಾಸಗಿ ವಿಮಾನಯಾನ ಸಂಸ್ಥೆಯೊಂದರ ವಿಮಾನದಲ್ಲಿ ಮುಂಬೈ ಮೂಲಕ ಸಿಂಗಾಪುರಕ್ಕೆ ತೆರಳುತ್ತಿದ್ದ ಶಂಕಿತರ ಸಾಮಾನು ಸರಂಜಾಮುಗಳನ್ನು ಪರಿಶೀಲಿಸಿದಾಗ 6,626 (ಒಣಗಿದ) ಸಮುದ್ರ ಕುದುರೆಗಳು ಪತ್ತೆಯಾಗಿವೆ. ಇದು ಇತ್ತೀಚಿನ ದಿನಗಳಲ್ಲಿ ಅತಿ ದೊಡ್ಡ ಕಳ್ಳ ಸಾಗಣೆಯಾಗಿದ್ದು, ಮೂವರು ಪ್ರಯಾಣಿಕರನ್ನು ಬಂಧಿಸಲಾಗಿದ್ದು, ವಿಚಾರಣೆ ನಡೆಸಲಾಗುತ್ತಿದೆ. ಇವರೆಲ್ಲರೂ ತಮಿಳುನಾಡಿನವರು ಎಂದು ಅಧಿಕಾರಿ ತಿಳಿಸಿದ್ದಾರೆ.

ಭಾರತದಲ್ಲಿ ವನ್ಯಜೀವಿ (ಸಂರಕ್ಷಣೆ) ಕಾಯ್ದೆಯಡಿ ಎಲ್ಲಾ ಜಾತಿಯ ಸಮುದ್ರ ಕುದುರೆಗಳ ಮಾರಾಟ, ಖರೀದಿ ಮತ್ತು ಯಾವುದೇ ರೀತಿಯ ಬಳಕೆಯನ್ನು ನಿಷೇಧಿಸಲಾಗಿದ್ದು, ಇದು ಶಿಕ್ಷಾರ್ಹ ಅಪರಾಧವಾಗಿದೆ. ಆಗಸ್ಟ್ 4 ರಂದು ಕಾರ್ಯಾಚರಣೆಯ ನಂತರ ಕಳ್ಳಸಾಗಣೆ ಕಾರ್ಯಾಚರಣೆಯ ಪ್ರಮುಖ ವ್ಯಕ್ತಿಯನ್ನು ಬಂಧಿಸಲಾಯಿತು. ಬಂಧಿತ ಸಿಂಗಾಪುರಕ್ಕೆ ಸಮುದ್ರಕುದುರೆಗಳ ಸಾಗಣೆ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಎಂದು ಡಿಆರ್ ಐ ಅಧಿಕಾರಿಗಳು ತಿಳಿಸಿದ್ದಾರೆ.

ಆಗ್ನೇಯ ಏಷ್ಯಾದ ಮಾರುಕಟ್ಟೆಗಳಲ್ಲಿ ಒಣಗಿದ ಸಮುದ್ರ ಕುದುರೆಗಳಿಗೆ ಬೇಡಿಕೆ ಹೆಚ್ಚಿದೆ. ಅಲ್ಲಿ ಸಾಂಪ್ರದಾಯಿಕ ಔಷಧ, ಪಾಕಶಾಲೆ, ಅಕ್ವೇರಿಯಂಗಳಿಗೆ ಅಲಂಕಾರಿಕಾ ಮತ್ತಿತರ ಕಾರಣಕ್ಕೆ ಒಣಗಿದ ಸಮುದ್ರ ಕುದುರೆಗಳನ್ನು ಬಳಸಲಾಗುತ್ತದೆ ಎಂದು ಅವರು ಹೇಳಿದರು.

ಬಿಎಂಟಿಸಿ ಎಲೆಕ್ಟ್ರಿಕ್ ಬಸ್‌ಗೆ ಬೆಂಕಿ; ಪ್ರಯಾಣಿಕರು ಪಾರು




ಬೆಂಗಳೂರು, ಆ.6– ಬೆಂಗಳೂರಿನಲ್ಲಿ ಸುರಿಯುತ್ತಿರುವ ಭಾರಿ ಮಳೆ ನಾನಾ ಅವಾಂತರಕ್ಕೆ ಕಾರಣವಾಗುತ್ತಿದ್ದು ಇದೀಗ ಇದೇ ಮಳೆ ಕಾರಣದಿಂದಾಗಿ BMTC ಎಲೆಕ್ಟ್ರಿಕ್ ಬಸ್‌ವೊಂದು ಬೆಂಕಿಗಾಹುತಿಯಾಗಿದೆ. ನಾಗವಾರ–ಹೆಬ್ಬಾಳ ಸರ್ವಿಸ್ ರಸ್ತೆಯಲ್ಲಿ ನಿನ್ನೆ ಬಿಎಂಟಿಸಿ ಎಲೆಕ್ಟ್ರಿಕ್ ಬಸ್ ಬೆಂಕಿಗಾಹುತಿಯಾಗಿದೆ. ಸೋಮವಾರ ರಾತ್ರಿ ಸುರಿದ ಭಾರಿ ಮಳೆಯಿಂದಾಗಿ ಸರ್ವೀಸ್ ರಸ್ತೆಯಲ್ಲಿ ಭಾರಿ ಪ್ರಮಾಣದ ನೀರು ತುಂಬಿತ್ತು. ಈ ವೇಳೆ ಅದೇ ಮಾರ್ಗವಾಗಿ ಬಂದ ಎಲೆಕ್ಟ್ರಿಕ್ ಬಸ್ ನಡುರಸ್ತೆಯಲ್ಲೇ ಹೊತ್ತಿ ಉರಿದಿದೆ.

ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಸಾಧ್ಯತೆ: ಇನ್ನು, ಸರ್ವೀಸ್ ರಸ್ತೆಯಲ್ಲಿ ತುಂಬಿದ್ದ ನೀರಿನಲ್ಲಿ ಹೋಗುತ್ತಿದ್ದ ವೇಳೆ ಬಸ್‌ನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಬೆಂಕಿ ಹೊತ್ತಿಕೊಂಡ ತಕ್ಷಣ ಚಾಲಕ ಮತ್ತು ನಿರ್ವಾಹಕ ಪ್ರಯಾಣಿಕರನ್ನ ಇಳಿಸಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಅಗ್ನಿಶಾಮಕ ವಾಹನ ಸ್ಥಳಕ್ಕೆ ತಲುಪುವ ವೇಳೆಗೆ ಬಸ್ ಬೆಂಕಿಗಾಹುತಿಯಾಗಿದೆ. ನಂತರ ಬಂದ ಅಗ್ನಿಶಾಮಕ ದಳ ಸಿಬ್ಬಂದಿ ಬೆಂಕಿ ನಂದಿಸಿದ್ದಾರೆ. ಬಸ್ ಏಕಾಏಕಿ 2 ಅಡಿ ಉದ್ದದ ನೀರಿನಲ್ಲಿ ಬಸ್ ಚಲಾಯಿಸಿದ್ದರಿಂದ ಅದರ ಎಲೆಕ್ಟ್ರಾನಿಕ್ ಯಂತ್ರಗಳಿಗೆ ನೀರು ನುಗ್ಗಿದ್ದು ಶಾರ್ಟ್ ಸರ್ಕ್ಯೂಟ್ ಸಂಭವಿಸಿರುವ ಸಾಧ್ಯತೆ ಇದೆ. ಹೀಗಾಗಿ ಬಸ್‌ಗೆ ಬೆಂಕಿ ಹೊತ್ತಿರುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ. ಪ್ರಸ್ತುತ ಹೆಬ್ಬಾಳ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು, ಪ್ರಕರಣ ದಾಖಲಿಸಿಕೊಂಡಿರುವ ಅಧಿಕಾರಿಗಳು ತನಿಖೆ ನಡೆಸಿದ್ದಾರೆ.

ಬಿಜೆಪಿ ಹಿರಿಯ ನಾಯಕ ಎಲ್.ಕೆ.ಅಡ್ವಾಣಿ ಮತ್ತೆ ಅಪೋಲೋ ಆಸ್ಪತ್ರೆಗೆ ದಾಖಲು!

ನವದೆಹಲಿ, ಆ.6– ಬಿಜೆಪಿಯ ಹಿರಿಯ ನಾಯಕ ಹಾಗೂ ಮಾಜಿ ಉಪ ಪ್ರಧಾನಿ ಎಲ್.ಕೆ.ಅಡ್ವಾಣಿ ಮತ್ತೆ ಆಸ್ಪತ್ರೆಗೆ ದಾಖಲಾಗಿದ್ದಾರೆ. ಮಂಗಳವಾರ ರಾಷ್ಟ್ರ ರಾಜಧಾನಿಯ ಪ್ರಮುಖ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರ ಆರೋಗ್ಯ ಸ್ಥಿರವಾಗಿದೆ ಎಂದು ಮೂಲಗಳು ತಿಳಿಸಿವೆ.



96 ವರ್ಷದ ಅಡ್ವಾಣಿ ಅವರನ್ನು ಅಪೋಲೋ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಆಸ್ಪತ್ರೆಯ ಮೂಲಗಳು ಸುದ್ದಿಸಂಸ್ಥೆ ಪಿಟಿಐಗೆ ತಿಳಿಸಿವೆ. ಜುಲೈ ಮೊದಲ ವಾರದಲ್ಲಿಯೂ ಅಡ್ವಾಣಿ ಅವರನ್ನು ಈ ಆಸ್ಪತ್ರೆಗೆ ಕರೆತಂದು ಒಂದೆರಡು ದಿನಗಳ ಕಾಲ ನಿಗಾದಲ್ಲಿರಿಸಿ ನಂತರ ಡಿಸ್ಚಾರ್ಜ್ ಮಾಡಲಾಗಿತ್ತು. ನರವಿಜ್ಞಾನ ವಿಭಾಗದ ಹಿರಿಯ ಸಲಹೆಗಾರ ಡಾ.ವಿನಿತ್ ಸೂರಿ ಅವರ ನೇತೃತ್ವದಲ್ಲಿ ಅವರಿಗೆ ಚಿಕಿತ್ಸೆ ನೀಡಲಾಗಿತ್ತು. ಅದಕ್ಕೂ ಮುನ್ನಾ ಅವರನ್ನು ಏಮ್ಸ್‌ಗೆ ದಾಖಲಿಸಲಾಗಿತ್ತು. ಅಲ್ಲಿ ಒಂದು ರಾತ್ರಿ ತಂಗಿದ್ದ ನಂತರ ಡಿಸ್ಚಾರ್ಜ್ ಮಾಡಲಾಗಿತ್ತು.

2014ರಿಂದೀಚೆಗೆ ಸ್ವಚ್ಛತಾ ಕಾರ್ಯದಲ್ಲಿ ತೊಡಗಿದ್ದಾಗಲೇ 453 ಪೌರಕಾರ್ಮಿಕರ ಸಾವು!

ನವದೆಹಲಿ: ದೇಶದಲ್ಲಿ 2014ರಿಂದೀಚೆಗೆ ಸ್ವಚ್ಛತಾ ಕಾರ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗಲೇ 453 ಮಂದಿ ಪೌರಕಾರ್ಮಿಕರು ಮೃತಪಟ್ಟಿದ್ದಾರೆ ಎಂದು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ತಿಳಿಸಿದೆ.

ಈ ಕುರಿತು ಕೇಂದ್ರ ಸಚಿವ ರಾಮದಾಸ್ ಅಠಾವಳೆ ಲೋಕಸಭೆಯಲ್ಲಿ ಲಿಖಿತ ಉತ್ತರ ನೀಡಿದ್ದು, ದೇಶದಲ್ಲಿ 766 ಜಿಲ್ಲೆಗಳ ಪೈಕಿ 732 ಜಿಲ್ಲೆಗಳು ಮ್ಯಾನ್ಯುವಲ್ ಸ್ಕ್ಯಾವೆಂಜಿಂಗ್ ಪದ್ಧತಿಯಿಂದ ಮುಕ್ತಗೊಂಡಿವೆ ಎಂದು ತಿಳಿಸಿದ್ದಾರೆ.

ಮ್ಯಾನ್ಯುವಲ್ ಸ್ಕ್ಯಾವೆಂಜಿಂಗ್ ಪದ್ಧತಿ ನಿರ್ಮೂಲನೆಗೆ ಮತ್ತಷ್ಟು ಬೆಂಬಲ ನೀಡಲು 'ಸ್ವಚ್ಛ ಭಾರತ್ ಮಿಷನ್' ಯೋಜನೆಯಡಿಯಲ್ಲಿ 371 ಕೋಟಿ ಅನುದಾನ ಬಿಡುಗಡೆ ಮಾಡಲು ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ ಎಂದು ಹೇಳಿದ್ದಾರೆ.

ಮ್ಯಾನ್‌ಹೋಲ್, ಒಳಚರಂಡಿ ಸ್ವಚ್ಛತಾ ಕಾರ್ಯಗಳಿಗೆ ಬೇಕಾದ ಸುಧಾರಿತ ಯಂತ್ರೋಪಕರಣಗಳನ್ನು ಖರೀದಿಸಲು ಅನುದಾನ ಮೀಸಲಿಡಲಾಗಿದೆ. ಹೆಚ್ಚಾಗಿ ಯಂತ್ರೋಪಕರಣಗಳನ್ನು ಬಳಸುವ ಮೂಲಕ ಪೌರಕಾರ್ಮಿಕರ ಮೇಲಿನ ಅವಲಂಬನೆ ಕಡಿಮೆ ಮಾಡಲಾಗುತ್ತದೆ ಎಂದಿದ್ದಾರೆ. ಹಲವು ರಾಜ್ಯಗಳಲ್ಲಿ 5,000ಕ್ಕೂ ಹೆಚ್ಚು ಸೆಪ್ಟಿಕ್ ಟ್ಯಾಂಕ್ ವಾಹನಗಳು, 1,100 ಹೈಡ್ರೋವಾಕ್ ಯಂತ್ರಗಳು ಹಾಗೂ 1,000ಕ್ಕೂ ಮ್ಯಾನ್‌ಹೋಲ್ ಡಿಸಿಲ್ಟಿಂಗ್ ಯಂತ್ರಗಳನ್ನು ಸ್ವಚ್ಛತಾ ಕಾರ್ಯಗಳಿಗೆ ಬಳಸಲಾಗುತ್ತಿದೆ. ಕಾರ್ಮಿಕರಿಗೆ ಸುರಕ್ಷತಾ ಸಾಧನಗಳನ್ನು ಒದಗಿಸುವುದರ ಜತೆಗೆ ಜಾಗೃತಿ ಮೂಡಿಸಲು ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳನ್ನು ನಡೆಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಶಾಂತರಾಜುಗೆ ಪಿಹೆಚ್.ಡಿ

ಮೈಸೂರು,ಆ.6– ಶಾಂತರಾಜು. ಎಂ ಅವರು, ಡಾ.ಶೋಭಾ.ವಿ ಅವರ ಮಾರ್ಗದರ್ಶನದಲ್ಲಿ ಕನ್ನಡ ಭಾಷೆಯಲ್ಲಿ ಸಂಶೋಧನೆ ನಡೆಸಿ ಸಾದರ ಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾಲಯವು ಪಿಹೆಚ್.ಡಿ ಪದವಿಗೆ ಅಂಗೀಕರಿಸಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ಮಿತ್ರ

ಬುಧವಾರ 7 ಆಗಸ್ಟ್ 2024

ಸುತ್ತೂರು ಶ್ರೀ ಕ್ಷೇತ್ರಕ್ಕೆ ಸುಪ್ರೀಂಕೋರ್ಟ್ ನ್ಯಾಯಮೂರ್ತಿ ಸರಸ ವೆಂಕಟನಾರಾಯಣ ಭಟ್ಟಿ ಭೇಟಿ



ಸುತ್ತೂರು ಶ್ರೀಕ್ಷೇತ್ರಕ್ಕೆ ಭಾರತದ ಸರ್ವೋಚ್ಚ ನ್ಯಾಯಾಲಯ ನ್ಯಾಯಾಧೀಶ ನ್ಯಾಯಮೂರ್ತಿ ಸರಸ ವೆಂಕಟ ನಾರಾಯಣ ಭಟ್ಟಿ ಭೇಟಿ ನೀಡಿದರು.

ಸುತ್ತೂರು, ಆ. 6–ಸುತ್ತೂರು ಶ್ರೀಕ್ಷೇತ್ರಕ್ಕೆ ಭೇಟಿ ನೀಡಿದ ಭಾರತದ ಸರ್ವೋಚ್ಚ ನ್ಯಾಯಾಲಯ ನ್ಯಾಯಾಧೀಶ ನ್ಯಾಯಮೂರ್ತಿ ಸರಸ ವೆಂಕಟ ನಾರಾಯಣ ಭಟ್ಟಿ ಅವರಿಗೆ ಶ್ರೀಮಠದ ವತಿಯಿಂದ ಪೂರ್ಣಕುಂಭ ಸ್ವಾಗತ ಕೋರಲಾಯಿತು.

ನಂತರ ಗೌರವ ನ್ಯಾಯಮೂರ್ತಿಗಳು ಆದಿಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಗದ್ದುಗೆ ಹಾಗೂ ಶ್ರೀಮಠದ ದರ್ಶನ ಮಾಡಿ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ಆಶೀರ್ವಾದ ಪಡೆದರು.

ನಂತರ ಶ್ರೀಕ್ಷೇತ್ರದ ವಸತಿ ಶಾಲೆಯ ಸಹಸ್ರಾರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ನ್ಯಾಯಮೂರ್ತಿಗಳು, ಈ ಶಾಲೆಯ ವಿದ್ಯಾರ್ಥಿಗಳು ಮತ್ತು ವಿದ್ಯಾರ್ಥಿನಿಯರು ಒಬ್ಬರಿಗಿಂತ ಒಬ್ಬರು ತುಂಬಾ ಉತ್ಸಾಹಭರಿತರಾಗಿ ಕಲಿಕೆಯಲ್ಲಿ ತೊಡಗಿಸಿಕೊಂಡಿದ್ದೀರಿ. ನಿಮ್ಮಲ್ಲಿ ಸಂಸ್ಕೃತಿ ಎದ್ದು ಕಾಣುತ್ತಿದೆ. ಇಲ್ಲಿಯ ಪರಿಸರ ನಿಮ್ಮ ಜೀವನವನ್ನು ರೂಪಿಸಿಕೊಳ್ಳಲು ತುಂಬಾ ಸಹಕಾರಿಯಾಗಿದೆ. ಇಲ್ಲಿಗೆ ಬಂದು ನನಗೆ ತುಂಬಾ ಸಂತೋಷವಾಯಿತು. ನನ್ನ ಜೀವನದಲ್ಲಿ ಇದೊಂದು ಸ್ಮರಣೀಯ ದಿನ. ವಿದ್ಯಾರ್ಥಿಗಳಾದ ನೀವು ಯಾವುದೇ ಕೆಲಸವನ್ನು ಪ್ರತಿಶತ ಮಾಡಿಯೇ ತೀರುತ್ತೇನೆ ಎಂದು ದೃಢ ಮನಸ್ಸು ಮಾಡಿದರೆ, ಸಾಧನೆ ಶಿಖರ ಏರುವುದು ಅಸಾಧ್ಯವಲ್ಲ ಎಂದರು. ವೇದಿಕೆಯಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಧೀಶರಾದ ಎಂ.ಜಿ. ಉಮಾ, ಅನುಪಮ, ಶೈಲಜಾ, ಮಹಾ ವಿದ್ಯಾ ಪೀಠದ ಕಾರ್ಯದರ್ಶಿ ಎಸ್.ಪಿ. ಮಂಜುನಾಥ್ ಉಪಸ್ಥಿತರಿದ್ದರು.

ಮ್ಯಾನುಯಲ್ ಸ್ಕ್ಯಾವೆಂಜರ್‌ಗೆ ಪುನರ್ವಸತಿ ಕಲ್ಪಿಸಲು ಕ್ರಮ



ಮೈಸೂರು ಡಿಸಿ ಕಚೇರಿಯಲ್ಲಿ ಮ್ಯಾನುಯಲ್ ಸ್ಕ್ಯಾವೆಂಜರ್ ನೇಮಕಾತಿ ನಿಷೇಧ ಮತ್ತು ಅವರ ಪುನರ್ವಸತಿ ಸಂಬಂಧ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆ ಮಂಗಳವಾರ ನಡೆಯಿತು.

ಮೈಸೂರು, ಆ.6–ಮ್ಯಾನುಯಲ್ ಸ್ಕ್ಯಾವೆಂಜರ್ ಪದ್ಧತಿಯನ್ನು ನಿಷೇಧಿಸಿದ್ದು, ಹಿಂದೆ ಈ ಕೆಲಸ ಮಾಡುತ್ತಿದ್ದವರಿಗೆ ಪುನರ್ವಸತಿ ಕಲ್ಪಿಸಲಾಗುತ್ತಿದೆ. ಕೆಲವರಿಗೆ ಜಾಗ ನೀಡಿ ಹಕ್ಕುಪತ್ರ ನೀಡುವುದು ಬಾಕಿ ಇದ್ದು ಅಂತಹವರಿಗೆ ಸೌಲಭ್ಯ ಕಲ್ಪಿಸಲು ಅಗತ್ಯ ಜಾಗ ಗುರ್ತಿಸಿ ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದರು.

ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮ್ಯಾನುಯಲ್ ಸ್ಕ್ಯಾವೆಂಜರ್ ನೇಮಕಾತಿ ನಿಷೇಧ ಮತ್ತು ಅವರ ಪುನರ್ವಸತಿ ಸಂಬಂಧ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಹೆಬ್ಬಾಳು ಕಾಲೋನಿಯಲ್ಲಿ ಸ್ಥಾಯಿ ಕರ್ಮಚಾರಿಗಳಿಗೆ ಆದಿ ದ್ರಾವಿಡ ಸಮುದಾಯಕ್ಕೆ ಸಮುದಾಯ ಭವನ ನಿರ್ಮಿಸಲು 2 ಎಕರೆ ಜಾಗವನ್ನು ಒಂದು ತಿಂಗಳೊಳಗೆ ಗುರುತಿಸಿ ನೀಡಬೇಕು ಎಂದು ಮೈಸೂರು ಮಹಾನಗರ ಪಾಲಿಕೆಗೆ ಸೂಚನೆ ನೀಡಿದರು.

ಹುಣಸೂರು ತಾಲೂಕಿನ ಚಿಲ್ಕುಂದ ಗ್ರಾಮದಲ್ಲಿ ಸುಮಾರು 50 ವರ್ಷಗಳಿಂದ ಕಾಲೋನಿಯಲ್ಲಿ ವಾಸವಿರುವ ಜಾಗಕ್ಕೆ ಹಕ್ಕುಪತ್ರ ನೀಡಲು ಕ್ರಮವಹಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪ್ರತಿ ಮೂರು ತಿಂಗಳಿಗೊಮ್ಮೆ ಮಹಾನಗರ ಪಾಲಿಕೆಯ ವ್ಯಾಪ್ತಿಗೆ ಒಳಪಡುವ ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆಯನ್ನು ನಿಯಮಿತವಾಗಿ ಮಾಡಿಸಬೇಕು. ಅದೇ ರೀತಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ಪೌರ ಕಾರ್ಮಿಕರಿಗೆ ನಿಯಮಿತವಾಗಿ ಆರೋಗ್ಯ ತಪಾಸಣೆಯನ್ನು ಮಾಡಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರ ಸ್ಥಳೀಯ ಸಂಸ್ಥೆಗಳಲ್ಲಿ ಖಾಲಿ ಇರುವ ಪೌರಕಾರ್ಮಿಕರ ಹುದ್ದೆಗಳ ನೇಮಕಾತಿಯಲ್ಲಿ ಮ್ಯಾನುಯಲ್ ಸ್ಕ್ಯಾವೆಂಜರ್‌ಗಳಿಗೆ ಆದ್ಯತೆ ನೀಡಬೇಕು ಎಂದು ಸಮಿತಿ ಸದಸ್ಯರು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ, ಈ ಬಗ್ಗೆ ಆದ್ಯತೆ ನೀಡಿ ನಿಯಮಾನುಸಾರ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮ್ಯಾನುಯಲ್ ಸ್ಕ್ಯಾವೆಂಜರ್‌ಗಳೆಂದು ಗುರುತಿಸಲ್ಪಟ್ಟವರ 8ನೇ ತರಗತಿಯಿಂದ ದ್ವಿತೀಯ ಪಿಯುಸಿವರೆಗೆ ವಿದ್ಯಾಭ್ಯಾಸ ಮಾಡುತ್ತಿರುವ ಮಕ್ಕಳಿಗೆ ವಿದ್ಯಾಭ್ಯಾಸದ ಅನುಕೂಲಕ್ಕಾಗಿ ಟ್ಯಾಬ್ ವಿತರಿಸಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಇವರ ಪುನರ್ವಸತಿ ಯೋಜನೆಯಡಿ ಇವರ ಮಕ್ಕಳಿಗೆ ಶಾಲೆಯ ಶುಲ್ಕ ಭರಿಸಿ ವಿದ್ಯಾಭ್ಯಾಸ ಮುಂದುವರಿಸಲು ಅವಕಾಶ ಕಲ್ಪಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ.ಗಾಯತ್ರಿ ಮಾತನಾಡಿ, ಹುಣಸೂರು ತಾಲೂಕು ಬಿಳಿಕೆರೆ ಹೋಬಳಿ ಮನುಗನಹಳ್ಳಿ ಗ್ರಾಮದಲ್ಲಿ ವಾಸವಿರುವ ಸ್ವಚ್ಛತಾ ಕಾರ್ಮಿಕರು ವಾಸವಿರುವ ಜಾಗದ ದಾಖಲೆಗಳು ಖಾಸಗಿ ವ್ಯಕ್ತಿಯ ಹೆಸರಿಗೆ ಇರುತ್ತದೆ. ಈ ಸಂಬಂಧ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸಹಕಾರ ಪಡೆಯುವಂತೆ ತಿಳಿಸಿದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರಾದ ರಂಗೇಗೌಡ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಶುಭಾ ಸೇರಿದಂತೆ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

ಬೆಳೆ ಪರಿಹಾರ, ಮಳೆ ಹಾನಿ, ಆಧಾರ್ ಸೀಡಿಂಗ್ ಸಂಬಂಧ ಡಿಸಿ ಸಭೆ

ಮೈಸೂರು, ಆ.6–ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕಂದಾಯ ಇಲಾಖೆಯ ಅಧಿಕಾರಿಗಳ ಸಭೆ ನಡೆಸಿದರು. ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ವಿವಿಧ ಇಲಾಖೆಗಳ ಅಗತ್ಯವಿರುವ ಸರ್ಕಾರಿ ಭೂಮಿ ಮಂಜೂರಾತಿ ಬಗ್ಗೆನ ಪ್ರಗತಿ ಪರಿಶೀಲನೆ ಮಾಡಿ, ಕಂದಾಯ ಇಲಾಖೆಯ ವಿವಿಧ ಸೇವೆಗಳಾದ ಬೆಳೆ ಪರಿಹಾರ, ಮಳೆಹಾನಿ, ಆಧಾರ್ ಸೀಡಿಂಗ್, ಲ್ಯಾಂಡ್ ಬೀಟ್, ಕಂದಾಯ ಗ್ರಾಮ ರಚನೆ ಮುಂತಾದ ವಿಷಯಗಳ ಬಗ್ಗೆ ಚರ್ಚೆ ನಡೆಸಿ ಅಗತ್ಯ ಮಾರ್ಗದರ್ಶನ ನೀಡಿದರು. ಪೋಡಿ ಪ್ರಕರಣಗಳು ಹಾಗೂ ರೈತರ ಆತ್ಮಹತ್ಯೆ ಪ್ರಕರಣಗಳನ್ನು ವಿಳಂಬ ಮಾಡದೇ ವಿಲೇವಾರಿ ಮಾಡಬೇಕು ಎಂದು ತಿಳಿಸಿದ ಜಿಲ್ಲಾಧಿಕಾರಿ, 15 ದಿನಗಳಿಗೊಮ್ಮೆ ಪ್ರಗತಿ ಪರಿಶೀಲನೆ ಮಾಡಲಾಗುವುದು ಎಂದರು. ಸಾರ್ವಜನಿಕರ ಮತ್ತು ರೈತರ ಅಗತ್ಯತೆಗೆ ಅನುಗುಣವಾಗಿ ಎಲ್ಲ ಅಧಿಕಾರಿಗಳು ಸರ್ಕಾರಕ್ಕಾಗಿ ಕರ್ತವ್ಯ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು, ಅರಣ್ಯಾಧಿಕಾರಿ ಬಸವರಾಜ್, ಉಪವಿಭಾಗಾಧಿಕಾರಿಗಳು, ತಹಶೀಲ್ದಾರರು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಮಹಿಳೆಯರಿಗೆ ಇತ್ತೀಚೆಗೆ ಅಧಿಕ ಅವಕಾಶಗಳಿವೆ

ವೀರಶೈವ ಮಹಾಸಭಾ ಮೈಸೂರು ಜಿಲ್ಲಾ ಘಟಕದ ನಿರ್ದೇಶಕಿ ನಾಗಜ್ಯೋತಿ ಅಭಿಮತ




ಮೈಸೂರಿನ ಕರುಣೆ ಸೇವಾ ಟ್ರಸ್ಟ್ ವತಿಯಿಂದ ವಿಶ್ವ ಸೌಂದರ್ಯ ದಿನದ ಅಂಗವಾಗಿ ಬ್ಯೂಟಿಷಿಯನ್ ತರಬೇತುದಾರರನ್ನು ಸನ್ಮಾನಿಸಲಾಯಿತು.

ಮೈಸೂರು, ಆ. 6– ಮಹಿಳೆಯರಲ್ಲಿ ಈಗ ಸೌಂದರ್ಯಪ್ರಜ್ಞೆ ಹೆಚ್ಚುತ್ತಿದ್ದು, ಬ್ಯೂಟಿಷಿಯನ್ ಮತ್ತು ಹೊಲಿಗೆ ವೃತ್ತಿಗೆ ಸಮಾಜದಲ್ಲಿ ಉತ್ತಮ ಅವಕಾಶಗಳು ದೊರೆಯುತ್ತಿವೆ ಎಂದು ಅಖಿಲ ಭಾರತೀಯ ವೀರಶೈವ ಮಹಾಸಭಾ ಮೈಸೂರು ಜಿಲ್ಲಾ ಘಟಕದ ನಿರ್ದೇಶಕಿ ನಾಗಜ್ಯೋತಿ ಹೇಳಿದರು.


ಮೈಸೂರಿನ ಕರುಣೆ ಸೇವಾ ಟ್ರಸ್ಟ್ ವತಿಯಿಂದ ವಿಶ್ವ ಸೌಂದರ್ಯ ದಿನದ ಅಂಗವಾಗಿ ಬ್ಯೂಟಿಷಿಯನ್ ತರಬೇತುದಾರರಾದ ಪ್ರಮೀಳಾ ಭರತ್, ರಾಧಿಕಾ, ಉಮಾ ಜಾದವ್, ಶಾಂತಗೌಡ, ಶಶಿಕಲಾ, ಪೃಥ ಬಿಕ್ಕೆಮನೆ ಅವರನ್ನು ಸನ್ಮಾನಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಅಥರ್ವ ಫೌಂಡೇಶನ್ ಅಧ್ಯಕ್ಷೆ ಪುಷ್ಪಲತಾ, ಸಮೃದ್ಧಿ ವಾರ್ತೆ ಪತ್ರಿಕೆ ಸಂಪಾದಕಿ ಸಹನಾ, ಟ್ರಸ್ಟ್ ಅಧ್ಯಕ್ಷೆ ರುಕ್ಮಿಣಿ, ಸವಿತಾ, ಅನುಷಾ, ಚಾರುಲತಾ, ಪ್ರಿಯಾಂಕ ಇನ್ನಿತರರಿದ್ದರು.

ಹಿರಿಯ ನಾಗರಿಕರಿಗೆ ಹಣ್ಣು, ದಿನಸಿ ಸಾಮಗ್ರಿ ವಿತರಣೆ



ಮೈಸೂರಿನ ಎಸ್.ಪ್ರಕಾಶ್ ಪ್ರಿಯಾದರ್ಶನ್ ಸ್ನೇಹ ಬಳಗದಿಂದ ಶ್ರೀರಾಂಪುರದ ಶಿವನ ದೇವಸ್ಥಾನದ ಬಳಿ ಇರುವ ಬೆಳಕು ವಾತ್ಸಲ್ಯಧಾಮದ ಹಿರಿಯ ನಾಗರಿಕರಿಗೆ ಹಣ್ಣು–ಹಂಪಲು, ದಿನಸಿ ಸಾಮಗ್ರಿಗಳನ್ನು ವಿತರಿಸಲಾಯಿತು. ಬೆಳಕು ವಾತ್ಸಲ್ಯ ಧಾಮದ ಮಂಗಳ, ಮೈಸೂರು ನಗರ ಜೆಡಿಎಸ್ ಕಾರ್ಯಾಧ್ಯಕ್ಷ ಎಸ್.ಪ್ರಕಾಶ್ ಪ್ರಿಯಾದರ್ಶನ್, ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಹೋಮದೇವ್, ಸುಬ್ರಮಣ್ಯ, ಛಾಯಾ, ಯಶವಂತ್ ಕುಮಾರ್, ಮಹದೇವ್, ಎಸ್.ಪಿ.ಅಕ್ಷಯ ಪ್ರಿಯಾದರ್ಶನ್, ಹರ್ಷಿತ್ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಚಲೋ ಪಾದಯಾತ್ರೆ



ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಹಾಗೂ ಜೆಡಿಎಸ್ ಹಮ್ಮಿಕೊಂಡಿರುವ ಮೈಸೂರು ಚಲೋ ಪಾದಯಾತ್ರೆ ನಾಲ್ಕನೇ ದಿನದಂದು ನಿಡಘಟ್ಟದಿಂದ ಮದ್ದೂರು ಮೂಲಕ ಸಾಗಿತು. ಈ ವೇಳೆ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಮಾಜಿ ಸಚಿವ ಸಿ.ಟಿ.ರವಿ ಅವರೊಂದಿಗೆ ಚಾಮುಂಡೇಶ್ವರಿ ಕ್ಷೇತ್ರದ ಬಿಜೆಪಿ ಮಾಜಿ ಅಧ್ಯಕ್ಷ ಹಾಗೂ ಮುಖಂಡ ಎನ್.ಅರುಣ್‌ಕುಮಾರ್‌ಗೌಡ, ಕ್ಷೇತ್ರದ ಅಧ್ಯಕ್ಷ ಪೈಲ್ವಾನ್ ರವಿ, ಮುಖಂಡರಾದ ಲೋಹಿತ್, ಸುನಿಲ್ ಭಾಗವಹಿಸಿದ್ದರು.

ಉಚಿತ ತಾಂತ್ರಿಕ ಕೌಶಲಾಭಿವೃದ್ಧಿ ತರಬೇತಿಗೆ ಅರ್ಜಿ

ಮೈಸೂರು, ಆ.6–ಕರ್ನಾಟಕ ಸರ್ಕಾರದ ಎಐಟಿಟಿ, ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಯಡಿ ಕರ್ನಾಟಕ ರಾಜ್ಯದಲ್ಲಿ ವಾಸವಾಗಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅರ್ಹ ಯುವಕ ಯುವತಿಯರಿಂದ ಉದ್ಯೋಗ ಆಧಾರಿತ ಉಚಿತ ತಾಂತ್ರಿಕ ಕೌಶಲಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಟೂಲ್ ಡಿಸೈನ್‌ನಲ್ಲಿ ಪೋಸ್ಟ್ ಡಿಪ್ಲೊಮಾ ತರಬೇತಿಗೆ ಡಿಪ್ಲೊಮಾ, ಬಿಇ (ಎಂಇ/ಎಇ/ಐಪಿ/ಡಿಟಿಡಿಎಮ್/ಡಿಪಿಎಮ್) ವಿದ್ಯಾರ್ಹತೆ, ಟೂಲ್ ರೂಮ್ ಮೆಷಿನಿಸ್ಟ್‌ಗೆ ಎಸ್‌ಎಸ್‌ಎಲ್‌ಸಿ, ಟೂಲ್ ಮತ್ತು ಡೈ ಮೇಕರ್‌ಗೆ ಎಸ್‌ಎಸ್‌ಎಲ್‌ಸಿ ಮತ್ತು ಐಟಿಐ, ಸಿಎನ್‌ಸಿ ಟೆಕ್ನೋಲಜಿ ಮತ್ತು ಸಿಎಂಎಟಿಗೆ ಐಟಿಐ ಅಥವಾ ಡಿಪ್ಲೊಮಾ ಡಿಸೈನರ್ ಮೆಕ್ಯಾನಿಕಲ್‌ಗೆ ಡಿಪ್ಲೊಮಾ ಅಥವಾ ಬಿಇ, ಎಲೆಕ್ಟ್ರಿಷಿಯನ್‌ಗೆ ಎಸ್‌ಎಸ್‌ಎಲ್‌ಸಿ ಅಥವಾ ಐಟಿಐ, ಕನ್ವೆನ್ಷನಲ್ ಮಷಿನ್ಸ್ ಮತ್ತು ಕ್ವಾಲಿಟಿ ಕಂಟ್ರೋಲ್‌ಗೆ ಎಸ್‌ಎಸ್‌ಎಲ್‌ಸಿ ಅಥವಾ ಐಟಿಐ, ವಿದ್ಯಾರ್ಹತೆ ಹೊಂದಿರುವ 16ರಿಂದ 45 ವರ್ಷದೊಳಗಿನ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಆ.25 ಕೊನೆಯ ದಿನಾಂಕವಾಗಿದ್ದು, ಮಾಹಿತಿಗೆ ದೂ.ಸಂ: 9945442654, 9945479700 ಅಥವಾ 9900864686 ಅನ್ನು ಸಂಪರ್ಕಿಸಬಹುದು.

ಸಿಕ್ಕ ಅವಕಾಶವನ್ನು ಸಮರ್ಪಕವಾಗಿ ಬಳಸಿಕೊಳ್ಳಿ

ಮಹಾರಾಣಿ ಮಹಿಳಾ ವಾಣಿಜ್ಯ–ನಿರ್ವಹಣಾ ಕಾಲೇಜಿನ ಪ್ರಾಂಶುಪಾಲ ಪ್ರೊ.ಸೋಮಣ್ಣ ಕರೆ



ಮಹಾರಾಣಿ ವಾಣಿಜ್ಯ ಕಾಲೇಜಿನಲ್ಲಿ ಆಯೋಜಿಸಿದ್ದ ಬೃಹತ್ ಉದ್ಯೋಗ ಮೇಳ ಕಾರ್ಯಕ್ರಮವನ್ನು ಪ್ರಾಂಶುಪಾಲ ಪ್ರೊ.ಸೋಮಣ್ಣ ಉದ್ಘಾಟಿಸಿದರು.

ಮೈಸೂರು, ಆ. 6–ಸಿಕ್ಕ ಅವಕಾಶವನ್ನು ಸಮರ್ಪಕವಾಗಿ ಬಳಸಿಕೊಂಡು ಉದ್ಯೋಗವಂತರಾಗಿ, ಆರ್ಥಿಕವಾಗಿ ಸಬಲೀಕರಣ ಹೊಂದಬೇಕು ಎಂದು ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನ ಪ್ರಾಂಶುಪಾಲ ಪ್ರೊ.ಸೋಮಣ್ಣ ಅಭಿಪ್ರಾಯಪಟ್ಟರು.

ಮೈಸೂರಿನ ಮಹಾರಾಣಿ ವಾಣಿಜ್ಯ ಕಾಲೇಜಿನಲ್ಲಿ ಬಾರ್ಕ್ಲೇನ್ ಸಹಕಾರದೊಂದಿಗೆ ಸಮರ್ಥನಂ ಅಂಗವಿಕಲರ ಸಂಸ್ಥೆ ಹಾಗೂ ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಐ.ಕ್ಯೂ.ಎ.ಸಿ ಘಟಕ, ದಿವ್ಯಾಂಗ ಸಬಲೀಕರಣ ಸಮಿತಿ, ಹಿರಿಯ ವಿದ್ಯಾರ್ಥಿಗಳ ಸಂಘ, ಪ್ಲೇಸ್ಮೆಂಟ್ ಸೆಲ್ ಆಶ್ರಯದಲ್ಲಿ ನಡೆದ ಬೃಹತ್ ಉದ್ಯೋಗ ಮೇಳದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅಭ್ಯರ್ಥಿಗಳು ಉದ್ಯೋಗದ ಜೊತೆಯಲ್ಲೇ ಅತೀ ಹೆಚ್ಚು ಪುಸ್ತಕಗಳನ್ನು ಖರೀದಿಸಿ, ಓದಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರು ಆಗಬೇಕಾಗುತ್ತದೆ. ಅಲ್ಲದೆ ಅವಕಾಶ ಇದ್ದಾಗ ಸ್ವಂತ ಉದ್ಯೋಗ ಮಾಡಬೇಕಾಗುತ್ತದೆ ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಸಮರ್ಥನಂ ಸಂಸ್ಥೆಯ ಅಖಿಲ ಭಾರತ ಪ್ಲೇಸ್ಮೆಂಟ್ ಸೆಲ್ ಮುಖ್ಯಸ್ಥ ಕೆ.ಸತೀಶ್ ಮಾತನಾಡಿ, ಸಮರ್ಥನಂ ಸಂಸ್ಥೆಯು ದೇಶಾದ್ಯಂತ 182 ಉದ್ಯೋಗ ಮೇಳವನ್ನು ಏರ್ಪಡಿಸಿದ್ದು, ಇದರಲ್ಲಿ 30 ಸಾವಿರಕ್ಕೂ ಹೆಚ್ಚು ನಿರುದ್ಯೋಗಿ ಯುವಜನತೆ ಉದ್ಯೋಗ ಪಡೆದುಕೊಂಡಿದ್ದಾರೆ ಎಂದರು.

ಸದರಿ ಉದ್ಯೋಗ ಮೇಳಕ್ಕೆ ಸಾವಿರಕ್ಕೂ ಹೆಚ್ಚು ಉದ್ಯೋಗ ಆಕಾಂಕ್ಷಿಗಳು ಭಾಗವಹಿಸಿದ್ದು, ಅದರಲ್ಲಿ 284 ಕ್ಕೂ ಹೆಚ್ಚು ಅಭ್ಯರ್ಥಿಗಳು ಸ್ಥಳದಲ್ಲೇ ಆಯ್ಕೆಯಾಗಿದ್ದಾರೆ. ಐಕ್ಯೂಎಸಿ ಘಟಕದ ಸಂಚಾಲಕ ಡಾ.ವಿ.ಮಂಜುನಾಥ್, ದಿವ್ಯಾಂಗ ಸಬಲೀಕರಣ ಸಮಿತಿ ಸಂಚಾಲಕ ಡಾ.ನಾಗರಾಜ, ಹಿರಿಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷೆ ಪ್ರೊ.ಜಯಶ್ರೀ, ಪ್ಲೇಸ್ಮೆಂಟ್ ಸೆಲ್‌ನ ಸಂಚಾಲಕರಾದ ಡಾ.ನಿರಂಜನ್‌ಬಾಬು, ಸಮರ್ಥನಂ ಸಂಸ್ಥೆಯ ಸುಭಾಷ್, ಶಿವರಾಜು, ವೀರಭದ್ರ ಪಟೇಲ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಮಹಾವೀರ ವಿದ್ಯಾ ಮಂದಿರದಲ್ಲಿ ಅಂತರ ಶಾಲಾ ಸ್ಪರ್ಧೆ



ಮೈಸೂರಿನ ಶ್ರೀರಾಂಪುರದಲ್ಲಿರುವ ಮಹಾವೀರ ವಿದ್ಯಾ ಮಂದಿರ (ಜೈನ್ ಸೊಸೈಟಿ)ದಲ್ಲಿ ಅಂತರಶಾಲಾ ಸ್ಪರ್ಧೆ ನಡೆಯಿತು. ಕಾರ್ಯಕ್ರಮದಲ್ಲಿ ನಗರಪಾಲಿಕೆ ಮಾಜಿ ಸದಸ್ಯೆ ಶ್ರೀಮತಿ ಗೀತಾ ಯೋಗಾನಂದನ್, ಅಧ್ಯಕ್ಷ ಡಾ.ಬಾಹುಬಲಿ ಜೆ.ನಾಗಾವಿ, ಪ್ರಾಂಶುಪಾಲರಾದ ಡಿ.ಅನಿತಾ, ಸಹ ಪ್ರಾಂಶುಪಾಲರಾದ ಆಶಾ, ತೀರ್ಪುಗಾರರಾದ ಅನುರಾಧಾ ಗಿರೀಶ್, ವೃತ್ತಿಪರ ಕಲಾವಿದೆ ವಿದುಷಿ ಡಾ.ಸುಮಾ ಹರಿನಾಥ್, ರೂಪಾ, ವೃತ್ತಿಪರ ಶಿಕ್ಷಕಿ ಮಿಸಸ್ ರಶ್ಮಿ ಕಾವೇರಮ್ಮ, ಮೀರಾ ಉಪಸ್ಥಿತರಿದ್ದರು.

ವಿವಿಧ ಸೌಲಭ್ಯಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

ಮೈಸೂರು,ಆ.6– ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮದ ವತಿಯಿಂದ 2024–25ನೇ ಸಾಲಿಗೆ ವಿವಿಧ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸ್ವಯಂ ಉದ್ಯೋಗ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾನಿಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ) ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗಗಳ ಅರ್ಜಿದಾರರು https://sevasindhu.Karnataka.gov.in ಮೂಲಕ ಅರ್ಜಿಗಳನ್ನು ಆ.31ರೊಳಗೆ ಸಲ್ಲಿಸಬಹುದು. ಮಾಹಿತಿಗಾಗಿ ನಿಗಮದ www.kssd.Karnataka.gov.in ಅಥವಾ ನಿಗಮದ ಸಹಾಯವಾಣಿ 080–22374832, 8050770004, 8050770005 ಹಾಗೂ ಜಿಲ್ಲಾ ಕಚೇರಿಯ ದೂ.ಸಂಖ್ಯೆ 0821–2341194 ಅನ್ನು ಸಂಪರ್ಕಿಸಬಹುದು.

ಆ.9, 10ರಂದು ಮೈಸೂರಲ್ಲಿ ಕಾಂಗ್ರೆಸ್, ಬಿಜೆಪಿ-ಜೆಡಿಎಸ್ ಸಮಾವೇಶ

ಪೊಲೀಸರ ಪಥಸಂಚಲನ, ಭಾರಿ ಬಿಗಿ ಭದ್ರತೆ



ದೇವರಾಜ ಉಪವಿಭಾಗದ ಎಸಿಪಿ ಶಾಂತಮಲ್ಲಪ್ಪ ನೇತೃತ್ವದಲ್ಲಿ ಮೈಸೂರಿನ ಗಾಯತ್ರಿ ಭವನದಿಂದ ನಂಜರಾಜ ಬಹದ್ದೂರ್ ಛತ್ರದವರೆಗೆ ಪಥಸಂಚಲನ ನಡೆಸಿದರು.

ಮೈಸೂರು,ಆ.6(ಆರ್‌ಕೆ)–ಆಗಸ್ಟ್ 9ರಂದು ಕಾಂಗ್ರೆಸ್, 10ರಂದು ಬಿಜೆಪಿ–ಜೆಡಿಎಸ್ ಸಮಾವೇಶ ನಿಗದಿಯಾಗಿರುವುದರಿಂದ ಮೈಸೂರಲ್ಲಿ ಪೊಲೀಸರು ಇನ್ನಿಲ್ಲದ ಬಿಗಿ ಬಂದೋಬಸ್ತ್‌ಗೆ ಸಿದ್ಧತೆ ಮಾಡುತ್ತಿದ್ದಾರೆ.

ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಆ.9ರಂದು ಬೃಹತ್ ಕಾಂಗ್ರೆಸ್ ಸಮಾವೇಶ ನಡೆಯಲಿದ್ದು, ಸರ್ಕಾರದ ವಿರುದ್ಧ ಬಿಜೆಪಿ ಮತ್ತು ಜೆಡಿಎಸ್ ಮುಖಂಡರು ಬೆಂಗಳೂರಿನಿಂದ ಆರಂಭಿಸಿರುವ ಪಾದಯಾತ್ರೆಯು ಆಗಸ್ಟ್ 9ರಂದು ಸಂಜೆ ಮೈಸೂರಿನ ಏಟ್ರಿಯಾ ಹೋಟೆಲ್ ತಲುಪಿ, ಆಗಸ್ಟ್ 10ರಂದು ಮಹಾರಾಜ ಕಾಲೇಜು ಮೈದಾನದಲ್ಲಿ ಸಮಾವೇಶ ನಡೆಸುವರು.

ಸಮಾವೇಶಗಳ ಹಿನ್ನೆಲೆಯಲ್ಲಿ ಮೈಸೂರು ನಗರ ಪೊಲೀಸರು, ಹೊರಗಡೆಯಿಂದ ಹೆಚ್ಚುವರಿ ಅಧಿಕಾರಿಗಳು, ಸಿಬ್ಬಂದಿಗಳನ್ನು ಕರೆಸಿಕೊಳ್ಳುತ್ತಿದ್ದು, ಬೆಂಗಳೂರು–ಮೈಸೂರು ಹೆದ್ದಾರಿಯ ಕಳಸ್ತವಾಡಿಯಿಂದ ಮಣಿಪಾಲ್ ಆಸ್ಪತ್ರೆವರೆಗೆ ಹೆಚ್ಚು ಸಿಬ್ಬಂದಿ, ಅಧಿಕಾರಿಗಳನ್ನು ನಿಯೋಜಿಸಲು ತಯಾರಿ ಮಾಡಿಕೊಳ್ಳುತ್ತಿದ್ದಾರೆ. ದೇವರಾಜ, ಕೆಆರ್, ಎನ್‌ಆರ್ ಹಾಗೂ ವಿಜಯನಗರ ಉಪವಿಭಾಗದ ಎಸಿಪಿಗಳ ನೇತೃತ್ವದಲ್ಲಿ ಬಂದೋಬಸ್ತ್‌ಗಾಗಿ ತಮ್ಮ ವ್ಯಾಪ್ತಿಯ ಪ್ರಮುಖ ರಸ್ತೆಗಳಲ್ಲಿ ರೂಟ್ ಮಾರ್ಚ್ ಮಾಡಿ ಯಾವುದೇ ಅಹಿತಕರ ಘಟನೆಗಳು, ಕಾನೂನು–ಸುವ್ಯವಸ್ಥೆಗೆ ಭಂಗ ತರುವಂತಹ ಸಮಾಜಘಾತುಕ ಕೃತ್ಯಗಳು ಸಂಭವಿಸದಂತೆ ಎಚ್ಚರಿಕೆ ನೀಡುತ್ತಿದ್ದಾರೆ.

ಕೆಎಸ್‌ಆರ್‌ಪಿ, ಸಿಎಆರ್, ಮೌಂಟೆಡ್, ಡಿಎಆರ್, ನಗರ ಮತ್ತು ಜಿಲ್ಲೆಯ ಸಿವಿಲ್ ಪೊಲೀಸ್, ಸಂಚಾರ ಪೊಲೀಸರನ್ನು ಸಮಾವೇಶದ ಭದ್ರತೆಗಾಗಿ ನಿಯೋಜಿಸಲು ಯೋಜನೆ ರೂಪಿಸಲಾಗುತ್ತಿದ್ದು, ಕರ್ತವ್ಯದ ವೇಳೆ ಅನುಸರಿಸಬೇಕಾದ ಎಚ್ಚರಿಕಾ ಕ್ರಮದ ಬಗ್ಗೆ ಹಿರಿಯ ಪೊಲೀಸ್ ಅಧಿಕಾರಿಗಳು ಅಧೀನಾಧಿಕಾರಿಗಳು ಹಾಗೂ ಸಿಬ್ಬಂದಿಗೆ ಬ್ರೀಫಿಂಗ್ ಮಾಡಿದ್ದಾರೆ.

'ರಾಜ್ಯ ಮಟ್ಟದ ಉತ್ತಮ ಶಿಕ್ಷಕ' ಪ್ರಶಸ್ತಿಗೆ ಅರ್ಜಿ ಆಹ್ವಾನ

ಮೈಸೂರು, ಆ.6–ಶಾಲಾ ಶಿಕ್ಷಣ ಇಲಾಖೆಯ ವತಿಯಿಂದ 2024ನೇ ಸಾಲಿನ 'ರಾಜ್ಯ ಮಟ್ಟದ ಉತ್ತಮ ಶಿಕ್ಷಕ' ಪ್ರಶಸ್ತಿಗೆ ಅರ್ಹ ಶಿಕ್ಷಕರು, ಸಹ ಶಿಕ್ಷಕರು, ವಿಶೇಷ ಶಿಕ್ಷಕರು, ಮುಖ್ಯ ಶಿಕ್ಷಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಶಿಕ್ಷಕರು http://www.schooleducation.kar.nic.inನ ಮೂಲಕ ಆ.16ರೊಳಗೆ ಅರ್ಜಿ ಸಲ್ಲಿಸಬಹುದು. ಆಯುಕ್ತರು. ಅರ್ಜಿಗಳನ್ನು ಸಂಬಂಧಿಸಿದ ಶಿಕ್ಷಣಾಧಿಕಾರಿಗಳ ಮೂಲಕ ಮೈಸೂರಿನ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು ಎಂದು ಪ್ರಕಟಣೆ ತಿಳಿಸಿದೆ.

ಗುರುಕುಲಕ್ಕಿಂತ ಆಧುನಿಕ ಶಿಕ್ಷಣ ಪದ್ಧತಿ ಉತ್ತಮ

30 ಆಯ್ದ ವಚನಗಳ ಕಿರು ಹೊತ್ತಿಗೆಯನ್ನು ಬಿಡುಗಡೆಗೊಳಿಸಿದ ಮೈಸೂರು ವಿವಿ ಪ್ರಾಧ್ಯಾಪಕ ಡಾ.ಡಿ.ಎಸ್.ಗುರು ಅಭಿಮತ



ಮನೆ ಮನೆಗೆ ಶ್ರಾವಣ ಮಾಸದ ಶರಣ ಸಂದೇಶ ಕಾರ್ಯಕ್ರಮದಲ್ಲಿ ವಚನ ಶ್ರಾವಣ: ಆಯ್ದ 30 ವಚನಗಳ ಕಿರುಹೊತ್ತಿಗೆಯನ್ನು ಮೈಸೂರು ವಿವಿ ಗಣಕ ವಿಜ್ಞಾನ ಅಧ್ಯಯನ ಕೇಂದ್ರದ ಪ್ರಾಧ್ಯಾಪಕ ಡಾ.ಡಿ.ಎಸ್.ಗುರು ಬಿಡುಗಡೆಗೊಳಿಸಿದರು

ಮೈಸೂರು,ಆ.6(ಎಸ್‌ಪಿಎನ್)– ಶಿಕ್ಷಣ ಪದ್ಧತಿಯಲ್ಲಿ ಗುರುಕುಲ, ಶಿಷ್ಯಕುಲ ಶಿಕ್ಷಣ ಪದ್ಧತಿಗಿಂತ ಆಧುನಿಕ ಶಿಕ್ಷಣ ಪದ್ಧತಿ ಉತ್ತಮವಾಗಿದೆ ಎಂದು ಮೈಸೂರು ವಿವಿ ಗಣಕ ವಿಜ್ಞಾನ ಅಧ್ಯಯನ ಕೇಂದ್ರದ ಪ್ರಾಧ್ಯಾಪಕ ಡಾ.ಡಿ.ಎಸ್.ಗುರು ಅಭಿಪ್ರಾಯಪಟ್ಟರು.

ಮೈಸೂರಿನ ಜೆಎಸ್‌ಎಸ್ ಕಾನೂನು ಕಾಲೇಜಿನಲ್ಲಿ ಶರಣಸಾಹಿತ್ಯ ಪರಿಷತ್ ನಗರ ಘಟಕ ಹಾಗೂ ಕದಳಿ ಮಹಿಳಾ ವೇದಿಕೆ ಸಹಯೋಗದೊಂದಿಗೆ ನಡೆದ ವಚನ ಶ್ರಾವಣ: ಮನೆಮನೆಗೆ ಶ್ರಾವಣ ಮಾಸದ ಶರಣ ಸಂದೇಶ ಉದ್ಘಾಟನೆ, 30 ಆಯ್ದ ವಚನಗಳ ಕಿರುಹೊತ್ತಿಗೆಯನ್ನು ಬಿಡುಗಡೆ ಹಾಗೂ 'ಒಲವಿಲ್ಲದ ಪೂಜೆ, ಸ್ನೇಹವಿಲ್ಲದ ಧರ್ಮ' ವಿಷಯ ಕುರಿತು ಮಾತನಾಡಿದರು.

ರಾಮಾಯಣ ಮತ್ತು ಮಹಾಭಾರತದಲ್ಲಿ ಕೌರವರು ಮತ್ತು ಪಾಂಡವರಿಗೆ ದ್ರೋಣಾಚಾರ್ಯ ನೇತೃತ್ವದಲ್ಲಿ ಗುರುಕುಲ ಪದ್ಧತಿಯಡಿ ಶಿಕ್ಷಣ ನೀಡಲಾಯಿತು. ನಂತರ ಗುರುಗಳೇ ಶಿಷ್ಯರ ಬಳಿ ಹೋಗಿ ಶಿಕ್ಷಣ ಕಲಿಸುವ ಪದ್ಧತಿ ಜಾರಿಗೆ ಬಂತು. ಇವೆರಡರ ವ್ಯತ್ಯಾಸವೆಂದರೆ, ಗುರುಕುಲ ಪದ್ಧತಿಯಡಿ ಶಿಷ್ಯ ಅಸಂತೋಷಿ ಹಾಗೂ ಶಿಷ್ಯಕುಲ ಪದ್ಧತಿಯಡಿ ಗುರು ಅಸಂತೋಷಿಯಾಗಿದ್ದರು ಎಂದರು.

ಇವೆರಡು ಶಿಕ್ಷಣ ಪದ್ಧತಿಯ ನ್ಯೂನತೆಗಳನ್ನು ಸರಿಪಡಿಸಿ, ಶರಣ ಕಾಲದಲ್ಲಿ ಶಿಷ್ಯ ಮತ್ತು ಗುರು ಒಂದೆಡೆ ಸೇರಿ ಶಿಕ್ಷಣ ನೀಡುವ ಪದ್ಧತಿ ಜಾರಿಗೆ ಬಂತು. ಅಂದಿನಿಂದ ಇಂದಿನವರೆಗೂ ಆ ಶಿಕ್ಷಣ ಪದ್ಧತಿಯೇ ಮುಂದುವರೆದಿದೆ. ವಚನ ಸಾಹಿತ್ಯ ವಿಜ್ಞಾನಕ್ಕೂ ಮತ್ತು ವೈಚಾರಿಕತೆಗೂ ಹತ್ತಿರ ಸಂಬಂಧವನ್ನು ಪರೋಕ್ಷವಾಗಿ ಹೊಂದಿವೆ. ಹಾಗಾಗಿ ಅಕ್ಕ ಮಹಾದೇವಿ, ಅಲ್ಲಮ ಪ್ರಭು, ಅಣ್ಣ ಬಸವಣ್ಣ ಸೇರಿದಂತೆ ಇತರೆ ವಚನಗಳನ್ನು ಕೂಲಂಕುಷವಾಗಿ ಅಧ್ಯಯನ ನಡೆಸಿ, ಅರ್ಥ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ನಾನು ವಿಜ್ಞಾನದ ವಿದ್ಯಾರ್ಥಿ. ದೇವರು, ಆಧ್ಯಾತ್ಮ ಇವೆಲ್ಲಾ ಅಂಶಗಳನ್ನು ಬದಿಗಿಟ್ಟು ನೋಡುವಂತಹವನು. ಆದರೂ, ವಚನ ಸಾಹಿತ್ಯದ ಒಂದೊಂದು ವಚನಗಳು ಇಂದಿಗೂ ಜನಸಾಮಾನ್ಯರ ಬದುಕಿಗೆ ಹತ್ತಿರವಾಗಿವೆ. ಧಾರ್ಮಿಕ ಮೂಲಭೂತವಾದದಿಂದ ದೂರದಲ್ಲಿವೆ. ಹಾಗಾಗಿ 'ಒಲವಿಲ್ಲದ ಪೂಜೆ, ಸ್ನೇಹವಿಲ್ಲದ ಧರ್ಮ' ಬಸವಣ್ಣನವರ ಈ ವಚನ ಗಮನಿಸಿದರೆ, ಬಸವಣ್ಣನವರ ಒಂದೊಂದು ವಚನಗಳು ಇಂದಿನ ಪ್ರಸ್ತುತತೆಗೆ ಹತ್ತಿರವಾಗಿವೆ ಎಂದರು.

ನಾನು ವಿಜ್ಞಾನ ಬೋಧಿಸುವ ಶಿಕ್ಷಕ. ಸಾವಿರಾರು ವರ್ಷಗಳಿಂದ ಹಿಂದೆ ಮಂಗನಿಂದ ಮಾನವನಾದಾಗ ಪ್ರಗತಿಪರರು ಇಷ್ಟೊಂದು ಕುತೂಹಲದಿಂದ ಜಗತ್ತನ್ನು ನೋಡಿರಲಿಲ್ಲ. ಆದರೆ, ಹನ್ನೆರಡನೇ ಶತಮಾನದಲ್ಲಿ ಆದ ಸಾಮಾಜಿಕ, ಆರ್ಥಿಕ, ರಾಜಕೀಯದಲ್ಲಾದ ಬದಲಾವಣೆಗಳನ್ನು ಜಗತ್ತು ಬಹಳ ವಿಸ್ಮಯದಿಂದ ನೋಡಿತು. ವಚನ ಚಳವಳಿ, ಹಲವು ಪ್ರಥಮಗಳಿಗೆ ನಾಂದಿಯಾಗಿದೆ ಎಂದು ಉದಾಹರಣೆ ಸಮೇತ ವಿವರಿಸಿದರು. ವೇದಿಕೆಯಲ್ಲಿ ಹೊಸಮಠದ ಶ್ರೀ ಚಿದಾನಂದ ಸ್ವಾಮೀಜಿ, ಶರಣ ಸಾಹಿತ್ಯ ಪರಿಷತ್ ನಗರ ಘಟಕದ ಅಧ್ಯಕ್ಷ ಮ.ಗು.ಸದಾನಂದಯ್ಯ, ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶಾರದಾ ಶಿವಲಿಂಗಸ್ವಾಮಿ, ಸುಜಾತ ಶಿವಪ್ರಕಾಶ್, ಕಾರ್ಯದರ್ಶಿ ಕುಮಾರಸ್ವಾಮಿ ಉಪಸ್ಥಿತರಿದ್ದರು.

ಮಂಡ್ಯ ನಗರದ ಬಳಿ ಎರಡು ಆನೆ ಪ್ರತ್ಯಕ್ಷ

ಮಂಡ್ಯ,ಆ.6– ಕಾಡು ತೊರೆದು ಗ್ರಾಮೀಣ ಪ್ರದೇಶದಲ್ಲಿ ಸುತ್ತಾಡುತ್ತಿದ್ದ ಎರಡು ಆನೆಗಳು ಮಂಡ್ಯದತ್ತ ಮುಖ ಮಾಡಿದ್ದು, ನಗರದ ಹೊರವಲಯದ ಕಬ್ಬಿನ ಗದ್ದೆಯಲ್ಲಿ ಬೀಡು ಬಿಟ್ಟಿವೆ.



ಮಂಡ್ಯ– ಕಿರುಗಾವಲು ಮಾರ್ಗದ ಸದ್ವಿದ್ಯಾ ಶಾಲೆ ಸಮೀಪದ ಕಬ್ಬಿನ ಗದ್ದೆಯಲ್ಲಿ ಎರಡು ಆನೆಗಳು ಪ್ರತ್ಯಕ್ಷಗೊಂಡಿದ್ದು, ಆನೆಗಳನ್ನು ನೋಡಲು ಜನರು ಮುಗಿಬಿದ್ದಿದ್ದಾರೆ. ಕಾಡಿನಿಂದ ನಾಡಿನತ್ತ ಮುಖ ಮಾಡಿದ್ದ ಆನೆಗಳು ಶ್ರೀರಂಗಪಟ್ಟಣ ತಾಲೂಕಿನ ಹಲವು ಹಳ್ಳಿಗಳಲ್ಲಿ ರೈತರ ಜಮೀನಿಗೆ ಲಗ್ಗೆ ಇಟ್ಟು ಬೆಳೆ ಹಾನಿ ಮಾಡಿದ್ದವು. ಕಳೆದ ರಾತ್ರಿ ಮಂಡ್ಯ ನಗರಕ್ಕೆ ಪ್ರವೇಶ ಮಾಡಿರುವ ಆನೆಗಳು ಕಲ್ಲಹಳ್ಳಿ ವಿ.ವಿ.ನಗರ ಭಾಗದಲ್ಲಿ ಅಡ್ಡಾಡಿದ್ದವು.

ನಾಯಿ ಬೊಗಳುತ್ತಿರುವುದನ್ನು ಕಂಡ ಸ್ಥಳೀಯರು ನೋಡಲಾಗಿ ಆನೆಗಳು ಸಂಚರಿಸುತ್ತಿರುವುದನ್ನು ನೋಡಿದರು, ಮುಂಜಾನೆ ವೇಳೆಗೆ ಜಾಗ ಬದಲಾಯಿಸಿದ್ದ ಎರಡು ಆನೆಗಳು ಮಂಡ್ಯ– ಕಿರುಗಾವಲು ಮಾರ್ಗದಲ್ಲಿರುವ ಸದ್ವಿದ್ಯಾ ಶಾಲೆ ಬಳಿಯ ಕಬ್ಬಿನ ಗದ್ದೆಯಲ್ಲಿ ಪ್ರತ್ಯಕ್ಷವಾಗಿವೆ. ರೈತರ ಜಮೀನಿಗೆ ಲಗ್ಗೆ ಇಟ್ಟು ಬೆಳೆ ಆನೆ ಮಾಡುತ್ತಾ ಅಡ್ಡಾಡುತ್ತಿರುವ ಎರಡು ಆನೆಗಳು ಕಂಡು ಬಂದ ಹಿನ್ನೆಲೆಯಲ್ಲಿ ಜನತೆ ನೋಡಲು ಮುಗಿ ಬಿದ್ದಿದ್ದು, ಅರಣ್ಯ ಇಲಾಖೆ ಸಿಬ್ಬಂದಿ ಮುನ್ನೆಚ್ಚರಿಕೆವಹಿಸಿ ಆನೆಗಳ ಸಮೀಪ ಜನತೆ ಸುಳಿಯದಂತೆ ಕಟ್ಟೆಚ್ಚರ ವಹಿಸಿದ್ದಾರೆ. ರಾತ್ರಿ ವೇಳೆಗೆ ಕಾರ್ಯಾಚರಣೆ ನಡೆಸಿ ಮುತ್ತತ್ತಿ ಅರಣ್ಯ ಪ್ರದೇಶಕ್ಕೆ ಅಟ್ಟಲು ಅರಣ್ಯ ಇಲಾಖೆ ಅಧಿಕಾರಿಗಳು ಸಿದ್ಧತೆ ಕೈಗೊಂಡಿದ್ದಾರೆ.

ಶಾಸಕ ನರೇಂದ್ರಸ್ವಾಮಿಗೆ ಪಿತೃವಿಯೋಗ, ಸಿಎಂ ಸಿದ್ದರಾಮಯ್ಯರಿಂದ ಅಂತಿಮ ದರ್ಶನ



ಪಿ.ಎಂ. ನರೇಂದ್ರ ಸ್ವಾಮಿ ಅವರ ತಂದೆ ಪಿ.ಎಲ್. ಮಲ್ಲಯ್ಯ ಅವರ ಅಂತಿಮ ದರ್ಶನ ಪಡೆದ ಸಿಎಂ ಸಿದ್ದರಾಮಯ್ಯ

ಮಳವಳ್ಳಿ,ಆ.6– ಮಳವಳ್ಳಿ ಕ್ಷೇತ್ರದ ಶಾಸಕ ಹಾಗೂ ಮಾಜಿ ಸಚಿವ ಪಿ.ಎಂ.ನರೇಂದ್ರಸ್ವಾಮಿ ಅವರ ತಂದೆ ಪಿ.ಎಲ್.ಮಲ್ಲಯ್ಯ (93) ನಿಧನರಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಪಾಲ್ಗೊಂಡು ಅಂತಿಮ ದರ್ಶನ ಪಡೆದು, ಮೃತ ಕುಟುಂಬಕ್ಕೆ ಮಂಗಳವಾರ ಸಾಂತ್ವನ ಹೇಳಿದರು.

ಮಳವಳ್ಳಿ ತಾಲೂಕಿನ ಪೂರಿಗಾಲಿ ಗ್ರಾಮದ ಶಾಸಕ ಪಿ.ಎಂ.ನರೇಂದ್ರಸ್ವಾಮಿ ನಿವಾಸದಲ್ಲಿ ಅವರ ತಂದೆ ಪಿ.ಎಲ್.ಮಲ್ಲಯ್ಯ ಅವರ ಪಾರ್ಥೀವ ಶರೀರವನ್ನು ಇರಿಸಲಾಗಿತ್ತು. ಮಧ್ಯಾಹ್ನದ ವೇಳೆಗೆ ಶಾಸಕರ ನಿವಾಸಕ್ಕೆ ಆಗಮಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಮಲ್ಲಯ್ಯ ಅವರ ಅಂತಿಮ ದರ್ಶನ ಪಡೆದರು. ಈ ಸಂದರ್ಭದಲ್ಲಿ ಕಣ್ಣೀರಿಟ್ಟ ಶಾಸಕ ನರೇಂದ್ರಸ್ವಾಮಿ ಅವರನ್ನು ಸಮಾಧಾನಪಡಿಸಿದ ಸಿದ್ದರಾಮಯ್ಯ, ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ಅವರನ್ನು ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಚಿಕಿತ್ಸೆ ಫಲಿಸದೆ ಸೋಮವಾರ ರಾತ್ರಿ ಇಹಲೋಕ ತ್ಯಜಿಸಿದ್ದಾರೆ.

ಮೃತರು ಪತ್ನಿ ಮಹದೇವಮ್ಮ, ಶಾಸಕ ಪಿ.ಎಂ. ನರೇಂದ್ರಸ್ವಾಮಿ ಸೇರಿದಂತೆ ಇಬ್ಬರು ಪುತ್ರರು, ಓರ್ವ ಪುತ್ರಿಯನ್ನು ಅಗಲಿದ್ದಾರೆ. ಅಂತ್ಯಸಂಸ್ಕಾರವು ಸ್ವಗ್ರಾಮ ಮಳವಳ್ಳಿ ತಾಲೂಕಿನ ಪೂರಿಗಾಲಿ ಗ್ರಾಮದಲ್ಲಿ ಮಂಗಳವಾರ ಮಧ್ಯಾಹ್ನ 3 ಗಂಟೆಗೆ ನಡೆಯಿತು. ಪಿ.ಎಲ್.ಮಲ್ಲಯ್ಯ ರವರು ತಾಲೂಕು ಬೋರ್ಡ್ ಸದಸ್ಯರಾಗಿ, ಪೂರಿಗಾಲಿ ಗ್ರಾಮ ಪಂಚಾಯತಿ, ಹಾಲು ಉತ್ಪಾದಕರ ಸಹಕಾರ ಸಂಘ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು.


ಸಿಎಂ ಭೇಟಿ ವೇಳೆ ವಸತಿ ಸಚಿವ ಜಮೀರ್ ಅಹ್ಮದ್ ಖಾನ್, ವಿಧಾನಪರಿಷತ್ ಸದಸ್ಯ ಮಟ್ಟಣ್ಣ, ಜಿಲ್ಲಾಧಿಕಾರಿ ಡಾ.ಕುಮಾರ, ಜಿ.ಪಂ. ಸಿಇಓ ಶೇಕ್ ತನ್ವೀರ್ ಆಸೀಫ್, ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ, ಮುಖಂಡರಾದ ಮಳವಳ್ಳಿ ಶಿವಣ್ಣ, ಸುರೇಶ್ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

ಮುಡಾ, ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಹಗರಣ

ಸಿಎಂ ಸಿದ್ದರಾಮಯ್ಯನವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಲಿ

ಪಾದಯಾತ್ರೆ, ಗದ್ದೆ ನಾಟಿ ಪೂರ್ವಭಾವಿ ಸಭೆಯಲ್ಲಿ ಮಾಜಿ ಸಚಿವ ಸಿ.ಎಸ್. ಪುಟ್ಟರಾಜು ಆಗ್ರಹ

ಪಾಂಡವಪುರ, ಆ.6– ರಾಜ್ಯದ ಇತಿಹಾಸದಲ್ಲಿ ನಡೆದಿರುವ ಬಹುದೊಡ್ಡ ಹಗರಣವಾದ ವಾಲ್ಮೀಕಿ ಅಭಿವೃದ್ಧಿ ನಿಗಮ, ಮೈಸೂರು ಮುಡಾ ಹಗರಣದ ನೈತಿಕ ಹೊಣೆ ಹೊತ್ತು ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕೆಂದು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಆಗ್ರಹಿಸಿದರು.



ಪಾಂಡವಪುರ ಪಟ್ಟಣದಲ್ಲಿ ನಡೆದ ಜೆಡಿಎಸ್–ಬಿಜೆಪಿ ಮೈಸೂರು ಚಲೋ ಪಾದಯಾತ್ರೆ ಬೆಂಬಲಿಸಿ ಹಾಗೂ ಎಚ್.ಡಿ.ಕುಮಾರಸ್ವಾಮಿ ಅವರ ಗದ್ದೆ ನಾಟಿ ಕಾರ್ಯಕ್ರಮದ ಪೂರ್ವಭಾವಿ ಕಾರ್ಯಕರ್ತರ ಸಭೆಯನ್ನು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಉದ್ಘಾಟಿಸಿದರು.

ಪಟ್ಟಣದ ಟಿಎಪಿಸಿಎಂಎಸ್ ರೈತ ಸಭಾಂಗಣದಲ್ಲಿ ಜೆಡಿಎಸ್–ಬಿಜೆಪಿ ಮೈಸೂರು ಚಲೋ ಪಾದಯಾತ್ರೆ ಬೆಂಬಲಿಸಿ ಹಾಗೂ ಎಚ್.ಡಿ.ಕುಮಾರಸ್ವಾಮಿ ಅವರ ಗದ್ದೆ ನಾಟಿ ಕಾರ್ಯಕ್ರಮದ ಅಂಗವಾಗಿ ನಡೆದ ಪೂರ್ವಭಾವಿ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಹಗರಣದಲ್ಲಿ 187 ಕೋಟಿ ಭ್ರಷ್ಟಚಾರವಾಗಿದೆ ಎಂದು ಆರೋಪಿಸಿದರೆ, ಇಲ್ಲ ವಾಲ್ಮೀಕಿ ಹಗರಣದಲ್ಲಿ ಬರೀ 87 ಕೋಟಿ ಭ್ರಷ್ಟಚಾರವಾಗಿದೆ ಎಂಬುದಾಗಿ ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಒಪ್ಪಿಕೊಳ್ಳುತ್ತಾರೆ, ಅಲ್ಲದೆ ಪೊಲೀಸ್ ವರ್ಗಾವಣೆ ಧಂದೆ ಸೇರಿದಂತೆ ಸಂಪೂರ್ಣವಾಗಿ ಈ ಸರಕಾರ ಭ್ರಷ್ಟಚಾರದಲ್ಲಿ ಮುಳುಗಿದೆ, ಇಂತಹ ಭ್ರಷ್ಟ ಸರಕಾರವನ್ನು ರಾಜ್ಯದ ಜನತೆ ತಿರಸ್ಕರಿಸಲಿದ್ದಾರೆ ಎಂದು ಹೇಳಿದರು.

ವಾಲ್ಮೀಕಿ, ಮೈಸೂರು ಮುಡಾ ಹಗರಣದ ಹೊಣೆಹೊತ್ತು ಸಿಎಂ ರಾಜೀನಾಮೆಗೆ ಆಗ್ರಹಿಸಿ ಜೆಡಿಎಸ್–ಬಿಜೆಪಿ ಮೈಸೂರು ಚಲೋ ಪಾದಯಾತ್ರೆ ನಡೆಸುತ್ತಿದೆ. ಪಾದಯಾತ್ರೆಯಲ್ಲಿ ಎರಡು ಪಕ್ಷದ ಹಲವಾರು ನಾಯಕರು ಸೇರಿದಂತೆ ಸಾವಿರಾರು ಮಂದಿ ಕಾರ್ಯಕರ್ತರು ಭಾಗವಹಿಸಿ ಯಶಸ್ವಿಗೊಳಿಸುತ್ತಿದ್ದಾರೆ. ಪಾದಯಾತ್ರೆಯಲ್ಲಿ 10 ಕಿಮೀಗೆ ಒಂದು ವಿಧಾನಸಭಾ ಕ್ಷೇತ್ರದ ಜೆಡಿಎಸ್–ಬಿಜೆಪಿ ಕಾರ್ಯಕರ್ತರು ಭಾಗವಹಿಸಲಿದ್ದಾರೆ. ಮದ್ದೂರು, ಮಂಡ್ಯ ಮುಗಿಸಿ ಗುರುವಾರ ಬೆಳಿಗ್ಗೆಯಿಂದ ತೂಬಿನಕೆರೆ ಕೈಗಾರಿಕೆ ಪ್ರದೇಶದ ಹೊರಡುವ ಪಾದಯಾತ್ರೆಯ ಜವಬ್ದಾರಿಯನ್ನು ಮೇಲುಕೋಟೆ ವಿಧಾನಸಭಾ ಕ್ಷೇತ್ರಕ್ಕೆ ನೀಡಲಾಗಿದೆ. ಅಂದು ಹೆಚ್ಚಿನ ಸಂಖ್ಯೆಯಲ್ಲಿ ಕ್ಷೇತ್ರದ ಎರಡು ಪಕ್ಷಗಳ ಕಾರ್ಯಕರ್ತರು ಕನಿಷ್ಠ 10 ಸಾವಿರಕ್ಕೂ ಅಧಿಕ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು. ಅದಕ್ಕಾಗಿ ಬಸ್‌ಗಳ ವ್ಯವಸ್ಥೆಯನ್ನು ಸಹ ಮಾಡಲಾಗಿದೆ ಎಂದು ತಿಳಿಸಿದರು.

11ಕ್ಕೆ ಭತ್ತನಾಟಿ: ಎರಡು ವರ್ಷದಿಂದ ಬರಗಾಲದಿಂದ ಬಳಲಿ ಬೆಂಡಾಗಿದ್ದ ರೈತರಿಗೆ ಎಚ್.ಡಿ. ಕುಮಾರಸ್ವಾಮಿ ಅವರು ಗೆದ್ದು ಮಂತ್ರಿಯಾದ ಬಳಿಕ ಉತ್ತಮ ಮಳೆಯಾಗಿ ಕಾವೇರಿ ಉಕ್ಕಿ ಹರಿಯುತ್ತಿದ್ದಾಳೆ. ಅದಕ್ಕಾಗಿ ಆ.11ರಂದು ತಾಲೂಕಿನ ಅರಳಕುಪ್ಪೆ–ಸೀತಾಪುರ ಗ್ರಾಮ ವ್ಯಾಪ್ತಿಯ ಕಾವೇರಿ ದಡದ ಮೇಲೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರಿಂದ ಗದ್ದೆ ನಾಟಿ ಮಾಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಎಚ್.ಡಿ.ಕುಮಾರಸ್ವಾಮಿ ಅವರು ಕಾವೇರಿ ಮಾತೆಗೆ ಪೂಜೆ ಸಲ್ಲಿಸಿ, ಬಳಿಕ ಭತ್ತದ ನಾಟಿಗೆ ಚಾಲನೆ ನೀಡಲಿದ್ದಾರೆ. ಹಾಗಾಗಿ ಆ ಕಾರ್ಯಕ್ರಮದಲ್ಲಿ ಸುತ್ತಮುತ್ತಲಿನ ಗ್ರಾಮಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ರೈತರು, ಕಾರ್ಯಕರ್ತರು ಭಾಗವಹಿಸಬೇಕೆಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಜೆಡಿಎಸ್ ತಾಲೂಕು ಅಧ್ಯಕ್ಷ ಎಸ್.ಎ.ಮಲ್ಲೇಶ್, ಜಿ.ಪಂ ಮಾಜಿ ಸದಸ್ಯರಾದ ಸಿ. ಅಶೋಕ್, ಹೆಚ್.ಮಂಜುನಾಥ್, ಟಿಎಪಿಸಿಎಂಎಸ್ ಅಧ್ಯಕ್ಷ ಡಿ.ಶ್ರೀನಿವಾಸ್, ಮಾಜಿ ಅಧ್ಯಕ್ಷ ಸತೀಶ್, ಮುಖಂಡರಾದ ಲಿಂಗರಾಜು(ಗುಣ), ದೇವಪ್ಪ, ಸಗಾಯಂ ಸೇರಿದಂತೆ ಹಲವರು ಭಾಗವಹಿಸಿದ್ದರು.

ಅಮೇರಿಕದಲ್ಲಿಯೇ ನಾಟಿ ಮಾಡಲಿ

ಜಿಪಂ ಮಾಜಿ ಸದಸ್ಯ ಎಚ್.ಮಂಜುನಾಥ್ ಮಾತ ನಾಡಿ, ಮೇಲುಕೋಟೆ ವಿಧಾನಸಭಾ ಕ್ಷೇತ್ರದ ಶಾಸಕರು ಗೆದ್ದ ಬಳಿಕ ಕ್ಷೇತ್ರದಲ್ಲಿ ಇದದ್ದೇ ವಿರಳ, ಸ್ವಾತಂತ್ರ್ಯ ದಿನಾಚರಣೆ, ಕನ್ನಡ ರಾಜ್ಯೋತ್ಸವ ಸೇರಿದಂತೆ ಅನೇಕ ರಾಷ್ಟ್ರಹಬ್ಬಕ್ಕೂ ಗೈರಾದರು. ಜತೆಗೆ ಬರಗಾಲದಲ್ಲಿ ರೈತರ ಕಷ್ಟಕ್ಕೆ ಸ್ಪಂದನೆ ನೀಡಲಿಲ್ಲ. ಇದೀಗ ಉತ್ತಮ ಮಳೆಯಾಗಿ ರೈತರು ಸಂಭ್ರಮದಲ್ಲಿದ್ದಾರೆ. ಇಂತಹ ಸಂಭ್ರಮದಲ್ಲೂ ಶಾಸಕರು ಕ್ಷೇತ್ರದಲ್ಲಿಲ್ಲ. ಅಮೇರಿದಲ್ಲಿರುವ ಶಾಸಕ ದರ್ಶನ್ ಅವರು ಅಮೆರಿಕದಲ್ಲಿಯೇ ನಾಟಿ ಮಾಡಲಿ, ನಾವು ರೈತರ ಮಕ್ಕಳು, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರಿಂದ ಅರಳಕುಪ್ಪೆಯಲ್ಲಿಯೇ ಭತ್ತದ ನಾಟಿ ಮಾಡಿಸುತ್ತೇವೆ ಎಂದು ಕಿಡಿಕಾರಿದರು.

ನಾಳೆ ವಿದ್ಯುತ್ ವ್ಯತ್ಯಯ

ಮಂಡ್ಯ, ಆ.6– ವಿ.ಸಿ. ಫಾರಂ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕಾರ್ಯ ಹಮ್ಮಿಕೊಂಡಿರುವುದರಿಂದ ವಿ.ಸಿ.ಫಾರಂ, ಶಿವಳ್ಳಿ, ದುದ್ದ, ಬಿ.ಹಟ್ನ, ಬೇವಕಲ್ಲು, ಹುಲಿಕೆರೆ, ಚಂದಗಾಲು, ಹುಲ್ಲೇನಹಳ್ಳಿ, ಹೊಳಲು ಹಾಗೂ ಈ ಸುತ್ತಮುತ್ತಲಿನ ಗ್ರಾಮಗಳಲ್ಲಿ ಆ.8 ರಂದು ಬೆಳಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

ಆ.13, ತ್ರೈಮಾಸಿಕ ಕೆಡಿಪಿ ಸಭೆ

ಮಂಡ್ಯ, ಆ.6– ಮಂಡ್ಯ ಜಿಲ್ಲಾ ಪಂಚಾಯಿತಿಯ 2024–25 ನೇ ಸಾಲಿನ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಥಮ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯನ್ನು (20 ಅಂಶಗಳ ಕಾರ್ಯಕ್ರಮವು ಸೇರಿದಂತೆ) ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ಆಗಸ್ಟ್ 13 ರಂದು ಬೆಳಿಗ್ಗೆ 11 ಗಂಟೆಗೆ ಮಂಡ್ಯ ಜಿಲ್ಲಾ ಪಂಚಾಯತ್‌ನ ಕಾವೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಮಂಡ್ಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾಂಗ್ರೆಸ್ ವಿರುದ್ಧ ಭೂಮಿತಾಯಿ ಹೋರಾಟ ಸಮಿತಿ ಪ್ರತಿಭಟನೆ

ಶ್ರೀರಂಗಪಟ್ಟಣ, ಜು.6– ರಾಜ್ಯ ಕಾಂಗ್ರೆಸ್ ಸರ್ಕಾರ ನಿರಂತರವಾಗಿ ರೈತ ವಿರೋಧಿ ನೀತಿ ಅನುಸರಿಸುತ್ತಿದ್ದು, ರೈತರಿಗೆ ವಿಷ ಕೊಡುತ್ತಿದೆ ಎಂದು ಆರೋಪಿಸಿ ಪಟ್ಟಣದಲ್ಲಿ ಭೂಮಿತಾಯಿ ಹೋರಾಟ ಸಮಿತಿ ಸದಸ್ಯರು ಪ್ರತಿಭಟನೆ ನಡೆಸಿದರು.



ಭೂಮಿ ತಾಯಿ ಹೋರಾಟ ಸಮಿತಿಯಿಂದ ಪ್ರತಿಭಟನೆ ನಡೆಸಿದರು.

ಪಟ್ಟಣದ ತಾಲೂಕು ಕಚೇರಿ ಎದುರು ಭೂಮಿ ತಾಯಿ ಹೋರಾಟ ಸಮಿತಿ ಅಧ್ಯಕ್ಷ ಬಿ.ಸಿ ಕೃಷ್ಣೇಗೌಡ, ರೈತ ಹೋರಾಟಗಾರ ಕೆ.ಎಸ್ ನಂಜುಂಡೇಗೌಡ ನೇತೃತ್ವದಲ್ಲಿ ನೂರಾರು ರೈತರು ಜಮಾವಣೆಗೊಂಡು, ರಾಜ್ಯ ಸರ್ಕಾರ, ನೀರಾವರಿ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಪ್ರತಿಭಟನೆ ನಡೆಸಿದರು.

ನಂತರ ಕೆ.ಎಸ್. ನಂಜುಂಡೇಗೌಡ ಮಾತನಾಡಿ, ರಾಜ್ಯದಲ್ಲಿ 1600ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಜನಪರ ಆಡಳಿತಕ್ಕೆ ಗಮನ ಕೊಡದ ಈ ಸರ್ಕಾರ ಜನ ವಿರೋಧಿ, ಭ್ರಷ್ಟಾಚಾರದ ಹಗರಣದಲ್ಲಿ ಮುಳುಗಿದೆ. ಕಳೆದ ವರ್ಷ ಕೆಆರ್‌ಎಸ್ ಜಲಾನಯನ ವ್ಯಾಪ್ತಿಯಲ್ಲಿ ಕಾಲುವೆಗಳ ಆಧುನೀಕರಣ ಹಾಗೂ ನೀರಿನ ಅಭಾವದ ಕಾರಣ ನೀಡಿ ರೈತರ ಜಮೀನಿಗೆ ನೀರು ಹರಿಸದೆ ಅನ್ಯಾಯ ಮಾಡಿದೆ. ಇದರಿಂದ ರೈತ ಸಮುದಾಯ ಅತಂತ್ರದಲ್ಲಿ ಬದುಕು ಎದುರಿಸುವಂತಾಗಿದೆ ಎಂದರು.

ಪ್ರಸ್ತುತ ರಾಜ್ಯದಲ್ಲಿ ಉತ್ತಮ ಮಳೆಯಾಗಿ ಅನೇಕ ಅಣೆಕಟ್ಟೆಗಳು ತುಂಬಿವೆ. ಇಂತಹ ಸಂದರ್ಭದಲ್ಲೂ ಕಟ್ಟು ಪದ್ಧತಿ ನೀರು ಕೊಡುವುದಾಗಿ ಸರ್ಕಾರ ಪ್ರಕಟಣೆ ಹೊರಡಿಸಿರುವುದು ಸರಿಯಲ್ಲ. ಕೂಡಲೇ ಈ ರೈತ ವಿರೋಧಿ ನಿಲುವಿನಿಂದ ಹಿಂದೆ ಸರಿಯದೇ ಹೋದಲ್ಲಿ ರಾಜ್ಯ ಸರ್ಕಾರದ ವಿರುದ್ಧ ತೀವ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಪ್ರತಿಭಟನಾಕಾರರು ಎಚ್ಚರಿಸಿದರು. ಬಳಿಕ ತಹಸೀಲ್ದಾರ್ ಪರುಶುರಾಂ ಸತ್ತೀಗೇರಿ ಅವರ ಮೂಲಕ ಸರ್ಕಾರದ ಮುಖ್ಯ ಕಾರ್ಯ ದರ್ಶಿಗೆ ಮನವಿ ಸಲ್ಲಿಸಿದರು.

ಈ ವೇಳೆ ಸಮಿತಿ ಪ್ರಧಾನ ಕಾರ್ಯದರ್ಶಿ ಎಂ.ವಿ. ಕೃಷ್ಣ, ಖಜಾಂಚಿ ಮಹದೇವು, ಉಪಾಧ್ಯಕ್ಷ ಹನಿಯಂಬಾಡಿ ನಾಗರಾಜು, ಜಯರಾಮೇಗೌಡ, ಜಗದೀಶ್, ಡಿ.ಎಂ ಮಹೇಶ್, ತಿಮ್ಮೇಗೌಡ, ಹೆಮ್ಮಿಗೆ ಕೃಷ್ಣ, ಸುರೇಶ, ಸ್ವಾಮಿ, ಕೃಷ್ಣ, ಶ್ರೀಧರ್, ಚಾಮರಾಜು, ರಾಮಚಂದ್ರು, ಕೆಂಪೇಗೌಡ, ಬಿ.ಟಿ ಮಹೇಶ, ಪೈಲ್ವಾನ್ ನಾಗಣ್ಣ ಸೇರಿದಂತೆ ಇತರರು ಇದ್ದರು.

ವೇದಿಕೆ ಬಳಿ ಕುಸಿದು ಬಿದ್ದ ಕರ್ತವ್ಯನಿರತ ಪೊಲೀಸ್ ಪೇದೆ

ಮಂಡ್ಯ: ಮಂಗಳವಾರ ನಗರದ ಡಾ. ರಾಜ್‌ಕುಮಾರ್ ಬಡಾವಣೆಯ ಮೈಶುಗರ್ ಮೈದಾನದಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ನಡೆದ ಬೃಹತ್ ಜನಾಂದೋಲನ ಸಮಾವೇಶದಲ್ಲಿ ವೇದಿಕೆ ಬಳಿ ನಿಯೋಜನೆಗೊಂಡಿದ್ದ ಕರ್ತವ್ಯನಿರತ ಪೊಲೀಸ್ ಪೇದೆಯೊಬ್ಬರು ಅತಿಯಾದ ಬಳಲಿಕೆ ಯಿಂದ ದಿಢೀರನೇ ಕುಸಿದು ಬಿದ್ದ ಘಟನೆ ನಡೆಯಿತು.

ಕಾರ್ಮಿಕ ಸಚಿವ ಸಂತೋಷ್ ಲಾಡ್ ಭಾಷಣ ಮಾಡುತ್ತಿದ್ದಾಗ ವೇದಿಕೆ ಯ ಎಡಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಪೇದೆ ಕೃಷ್ಣಾಚಾರಿ ಮೂರ್ಛೆರೋಗದಿಂದ ಕೆಳಗೆ ಬಿದ್ದು ಒದ್ದಾಡುತ್ತಿದ್ದರು. ಇದರಿಂದ ವೇದಿಕೆ ಮೇಲಿದ್ದ ಗಣ್ಯರು, ಸಾರ್ವಜನಿಕರು ಹಾಗೂ ಪೊಲೀಸ್ ಸಿಬ್ಬಂದಿ ಎಲ್ಲರೂ ಆತಂಕಗೊಂಡರು. ನಂತರ ಪೊಲೀಸ್ ಸಿಬ್ಬಂದಿ ಅವರನ್ನು ಹಾರೈಕೆ ಮಾಡಿ, ಆಂಬುಲೆನ್ಸ್ ಮೂಲಕ ಮಿಮ್ಸ್ ಆಸ್ಪತ್ರೆಗೆ ದಾಖಲು ಮಾಡಿದರು.

ಮಂಡ್ಯ ನಗರದ ಪೂರ್ವ ಪೊಲೀಸ್ ಠಾಣೆಯ ಪೊಲೀಸ್ ಪೇದೆಯಾದ ಕೃಷ್ಣಾಚಾರಿ ಹಲವು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದು, ಇಂದು ಕಾಂಗ್ರೆಸ್ ಸಮಾವೇಶಕ್ಕಾಗಿ ನಿಯೋಜನೆಗೊಂಡಿದ್ದರಿಂದ ಕರ್ತವ್ಯಕ್ಕೆ ಹಾಜರಾಗಿದ್ದರು. ಆದರೆ ಅತಿಯಾದ ಒತ್ತಡದಿಂದ ಮೂರ್ಛೆ ಹೋಗಿದ್ದು, ಇದೀಗ ಅವರ ಆರೋಗ್ಯ ಸ್ಥಿತಿ ಸ್ಥಿರವಾಗಿದೆ ಎಂದು ತಿಳಿದು ಬಂದಿದೆ.


ಡಿಕೆಶಿ ಭಾಷಣದ ವೇಳೆ ಪ್ರತಿಪಕ್ಷ ನಾಯಕರ ಭಾಷಣದ ವೀಡಿಯೋ ತುಣುಕು ಪ್ರದರ್ಶನ

ಮಂಡ್ಯ: ಜನಾಂದೋಲನ ಸಮಾವೇಶದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಮ್ಮ ಭಾಷಣಕ್ಕಿಂತ ಹೆಚ್ಚಾಗಿ ಪ್ರತಿಪಕ್ಷ ನಾಯಕರ ವೀಡಿಯೋ ತುಣುಕುಗಳನ್ನು ಎಲ್‌ಇಡಿ ಪರದೆ ಮೇಲೆ ಪ್ರದರ್ಶಿಸುವಂತೆ ಸೂಚಿಸಿ, ನಮ್ಮ ಮಾತಿಗಿಂತ ಅವರ ಮಾತಲ್ಲೇ ನಿಜಾಂಶ ತಿಳಿದುಕೊಳ್ಳಿ ಎಂದು ನೆರೆದಿದ್ದ ಜನರಿಗೆ ಕರೆ ನೀಡಿದರು.

ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಗೂ ಮುನ್ನ ಎರಡು ಪಕ್ಷದ ನಾಯಕರು ಮಾತನಾಡಿದ್ದ ಹೇಳಿಕೆಗಳು ಹಾಗೂ ಮೈತ್ರಿಯಾದ ಮೇಲೆ ಮಾತನಾಡಿರುವ ಹೇಳಿಕೆಗಳು ವಿವಿಧ ಸುದ್ದಿ ವಾಹಿನಿಗಳಲ್ಲಿ ಪ್ರಸಾರವಾಗಿರುವ ತುಣುಕುಗಳನ್ನು ಪ್ರದರ್ಶಿಸಿ ಅವರ ಬಗ್ಗೆ ನೀವೇ ಅರ್ಥ ಮಾಡಿಕೊಳ್ಳಿ ಎಂದರು. ಹೆಚ್.ಡಿ.ಕುಮಾರಸ್ವಾಮಿ, ಬಿ.ಎಸ್.ಯಡಿಯೂರಪ್ಪ ಬಸನಗೌಡ ಪಾಟೀಲ್ ಯತ್ನಾಳ್, ಡಾ.ಸಿ.ಎನ್.ಅಶ್ವತ್ಥ್ ನಾರಾಯಣ, ಸಿ.ಪಿ. ಯೋಗೇಶ್ವರ್ ಅವರುಗಳ ಭಾಷಣದ ತುಣುಕುಗಳನ್ನ ಪ್ರದರ್ಶನ ಮಾಡಲಾಯಿತು.

ಬಿಜೆಪಿ, ಜೆಡಿಎಸ್‌ನದ್ದು ಲಾಂಚ್‌ಪ್ಯಾಡ್ ಪಾದಯಾತ್ರೆ: ಪ್ರಿಯಾಂಕ್ ಖರ್ಗೆ ಕಿಡಿ

ಮಂಡ್ಯ,ಆ.6(ಮೋಹನ್‌ರಾಜ್)– ಬಿಜೆಪಿ, ಜೆಡಿಎಸ್ ನಡೆಸುತ್ತಿರುವ ಪಾದಯಾತ್ರೆ ನೆಪಮಾತ್ರಕ್ಕೆ ಮುಡಾ ಹಗರಣದ ಹೆಸರಿನ ಪಾದಯಾತ್ರೆಯಾಗಿದೆ.



ಅಸಲಿಯಾಗಿ ಬಿ.ವೈ.ವಿಜಯೇಂದ್ರ, ಆರ್.ಅಶೋಕ್ ಹಾಗೂ ನಿಖಿಲ್‌ಕುಮಾರಸ್ವಾಮಿ ಅವರ ಲಾಂಚ್‌ಪ್ಯಾಡ್ ಪಾದಯಾತ್ರೆ ಇದಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಟೀಕಿಸಿದರು.

ಮಂಗಳವಾರ ನಗರದ ಡಾ.ರಾಜ್‌ಕುಮಾರ್ ಬಡಾವಣೆಯ ಮೈಶುಗರ್ ಮೈದಾನದಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ನಡೆದ ಬೃಹತ್ ಜನಾಂದೋಲನ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಇತ್ತೀಚೆಗಷ್ಟೇ ಅಧಿಕಾರಕ್ಕೇರಿರುವ ವಿಜಯೇಂದ್ರ, ಅಶೋಕ್, ನಿಖಿಲ್‌ಗೆ ಪ್ರಚಾರದ ಅಗತ್ಯವಿರುವುದರಿಂದ ಈ ಪಾದಯಾತ್ರೆ ಹಮ್ಮಿಕೊಂಡಿದ್ದಾರೆ. ಬಿಜೆಪಿ ಸರ್ಕಾರ ರಾಜ್ಯದಲ್ಲಿ ಅಸ್ತಿತ್ವದಲ್ಲಿದ್ದಾಗ ಪಿಎಸ್‌ಐ ಸೇರಿದಂತೆ ನೂರಾರು ಕೋಟಿ ಭ್ರಷ್ಟಾಚಾರ, ಹಗರಣಗಳು ನಡೆದಿವೆ. ಅವುಗಳ ವಿರುದ್ಧ ಪಾದಯಾತ್ರೆ ಏಕೆ ನಡೆಸಿಲ್ಲ ಎಂದು ಪ್ರಶ್ನಿಸಿದರು.

ಬಿಜೆಪಿ ಮತ್ತು ಜೆಡಿಎಸ್‌ಗೆ ಸಂವಿಧಾನದ ಅರಿವಿಲ್ಲ. ಸಂವಿಧಾನತ್ಮಕ ಹುದ್ದೆಯಾದ ರಾಜ್ಯಪಾಲ ಹುದ್ದೆಯನ್ನು ದುರುಪಯೋಗ ಪಡೆಸಿಕೊಳ್ಳಲಾ ಗುತ್ತಿದೆ. ರಾಜಭವನ ಬಿಜೆಪಿ ಕಚೇರಿ ಯಾಗಿ ಮಾರ್ಪಟ್ಟಿದ್ದು, ಕೇಸರೀಕರಣ ವಾಗಿದೆ. ಪಾದಯಾತ್ರೆಗೆ ಬೆಂಬಲವಿಲ್ಲ ಎನ್ನುತ್ತಿದ್ದ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮತ್ತೆ ಪಾದಯಾತ್ರೆಗೆ ಬೆಂಬಲ ಕೊಟ್ಟಿದ್ದು ಏಕೆಂಬುದನ್ನು ಹೇಳಲಿ. ಪಾದಯಾತ್ರೆಗೆ ವಿರೋಧ ವ್ಯಕ್ತಪಡಿಸಿದ್ದ ಹೆಚ್ಡಿಕೆ, ಮೋದಿ–ಅಮಿತ್‌ಷಾ ಒತ್ತಾಯಕ್ಕೆ ಯಾತ್ರೆಯಲ್ಲಿ ಪಾಲ್ಗೊಂಡಿದ್ದಾರೆಂದು ಕಿಡಿಕಾರಿದರು.

ಪ್ಯಾರಿಸ್ ಒಲಿಂಪಿಕ್ ಕ್ರೀಡಾಕೂಟ–2024

ಸ್ಟೀಪಲ್‌ಚೇಸ್: ಫೈನಲ್‌ಗೆ ಅವಿನಾಶ್ ಸೇಬಲ್

PARIS 2024



ಪ್ಯಾರಿಸ್: ಪ್ಯಾರಿಸ್ ಒಲಿಂಪಿಕ್ಸ್‌ನ ಸ್ಟೀಪಲ್ ಚೇಸ್ ಈವೆಂಟ್‌ನಲ್ಲಿ ಭಾರತದ ಅವಿನಾಶ್ ಸೇಬಲ್ ಫೈನಲ್‌ಗೆ ಲಗ್ಗೆ ಹಾಕಿದ್ದಾರೆ. ಅವಿನಾಶ್ 3000 ಮೀಟರ್ ಸ್ಟೀಪಲ್ ಚೇಸ್ ಫೈನಲ್ ಅರ್ಹತಾ ಪಂದ್ಯದಲ್ಲಿ ಗೆಲುವು ಸಾಧಿಸುವ ಮೂಲಕ ಫೈನಲ್ ತಲುಪಿ ಇತಿಹಾಸ ನಿರ್ಮಿಸಿದ್ದಾರೆ. ಈ ಸ್ಪರ್ಧೆಯಲ್ಲಿ ಫೈನಲ್ ತಲುಪಿದ ಮೊದಲ ಭಾರತೀಯ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ. ಈ ಹಿಂದೆ ರಿಯೊ ಒಲಿಂಪಿಕ್ಸ್‌ನಲ್ಲಿ ಮಹಿಳಾ ವಿಭಾಗದಲ್ಲಿ ಲಲೀಲಾ ಬಾಬರ್ ಫೈನಲ್ ತಲುಪಿದ್ದರು.

ಅವಿನಾಶ್ ಪ್ಯಾರಿಸ್‌ನ ಸ್ಟೇಡ್ ಡಿ ಫ್ರಾನ್ಸ್‌ನಲ್ಲಿ ನಡೆದ 1ನೇ ಸುತ್ತಿನ ಹೀಟ್ 2 ರಲ್ಲಿ 8:15.43 ಸಮಯದೊಂದಿಗೆ 5ನೇ ಸ್ಥಾನ ಪಡೆದರು. ಪ್ರಸ್ತುತ ವಿಶ್ವ ಶ್ರೇಯಾಂಕದಲ್ಲಿ 15ನೇ ಸ್ಥಾನದಲ್ಲಿದ್ದಾರೆ. ಆದಾಗ್ಯೂ, ಅವರು ಈ ಓಟದಲ್ಲಿ ಮೊಹಮ್ಮದ್ ಟಿಂಡಾಫ್ಟ್‌ಗಿಂತ ಹಿಂದೆ ಉಳಿದರು. ಅವರು 8:10.62 ಸಮಯದೊಂದಿಗೆ ಈ ಈವೆಂಟ್‌ನಲ್ಲಿ ಅವಿನಾಶ್‌ಗಿಂತ ಅವರಿಗಿಂತ ಮುಂದಿದ್ದರು.

ಅವಿನಾಶ್ ಹೊರತಾಗಿ, ವಿಶ್ವದ 4ನೇ ಶ್ರೇಯಾಂಕದ ಇಥಿಯೋಪಿಯಾದ ಓಟಗಾರ ಸ್ಯಾಮ್ಯುಯೆಲ್ ಫೈರ್ವು, ವಿಶ್ವದ 3ನೇ ಕ್ರಮಾಂಕದ ಕೀನ್ಯಾದ ಅಬ್ರಹಾಂ ಕಿಬಿವೊಟೆ ಮತ್ತು 9ನೇ ಕ್ರಮಾಂಕದ ಜಪಾನ್‌ನ ರ್ಯುಜಿ ಮಿಯುರಾ ಅವಿನಾಶ್‌ಗಿಂತ ಹಿಂದುಳಿದಿದ್ದರು. ಭಾರತದ 29 ವರ್ಷದ ಓಟಗಾರ ಅವಿನಾಶ್ ಓಟದ ಆರಂಭದಲ್ಲಿ ಉತ್ತಮ ವೇಗ ಕಾಯ್ದುಕೊಂಡಿದ್ದರು. ಅವರು 1000 ಮೀಟರ್ ವರೆಗೂ ಮುನ್ನಡೆ ಸಾಧಿಸಿದ್ದರು. ಸ್ವಲ್ಪ ಸಮಯದ ನಂತರ, ಅಬ್ರಹಾಂ ಮತ್ತು ಸ್ಯಾಮ್ಯುಯೆಲ್ ಅವಿನಾಶ್ ಅವರನ್ನು ಹಿಂದಿಕ್ಕಿದ್ದರು. ಇದರಿಂದಾಗಿ 4ನೇ ಸ್ಥಾನ ತಲುಪಿದರು. ನಂತರ ವೇಗ ಹೆಚ್ಚಿಸಿಕೊಂಡು 2ನೇ ಸ್ಥಾನಕ್ಕೆ ಏರಿದ್ದರು. ಆದಾಗ್ಯೂ, ಪಂದ್ಯದ ಕೊನೆಯಲ್ಲಿ ಮೊರೊಕನ್ ಓಟಗಾರರು ಮೊದಲ ಸ್ಥಾನದಲ್ಲಿ ಉಳಿದರೇ ಅವಿನಾಶ್ ಐದನೇ ಸ್ಥಾನಕ್ಕೆ ತೃಪ್ತಿಪಟ್ಟರು. ಇದರೊಂದಿಗೆ ಫೈನಲ್‌ಗೂ ಅರ್ಹತೆ ಪಡೆದರು. ಅವಿನಾಶ್ ಅವರು ಇಂದು 1.13ಕ್ಕೆ 15 ಆಟಗಾರರೊಂದಿಗೆ ಫೈನಲ್‌ನಲ್ಲಿ ಸೆಣಸಲಿದ್ದಾರೆ.

ಮೈಸೂರು ಚಲೋ ಪಾದಯಾತ್ರೆ



ಬೆಂಗಳೂರಿಂದ ಆರಂಭಗೊಂಡಿರುವ ಬಿಜೆಪಿ–ಜೆಡಿಎಸ್ ಮೈತ್ರಿಕೂಟದ "ಮೈಸೂರು ಚಲೋ" ಪಾದಯಾತ್ರೆ ನಾಲ್ಕನೇ ದಿನವಾದ ಮಂಗಳವಾರ ನಿಡಘಟ್ಟದಿಂದ ಪ್ರಾರಂಭವಾಗಿ ಮಂಡ್ಯ ಬಳಿ ತಲುಪಿದೆ. ಚಿತ್ರದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಮೈಸೂರು ಜಿಲ್ಲಾ ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಇನ್ನಿತರರನ್ನು ಕಾಣಬಹುದು.

ವಯನಾಡ್ ಭೂಕುಸಿತ: ಸನ್‌ರೈಸ್ ಕಣಿವೆಯ ಅಪಾಯಕಾರಿ ಪ್ರದೇಶದಲ್ಲಿ ಕಾರ್ಯಾಚರಣೆ

ವಯನಾಡ್ (ಕೇರಳ): ವಯನಾಡ್‌ನಲ್ಲಿ ನಡೆದ ಭೀಕರ ಭೂಕುಸಿತದಿಂದಾಗಿ ಕಾಣೆಯಾದವರನ್ನು ಹುಡುಕುವ ಸಲುವಾಗಿ ಸನ್‌ರೈಸ್ ಕಣಿವೆಯಲ್ಲಿನ ಅರಣ್ಯ ಪ್ರದೇಶದಲ್ಲಿ ಮಂಗಳವಾರ ರಕ್ಷಣಾ ತಂಡವನ್ನು ಇಳಿಸಲಾಗಿದೆ.

ಆರು ಯೋಧರು, ಕೇರಳದ ವಿಶೇಷ ಪೊಲೀಸ್ ಪಡೆಯ ನಾಲ್ವರು ಸಿಬ್ಬಂದಿ ಮತ್ತು ಇಬ್ಬರು ಅರಣ್ಯ ವೀಕ್ಷಕರನ್ನು ಒಳಗೊಂಡ ರಕ್ಷಣಾ ತಂಡವನ್ನು ಛಾಲಿಯಾರ್ ನದಿದಂಡೆಯಲ್ಲಿರುವ ಅಪಾಯಕಾರಿ ಭೂಪ್ರದೇಶದಲ್ಲಿ ಹೆಲಿಕಾಪ್ಟರ್ ಮೂಲಕ ಇಳಿಸಲಾಗಿದೆ ಎಂದು ಮುಖ್ಯಮಂತ್ರಿ ಕಚೇರಿಯ ಪ್ರಕಟಣೆ ತಿಳಿಸಿದೆ.

ಉದ್ಯೋಗಕ್ಕಾಗಿ ಭೂಮಿ ಹಗರಣ: ಲಾಲು ಪ್ರಸಾದ್, ತೇಜಸ್ವಿ ವಿರುದ್ಧ ಇಡಿ ಪೂರಕ ಚಾರ್ಜ್‌ಶೀಟ್

ನವದೆಹಲಿ: ಉದ್ಯೋಗಕ್ಕಾಗಿ ಭೂ ಹಗರಣದಲ್ಲಿ ಮಾಜಿ ರೈಲ್ವೆ ಸಚಿವ ಲಾಲು ಪ್ರಸಾದ್, ಅವರ ಪುತ್ರ ತೇಜಸ್ವಿ ಯಾದವ್ ಮತ್ತು ಇತರ ಎಂಟು ಜನರ ವಿರುದ್ಧ ಜಾರಿ ನಿರ್ದೇಶನಾಲಯ ಮಂಗಳವಾರ ಪೂರಕ ಚಾರ್ಜ್ ಶೀಟ್ ಸಲ್ಲಿಸಿದೆ.

ವಿಶೇಷ ನ್ಯಾಯಾಧೀಶ ವಿಶಾಲ್ ಗೋಗ್ನೆ ಅವರ ಮುಂದೆ ಚಾರ್ಜ್ ಶೀಟ್ ಸಲ್ಲಿಸಲಾಗಿದ್ದು, ಅವರು ಈ ವಿಷಯವನ್ನು ಆಗಸ್ಟ್ 13 ರಂದು ಕೈಗೆತ್ತಿಕೊಳ್ಳುವುದಾಗಿ ತಿಳಿಸಿದ್ದಾರೆ. ಸಿಬಿಐ ದಾಖಲಿಸಿದ ಎಫ್‌ಐಆರ್‌ನಿಂದ ಇಡಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದೆ.

ಲಾಲು ಪ್ರಸಾದ್ ಯಾದವ್ ಅವರು 2004 ಮತ್ತು 2009 ರ ಅವಧಿಯಲ್ಲಿ ರೈಲ್ವೆ ಸಚಿವರಾಗಿದ್ದಾಗ ಅವರ ಕುಟುಂಬಕ್ಕೆ ಉಡುಗೊರೆಯಾಗಿ ನೀಡಿದ ಅಥವಾ ಮಾರಾಟ ಮಾಡಿದ ಜಮೀನುಗಳಿಗೆ ಪ್ರತಿಯಾಗಿ ರೈಲ್ವೆಯಲ್ಲಿ ನೇಮಕಾತಿ ಮಾಡಲಾಗಿದೆ. ಜಾಹೀರಾತು ನೀಡದೆ ಅಥವಾ ಸಾರ್ವಜನಿಕರ ಗಮನಕ್ಕೂ ತರದೆ ತಮ್ಮ ನೆಚ್ಚಿನ ಅಭ್ಯರ್ಥಿಗಳನ್ನು ನೇಮಿಸಿಕೊಳ್ಳಲಾಗಿದೆ. ಈ ನೇಮಕಾತಿಗಾಗಿ ಭಾರತೀಯ ರೈಲ್ವೆಯ ನಿಯಮಗಳು ಮತ್ತು ಕಾರ್ಯವಿಧಾನಗಳನ್ನು ಉಲ್ಲಂಘಿಸಲಾಗಿದೆ ಎಂದು ಇಡಿ ಆರೋಪಿಸಿದೆ.

ಗೃಹಜ್ಯೋತಿ ಯೋಜನೆಯ 8,844 ಕೋಟಿ ರೂ. ಬಿಲ್ ಪಾವತಿಸಿದ ಸರ್ಕಾರ

ಬೆಂಗಳೂರು: ಗೃಹ ಜ್ಯೋತಿ ಯೋಜನೆಯ ಸಮರ್ಪಕ ಮುಂದುವರಿಕೆಗಾಗಿ ರಾಜ್ಯದ ಆರು ವಿದ್ಯುತ್ ಸರಬರಾಜು ಕಂಪನಿಗಳ (ಎಸ್ಕಾಂ) ಖಾತೆಗಳಿಗೆ ರಾಜ್ಯ ಸರ್ಕಾರದ ಬೊಕ್ಕಸದಿಂದ 8,844 ಕೋಟಿ ರೂ. ಹಣ ಪಾವತಿಸಲಾಗಿದೆ. ಗೃಹ ಜ್ಯೋತಿ ಯೋಜನೆಯಡಿ ಮನೆಗಳಿಗೆ ನೀಡಲಾಗುವ ಶೂನ್ಯ ಬಿಲ್‌ಗಳಿಗೆ ಸರ್ಕಾರದ ವತಿಯಿಂದ ಪಾವತಿಸುತ್ತಿರುವ ಮೊತ್ತ ಇದಾಗಿದೆ.

ಒಂದನೇ ಪುಟದಿಂದ

ನಮ್ಮ ಮೈಸೂರು ಚಲೋ ಗುರಿ

ಅಧಿಕಾರದ ದಾಹಕ್ಕೆ ಅಲ್ಲ. ಕಾಂಗ್ರೆಸ್ ಭ್ರಷ್ಟ ಸರ್ಕಾರದ ವಿರುದ್ಧವಾಗಿದೆ. ಭ್ರಷ್ಟ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸರ್ಕಾರವನ್ನು ಬುಡಸಮೇತ ಕಿತ್ತುಹಾಕಬೇಕು. ಕಾಂಗ್ರೆಸ್‌ನವರು ಅಧಿಕಾರಕ್ಕೆ ಬರಲು ಸಾಕಷ್ಟು ಭರವಸೆ ಕೊಟ್ಟಿದ್ದಾರೆ. ಕಳೆದ 16ತಿಂಗಳಲ್ಲಿ ರಾಜ್ಯ ದುಸ್ಥಿತಿಗೆ ಬಂದಿದ್ದು, ದಿನಬಳಕೆ ವಸ್ತುಗಳ ದರ ಏರಿಕೆ ಆಗಿದೆ. ರೈತರಿಗೆ ಹಾಲಿನ ಪ್ರೋತ್ಸಾಹ ಧನ ಸಿಗುತ್ತಿಲ್ಲ. ಆದರೆ ಸಿದ್ದರಾಮಯ್ಯ ರೈತರ ಬಗ್ಗೆ ಮೊಸಳೆ ಕಣ್ಣೀರು ಹಾಕುತ್ತಾರೆ ಎಂದು ಟೀಕಿಸಿದರು.

ಕಾಂಗ್ರೆಸ್ ಸರ್ಕಾರ ಬಂದ ಮೇಲೆ 1 ಲಕ್ಷ 95 ಸಾವಿರ ಕೋಟಿ ಸಾಲ ಮಾಡಿದೆ. ಎಸ್‌ಇಪಿ, ಟಿಎಸ್ಪಿ ಹಣ ಬೇರೆ ಕಡೆಗೆ ವರ್ಗಾವಣೆ ಆಗಿದೆ. ದಲಿತರ ಹೆಸರೇಳಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ದಲಿತರಿಗೆ ಅನ್ಯಾಯ ಮಾಡಿದ್ದಾರೆ. ಇಂಥ ಭ್ರಷ್ಟ ಮುಖ್ಯಮಂತ್ರಿ ನಮಗೆ ಬೇಕೆ. ಇದರಿಂದ ಜನರಿಗೆ, ರೈತರಿಗೆ ಒಳ್ಳೆಯದಾಗಲ್ಲ. ಮುಡಾದಲ್ಲಿ ಬಡವರಿಗೆ ಒಂದೇ ಒಂದು ಸೈಟ್ ಕೊಟ್ಟಿಲ್ಲ. ಆದರೆ ಸಿದ್ದರಾಮಯ್ಯ ಸಿಎಂ ಆದ ಮೇಲೆ ಮುಡಾದಲ್ಲಿ 5 ಸಾವಿರ ಕೋಟಿ ಭ್ರಷ್ಟಾಚಾರವಾಗಿದೆ ಎಂದು ಆರೋಪಿಸಿದರು.

ವಾಲ್ಮೀಕಿ ಹಗರಣದಲ್ಲಿ 187ಕೋಟಿ ಅವ್ಯವಹಾರ ಆಗಿದೆ. ಇಂತಹ ಸರ್ಕಾರ ರಾಜ್ಯದಿಂದ ತೊಲಗಬೇಕು. ಯಾವುದೇ ಸಂದರ್ಭದಲ್ಲೂ ಸಿಎಂ ತಮ್ಮ ಸ್ಥಾನಕ್ಕೆ ರಾಜಿನಾಮೆ ಕೊಡಬೇಕಾಗುತ್ತದೆ ಎಂದು ಭವಿಷ್ಯ ನುಡಿದರು. ಮದ್ದೂರು ತಾಲೂಕಿನ ಸೋಮನಹಳ್ಳಿಯಲ್ಲಿ ಮಾತನಾಡಿದ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್‌ಕುಮಾರಸ್ವಾಮಿ, ಮುಡಾ, ವಾಲ್ಮೀಕಿ ನಿಗಮದ ಅಭಿವೃದ್ಧಿ ಹಣವನ್ನು ಕಾಂಗ್ರೆಸ್ ಸರ್ಕಾರ ದುರುಪಯೋಗ ಮಾಡಿಕೊಂಡಿದೆ. ಮುಡಾದಲ್ಲಿ ಸುಳ್ಳುದಾಖಲೆ ಸೃಷ್ಟಿ ಮಾಡಿ 14 ಸೈಟ್‌ಗಳನ್ನು ಪಡೆದುಕೊಂಡಿದ್ದಾರೆ. ಈ ವಿಷಯಕ್ಕೆ ಸಂಬಂಧಿಸಿದಂತೆ ಕುಮಾರಸ್ವಾಮಿ ಹಾಗೂ ಯಡಿಯೂರಪ್ಪ ಇಬ್ಬರು ರೈತ ನಾಯಕರು ಮೈಸೂರು ಚಲೋ ಪಾದಯಾತ್ರೆಗೆ ಚಾಲನೆ ಕೊಟ್ಟಿದ್ದಾರೆ. ನಿನ್ನೆ ಕೆಂಗಲ್‌ನಿಂದ ನಿಡಘಟ್ಟಕ್ಕೆ ಪಾದಯಾತ್ರೆ ಬಂದಿದ್ದೇವೆ ಎಂದರು.

ನಿನ್ನೆ ಪಕ್ಷದ ಕಾರ್ಯಕರ್ತೆ ಗೌರಮ್ಮ ಹೃದಯಾಘಾತದಿಂದ ಮೃತಪಟ್ಟಿರೋದು ಮನಸ್ಸಿಗೆ ನೋವಾಗಿದೆ. ಪಾದಯಾತ್ರೆಗೆ ಎರಡು ಪಕ್ಷದ ಕಾರ್ಯಕರ್ತರು ಪ್ರತಿದಿನ ನಮ್ಮ ಜೊತೆ ಹೆಗಲಿಗೆ ಹೆಗಲು ಕೊಟ್ಟು ಹೆಜ್ಜೆ ಹಾಕುತ್ತಿದ್ದಾರೆ ಎಂದರು. ಯಾದಗಿರಿಯಲ್ಲಿ ಪಿಎಸ್‌ಐ ವರ್ಗಾವಣೆಗೆ 40 ಲಕ್ಷ ಹಣವನ್ನು ಶಾಸಕರು ಹಾಗೂ ಅವರ ಮಗನಿಂದ ಬೇಡಿಕೆ ಇಟ್ಟಿದ್ದರು. ಇದರಿಂದ ಅವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಪಿಎಸ್‌ಐ ಪರಶುರಾಮ್ ಅವರ ಪತ್ನಿ ಜೊತೆ ಈಗಾಗಲೇ ಕೇಂದ್ರ ಸಚಿವರಾದ ಕುಮಾರಸ್ವಾಮಿಯವರು ದೂರವಾಣಿ ಮೂಲಕ ಮಾತಾಡಿದ್ದಾರೆ. ಪಾದಯಾತ್ರೆ ಮುಗಿದ ಬಳಿಕ ಅವರಿಗೆ ನ್ಯಾಯ ಕೊಡಿಸುವತ್ತ ಗಮನ ಹರಿಸುತ್ತೇವೆ. ಅಹಿಂದ, ಹಿಂದುಳಿದ ವರ್ಗದ ಸಹಕಾರದಿಂದ ಸಿದ್ದರಾಮಯ್ಯ ಸರ್ಕಾರ ಅಧಿಕಾರಕ್ಕೆ ಬಂದಿದೆ. ಆದರೆ ಇವತ್ತು ಜನ ಅವರಿಗೆ ಛೀಮಾರಿ ಹಾಕ್ತಿದ್ದಾರೆ. 187 ಕೋಟಿ ವಾಲ್ಮೀಕಿ ನಿಗಮದಲ್ಲಿ ಅಕ್ರಮವಾಗಿದೆ. ಸಿಎಂ ಅವರಿಗೆ ನೈತಿಕತೆ ಇದ್ದರೆ ಈ ಕೂಡಲೇ ರಾಜೀನಾಮೆ ಕೊಡಬೇಕು ಎಂದು ಅಗ್ರಹಿಸಿದರು.

ಕುಮಾರಸ್ವಾಮಿ ಅವರು ಸಿನಿಮಾ ಹಂಚಿಕೆದಾರರಾಗಿ ಅವರ ವೃತ್ತಿ ಜೀವನ ಆರಂಭ ಮಾಡಿದರು. ಅದರಲ್ಲಿ ಯಶಸ್ಸು ಕಂಡಿದ್ದಾರೆ. ಇವತ್ತು ಆಸ್ತಿ ಬಗ್ಗೆ ಡಿ.ಕೆ. ಶಿವಕುಮಾರ್ ಮಾತಾಡುತ್ತಿದ್ದಾರೆ. ಇದೆಲ್ಲಾ ರಾಜ್ಯದ ಜನಕ್ಕೆ ಗೊತ್ತಿದೆ. ನಾವು ಬಿಳಿ ಹಾಳೆಯಿದ್ದ ಹಾಗೆ. ಯಾವುದೇ ಮುಚ್ಚು ಮರೆ ಮಾಡಿಲ್ಲಾ. ಎನ್‌ಡಿಎ ಜೊತೆ ಮೈತ್ರಿಯಾದ ಬಳಿಕ 28 ಲೋಕಸಭೆಯ ಕ್ಷೇತ್ರಗಳಲ್ಲಿ ತಳಮಟ್ಟದಲ್ಲಿ ಕಾರ್ಯಕರ್ತರು ಹೊಂದಾಗಿದ್ದಾರೆ ಎಂದು ತಿಳಿಸಿದರು. ಪಾದಯಾತ್ರೆ ವೇಳೆ ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್, ಮಾಜಿ ಉಪಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥ್ ನಾರಾಯಣ್, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು, ಬಿಜೆಪಿ ಶಾಸಕಾಂಗ ಪಕ್ಷದ ಉಪನಾಯಕ ಅರವಿಂದ್ ಬೆಲ್ಲದ್, ವಿಧಾನಪರಿಷತ್ ಸದಸ್ಯ, ಸಿ.ಟಿ. ರವಿ, ಮಾಜಿ ಸಚಿವರಾದ ಬಿ. ಶ್ರೀರಾಮುಲು, ಸಿ.ಎಸ್.ಪುಟ್ಟರಾಜು, ಡಿ.ಸಿ.ತಮ್ಮಣ್ಣ, ಕೆ.ಸಿ.ನಾರಾಯಣಗೌಡ, ಮುರುಗೇಶ್ ನಿರಾಣಿ, ಶಾಸಕರಾದ ಪ್ರಭು ಚೌಹಾಣ್, ಮಹೇಶ್ ಟೆಂಗಿನಕಾಯಿ, ಮುನಿರತ್ನ, ಹೆಚ್.ಟಿ.ಮಂಜು, ಉಭಯ ಪಕ್ಷದ ಮುಖಂಡರಾದ ಬಿ.ಆರ್. ರಾಮಚಂದ್ರ ಎಸ್.ಪಿ.ಸ್ವಾಮಿ, ಡಾ.ಇಂದ್ರೇಶ್, ಡಿ.ರಮೇಶ್, ಪಿ.ರಾಜೀವ್ ಸೇರಿದಂತೆ ಹಲವು ಮಂದಿ ಭಾಗವಹಿಸಿದ್ದರು.

ನಾಮಪತ್ರ ಸಲ್ಲಿಕೆ...



ವೀರಶೈವ-ಲಿಂಗಾಯತ ಮಹಾಸಭಾ ರಾಜ್ಯಾಧ್ಯಕ್ಷ ಸ್ಥಾನಕ್ಕೆ ನಿವೃತ್ತ ಪೊಲೀಸ್ ಮಹಾ ನಿರ್ದೇಶಕ ಮಹಾದೇವ ಶಂಕರ ಬಿದರಿ ನಾಮಪತ್ರ ಸಲ್ಲಿಸಿದರು. ಈ ವೇಳೆ ಅರಣ್ಯ ಸಚಿವ ಈಶ್ವರ್ ಖಂಡ್ರೆ, ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯ ಹೆಚ್.ಎಂ.ರೇಣುಕ ಪ್ರಸನ್ನ, ರಾಜ್ಯ ಪ್ರಧಾನ ಕಾರ್ಯದರ್ಶಿ ನಟರಾಜ್ ಸಾಗರನಹಳ್ಳಿ, ತುಮಕೂರು ಜಿಲ್ಲಾಧ್ಯಕ್ಷ ಡಾ.ಪರಮೇಶ್, ಮಂಡ್ಯ ಜಿಲ್ಲಾಧ್ಯಕ್ಷ ಎಸ್.ಆನಂದ್, ಹಾವೇರಿ ಜಿಲ್ಲಾಧ್ಯಕ್ಷ ಕೋರಿಶೆಟ್ಟರ್, ಚಿತ್ರದುರ್ಗ ಜಿಲ್ಲಾಧ್ಯಕ್ಷ ಮಹಡಿ ಶಿವಕುಮಾರ್, ರಾಮನಗರ ಜಿಲ್ಲಾಧ್ಯಕ್ಷ ಯೋಗಾನಂದ್, ಬಾಲಚಂದ್ರ, ಗೌರೀಶ್ ಆರಾಧ್ಯ ಇನ್ನಿತರರು ಉಪಸ್ಥಿತರಿದ್ದರು.

ಪಿಎಸ್ಐ ಪರಶುರಾಮ್ ಸಾವಿನ ಪ್ರಕರಣದ ತನಿಖೆಗೆ ಆಗ್ರಹಿಸಿ ಪ್ರತಿಭಟನೆ



ಪಿಎಸ್ಐ ಪರಶುರಾಮ್ ಸಾವಿನ ಪ್ರಕರಣವನ್ನು ಉನ್ನತ ಮಟ್ಟದ ತನಿಖೆಗೆ ವಹಿಸುವಂತೆ ಆಗ್ರಹಿಸಿ ದಲಿತ ಸಂಘರ್ಷ ಸಮಿತಿಯುವರು ಮೈಸೂರಿನ ಪುರಭವನದ ಅಂಬೇಡ್ಕರ್ ಪ್ರತಿಮೆ ಮುಂದೆ ಪ್ರತಿಭಟನೆ ನಡೆಸಿದರು.

ಮೈಸೂರು, ಆ.6(ಬಿಎಲ್‌ಯು)– ಯಾದಗಿರಿ ಪೊಲೀಸ್ ಠಾಣೆಯ ಪಿಎಸ್ಐ ಪರಶುರಾಮ್ ಸಾವಿನ ಪ್ರಕರಣವನ್ನು ಉನ್ನತ ಮಟ್ಟದ ತನಿಖೆಗೆ ವಹಿಸಬೇಕೆಂದು ಆಗ್ರಹಿಸಿ ದಲಿತ ಸಂಘರ್ಷ ಸಮಿತಿಯವರು ಮೈಸೂರಿನ ಪುರಭವನದ ಅಂಬೇಡ್ಕರ್ ಪ್ರತಿಮೆ ಮುಂದೆ ಪ್ರತಿಭಟನೆ ನಡೆಸಿದರು.

ಶೋಷಿತ ಸಮುದಾಯದ ಜನರು ಕಷ್ಟಪಟ್ಟು ಉನ್ನತ ಸ್ಥಾನ ಪಡೆದಾಗ ಜಾತಿವಾದಿ ಜನಪ್ರತಿನಿಧಿಗಳು ಕಿರುಕುಳ ನೀಡುತ್ತಾರೆ. ಇದಕ್ಕೆ ಪರಶುರಾಮ್ ಸಾವಿನ ಪ್ರಕರಣವೇ ಸ್ಪಷ್ಟ ನಿದರ್ಶನ ಎಂದು ಆರೋಪಿಸಿದರು. ಪರಶುರಾಮ್ ಅವರ ಕುಟುಂಬಕ್ಕೆ ಸರ್ಕಾರ 50 ಲಕ್ಷ ಪರಿಹಾರ ನೀಡಬೇಕು, ಅವರ ಪತ್ನಿಗೆ ಸರ್ಕಾರಿ ಉದ್ಯೋಗ ನೀಡಬೇಕು, ಪರಶುರಾಮ್ ಸಾವಿಗೆ ಕಾರಣರಾದ ಶಾಸಕ ಚೆನ್ನಾರೆಡ್ಡಿ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು, ಇನ್ನು ಮುಂದೆ ಎಲ್ಲಾ ಇಲಾಖೆಗಳಲ್ಲೂ ಕೌನ್ಸಿಲಿಂಗ್ ಮೂಲಕವೇ ವರ್ಗಾವಣೆ ಮಾಡಬೇಕು. ರಾಜಕಾರಣಿಗಳ ಹಸ್ತಕ್ಷೇಪ ತಡೆಗಟ್ಟುವ ಕಾಯ್ದೆ ರೂಪಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು. ಸಮಿತಿ ಸಂಚಾಲಕ ಚೋರನಹಳ್ಳಿ ಶಿವಣ್ಣ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಹಲವರು ಭಾಗಿಯಾಗಿದ್ದರು.

ಆಂಗ್ಲ ಭಾಷಾ ಅತಿಥಿ ಶಿಕ್ಷಕರ ನೇಮಕಕ್ಕೆ ಅರ್ಜಿ

ಮೈಸೂರು, ಆ.6–ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಡಿ ವಿವಿಧ ತಾಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 21 ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳಿಗೆ 2024–25ನೇ ಸಾಲಿಗೆ ತಾತ್ಕಾಲಿಕವಾಗಿ ಗೌರವಧನದ ಆಧಾರದ ಮೇಲೆ ಇಂಗ್ಲೀಷ್ ಭಾಷೆ ಬೋಧಿಸುವ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. ಇಂಗ್ಲೀಷ್ ಐಚ್ಛಿಕ ವಿಷಯದಲ್ಲಿ ಪದವಿ ಮತ್ತು ಬಿ.ಇಡಿ ವಿದ್ಯಾರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಯಲ್ಲಿ ತಮ್ಮ ವಿದ್ಯಾರ್ಹತೆ ಹಾಗೂ ಸ್ವವಿವರಗಳೊಂದಿಗೆ ಪಡುವಾರಹಳ್ಳಿಯ ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆಯ ಯೋಜನಾ ಸಮನ್ವಯಾಧಿಕಾರಿಗಳ ಕಚೇರಿಗೆ ಆ.16ರೊಳಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಪಡುವಾರಹಳ್ಳಿಯ ಡಾ.ಬಾಬು ಜಗಜೀವನ ರಾಮ್ ಭವನದ ಯೋಜನಾ ಸಮನ್ವಯಾಧಿಕಾರಿಗಳ ಕಚೇರಿಯ ದೂ.ಸಂ: 9591122826 ಅನ್ನು ಸಂಪರ್ಕಿಸಬಹುದು ಎಂದು ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆಯ ಯೋಜನಾ ಸಮನ್ವಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅನಧಿಕೃತ ಕಾಲೇಜು: ವಿದ್ಯಾರ್ಥಿಗಳು ಬೇರೆ ಕಾಲೇಜಿಗೆ ದಾಖಲಾಗುವಂತೆ ಸೂಚನೆ

ಮೈಸೂರು, ಆ.6–ಅಪಾರಾ ಎಜುಕೇಷನ್ ಮತ್ತು ಚಾರಿಟಬಲ್ ಟ್ರಸ್ಟ್‌ನವರು ಸರ್ಕಾರ, ನಿರ್ದೇಶನಾಲಯದಿಂದ ಅನುಮತಿಯನ್ನು ಪಡೆಯದೇ ಹುಣಸೂರು ತಾಲೂಕಿನ ಅಂಕನಹಳ್ಳಿಯಲ್ಲಿ (ವಾಗ್ದೇವಿ ಪದವಿಪೂರ್ವ ಕಾಲೇಜು) ಅನಧಿಕೃತವಾಗಿ ಪದವಿಪೂರ್ವ ಕಾಲೇಜನ್ನು ಪ್ರಾರಂಭಿಸಿ, ಅನಧಿಕೃತವಾಗಿ ವಿದ್ಯಾರ್ಥಿಗಳನ್ನು ಸಹ ದಾಖಲಾತಿ ಮಾಡಿಕೊಂಡಿರುವುದು ಕಂಡು ಬಂದಿರುತ್ತದೆ.

ಸದರಿ ಪದವಿಪೂರ್ವ ಕಾಲೇಜಿಗೆ ಇಲಾಖೆಯಿಂದ ಯಾವುದೇ ರೀತಿಯ ಅನುಮತಿ ಇಲ್ಲದಿರುವುದರಿಂದ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಕೂಡಲೇ ಸಮೀಪದ ಬೇರೆ ಕಾಲೇಜಿಗೆ ದಾಖಲಾತಿಯಾಗುವಂತೆ ತಿಳಿಸಲಾಗಿದ್ದು, ಪೋಷಕರು ಇದರ ಬಗ್ಗೆ ವೈಯಕ್ತಿಕ ಗಮನಹರಿಸಬೇಕು ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದಿನಿಂದ ರೈತರಿಗೆ ಮೂರು ದಿನ ತರಬೇತಿ

ಮೈಸೂರು,ಆ.6–ನಾಗನಹಳ್ಳಿಯ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಆ.7ರಿಂದ 9ರವರೆಗೆ 'ಅರಿಶಿನ ಬೆಳೆಯಲ್ಲಿ ಸೂಕ್ಷ್ಮ ನೀರಾವರಿ, ರಸಾವರಿ ತಾಂತ್ರಿಕತೆಗಳು ಮತ್ತು ಆಧುನಿಕ ಬೇಸಾಯ ಪದ್ಧತಿಗಳ ಅಳವಡಿಕೆ ಮೂಲಕ ಅಧಿಕ ಲಾಭ' ಎಂಬ ವಿಷಯದ ಬಗ್ಗೆ ರೈತ, ರೈತ ಮಹಿಳೆಯರಿಗೆ ಮೂರು ದಿನಗಳ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಊಟ ಮತ್ತು ವಸತಿ ವ್ಯವಸ್ಥೆ ಒದಗಿಸಲಾಗುವುದು. ಆಸಕ್ತ ರೈತ, ರೈತ ಮಹಿಳೆಯರು ತಮ್ಮ ಹೆಸರನ್ನು ತರಬೇತಿ ಕೇಂದ್ರದ ಕೃಷಿ ಅಧಿಕಾರಿ ದೂ.ಸಂ: 8277933154ಗೆ ಕರೆಮಾಡಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಮೈಸೂರು ಜಿಲ್ಲೆಯ 40 ರೈತ, ರೈತಮಹಿಳೆಯರಿಗೆ ಮಾತ್ರ ಅವಕಾಶವಿದ್ದು, ಮೊದಲು ನೋಂದಣಿ ಮಾಡಿದವರಿಗೆ ಆದ್ಯತೆ ನೀಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಇಂದು ಮೈಸೂರಲ್ಲಿ ಸಿಎಂ ಸಿದ್ದು ಪರ 'ಕರ್ನಾಟಕದ ಅಪರೂಪದ ಜನನಾಯಕನಿಗೆ ಜನಪರತೆಯೇ ದ್ವೇಷವಾಯಿತೆ' ವಿಚಾರ ಸಂಕಿರಣ

ಮೈಸೂರು, ಆ.6(ಜಿಎ)– ಜನಸ್ಪಂದನ ಟ್ರಸ್ಟ್ ವತಿಯಿಂದ ಆ.7ರಂದು ಸಂಜೆ 4.30ಕ್ಕೆ ಜೆ.ಪಿ.ನಗರ ಮುಖ್ಯ ರಸ್ತೆಯಲ್ಲಿರುವ ಮೈ ಬಿಲ್ಡ್ ಸಭಾಂಗಣದಲ್ಲಿ 'ಕರ್ನಾಟಕದ ಅಪರೂಪದ ಜನನಾಯಕನಿಗೆ ಜನಪರತೆಯೇ ದ್ವೇಷವಾಯಿತೆ' ವಿಚಾರ ಸಂಕಿರಣ ಆಯೋಜಿಸಲಾಗಿದೆ ಎಂದು ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ತಿಳಿಸಿದರು.

ನಗರದ ಖಾಸಗಿ ಹೋಟೆಲ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜೀನಾಮೆ ನೀಡಬೇಕೆಂದು ಜೆಡಿಎಸ್ ಮತ್ತು ಬಿಜೆಪಿ ಪಾದಯಾತ್ರೆ ಮಾಡುತ್ತಿರುವುದನ್ನು ಖಂಡಿಸಿ ಈ ವಿಚಾರ ಸಂಕಿರಣ ಆಯೋಜಿಸಲಾಗಿದೆ ಎಂದರು.

ಅಂದಿನ ಕಾರ್ಯಕ್ರಮವನ್ನು ಎಂಎಲ್‌ಸಿ ಡಾ.ಯತೀಂದ್ರ ಉದ್ಘಾಟಿಸಲಿದ್ದಾರೆ. ಮುಖ್ಯ ಭಾಷಣಕಾರರಾಗಿ ಕಾರ್ಮಿಕ ಸಚಿವ ಸಂತೋಷ್ ಲಾಡ್, ಮಾಜಿ ಸಭಾಪತಿ ಬಿ.ಎಲ್.ಶಂಕರ್, ಮಾಜಿ ಎಂಎಲ್‌ಸಿ ರಮೇಶ್ ಬಾಬು ಮತ್ತು ಕೆಪಿಸಿಸಿ ವಕ್ತಾರ ನಿಕೇತ್ ರಾಜ್ ಮೌರ್ಯ ಆಗಮಿಸಲಿದ್ದಾರೆ. ತಾವು ಅಧ್ಯಕ್ಷತೆ ವಹಿಸಲಿರುವುದಾಗಿ ತಿಳಿಸಿದರು.

ಬಿಜೆಪಿ, ಜೆಡಿಎಸ್‌ನಿಂದ ಪ್ರಾಯಶ್ಚಿತ್ತದ ಪಾದಯಾತ್ರೆ: ಎಂಕೆಎಸ್



ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಾತನಾಡಿದರು

> ಸಿದ್ದರಾಮಯ್ಯ ಅವರ ಮೇಲೆ ಆರೋಪ ಮಾಡಿ ಈ ಬಿಜೆಪಿ–ಜೆಡಿಎಸ್‌ನವರೇ ಬೆತ್ತಲಾಗುತ್ತಿದ್ದಾರೆ. ಇವರು ಎಷ್ಟು ಪ್ರಾಮಾಣಿಕರು ಎಂಬುದನ್ನ ಆತ್ಮಾವಲೋಕನ ಮಾಡಿಕೊಳ್ಳಬೇಕಿದೆ. ಇವರು ಏನೇ ಪ್ರಯತ್ನ ಮಾಡಿದರೂ ಪ್ರಕರಣದಲ್ಲಿ ಸಿದ್ದರಾಮಯ್ಯ ಅವರ ಪಾತ್ರ ಏನೂ ಇಲ್ಲ
> –ಎಂ.ಕೆ.ಸೋಮಶೇಖರ್

ಬಿಜೆಪಿ ಮತ್ತು ಜೆಡಿಎಸ್‌ನವರು ನಡೆಸುತ್ತಿರುವ ಪಾದಯಾತ್ರೆ ಅವರ ತಪ್ಪಿನ ಪ್ರಾಯಶ್ಚಿತ್ತಕ್ಕಾಗಿ ಮಾಡುತ್ತಿರುವ ಪಾದಯಾತ್ರೆ. ಪಾದಯಾತ್ರೆಯಲ್ಲಿ ಭಾಗವಹಿಸಿರುವ ಘಟಾನುಘಟಿ ನಾಯಕರು ತಮ್ಮ ಬೇನಾಮಿ ಆಸ್ತಿ ಘೋಷಣೆ ಮಾಡಲಿ. ತಮ್ಮ ಕಾಲದಲ್ಲಿ ಮಾಡಿದ ಭ್ರಷ್ಟಾಚಾರಕ್ಕೆ ಪ್ರಾಯಶ್ಚಿತ್ತವಾದ ಪಾದಯಾತ್ರೆ ಇವರು ಮಾಡುತ್ತಿರುವ ಪಾದಯಾತ್ರೆ ಬರಿ ಡೋಂಗಿ ಪಾದಯಾತ್ರೆ, ಅಲ್ಲಿ ಭಾಗವಹಿಸುವ ಜನ ಸ್ಥಳೀಯರಲ್ಲ. ಬೇರೆ ಎಲ್ಲಿಂದಲೋ ಹಣ ಕೊಟ್ಟು ಕರೆತಂದು ಪಾದಯಾತ್ರೆಯಲ್ಲಿ ಸೇರಿದ್ದಾರೆ. ಇದೊಂದು ವಿಜಯೇಂದ್ರ, ಹೆಚ್.ಡಿಕೆ ಅವರ ಪ್ರಾಯೋಜಕತ್ವದ ಪಾದಯಾತ್ರೆ ಎಂದು ಟೀಕಿಸಿದರು. ಸಿದ್ದರಾಮಯ್ಯ ಅವರು ಒಬ್ಬ ಪ್ರಾಮಾಣಿಕ ಮುಖ್ಯಮಂತ್ರಿ. ಅವರು ಒಬ್ಬ ಪಾರದರ್ಶಕ ಆಡಳಿತ ಕೊಡುತ್ತಿರುವ ಸಿಎಂ. ಆದರೆ ವಿನಾಕಾರಣ ಸಿಎಂ ಸಿದ್ದರಾಮಯ್ಯನವರ ಮೇಲೆ ಆಪಾದನೆ ಮಾಡುತ್ತಿದ್ದಾರೆ. ಪಾದಯಾತ್ರೆಯಲ್ಲಿ ಭಾಗವಹಿಸಿರುವ ಘಟಾನುಘಟಿ ನಾಯಕರು ತಮ್ಮ ಬೇನಾಮಿ ಆಸ್ತಿಗಳನ್ನು ಘೋಷಣೆ ಮಾಡಲಿ. ಸಿಎಂ ಜನಪ್ರಿಯತೆ ನೋಡಿ ಸಹಿಸಿಕೊಳ್ಳಲಾಗದೆ ಈ ರೀತಿ ಆಪಾದನೆ ಮಾಡುತ್ತಿದ್ದಾರೆ ಎಂದರು.

ಸಿಎಂ ಸಿದ್ದರಾಮಯ್ಯ ಅವರನ್ನು ಕೆಳಗಿಳಿಸುವ ಪ್ರಯತ್ನ ಮಾಡುತ್ತಿದ್ದಾರೆ. ಅದು ಅವರ ವ್ಯರ್ಥ ಪ್ರಯತ್ನವೇ ಹೊರತು ಅದು ಯಾವುದೇ ಕಾರಣಕ್ಕೂ ಯಶಸ್ವಿ ಆಗಲ್ಲ. ಅಲ್ಲಿ ತಪ್ಪು ನಡೆದಿದ್ದರೆ ತಾನೇ ಸಿಎಂ ರಾಜೀನಾಮೆ ಕೊಡೋಕೆ. ನಿವೇಶನ ಹಂಚಿಕೆ ಆಗಿರುವುದು ಬಿಜೆಪಿ ಅವರ ಕಾಲದಲ್ಲೇ. ಸಿದ್ದರಾಮಯ್ಯ ಅವರ ಕುಟುಂಬ ನಮಗೆ ನಿವೇಶನ ಕೊಡಿ ಅಂತ ಎಲ್ಲೂ ಕೇಳಿಲ್ಲ. ಅವರು ಎಲ್ಲೂ ತಪ್ಪು ಮಾಡಿಲ್ಲ. ಸಿದ್ದರಾಮಯ್ಯ ಅವರ ಏಳಿಗೆ ಸಹಿಸಲಾಗದೆ ಈ ರೀತಿ ಮಾಡುತ್ತಿದ್ದಾರೆ. ಇದರಿಂದ ಸಿಎಂ ಕುರ್ಚಿಗೆ ಯಾವುದೇ ಧಕ್ಕೆ ಆಗಲ್ಲ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮೈಲ್ಯಾಕ್ ಮಾಜಿ ಅಧ್ಯಕ್ಷ ಹೆಚ್.ಎ.ವೆಂಕಟೇಶ್ ಉಪಸ್ಥಿತರಿದ್ದರು.


ವಿಜಯನಗರ–ಹೆಬ್ಬಾಳು ಬಸವ ಸಮಿತಿಯಿಂದ ಅಭಿನಂದನೆ



ಮೈಸೂರಿನ ವಿಜಯನಗರ–ಹೆಬ್ಬಾಳು ಬಸವ ಸಮಿತಿ ವತಿಯಿಂದ ಮೈಸೂರು ಜಿಲ್ಲಾ ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷ ಹಿನಕಲ್ ಹೆಚ್.ವಿ.ಬಸವರಾಜು ಹಾಗೂ ನೂತನ ನಿರ್ದೇಶಕರಿಗೆ ಅಭಿನಂದಿಸಲಾಯಿತು. ಬರಡನಪುರ ಮಠಾಧ್ಯಕ್ಷರಾದ ಶ್ರೀ ಪರಶಿವಮೂರ್ತಿ ಸ್ವಾಮೀಜಿ ಸಾನ್ನಿಧ್ಯದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಮುಖಂಡರಾದ ಟಿ.ಎಸ್.ಲೋಕೇಶ್, ಖಂಡೇಶ್ ಕಾಶಿ ವಿಶ್ವನಾಥ ಶೆಟ್ಟಿ, ಹಡಜನ ಟಿ.ಲಿಂಗರಾಜು, ದೇವಲಾಪುರ ನಟರಾಜು, ಈರಪ್ಪನಕೊಪ್ಪಲು ಕಾವಿಬಸಪ್ಪ, ಮಹೇಶ್, ಮಹದೇವಪ್ಪ, ಚೆನ್ನಬಸಪ್ಪ, ಜಯಪುರ ಹೋಬಳಿ ವಿಕಾಸ ವೇದಿಕೆ ಅಧ್ಯಕ್ಷ ದಾರಿಪುರ ಡಿ.ಚಂದ್ರಶೇಖರ್ ಮತ್ತಿತರರಿದ್ದರು.

ಇಂದು, ನಾಳೆ ವಿದ್ಯುತ್ ವ್ಯತ್ಯಯ

ಮೈಸೂರು, ಆ.6–ಆ.7ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಜೆ.ಪಿ.ನಗರ ಫೀಡರ್‌ನಲ್ಲಿ ತುರ್ತು ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದ್ದು, ಈ ಸಂಬಂಧ ಜೆ.ಪಿ ನಗರ ಎ.ಬಿ.ಸಿ.ಡಿ, ಇ ಮತ್ತು ಎಫ್ ಬ್ಲಾಕ್, ನಾಚನಹಳ್ಳಿ, ಓಂಕಾರ್ ಬಡಾವಣೆ, ಬಂಡಿಪಾಳ್ಯ, ನವೋದಯ ಬಡಾವಣೆ, ಜನತಾ ಬಡಾವಣೆ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ನಿಲುಗಡೆಯಾಗಲಿದೆ. ಹಾಗೆಯೇ ಆ.8ರಂದು ಬೆಳಗ್ಗೆ 10 ರಿಂದ ಸಂಜೆ 6ರವರೆಗೆ ವಿದ್ಯಾರಣ್ಯಪುರಂ ಫೀಡರ್‌ನಲ್ಲಿ ತುರ್ತು ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದ್ದು, ಈ ಸಂಬಂಧ ವೀವರ್ಸ್ ಕಾಲೋನಿ, ಚಾಮುಂಡಿಪುರಂ ವೃತ್ತ, ಸುಬ್ರಮಣ್ಯ ಸ್ವಾಮಿ ದೇವಸ್ಥಾನದ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ನಿಲುಗಡೆಯಾಗಲಿದೆ.



ಬಿಜೆಪಿ–ಜೆಡಿಎಸ್ ಪಾದಯಾತ್ರೆ



ಕಾಂಗ್ರೆಸ್ ಸರ್ಕಾರದ ವಿರುದ್ಧ ನಾಲ್ಕನೇ ದಿನದ ಮೈಸೂರು ಚಲೋ ಪಾದಯಾತ್ರೆಯಲ್ಲಿ ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಅವರೊಂದಿಗೆ ಬಿಜೆಪಿ ಮೈಸೂರು ಮಹಾನಗರ ಸಹ ವಕ್ತಾರ ಕೆ.ದೇವರಾಜ್, ಓಬಿಸಿ ಉಪಾಧ್ಯಕ್ಷ ಜಗದೀಶ್, ಕೇಬಲ್ ಸೋಮು, ವೆಡಿವೆಲ್, ಶಿವ ಮುರಳಿ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು

ಆ.20ಕ್ಕೆ ಡಿ.ದೇವರಾಜ ಅರಸು ಜನ್ಮದಿನಾಚರಣೆ



ಮೈಸೂರು ಡಿಸಿ ಕಚೇರಿ ಸಭಾಂಗಣದಲ್ಲಿ ಎಡಿಸಿ ಡಾ.ಶಿವರಾಜು ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು.

ಮೈಸೂರು,ಆ.6–ಮಾಜಿ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ ಅರಸು ಅವರ 109ನೇ ಜನ್ಮದಿನಾಚರಣೆಯನ್ನು ಆ.20ರಂದು ಬೆಳಗ್ಗೆ 11.30ಕ್ಕೆ ಕಲಾಮಂದಿರದಲ್ಲಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಮಾಹಿತಿ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆ.20ರಂದು ಸರ್ಕಾರಿ ಶಾಲಾ ಕಾಲೇಜುಗಳು ಸೇರಿದಂತೆ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಹಾಗೂ ಆಶ್ರಮ ಶಾಲೆಗಳು ಕಡ್ಡಾಯವಾಗಿ ಜಯಂತಿಯನ್ನು ಆಚರಿಸಬೇಕು ಎಂದು ಹೇಳಿದರು.


ಅರಸು ಜನ್ಮದಿನಾಚರಣೆ ಅಂಗವಾಗಿ 2023–24ನೇ ಸಾಲಿನ ಎಸ್‌ಎಸ್‌ಎಲ್‌ಸಿ, ಪಿಯುಸಿ ಹಾಗೂ ಸ್ನಾತಕೋತ್ತರ ಪದವಿಗಳಲ್ಲಿ ಅತೀ ಹೆಚ್ಚು ಅಂಕ ಪಡೆದ ನಿಲಯಾರ್ಥಿಗಳನ್ನು ಗುರುತಿಸಿ ಸನ್ಮಾನಿಸುವುದು. ವಿದ್ಯಾರ್ಥಿನಿಲಯಗಳಲ್ಲಿ ರಸಪ್ರಶ್ನೆ, ಪ್ರಬಂಧ, ಕ್ರೀಡಾ ಚಟುವಟಿಕೆ ಹಾಗೂ ಇನ್ನಿತರ ಕಾರ್ಯಕ್ರಮಗಳನ್ನು ಆಯೋಜಿಸಿ ಗೆದ್ದ ಸ್ಪರ್ಧಿಗಳಿಗೆ ಬಹುಮಾನ ವಿತರಿಸಬೇಕು ಎಂದು ಸೂಚಿಸಿದರು.

ಸರ್ಕಾರದ ಶಿಷ್ಟಾಚಾರದಂತೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಈ ಸಂಬಂಧ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಮಾಡಲು ಅಗತ್ಯ ಕ್ರಮ ವಹಿಸಲಾಗುವುದು. ದಿನಾಚರಣೆ ನಡೆಯುವ ಸ್ಥಳದ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ, ಶಾಮಿಯಾನ ವ್ಯವಸ್ಥೆ ಮಾಡಲು ಕನ್ನಡ– ಸಂಸ್ಕೃತಿ ಇಲಾಖೆ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾಧಿಕಾರಿ ರಾಘವೇಂದ್ರ ಮಾತನಾಡಿ, ಕಾರ್ಯಕ್ರಮದಲ್ಲಿ ಕಲಾತಂಡಗಳಿಂದ ಗೀತ ಗಾಯನವನ್ನು ಏರ್ಪಡಿಸಲಾಗುವುದು. ಆಹ್ವಾನ ಪತ್ರಿಕೆಯ ಮುದ್ರಣ ಮಾಡಿ ಸರ್ಕಾರದ ಶಿಷ್ಟಾಚಾರದಂತೆ ಜನಪ್ರತಿನಿಧಿಗಳನ್ನು ಆಹ್ವಾನಿಸಲಾಗುವುದು. ಈ ಸಂಬಂಧ ಸಮಿತಿಯವರು ಸಹಕರಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಕನ್ನಡ–ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಂ.ಡಿ.ಸುದರ್ಶನ್ ಸೇರಿದಂತೆ ಇನ್ನಿತರ ಸಂಘ–ಸಂಸ್ಥೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಥ್ರೋಬಾಲ್ ಪಂದ್ಯಾವಳಿಗೆ ತಂಡಗಳ ಆಹ್ವಾನ



ಮೈಸೂರು, ಆ.6–ಮೈಸೂರು ಜಿಲ್ಲಾ ಅಮೆಚೂರ್ ಥ್ರೋಬಾಲ್ ಸಂಸ್ಥೆ ವತಿಯಿಂದ ವಿಜಯನಗರ ಒಂದನೇ ಹಂತದಲ್ಲಿನ ಮಾನಸ ಸರೋವರ ಪುಷ್ಕರಣಿ ವಿದ್ಯಾಶ್ರಮ ಶಾಲೆ ಆವರಣದಲ್ಲಿ ಆ.18ರಂದು ಜಿಲ್ಲಾ ಮಟ್ಟದ ಪ್ರೌಢಶಾಲಾ ಬಾಲಕ ಮತ್ತು ಬಾಲಕಿಯರ ಥ್ರೋಬಾಲ್ ಪಂದ್ಯಾವಳಿಯನ್ನು ಏರ್ಪಡಿಸಲಾಗಿದೆ. ಉಚಿತ ಪ್ರವೇಶದೊಂದಿಗೆ ಕ್ರೀಡಾಪಟುಗಳಿಗೆ ಮಧ್ಯಾಹ್ನ ಉಪಾಹಾರ ವ್ಯವಸ್ಥೆ ಇರಲಿದೆ. ಪಂದ್ಯಾವಳಿಯಲ್ಲಿ ಬಾಲಕ ಮತ್ತು ಬಾಲಕಿಯರ ವಿಭಾಗಗಳಿಗೆ ಪ್ರತ್ಯೇಕ ಬಹುಮಾನ ಮತ್ತು ಟ್ರೋಫಿ ನೀಡಲಾಗುವುದು. ಆ.13ರೊಳಗೆ ತಂಡಗಳು ನೋಂದಣಿ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ಸಂಸ್ಥೆಯ ಕಾರ್ಯದರ್ಶಿ ಎನ್.ಕಾಶೀನಾಥ್(9448100093) ಅಥವಾ ಪಿ.ಮಹದೇವು (9743730873) ಅವರನ್ನು ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಕೆ.ಹರೀಶ್‌ಗೌಡರಿಗೆ ಹುಟ್ಟುಹಬ್ಬದ ಶುಭಾಶಯ



ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ಅವರಿಗೆ ಶ್ರೀ ವಿನಾಯಕ ಎಂಟರ್‌ಪ್ರೈಸಸ್ ಮಾಲೀಕ ಸುಚಿತ್‌ಕುಮಾರ್, ಶ್ರೀಕೃಷ್ಣ ಎಂಟರ್‌ಪ್ರೈಸಸ್ ಮಾಲೀಕ ಕೆ.ಪ್ರದೀಪ್ ಸಿಂಗ್ ಸದರನ್ ಸ್ಟಾರ್ ಹೋಟೆಲ್‌ನಲ್ಲಿ ಹುಟ್ಟುಹಬ್ಬದ ಶುಭ ಕೋರಿದರು. ಈ ವೇಳೆ ಶ್ರೀ ಚಾಮುಂಡೇಶ್ವರಿ ಪ್ಲೈವುಡ್ ಮಾಲೀಕ ಮಹದೇವ್, ದೇವರಾಜ ಮಾರ್ಕೆಟ್ ಯುವ ಬ್ರಿಗೇಡ್ ಅಧ್ಯಕ್ಷ ಬಿ.ಸಂದೀಪ್, ಮುಖಂಡರಾದ ಸಿರಿ, ಶಿವು ಇದ್ದರು.

ಮೈಸೂರಲ್ಲಿ ಸಚಿವ ಪರಮೇಶ್ವರ್ ಹುಟ್ಟುಹಬ್ಬ ಆಚರಣೆ



ಅಖಿಲ ಕರ್ನಾಟಕ ಡಾ.ಜಿ.ಪರಮೇಶ್ವರ ಅಭಿಮಾನಿಗಳ ಯುವ ಸೈನ್ಯ, ಮೈಸೂರು ಜಿಲ್ಲಾ ಘಟಕದ ವತಿಯಿಂದ ಡಾ.ಜಿ.ಪರಮೇಶ್ವರ್ ಅವರ ಜನ್ಮದಿನವನ್ನು ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ಸಾರ್ವಜನಿಕರಿಗೆ ಸಿಹಿ ವಿತರಿಸುವ ಮೂಲಕ ಆಚರಿಸಲಾಯಿತು. ಈ ವೇಳೆ ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಕೆಪಿಸಿಸಿ ವಕ್ತಾರ ಹೆಚ್.ಎ.ವೆಂಕಟೇಶ್, ಅಭಿಮಾನಿ ಸಂಘದ ಅಧ್ಯಕ್ಷ ಸಿ.ಮಂಜುನಾಥ್, ಎಂ.ಮಣಿಕಂಠ, ಜ್ಞಾನೇಶ್, ಪ್ರಕಾಶ್, ನಿಂಗು, ಮಹೇಂದ್ರ, ರೇವಣ್ಣ, ಕೋಟೆ ಮಂಜು, ಸುಕುಮಾರ್, ನೇರಳೆ ಮಂಜು, ಮಧು ಸಿಂಗಾರಿಪುರ, ಹರೀಶ್, ಲೋಕೇಶ್ ಮತ್ತಿತರರು ಉಪಸ್ಥಿತರಿದ್ದರು.

ದೇಶ - ವಿದೇಶ

ಡ್ರಿಂಕ್ & ಡ್ರೈವ್: ಅಮೆರಿಕದಲ್ಲಿ ಸಾವು ವಿಶ್ವದಲ್ಲೇ ಹೆಚ್ಚು!



ವಾಷಿಂಗ್‌ಟನ್: ಮದ್ಯಪಾನ ಮಾಡಿ ವಾಹನ ಚಾಲನೆ ಮಾಡಬೇಡಿ! ಈ ನಿಯಮ ಎಲ್ಲ ದೇಶಗಳಲ್ಲೂ ಇದೆ. ಆದರೆ, ಈ ನಿಯಮವನ್ನು ಉಲ್ಲಂಘಿಸುವವರ ಸಂಖ್ಯೆಯೇ ಹೆಚ್ಚು. ಅದರಲ್ಲೂ ಮದ್ಯಪಾನದ ಮಿತಿ ಕೂಡ ಒಂದೊಂದು ದೇಶದಲ್ಲಿ ಒಂದೊಂದು ರೀತಿ ಇದೆ. ಭಾರತದಲ್ಲಿ ರಕ್ತದಲ್ಲಿನ ಆಲ್ಕೋಹಾಲ್ ಮಿತಿ (Blood Alcohol Content) ಶೇ.0.03 ಇರಬೇಕು. ಆದರೆ ಬಹುತೇಕ ರಾಷ್ಟ್ರಗಳಲ್ಲಿ ಈ ಮಿತಿ ಶೇ.0.05ಕ್ಕೆ ಇದೆ. ಅದರಲ್ಲೂ ಅಮೆರಿಕ ದೇಶದಲ್ಲಿ ಬಿಎಸಿ ಮಿತಿ ಶೇ.0.08ರಷ್ಟಿದೆ! ವಿಶ್ವದಲ್ಲೇ ಅತಿ ಹೆಚ್ಚು ಬಿಎಸಿ ಮಿತಿ ಹೊಂದಿರುವ ಕಾರಣಕ್ಕೆ ಅಮೆರಿಕದಲ್ಲಿ ಮದ್ಯ ಸೇವನೆ ಮಾಡಿ ವಾಹನ ಚಲಾಯಿಸಿ ಮೃತಪಡುವವರ ಸಂಖ್ಯೆಯೂ ಹೆಚ್ಚಾಗಿದೆ! ಅಮೆರಿಕ ದೇಶಾದ್ಯಂತ ಮದ್ಯ ಸೇವಿಸಿ ವಾಹನ ಚಾಲನೆ ಮಾಡಿ ಪ್ರತಿ ವರ್ಷ 13,500 ಮಂದಿ ಸಾವನ್ನಪ್ಪುತ್ತಿದ್ದಾರೆ! ಇದು ಕೇವಲ ಸರಾಸರಿ ಮಾತ್ರ! ಹಾಗೆ ನೋಡಿದರೆ ಭಾರತ ಸೇರಿದಂತೆ ವಿಶ್ವದ ಶೇ.54ರಷ್ಟು ದೇಶಗಳಲ್ಲಿ ಕಾನೂನು ತುಂಬಾನೇ ಬಿಗಿಯಾಗಿದೆ.

ವ್ಯಕ್ತಿಯನ್ನು ಕಚ್ಚಿದ ಮರುಕ್ಷಣವೇ ಕಾಳಿಂಗಸರ್ಪ ಸಾವು



ಮಧ್ಯಪ್ರದೇಶ: ಭಾರತದ ಅತ್ಯಂತ ಅಪಾಯಕಾರಿ ಹಾವೆಂದರೆ ಅದು ಕಾಳಿಂಗಸರ್ಪ. ಆದರೆ ಈ ಹಾವಿಗಿಂತ ಮನುಷ್ಯನೇ ಹೆಚ್ಚು ವಿಷಯಕಾರಿಯೇ ಎನ್ನುವ ಪ್ರಶ್ನೆ ಕಾಡಲಾರಂಭಿಸಿದೆ. ಮಧ್ಯಪ್ರದೇಶದಲ್ಲಿ ವ್ಯಕ್ತಿಯನ್ನು ಕಚ್ಚಿದ ಮರುಕ್ಷಣವೇ ಕಾಳಿಂಗಸರ್ಪ ಸಾವನ್ನಪ್ಪಿರುವ ಘಟನೆ ವರದಿಯಾಗಿದೆ.

ಸಾಗರ–ಖುರೈ ರಸ್ತೆಯ ನಾರಾಯಣಾವಳಿಯ ಮುಖ್ಯ ರಸ್ತೆಯ ತಡೆಗೋಡೆಯ ಬಳಿ ಕಾಳಿಂಗಸರ್ಪ ಕಾಣಿಸಿಕೊಂಡಿದೆ. ಹಾವು ಹಿಡಿಯುವ ಚಂದ್ರಕುಮಾರ್ ಅಹಿರ್ವಾರ್ಗೆ ಸ್ಥಳಕ್ಕಾಗಮಿಸಿ ಹಾವನ್ನು ಹಿಡಿದರು. ಆದರೆ ರಕ್ಷಣೆ ಸಂದರ್ಭದಲ್ಲಿ ಕಾಳಿಂಗಸರ್ಪ ಅವರ ಮೇಲೆ ದಾಳಿ ಮಾಡಿತು ಮತ್ತು ಅವರ 2 ಕೈಗಳ ಹೆಬ್ಬೆರಳನ್ನು ಕಚ್ಚಿದೆ. ಯುವಕನನ್ನು ಕೂಡಲೇ ಆಸ್ಪತ್ರೆಗೆ ದಾಖಲಿಸಲಾಯಿತು. ಹಾವು ಕಚ್ಚಿದ ಬಳಿಕ ಆ ವ್ಯಕ್ತಿ ಆರೋಗ್ಯವಾಗಿಯೇ ಇದ್ದಾರೆ. ಆದರೆ ಹಾವು ಮೃತಪಟ್ಟಿದೆ. ಕಾಳಿಂಗಸರ್ಪ ಕಚ್ಚಿದರೆ ವ್ಯಕ್ತಿ ನೀರು ಕೇಳುವಷ್ಟರೊಳಗೆ ವಿಷವು ದೇಹದೊಳಗೆ ಏರುತ್ತದೆ. ಆದರೆ ಈಗ ಹಾವೇ ಸತ್ತಿರುವುದು ಅಚ್ಚರಿಯನ್ನುಂಟು ಮಾಡಿದೆ.

ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ವೀಸಾ ರದ್ದುಗೊಳಿಸಿದ ಅಮೆರಿಕಾ



ವಾಷಿಂಗ್ಟನ್: ಪ್ರಧಾನಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿ ಬಾಂಗ್ಲಾದೇಶದಿಂದ ಪಲಾಯನಗೊಂಡಿರುವ ಶೇಖ್ ಹಸೀನಾ ಕೆಲಕಾಲ ಇಂಗ್ಲೆಂಡ್‌ನಲ್ಲಿ ವಾಸ್ತವ್ಯ ಹೂಡಲು ನಿರ್ಧರಿಸಿದ್ದಾರೆ. ಆದರೆ, ಅವರಿಗೆ ಅಲ್ಲಿಗೆ ತೆರಳಲು ಇನ್ನೂ ಅನುಮತಿ ಸಿಗದ ಹಿನ್ನೆಲೆಯಲ್ಲಿ ಸದ್ಯಕ್ಕೆ ಭಾರತದ ದೆಹಲಿಯಲ್ಲಿ ಸುರಕ್ಷಿತ ಸ್ಥಳದಲ್ಲಿದ್ದಾರೆ. ಮೂಲಗಳ ಪ್ರಕಾರ ಯುಕೆ (ಇಂಗ್ಲೆಂಡ್) ಆಕೆಗೆ ಆಶ್ರಯ ನೀಡಲು ಸಿದ್ಧವಾಗಿಲ್ಲ. ಹೀಗಾಗಿ, ಶೇಖ್ ಹಸೀನಾ ಅವರ ಪರಿಸ್ಥಿತಿ ಅತಂತ್ರವಾಗಿದೆ. ಇನ್ನೊಂದೆಡೆ ಅಮೆರಿಕಾ ಶೇಖ್ ಹಸೀನಾ ಅವರ ವೀಸಾವನ್ನು ರದ್ದುಗೊಳಿಸುವ ಮೂಲಕ ಮತ್ತೊಂದು ಶಾಕ್ ನೀಡಿದೆ. ಬಾಂಗ್ಲಾದಿಂದ ಪರಾರಿಯಾಗಿರುವ ಶೇಖ್ ಹಸೀನಾ ಭಾರತದಲ್ಲೇ ಉಳಿಯಬೇಕಾದ ಅನಿವಾರ್ಯತೆ ಎದುರಾಗಬಹುದು. ಶೇಖ್ ಹಸೀನಾ ಪ್ರಸ್ತುತ ಭಾರತದಲ್ಲಿ ಸುರಕ್ಷಿತ ಮತ್ತು ರಹಸ್ಯ ಸ್ಥಳದಲ್ಲಿದ್ದಾರೆ. ಅವರಿಗೆ ಭಾರತದಲ್ಲಿ ಆಶ್ರಯ ನೀಡಿರುವ ಬಗ್ಗೆ ಈಗಾಗಲೇ ಮೋದಿ ಸರ್ಕಾರ ರಾಜ್ಯಸಭೆಯಲ್ಲಿ ಘೋಷಿಸಿದೆ. ಈ ಹಿಂದೆ 1975ರಲ್ಲಿ ಕೂಡ ಶೇಖ್ ಹಸೀನಾ ಆಗಿನ ಪ್ರಧಾನಿ ಇಂದಿರಾ ಗಾಂಧಿಯವರಿಂದ ದೆಹಲಿಯಲ್ಲಿ 6 ವರ್ಷಗಳ ಕಾಲ ಆಶ್ರಯ ಪಡೆದಿದ್ದರು.

ಹಣಕಾಸು ವಂಚನೆ ಆರೋಪ: ಪದ್ಮಶ್ರೀ ಪುರಸ್ಕೃತ ಸುಂದರ್ ಮೆನನ್ ಬಂಧನ



ತ್ರಿಶೂರ್: ಹಣಕಾಸು ವಂಚನೆ ಆರೋಪದಡಿ ಕೇರಳದ ಉದ್ಯಮಿ, ಪದ್ಮಶ್ರೀ ಪುರಸ್ಕೃತ ಸುಂದರ್ ಸಿ.ಮೆನನ್ ಅವರನ್ನು ಪೊಲೀಸರು ಬಂಧಿಸಿದ್ದಾರೆ.

ಮೆನನ್ ಅವರನ್ನು ಭಾನುವಾರ ಬಂಧಿಸಿ, ಸ್ಥಳೀಯ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿತ್ತು. ಬಳಿಕ ಜಿಲ್ಲಾ ಕಾರಾಗೃಹದಲ್ಲಿ ಇರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಎರಡು ಕಂಪನಿಗಳ ಹೆಸರಿನಲ್ಲಿ 62 ಜನರಿಂದ ಠೇವಣಿ ಸ್ವೀಕರಿಸಿ, ವಂಚಿಸಿದ ಪ್ರಕರಣಕ್ಕೆ ಸಂಬಂಧಿಸಿ ಮೆನನ್ ಅವರ ಮೇಲೆ ಪಶ್ಚಿಮ ಪೊಲೀಸ್ ಠಾಣೆಯಲ್ಲಿ 18 ಪ್ರಕರಣಗಳು ದಾಖಲಾಗಿದ್ದವು. ಬಳಿಕ ಪ್ರಕರಣವನ್ನು ಅಪರಾಧ ವಿಭಾಗಕ್ಕೆ ವರ್ಗಾಯಿಸಲಾಯಿತು ಎಂದು ಮಾಹಿತಿ ನೀಡಿದ್ದಾರೆ. ಮೆನನ್ ಅವರು ಜನರಿಂದ ಒಟ್ಟು 7.78 ಕೋಟಿ ಹಣ ಪಡೆದುಕೊಂಡಿದ್ದಾರೆ. ಆದರೆ ಯೋಜನೆಯ ಅವಧಿ ಮುಗಿದ ಬಳಿಕ ಹಣವನ್ನು ಮರುಪಾವತಿಸಿಲ್ಲ ಎಂಬ ಆರೋಪ ಕೇಳಿಬಂದಿದೆ. ರಿಸರ್ವ್ ಬ್ಯಾಂಕ್ ನಿಯಮಗಳನ್ನು ಉಲ್ಲಂಘಿಸಿರುವ ಮತ್ತು ಜನರಿಗೆ ವಂಚಿಸಿರುವ ಬಗ್ಗೆ ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಗಂಡ ಬೈದಿದ್ದಕ್ಕೆ ಮೂರನೇ ಮಹಡಿಯಿಂದ ಜಿಗಿದು ಪತ್ನಿ ಆತ್ಮಹತ್ಯೆ



ಇಂದೋರ್: ಗಂಡ–ಹೆಂಡತಿ ನಡುವೆ ಯಾವುದೋ ವಿಚಾರಕ್ಕೆ ಜಗಳ ಪ್ರಾರಂಭವಾಗಿ, ತಾರಕಕ್ಕೇರುತ್ತಿದ್ದಂತೆ ಹೆಂಡತಿ ಮೂರನೇ ಮಹಡಿಯಿಂದ ಜಿಗಿದು ಸಾವನ್ನಪ್ಪಿರುವ ಘಟನೆ ಮಧ್ಯಪ್ರದೇಶದ ಇಂದೋರ್‌ನಲ್ಲಿ ನಡೆದಿದೆ. 30 ವರ್ಷದ ಮಹಿಳೆಯೊಬ್ಬರು ತನ್ನ ಪತಿಯೊಂದಿಗೆ ಜಗಳವಾಡಿದ ನಂತರ ಮನೆಯ ಮೂರನೇ ಮಹಡಿಯಿಂದ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಘಟನೆಯನ್ನು ವ್ಯಕ್ತಿಯೊಬ್ಬರು ತಮ್ಮ ಮೊಬೈಲ್ ಫೋನ್ ಕ್ಯಾಮೆರಾದಲ್ಲಿ ಸೆರೆ ಹಿಡಿದಿದ್ದಾರೆ. ಸದ್ಯ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ವೈರಲ್ ಆಗಿರುವ ವಿಡಿಯೋದಲ್ಲಿ ಮಹಿಳೆ 3ನೇ ಮಹಡಿಯಿಂದ ಜಿಗಿದಿರುವುದು ಸೆರೆಯಾಗಿದೆ. ಎರಡು ಮಕ್ಕಳ ತಾಯಿಯಾಗಿರುವ ಅಂಗೂರಿ ತನ್ನ ಪತಿ ರಾಹುಲ್ ಜೊತೆ ಜಗಳವಾಡಿದ ನಂತರ ಲಾಸುಡಿಯಾ ಪೊಲೀಸ್ ಠಾಣೆ ವ್ಯಾಪ್ತಿಯ ಸಿಂಗಾಪುರ ಟೌನ್‌ಶಿಪ್‌ನಲ್ಲಿರುವ ಮನೆಯ ಮೂರನೇ ಮಹಡಿಯಲ್ಲಿರುವ ನೀರಿನ ಟ್ಯಾಂಕ್ ಮೇಲೆ ಏರಿದ್ದಾಳೆ ಎಂದು ಹೆಚ್ಚುವರಿ ಪೊಲೀಸ್ ಉಪ ಆಯುಕ್ತ ಅಮರೇಂದ್ರ ಸಿಂಗ್ ತಿಳಿಸಿದ್ದಾರೆ.

ಮೈಸೂರು ಮಿತ್ರ ಬುಧವಾರ 7 ಆಗಸ್ಟ್ 2024

ಸಕಾಲದಲ್ಲಿ ಚಿಕಿತ್ಸೆ ನೀಡಿ ಜೀವ ಉಳಿಸಿ

ಸಭೆಯಲ್ಲಿ ಆರೋಗ್ಯಾಧಿಕಾರಿಗಳಿಗೆ ಜಿಲ್ಲಾಧಿಕಾರಿ ವೆಂಕಟ್ ರಾಜಾ ಸೂಚನೆ

ಮಡಿಕೇರಿ, ಆ.6–ಗರ್ಭಿಣಿ ಮತ್ತು ಬಾಣಂತಿಯರಿಗೆ ಸಕಾಲದಲ್ಲಿ ಚಿಕಿತ್ಸೆ ನೀಡುವ ಮೂಲಕ ಶಿಶು ಮತ್ತು ತಾಯಿ ಮರಣ ತಡೆಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ಆರೋಗ್ಯಾಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಸಭೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಾರ್ಯಕ್ರಮಗಳ ಸಂಬಂಧ ಮಾಹಿತಿ ಪಡೆದು ಮಾತನಾಡಿದ ಅವರು, ಆಸ್ಪತ್ರೆಗೆ ಬರುವ ರೋಗಿಗಳನ್ನು ತಕ್ಷಣ ಆರೋಗ್ಯ ವಿಚಾರಿಸಿ ಸೂಕ್ತ ಚಿಕಿತ್ಸೆ ನೀಡಬೇಕು. ಯಾವುದೇ ಕಾರಣಕ್ಕೂ ಸತಾಯಿಸಬಾರದು. ಹೊರರೋಗಿಗಳು ಹೆಚ್ಚಿನ ಸಂಖ್ಯೆಯಲ್ಲಿ ಇದ್ದಲ್ಲಿ ಹೆಚ್ಚಿನ ಕೌಂಟರ್‌ಗಳನ್ನು ತೆರೆಯಬೇಕು. ಸೂಕ್ತ ಸ್ಪಂದನೆ ಅತೀ ಮುಖ್ಯ ಎಂದು ತಿಳಿಸಿದರು.

ಆರೋಗ್ಯ ಸೇವೆ ಪಡೆಯಲು ಮಾಹಿತಿ ಶಿಕ್ಷಣದ ಮೂಲಕ ಪ್ರತಿಯೊಬ್ಬರಿಗೂ ಹೆಚ್ಚಿನ ಜಾಗೃತಿ ಮೂಡಿಸಬೇಕು. ಹಾಡಿಗಳು ಸೇರಿದಂತೆ ಎಲ್ಲೆಡೆ ಆರೋಗ್ಯದ ಬಗ್ಗೆ ಹೆಚ್ಚಿನ ಮಾಹಿತಿ ನೀಡಬೇಕು ಎಂದು ಸಲಹೆ ನೀಡಿದರು.





ಮಡಿಕೇರಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಭಾಗವಹಿಸಿದ್ದ ಆರೋಗ್ಯಾಧಿಕಾರಿಗಳು.

ಎಲ್ಲರಿಗೂ ಆರೋಗ್ಯ ಸೌಲಭ್ಯಗಳು ತಲುಪಬೇಕು. ಸರ್ಕಾರದ ನಿರ್ದೇಶನಗಳನ್ನು ಪಾಲಿಸಬೇಕು. ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕೆ ಹೆಚ್ಚಿನ ಗಮನಹರಿಸ ಬೇಕು. ಕೋಪ್ಟಾ ಕಾಯ್ದೆ ಬಗ್ಗೆ ಮಾಹಿತಿ ಶಿಕ್ಷಣದ ಮೂಲಕ ಅರಿವು ಮೂಡಿಸಬೇಕು ಎಂದರು.

ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ. ಮಧುಸೂದನ್ ಮಾತನಾಡಿ, ಜಿಲ್ಲೆಯಲ್ಲಿ ಶೇ.100ರಷ್ಟು ಲಸಿಕಾ ಕಾರ್ಯಕ್ರಮ ಪ್ರಗತಿ ಸಾಧಿಸಿದೆ ಎಂದು ಮಾಹಿತಿ ನೀಡಿದರು.

ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಆನಂದ್ ಮಾತನಾಡಿ, ಜಿಲ್ಲೆಯಲ್ಲಿ 214 ಕ್ಷಯರೋಗ ಕ್ರಿಯಾಶೀಲ ಪ್ರಕರಣಗಳಿದ್ದು, ಗುಣಪಡಿಸಲು ಶ್ರಮಿಸಲಾಗಿದೆ. ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ನಿಯಂತ್ರಣ ಸಂಬಂಧ ಸರ್ಕಾರದ ಮಾರ್ಗಸೂಚಿಯಂತೆ ಕಾರ್ಯ ನಿರ್ವಹಿಸಲಾಗುತ್ತಿದೆ ಎಂದು ತಿಳಿಸಿದರು. ಜಿಲ್ಲಾ ಸರ್ವೇಕ್ಷಾಧಿಕಾರಿ ಡಾ.ಶ್ರೀನಿವಾಸ್ ಮಾತನಾಡಿ, ಜನವರಿಯಿಂದ ಇಲ್ಲಿಯವರೆಗೆ ಟೈಫಾಯಿಡ್ 364 ಪ್ರಕರಣ, ನಾಯಿ ಕಚ್ಚುವಿಕೆ 2912, ಹಾವು ಕಡಿತ 190, ಅತಿಸಾರ ಭೇದಿಗೆ

> "ಕೊಡಗು ಜಿಲ್ಲೆಯಲ್ಲಿ ಲಸಿಕಾ ಕಾರ್ಯಪಡೆ ಶೇಕಡಾವಾರು ಸಾಧಿಸಿದೆ. ಜೊತೆಗೆ ಕ್ಷಯ ಮತ್ತು ಸಾಂಕ್ರಾಮಿಕ ರೋಗಗಳ ನಿಯಂತ್ರಣ, ಜಿಲ್ಲಾ ಆರೋಗ್ಯ ಅಭಿಯಾನ ನಡೆಸಲಾಗುತ್ತಿದೆ.
> -ಡಾ.ಸತೀಶ್ ಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ

1272 ಮಂದಿ, ಡೆಂಗ್ಯೂ ಸಂಬಂಧಪಟ್ಟಂತೆ 194 ಡೆಂಗ್ಯೂ ಪ್ರಕರಣ ವರದಿಯಾಗಿದ್ದು, ಎಲ್ಲರೂ ಗುಣಮುಖರಾಗಿದ್ದಾರೆ. ಹಾವು ಹಾಗೂ ನಾಯಿ ಕಡಿತಕ್ಕೆ ತುತ್ತಾದಲ್ಲಿ ತಕ್ಷಣ ಹತ್ತಿರದ ಆಸ್ಪತ್ರೆಯಲ್ಲಿ ಪರೀಕ್ಷಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಇದೇ ವೇಳೆ ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯ ಡೀನ್ ಮತ್ತು ನಿರ್ದೇಶಕ ಡಾ.ವಿಶಾಲ್ ಕುಮಾರ್, ಜಿಲ್ಲಾ ಸರ್ಜನ್ ಡಾ.ನಂಜುಂಡಯ್ಯ, ವೈದ್ಯರಾದ ಡಾ.ಸೋಮಶೇಖರ್, ಡಾ.ಕುಶ್ವಂತ್ ಕೋಳಿಬೈಲು, ಡಾ.ಮಹೇಶ್, ಡಾ.ರಾಮಚಂದ್ರ ಕಾಮತ್ ಮಾಹಿತಿ ನೀಡಿದರು. ಸಭೆಯಲ್ಲಿ ತಾಲೂಕು ವೈದ್ಯಾಧಿಕಾರಿಗಳಾದ ಡಾ.ಚೇತನ್, ಡಾ.ಯತಿರಾಜು ಇತರರು ಇದ್ದರು.

ನಾಳೆ ಅಹಿಂದ ಒಕ್ಕೂಟದಿಂದ ಪ್ರತಿಭಟನೆ

ಮಡಿಕೇರಿ, ಆ.6–ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಆಧಾರ ರಹಿತ ಆಪಾದನೆ ಮಾಡಿ ಅವರ ವ್ಯಕ್ತಿತ್ವಕ್ಕೆ ಮಸಿ ಬಳಿಯಲು ಷಡ್ಯಂತ್ರ ನಡೆಸುತ್ತಿರುವ ದುಷ್ಟಶಕ್ತಿಗಳ ವಿರುದ್ಧ ಕೊಡಗು ಜಿಲ್ಲಾ ಅಹಿಂದ ಒಕ್ಕೂಟದ ವತಿಯಿಂದ ಆ.8ರಂದು ಕುಶಾಲನಗರದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಒಕ್ಕೂಟದ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಕುರುಬ ಸಮಾಜದ ರಾಜ್ಯ ನಿರ್ದೇಶಕ ಕೆ.ಬಿ.ಶಾಂತಪ್ಪ ತಿಳಿಸಿದರು.



ಸುದ್ದಿಗೋಷ್ಠಿಯಲ್ಲಿ ಅಹಿಂದ ಒಕ್ಕೂಟದ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಬಿ.ಶಾಂತಪ್ಪ ಮಾತನಾಡಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಮೇಲೆ ಇಲ್ಲಸಲ್ಲದ ಆರೋಪ ಹೊರಿಸಿ ಪಾದಯಾತ್ರೆ ನಡೆಸುವ ಮೂಲಕ ಸಿಎಂ ತೇಜೋವಧೆ ಮಾಡಲು ಹೊರಟಿರುವ ಪ್ರತಿಪಕ್ಷಗಳ ಕುತಂತ್ರವನ್ನು ಜನರಿಗೆ ಮನವರಿಕೆ ಮಾಡಲಾಗುವುದು. ಸತ್ಯವನ್ನು ಜನರ ಮುಂದಿಡುವ ಉದ್ದೇಶದಿಂದ ಅಹಿಂದ ಒಕ್ಕೂಟ, ಕುರುಬ ಸಮಾಜ ಹಾಗೂ ಪ್ರಗತಿಪರ ಸಂಘಟನೆಗಳಿಂದ ಕುಶಾಲನಗರದ ಫೀ.ಮಾ.ಕಾರ್ಯಪ್ಪ ವೃತ್ತದಿಂದ ಪ್ರಮುಖ ಬೀದಿಗಳಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಲಾಗುವುದು ಎಂದರು.

ಅಹಿಂದ ಒಕ್ಕೂಟದ ಜಿಲ್ಲಾ ಸ್ಥಾಪಕಾಧ್ಯಕ್ಷ ಟಿ.ಪಿ.ರಮೇಶ್ ಮಾತನಾಡಿ, ದಲಿತರಿಗೆ ಸಾಮಾಜಿಕ ನ್ಯಾಯ ಒದಗಿಸಿ ಹತ್ತು ಹಲವು ಕಾರ್ಯಕ್ರಮಗಳನ್ನು ನೀಡುವ ಮೂಲಕ ಸಿದ್ದರಾಮಯ್ಯ ಶೋಷಿತ ಸಮುದಾಯದ ಶಕ್ತಿಯಾಗಿ, ಧ್ವನಿ ಇಲ್ಲದವರಿಗೆ ಗಟ್ಟಿ ಧ್ವನಿಯಾಗಿ ಕೆಲಸ ಮಾಡುತ್ತಿದ್ದಾರೆ. ಆದರೆ, ಮುಡಾ ಹಗರಣದ ಆರೋಪದ ತನಿಖೆ ನಡೆಯುತ್ತಿರುವಾಗಲೇ ಜನರ ಹಾದಿ ತಪ್ಪಿಸುವುದಕ್ಕಾಗಿ ವಿರೋಧ ಪಕ್ಷಗಳು ಮುಖ್ಯಮಂತ್ರಿಗಳನ್ನು ಗುರಿ ಮಾಡಿ ಹೋರಾಟ ನಡೆಸುತ್ತಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅರಸು ಜನ್ಮ ದಿನಾಚರಣೆ: ಸಾಮಾಜಿಕ ನ್ಯಾಯದ ಹರಿಕಾರ ದಿ.ದೇವರಾಜು ಅರಸು ಜನ್ಮದಿನಾಚರಣೆ ಹಿನ್ನೆಲೆ ಆ.20ರಂದು ಮಡಿಕೇರಿಯಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ. ಸಾರ್ವಜನಿಕರು ಪಕ್ಷಾತೀತವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ರಮೇಶ್ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಕುರುಬ ಸಮಾಜದ ರಾಜ್ಯ ನಿರ್ದೇಶಕ ಹೇಮಲತಾ ಮಂಜುನಾಥ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗಂಗಾಧರ್, ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಹೆಚ್.ಎಲ್.ದಿವಾಕರ್ ಹಾಗೂ ನಗರಸಭಾ ಮಾಜಿ ಸದಸ್ಯ ಕೆ.ಜಿ.ಪೀಟರ್ ಉಪಸ್ಥಿತರಿದ್ದರು.

ನಾಳೆ ಕುಶಾಲನಗರದಲ್ಲಿ ರಕ್ತದಾನ ಶಿಬಿರ

ಕುಶಾಲನಗರ, ಆ.6–ಭಾರತೀಯ ರೆಡ್‌ಕ್ರಾಸ್ ಹಾಗೂ ರೋಟರಿ ಸಂಸ್ಥೆ ವತಿಯಿಂದ ಆ.8ರಂದು ರಕ್ತದಾನ ಶಿಬಿರವನ್ನು ರೋಟರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ರೆಡ್‌ಕ್ರಾಸ್ ಸಂಸ್ಥೆ ತಾಲೂಕು ಘಟಕದ ಅಧ್ಯಕ್ಷ ಎಸ್.ಕೆ.ಸತೀಶ್ ತಿಳಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ರಕ್ತದ ಅವಶ್ಯಕತೆ ಹೆಚ್ಚಾಗಿದೆ. ಈ ನಿಟ್ಟಿನಲ್ಲಿ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ. ದಾನಿಗಳ ನೆರವಿನಿಂದ ಅಮೂಲ್ಯ ಜೀವಗಳು ಉಳಿಯಲಿವೆ. ಜೊತೆಗೆ ರಕ್ತದಾನಿಗಳ ದೇಹದಲ್ಲೂ ಆರೋಗ್ಯ ವೃದ್ಧಿಸಲಿದೆ ಎಂದರು.

ಶಿಬಿರದಲ್ಲಿ ಅಂಗಾಂಗ ದಾನದ ಮಾಹಿತಿ ಕಾರ್ಯಾಗಾರ, ನೋಂದಣಿ ಹಮ್ಮಿಕೊಳ್ಳಲಾಗಿದೆ. ಅಂಗಾಂಗ ದಾನದ ಮೂಲಕ ಸಾವಿನಲ್ಲೂ ಸಾರ್ಥಕತೆ ಮೆರೆಯಬಹುದು. ಅಂಗಾಂಗಗಳಿಗೆ ಬೇಡಿಕೆ ಹೆಚ್ಚಿದ್ದು, ದಾನ ಮಾಡುವವರ ಸಂಖ್ಯೆ ಕಡಿಮೆಯಿದೆ. ಹಲವು ರೋಗಿಗಳು ಸಕಾಲದಲ್ಲಿ ಅಂಗಾಂಗ ದೊರೆಯದೆ ಸಾವಿಗೀಡಾಗುತ್ತಿರುವುದು ವಿಷಾದಕರ ಸಂಗತಿ. ಈ ನಿಟ್ಟಿನಲ್ಲಿ ಅಂಗಾಂಗ ದಾನಕ್ಕೂ ಮುಂದಾಗಬೇಕಿದೆ ಎಂದು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ರೋಟರಿ ಅಧ್ಯಕ್ಷ ಸಿ.ಬಿ.ಹರೀಶ್, ರೆಡ್‌ಕ್ರಾಸ್ ಪದಾಧಿಕಾರಿಗಳಾದ ನಂಜುಂಡಸ್ವಾಮಿ, ಮಹೇಶ್, ಎಚ್.ಎಂ.ಚಂದ್ರು, ಕೆ.ಎನ್.ದೇವರಾಜ್ ಇದ್ದರು.

ವ್ಯಾನ್ ಮೇಲೆ ಕಾಡಾನೆ ದಾಳಿ



ಗೋಣಿಕೊಪ್ಪ, ಆ.6– ಪೊನ್ನಂಪೇಟೆ ತಾಲೂಕಿನ ಕಾನೂರು–ಕುಟ್ಟ ರಸ್ತೆಯ ಕೇಂಬುಕೊಲ್ಲಿಯಲ್ಲಿ ಸೋಮವಾರ ವ್ಯಾನ್ ಮೇಲೆ ಕಾಡಾನೆ ದಾಳಿ ನಡೆಸಿ, ಜಖಂಗೊಳಿಸಿದೆ.

ಬೆಳಗ್ಗೆ 11.30ರಲ್ಲಿ ಮೂರು ಕಾಡಾನೆಗಳು ರಸ್ತೆ ದಾಟುತ್ತಿದ್ದಾಗ ಆನೆಯೊಂದು ಬರುತ್ತಿದ್ದ ಮುಕ್ಕಾಟೀರ ಮಧು ಅವರ ವ್ಯಾನ್ ಮೇಲೆ ದಾಳಿ ನಡೆಸಿದೆ. ಇದರಿಂದ ಕಾರಿನ ಮುಂಭಾಗ ಜಖಂಗೊಂಡಿದೆ. ವ್ಯಾನ್ ಹಿಂಬದಿಯಲ್ಲಿ ಬೇರೆ ವಾಹನಗಳು ಹಾರ್ನ್ ಮಾಡಿದ್ದರಿಂದ ಆನೆಗಳು ತೋಟದೊಳಗೆ ನುಸುಳಿ ಮರೆಯಾಗಿವೆ. ವ್ಯಾನ್‌ನಲ್ಲಿದ್ದವರು ಅಪಾಯದಿಂದ ಪಾರಾಗಿದ್ದಾರೆ. ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿದರು.

ಸ್ವಾತಂತ್ರ್ಯ ದಿನಾಚರಣೆ ಪೂರ್ವಭಾವಿ ಸಭೆ

ವಿರಾಜಪೇಟೆ, ಆ.6–ಪಟ್ಟಣದ ತಾಲೂಕು ಕಚೇರಿ ಸಭಾಂಗಣದಲ್ಲಿ ಮಂಗಳವಾರ ತಹಸೀಲ್ದಾರ್ ಪ್ರದೀಪ್ ಕುಮಾರ್ ನೇತೃತ್ವದಲ್ಲಿ ಸ್ವಾತಂತ್ರ್ಯ ದಿನಾಚರಣೆ ಪೂರ್ವಭಾವಿ ಸಭೆ ನಡೆಯಿತು.

ಈ ಬಾರಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ತಾಲೂಕು ಆಡಳಿತದ ವತಿಯಿಂದ ತಾಲೂಕು ಮೈದಾನದಲ್ಲಿ ಸ್ವಾತಂತ್ರ್ಯ ದಿನವನ್ನು ಅದ್ದೂರಿಯಾಗಿ ಆಚರಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.



ವಿರಾಜಪೇಟೆ ತಾಲೂಕು ಕಚೇರಿ ಸಭಾಂಗಣದಲ್ಲಿ ತಹಸೀಲ್ದಾರ್ ಪ್ರದೀಪ್ ಕುಮಾರ್ ನೇತೃತ್ವದಲ್ಲಿ ಸ್ವಾತಂತ್ರ್ಯ ದಿನಾಚರಣೆ ಪೂರ್ವಭಾವಿ ಸಭೆ ನಡೆಯಿತು.

ಆ.15ರಂದು ಬೆಳಗ್ಗೆ ಶಾಂತ ಚಿತ್ರಮಂದಿರದಿಂದ ದೊಡ್ಡಟ್ಟಿ ಚೌಕಿ, ಮುಖ್ಯ ರಸ್ತೆಯ ಗಡಿಯಾರಕಂಬ ಮಾರ್ಗವಾಗಿ ತಾಲೂಕು ಮೈದಾನದವರೆಗೆ ವಿದ್ಯಾರ್ಥಿಗಳ ಮೆರವಣಿಗೆ ನಡೆಯಲಿದೆ. ಬಳಿಕ ಧ್ವಜಾರೋಹಣ, ಎನ್‌ಸಿಸಿ ಮತ್ತು ಸ್ಕೌಟ್ಸ್ ಅಂಡ್ ಗೈಡ್ಸ್ ಹಾಗೂ ಪೊಲೀಸರಿಂದ ಕವಾಯತು ನಡೆಯಲಿದೆ. ವೇದಿಕೆ ಕಾರ್ಯಕ್ರಮದಲ್ಲಿ ಮಾಜಿ ಸೈನಿಕರು, ತಾಲೂಕಿನ ಪ್ರತಿಭಾವಂತ ವಿದ್ಯಾರ್ಥಿಗಳು, ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಶೇ.100ರಷ್ಟು ಫಲಿತಾಂಶ ಪಡೆದ ಶಾಲೆಗಳ ಶಿಕ್ಷಕರು ಹಾಗೂ ವಿವಿಧ ಕ್ಷೇತ್ರಗಳ ಸಾಧಕರನ್ನು ಸನ್ಮಾನಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಸಭೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಪ್ರಕಾಶ್, ತೋಟಗಾರಿಕೆ ಇಲಾಖೆ ಅಧಿಕಾರಿ ಡೀನಾ, ಕೃಷಿ ಇಲಾಖೆಯ ಗೌರಿ, ಪಶು ವೈದ್ಯಾಧಿಕಾರಿ ಡಾ.ನವೀನ್ ಕುಮಾರ್, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಿ.ಪಿ.ರಾಜೇಶ್, ಕೆ.ಸಿ.ಶಬರೀಶ್, ಅರಣ್ಯ, ಲೋಕೋಪಯೋಗಿ ಇಲಾಖೆ, ಸೆಸ್ಕ್, ತಾಲೂಕು ಮಟ್ಟದ ವಿವಿಧ ಅಧಿಕಾರಿಗಳು ಹಾಗೂ ಕರ್ನಾಟಕ ಸಂಘದ ಪದಾಧಿಕಾರಿಗಳು ಹಾಜರಿದ್ದರು.

ಆ.19, ರಕ್ತದಾನ ಶಿಬಿರ

ಗೋಣಿಕೊಪ್ಪ, ಆ.6–ಶಿವಾಜಿ ಯುವಸೇನೆ ವತಿಯಿಂದ ರಕ್ತದಾನ ಶಿಬಿರವನ್ನು ಆ.19ರಂದು ಗೋಣಿಕೊಪ್ಪ ಉಮಾಮಹೇಶ್ವರಿ ದೇವಸ್ಥಾನ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಅಂದು ಬೆಳಗ್ಗೆ 10ರಿಂದ ಮಧ್ಯಾಹ್ನ 3 ಗಂಟೆ ವರೆಗೆ ಸಾರ್ವಜನಿಕರು ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡಬಹುದು. ಮಾಹಿತಿಗೆ ಮೊ.ಸಂ: 9380734955 ಅಥವಾ 9880885575 ಅನ್ನು ಸಂಪರ್ಕಿಸಬಹುದು ಎಂದು ಶಿವಾಜಿ ಯುವಸೇನೆ ಅಧ್ಯಕ್ಷ ಅಣ್ಣಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆ.9, ಡಿಸಿ ಕಚೇರಿ ಎದುರು ಧರಣಿ

ಮಡಿಕೇರಿ, ಆ.6–ವಿಶ್ವ ಸಂಸ್ಥೆಯ ಜಾಗತಿಕ ಆದಿಮ ಸಂಜಾತ ಜನಾಂಗಗಳ ಹಕ್ಕುಗಳ ದಿನಾಚರಣೆ ಅಂಗವಾಗಿ ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ವತಿಯಿಂದ ಆ.9ರಂದು ಬೆಳಗ್ಗೆ 10.30ಕ್ಕೆ ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಶಾಂತಿಯುತ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ ತಿಳಿಸಿದ್ದಾರೆ.



ಸಾಂವಿಧಾನಿಕ ಹಕ್ಕುಗಳಿಂದ ವಂಚಿತವಾಗಿರುವ ಆದಿಮ ಸಂಜಾತ ಕೊಡವ ಬುಡಕಟ್ಟು ಜನರ ಬೇಡಿಕೆ ಈಡೇರಿಸಬೇಕು. ಕೊಡವರು ಪವಿತ್ರ ಕೊಡವ ನೆಲದ ಮೂಲ ನಿವಾಸಿ ಬುಡಕಟ್ಟು ಸಮುದಾಯದವರಾಗಿದ್ದಾರೆ. ಕೊಡವರಿಗಿರುವ ಏಕೈಕ ನೆಲೆ ಕೊಡವ ಲ್ಯಾಂಡ್ ಅವಿಭಾಜ್ಯ ಮಾತೃ ಭೂಮಿಯಾಗಿದೆ. ಆಂತರಿಕ ರಾಜಕೀಯ ಸ್ವ ನಿರ್ಣಯದ ಹಕ್ಕುಗಳನ್ನು ಒಳಗೊಂಡಂತೆ ಕೊಡವ ಲ್ಯಾಂಡ್‌ನ ಭೌಗೋಳಿಕ–ರಾಜಕೀಯ ಸ್ವಾಯತ್ತತೆ ಮತ್ತು ಸ್ವ ಆಡಳಿತ ನೀಡಬೇಕೆಂದು ಧರಣಿಯಲ್ಲಿ ಒತ್ತಾಯಿಸುವುದಾಗಿ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆ.9, ಮೈಸೂರಿನಲ್ಲಿ ಕಾಂಗ್ರೆಸ್ ಬೃಹತ್ ಜನಾಂದೋಲನ



ಚಾಮರಾಜನಗರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಜನಾಂದೋಲನ ಪೂರ್ವಭಾವಿ ಸಭೆಯಲ್ಲಿ ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿದರು.

ಚಾಮರಾಜನಗರ, ಆ.6– ಬಿಜೆಪಿ ಹಾಗೂ ಜೆಡಿಎಸ್ ವಿರುದ್ಧ ಆ.9ರಂದು ಮೈಸೂರಿನಲ್ಲಿ ಕಾಂಗ್ರೆಸ್ ಬೃಹತ್ ಜನಾಂದೋಲನ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ಸಿ.ಪುಟ್ಟರಂಗಶೆಟ್ಟಿ ತಿಳಿಸಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ನಡೆದ ಸಮಾವೇಶದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಆಯೋಜಿಸಿರುವ ಜನಾಂದೋಲನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಸಂಪುಟದ ಸಚಿವರು ಭಾಗವಹಿಸಲಿದ್ದಾರೆ ಎಂದರು.

ಬಿಜೆಪಿಯವರು ಆರೋಪಿಸಿರುವ ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಸಮಾವೇಶದಲ್ಲಿ ಸಿದ್ದರಾಮಯ್ಯ ಎಳೆ ಎಳೆಯಾಗಿ ಜನರ ಮುಂದೆ ಸತ್ಯಾಂಶ ಬಿಚ್ಚಿಡಲಿದ್ದಾರೆ. ಬಸವರಾಜ ಬೊಮ್ಮಾಯಿ ಅವಧಿಯಲ್ಲೇ ಸಿದ್ದರಾಮಯ್ಯ ಅವರಿಗೆ ಮುಡಾದಿಂದ 50:50 ಅನುಪಾತದಲ್ಲಿ ನಿವೇಶನಗಳನ್ನು ನೀಡಲಾಗಿದೆ. ಹೀಗಿದ್ದರೂ ಬಿಜೆಪಿ ಹಾಗೂ ಜೆಡಿಎಸ್‌ನವರು ಪಾದಯಾತ್ರೆಗೆ ಮುಂದಾಗಿರುವುದು ಸರಿಯಲ್ಲ. ಕಾಂಗ್ರೆಸ್ ಸರ್ಕಾರ ಅಸ್ಥಿರಗೊಳಿಸುವ ಬಿಜೆಪಿ ಪ್ರಯತ್ನ ಫಲಿಸುವುದಿಲ್ಲ ಎಂದು ತಿಳಿಸಿದರು. ಆ.10ರಂದು ಆಲೂರಿನಲ್ಲಿ ನಡೆಯುವ ಬಿ.ರಾಚಯ್ಯ ಸ್ಮಾರಕ ಉದ್ಘಾಟನೆಗೆ ಮುಖ್ಯಮಂತ್ರಿ ಸಿದ್ದ ರಾಮಯ್ಯ ಆಗಮಿಸಲಿದ್ದು, ಜಿಲ್ಲೆಯಿಂದ ಹೆಚ್ಚಿನ ಪಕ್ಷದ ಮುಖಂಡರು, ಕಾರ್ಯಕರ್ತರು, ಜನಪ್ರತಿನಿಧಿಗಳು ಭಾಗವಹಿಸಬೇಕು ಎಂದರು.

ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ ಮಾತನಾಡಿ, ಬಿಜೆಪಿಯವರು ಮುಡಾ ನಿವೇಶನ ಹಂಚಿಕೆ ಮುಂದಿಟ್ಟುಕೊಂಡು ಸಿದ್ದರಾಮಯ್ಯ ಅವರನ್ನು ಇಕ್ಕಟ್ಟಿಗೆ ಸಿಲುಕಿಸುವ ಪ್ರಯತ್ನ ಮಾಡುತ್ತಿದ್ದಾರೆ. ಅವರಿಂದ ಇದು ಅಸಾಧ್ಯ. ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಜೆಪಿಯವರಿಗೆ ತಕ್ಕ ಉತ್ತರ ನೀಡಲಿದ್ದಾರೆ ಎಂದು ಹೇಳಿದರು.

ಸಭೆಯಲ್ಲಿ ಚುಡಾ ಅಧ್ಯಕ್ಷ ಮಹಮದ್ ಅಸ್ಗರ್, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎ.ಎಸ್.ಗುರುಸ್ವಾಮಿ ಜಿಲ್ಲಾ ಕಾಂಗ್ರೆಸ್ ಮಹಿಳಾ ಅಧ್ಯಕ್ಷೆ ಲತಾ ಜತ್ತಿ, ಕೆಪಿಸಿಸಿ ಮಹಿಳಾ ಕಾರ್ಯದರ್ಶಿ ಪದ್ಮ ಪುರುಷೋತ್ತಮ್, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಚಿಕ್ಕಮಹದೇವ್, ಆರ್.ಮಹದೇವ್, ಓಬಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಸಿ.ಎ.ಮಹದೇವಶೆಟ್ಟಿ, ರಾಜ್ಯ ಎಸ್ಟಿ ಘಟಕ ಪ್ರಧಾನ ಕಾರ್ಯದರ್ಶಿ ಮು.ಶ್ರೀನಿವಾಸನಾಯಕ, ಜಿಪಂ ಮಾಜಿ ಸದಸ್ಯರಾದ ಕೆ.ಪಿ.ಸದಾಶಿವಮೂರ್ತಿ, ಆರ್.ಬಾಲರಾಜು, ಕಾವೇರಿ ಶಿವಕುಮಾರ್, ರಮೇಶ್, ಅಲ್ಪಸಂಖ್ಯಾತರ ಘಟಕದ ಅಬ್ದುಲ್ ಷರೀಫ್, ನಗರಸಭೆ ಸದಸ್ಯರಾದ ನೀಲಮ್ಮ, ಭಾಗ್ಯಮ್ಮ, ಚಿನ್ನಮ್ಮ ಹಾಗೂ ಪಕ್ಷದ ಮುಖಂಡರು ಹಾಜರಿದ್ದರು.

ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಸ್ಥಾನದ ಮೀಸಲಾತಿ ಪ್ರಕಟ ಹಿನ್ನೆಲೆ

ಕಾಂಗ್ರೆಸ್, ಬಿಜೆಪಿ ನಡುವೆ ತೀವ್ರ ಪೈಪೋಟಿ

ಚಾಮರಾಜನಗರ, ಆ.6–ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಸ್ಥಾನದ ಮೀಸಲಾತಿ ಪಟ್ಟಿ ಪ್ರಕಟವಾದ ಬೆನ್ನಲ್ಲೇ ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ಆಡಳಿತ ಚುಕ್ಕಾಣಿ ಹಿಡಿಯಲು ರಾಜಕೀಯ ವಲಯದಲ್ಲಿ ತೀವ್ರ ಪೈಪೋಟಿ ಏರ್ಪಟ್ಟಿದೆ.



ಜಿಲ್ಲಾ ಕೇಂದ್ರವಾದ ಚಾಮರಾಜನಗರದ ನಗರಸಭೆ ಆಡಳಿತ 2023ರ ಮೇ ತಿಂಗಳಿಗೆ ಅಧ್ಯಕ್ಷ, ಉಪಾಧ್ಯಕ್ಷರ ಅವಧಿ ಪೂರ್ಣಗೊಂಡಿದ್ದು, ಎರಡನೇ ಅವಧಿಗೆ ಮೀಸಲಾತಿ ಪ್ರಕಟಣೆಯಾಗದ ಹಿನ್ನೆಲೆಯಲ್ಲಿ 15 ತಿಂಗಳಿನಿಂದ ವರಿಷ್ಠರಿಲ್ಲದೇ ಆಡಳಿತ ನಡೆಸಲಾಯಿತು.

ಪ್ರಸ್ತುತ ನಗರಸಭೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಮೀಸಲಾತಿಯನ್ನು ಪ್ರಕಟಣೆ ಮಾಡಿದ ಹಿನ್ನೆಲೆಯಲ್ಲಿ ಕಾಂಗ್ರೆಸ್ ಹಾಗೂ ಬಿಜೆಪಿ ನಡುವೆ ತೀವ್ರ ಪೈಪೋಟಿ ಏರ್ಪಟಿದ್ದು, ಯಾರ ಮಡಿಲಿಗೆ ನಗರಸಭೆ ಸೇರಲಿದೆ ಎಂಬುದು ಕುತೂಹಲ ಮೂಡಿಸಿದೆ.

33 ಸಂಖ್ಯಾ ಬಲದ ನಗರಸಭೆ: ಪ್ರಸ್ತುತ ಚಾಮರಾಜನಗರ ನಗರಸಭೆ ಬಲಾಬಲ ನೋಡಿದರೆ 15 ಬಿಜೆಪಿ ಸದಸ್ಯರು, 8 ಕಾಂಗ್ರೆಸ್ ಸದಸ್ಯರು, 6 ಎಸ್‌ಡಿಪಿಐ ಸದಸ್ಯರು ಹಾಗೂ ಬಿಎಸ್‌ಪಿ ಮತ್ತು ಪಕ್ಷೇತರ ತಲಾ ಒಂದು ಸದಸ್ಯರು ಸೇರಿ ಒಟ್ಟು 31 ಸದಸ್ಯರಿದ್ದಾರೆ. ಇವರೊಂದಿಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಆಯ್ಕೆ ಚುನಾವಣೆಯಲ್ಲಿ ಕ್ಷೇತ್ರದ ಶಾಸಕರು ಹಾಗೂ ಸಂಸದರ ಮತಗಳನ್ನು ಪರಿಗಣಿಸುವುದರಿಂದ ಒಟ್ಟು 33 ಸಂಖ್ಯಾ ಬಲವನ್ನು ನಗರಸಭೆ ಒಳಗೊಂಡಿದೆ.

ಬಿಜೆಪಿಗೆ ಅಧಿಕಾರ ಬಹುತೇಕ ಖಚಿತ: ಪ್ರಸ್ತುತ ನಗರಸಭೆ ಅಧಿಕಾರದ ಚುಕ್ಕಾಣಿ ಹಿಡಿಯಲು ಒಟ್ಟು 17 ಸದಸ್ಯರ ಬೆಂಬಲ ಅಗತ್ಯವಿದೆ. ಈ ನಿಟ್ಟಿನಲ್ಲಿ ನೋಡಿದಾಗ ಬಿಜೆಪಿ 15 ಸದಸ್ಯರಿದ್ದು, ಇವರಿಗೆ ಇನ್ನೂ ಕೇವಲ ಇಬ್ಬರು ಸದಸ್ಯರ ಕೊರತೆಯಾಗಿದ್ದು, ಎಸ್‌ಡಿಪಿಐ ಅಥವಾ ಬಿಎಸ್‌ಪಿ, ಪಕ್ಷೇತರ ಬೆಂಬಲ ಪಡೆದರೆ ಅಧಿಕಾರ ಖಚಿತವಾಗಿದ್ದು, ಮತ್ತೆ ನಗರಸಭೆ ಬಿಜೆಪಿಯ ವಶವಾಗಲಿದೆ ಎಂದು ರಾಜಕೀಯ ವಲಯದಲ್ಲಿ ಲೆಕ್ಕಾಚಾರ ಮಾಡಲಾಗುತ್ತಿದೆ.

ಮತ್ತೊಂದೆಡೆ ಕಾಂಗ್ರೆಸ್ ಕೂಡ ಅಧಿಕಾರ ಹಿಡಿಯಲು ನಾನಾ ತಂತ್ರಗಾರಿಕೆ ನಡೆಸುತ್ತಿದ್ದು, ಕಾಂಗ್ರೆಸ್‌ಗೆ 8 ಸದಸ್ಯರ ಬೆಂಬಲವಿದೆ. ಉಳಿದಂತೆ ಶಾಸಕರು ಹಾಗೂ ಸಂಸದರು ಕಾಂಗ್ರೆಸ್‌ನವರಾಗಿದ್ದು, 10 ಜನರ ಬೆಂಬಲ ಖಚಿತವಾಗಿದೆ. ಆದರೆ, ಉಳಿದ 7 ಸ್ಥಾನಗಳಿಗೆ ಎಸ್‌ಡಿಪಿಐ, ಬಿಎಸ್‌ಪಿ ಹಾಗೂ ಪಕ್ಷೇತರ ಎಲ್ಲರ ಬೆಂಬಲವೂ ಅಗತ್ಯವಾಗಿದ್ದು, ಒಂದು ವೇಳೆ ಎಲ್ಲರೂ ಒಗ್ಗೂಡಿದರೆ ಬಿಜೆಪಿಯನ್ನು ದೂರ ವಿಟ್ಟು, ಕಾಂಗ್ರೆಸ್ ಅಧಿಕಾರ ಹಿಡಿಯುವ ಸಾಧ್ಯತೆ ಇದೆ.

ಎಲ್ಲರೂ ಅರ್ಹರು: ಈ ಬಾರಿ ಮೀಸಲಾತಿ ಪಟ್ಟಿಯಲ್ಲಿ ಸಾಮಾನ್ಯ ವರ್ಗಕ್ಕೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನ ಪ್ರಕಟಿಸಿರುವುದರಿಂದ ನಗರಸಭೆ ಎಲ್ಲಾ 31 ಸದಸ್ಯರು ಈ ಹುದ್ದೆಗಳಿಗೆ ಅರ್ಹರಾಗಿದ್ದು, ಎರಡು ಪಕ್ಷಗಳ ವರಿಷ್ಠರು ಯಾರಿಗೆ ಮಣೆ ಹಾಕಲಿದ್ದಾರೆ ಎಂಬುದನ್ನು ಕಾದು ನೋಡಬೇಕಿದೆ.

ಮೃತರ ಕುಟುಂಬಗಳಿಗೆ ಚೆಕ್ ವಿತರಣೆ



ಚಾಮುಲ್ ರೈತ ಕಲ್ಯಾಣ ಟ್ರಸ್ಟ್ ವತಿಯಿಂದ ಹಾಲು ಉತ್ಪಾದಕರ ಮೃತರ ಕುಟುಂಬಗಳಿಗೆ ಚೆಕ್ ವಿತರಿಸಲಾಯಿತು.

ಗುಂಡ್ಲುಪೇಟೆ, ಆ.6–ಚಾಮರಾಜನಗರ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ರೈತ ಕಲ್ಯಾಣ ಟ್ರಸ್ಟ್ ವತಿಯಿಂದ ಹಾಲು ಉತ್ಪಾದಕರ ಮೃತರ ಕುಟುಂಬಗಳಿಗೆ ಚೆಕ್ ವಿತರಿಸಲಾಯಿತು.

ಒಟ್ಟು 36 ಫಲಾನುಭವಿಗಳಿಗೆ ತಲಾ 15 ಸಾವಿರ ರೂ.ನಂತೆ 5.40 ಲಕ್ಷ ರೂ. ಚೆಕ್‌ಗಳನ್ನು ಚಾಮುಲ್ ನಿರ್ದೇಶಕರಾದ ಹೆಚ್.ಎಸ್.ನಂಜುಂಡ ಪ್ರಸಾದ್ ಹಾಗೂ ಎಂ.ಪಿ.ಸುನೀಲ್ ವಿತರಿಸಿದರು.

ಇದೇ ವೇಳೆ ಮಾತನಾಡಿದ ಹೆಚ್.ಎಸ್.ನಂಜುಂಡ ಪ್ರಸಾದ್, ಜನಶ್ರೀ ವಿಮಾ ಯೋಜನೆಯಡಿ 59 ವರ್ಷ ಒಳಪಟ್ಟು ಸದಸ್ಯರಿಗೆ 1 ಲಕ್ಷ ರೂ.ವರೆಗೆ ಸೌಲಭ್ಯ ಪಡೆಯಬಹುದು. ಜೊತೆಗೆ ರಾಸುಗಳಿಗೆ ತುರ್ತು ಚಿಕಿತ್ಸೆಗೆ ಪ್ರತ್ಯೇಕ ವ್ಯವಸ್ಥೆ ಮಾಡಲಾಗಿದೆ. ಒಕ್ಕೂಟದಿಂದ ನೀಡುವ ಪಶು ಆಹಾರ ಹಾಗೂ ಇತರೆ ಸೌಲಭ್ಯ ಸದುಪಯೋಗಪಡಿಸಿಕೊಂಡು ಚಾಮುಲ್ ಬೆಳವಣಿಗೆಗೆ ಸಹಕರಿಸುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಒಕ್ಕೂಟದ ತಾಲೂಕಿನ ಸಹಾಯಕ ವ್ಯವಸ್ಥಾಪಕ ಜಿ.ಪ್ರಭು, ವಿಸ್ತರಣಾಧಿಕಾರಿಗಳಾದ ಎಚ್.ಪ್ರಕಾಶ್, ರಂಜಿತಾ, ಮುದ್ದಪ್ಪ ಉದಯ್, ಮಂಜೇಶ್, ಕಾರ್ಯದರ್ಶಿಗಳು ಹಾಗೂ ಫಲಾನುಭವಿಗಳು ಹಾಜರಿದ್ದರು.

ಅಕ್ರಮ ಮದ್ಯ ಸಾಗಣೆ: ಆರೋಪಿ ಬಂಧನ

ಚಾಮರಾಜನಗರ, ಆ.6–ಅಕ್ರಮವಾಗಿ ಮದ್ಯ ಸಾಗಿಸುತ್ತಿದ್ದ ವ್ಯಕ್ತಿಯನ್ನು ಯಳಂದೂರು ಠಾಣೆ ಪೊಲೀಸರು ಬಂಧಿಸಿ, ಆತನಿಂದ 75 ಮದ್ಯದ ಪೌಚ್‌ಗಳನ್ನು ವಶಪಡಿಸಿಕೊಂಡಿದ್ದಾರೆ. ಚಾಮರಾಜನಗರ ತಾಲೂಕಿನ ಹೊಂಗನೂರು ಗ್ರಾಮದ ಸಿದ್ದರಾಜು ಬಂಧಿತ ಆರೋಪಿ. ಈತ ಸೋಮವಾರ ಸಂಜೆ ಯಳಂದೂರಿನ ಕಾಳರಾಯನ ದೇವಸ್ಥಾನ ವೈ.ಕೆ.ಮೋಳೆ ರಸ್ತೆ ಬಳಿ ಮದ್ಯ ಸಾಗಿಸುತ್ತಿದ್ದಾಗ ಪೊಲೀಸ್ ಉಪನಿರೀಕ್ಷಕ ಹನುಮಂತ ಉಪ್ಪಾರ್ ಹಾಗೂ ಸಿಬ್ಬಂದಿ ಬಂಧಿಸಿದ್ದಾರೆ. ನಂತರ ಆತನ ಬ್ಯಾಗ್‌ನಲ್ಲಿದ್ದ 90 ಎಂಎಲ್‌ನ 75 ಮದ್ಯದ ಪೌಚ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಬಿ.ರಾಚಯ್ಯ ನಾಮಫಲಕ ಅಳವಡಿಸುವಂತೆ ಮನವಿ

ಚಾಮರಾಜನಗರ, ಆ.6– ನಗರದ ಜೋಡಿರಸ್ತೆಯಲ್ಲಿ ಮಾಜಿ ರಾಜ್ಯಪಾಲ ದಿವಂಗತ ಬಿ.ರಾಚಯ್ಯನವರ ನಾಮಫಲಕ ಮತ್ತು ಕಮಾನು ಗೇಟ್ ಅಳವಡಿಸುವಂತೆ ಒತ್ತಾಯಿಸಿ ಎನ್‌ಎಸ್‌ಯುಐ ಜಿಲ್ಲಾ ಘಟಕದ ವತಿಯಿಂದ ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ ಅವರಿಗೆ ಮನವಿ ಸಲ್ಲಿಸಲಾಯಿತು.



ಚಾಮರಾಜನಗರದ ಜೋಡಿರಸ್ತೆಯಲ್ಲಿ ಬಿ.ರಾಚಯ್ಯನವರ ನಾಮಫಲಕ ಅಳವಡಿಸುವಂತೆ ಒತ್ತಾಯಿಸಿ ಎನ್‌ಎಸ್‌ಯುಐ ಜಿಲ್ಲಾ ಘಟಕದ ವತಿಯಿಂದ ಎಡಿಸಿ ಗೀತಾ ಹುಡೇದ ಅವರಿಗೆ ಮನವಿ ಸಲ್ಲಿಸಲಾಯಿತು.

ದೇಶ ಕಂಡ ಅಪ್ರತಿಮ ರಾಜಕಾರಣಿ ದಿವಂಗತ ಬಿ.ರಾಚಯ್ಯನವರು ರಾಜ್ಯ ಮತ್ತು ಜಿಲ್ಲೆಗೆ ಅಪಾರ ಕೊಡುಗೆ ನೀಡಿದ್ದಾರೆ. ದೀನ ದಲಿತರ ಪರ ಅಪಾರ ಕಾಳಜಿ ಹೊಂದಿದ್ದರು. ರಸ್ತೆ ಅಗಲೀಕರಣ ವೇಳೆ ಅವರ ನಾಮಫಲಕವನ್ನು ತೆರವು ಗೊಳಿಸಲಾಗಿತ್ತು. ಆದರೆ, ರಸ್ತೆ ಅಗಲೀ ಕರಣವಾಗಿ 6 ವರ್ಷ ಕಳೆದರೂ ಮತ್ತೆ ಅವರ ನಾಮಫಲಕ ಅಳವಡಿಸಿಲ್ಲ. ಆದ್ದರಿಂದ ಕೂಡಲೇ ನಾಮಫಲಕ ಮತ್ತು ಕಮಾನು ಗೇಟ್ ಅಳವಡಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ಇದೇ ವೇಳೆ ಎನ್‌ಎಸ್‌ಯುಐ ಅಧ್ಯಕ್ಷ ಮೋಹನ್ ನಗು, ಉಪಾಧ್ಯಕ್ಷ ದಸ್ತಗಿರ್, ಮುತ್ತುರಾಮು, ತಾಲೂಕು ಅಧ್ಯಕ್ಷ ಶಶಾಂಕ್, ಕಾರ್ಯದರ್ಶಿ ಪ್ರದೀಪ್, ದರ್ಶನ್ ಹಾಜರಿದ್ದರು.



ಆಧಾರ್ ಜೋಡಣೆ ಕೇಂದ್ರಕ್ಕೆ ಭೇಟಿ...

ಗುಂಡ್ಲುಪೇಟೆ ತಾಲೂಕಿನ ಬೇಗೂರು ಹೋಬಳಿಯ ರೈತರ ಆರ್‌ಟಿಸಿಗೆ ಆಧಾರ್ ಜೋಡಣೆ ಕೇಂದ್ರಕ್ಕೆ ತಹಸೀಲ್ದಾರ್ ರಮೇಶ್ ಬಾಬು ಭೇಟಿ ನೀಡಿ, ಪರಿಶೀಲಿಸಿದರು. ಉಪ ತಹಸೀಲ್ದಾರ್ ಪ್ರಕಾಶ್, ರಾಜಸ್ವ ನಿರೀಕ್ಷಕ ಮಹದೇವಪ್ಪ, ಜಿಲ್ಲಾಧಿಕಾರಿ ಕಚೇರಿ ರಾಜೇಂದ್ರ, ಗ್ರಾಮ ಆಡಳಿತಾಧಿಕಾರಿಗಳಾದ ಜಯಣ್ಣ, ನದೀಮ್, ಮಾದೇಶ್ ಇದ್ದರು.

ಸೆ.14, ಲೋಕ್ ಅದಾಲತ್

ಚಾಮರಾಜನಗರ: ಕಾನೂನು ಸೇವೆಗಳ ಪ್ರಾಧಿಕಾರ ನಿರ್ದೇಶನದಂತೆ ಸೆ.14ರಂದು ಜಿಲ್ಲೆಯಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ಹಮ್ಮಿಕೊಳ್ಳಲಾಗಿದೆ. ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಮತ್ತು ವ್ಯಾಜ್ಯ ಪೂರ್ವ ಪ್ರಕರಣ ಇತ್ಯರ್ಥಪಡಿಸಿಕೊಳ್ಳಬಹುದು. ಮಾಹಿತಿಗೆ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ಸಹಾಯವಾಣಿ: 15100 ಅಥವಾ ದೂ.ಸಂ: 08226–226022 ಅನ್ನು ಸಂಪರ್ಕಿಸಬಹುದು.

ಆ.10, ಮಾನ್ಯ ರಂಗಪ್ರವೇಶ



ಯಳಂದೂರು, ಆ.6–ನಾಟ್ಯಗುರು ಶೀಲಾ ರಾಮನಾಥ್ ಶಿಷ್ಯೆ ಕುಮಾರಿ ಮಾನ್ಯ ಮಹೇಶ್ ಅವರು ಆ.10ರಂದು ಭರತನಾಟ್ಯ ರಂಗಪ್ರವೇಶ ಮಾಡಲಿದ್ದಾರೆ. ಅಂದು ಸಂಜೆ 5 ಗಂಟೆಗೆ ಮೈಸೂರಿನ ಕಲಾಮಂದಿರದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಮಾನ್ಯ ಭರತನಾಟ್ಯ ಪ್ರದರ್ಶಿಸಲಿದ್ದಾರೆ. ಅಯೋಧ್ಯೆ ಬಾಲರಾಮ ಶಿಲ್ಪಿ ಡಾ. ಅರುಣ್ ಯೋಗಿರಾಜ್, ನಟ ವಿದ್ವಾನ್ ಶ್ರೀಧರ್ ಜೈನ್ ಭಾಗವಹಿಸಲಿದ್ದಾರೆ.

ಈಕೆ 12 ವರ್ಷಗಳ ನಿರಂತರ ಪರಿಶ್ರಮದಿಂದ ಭರತನಾಟ್ಯ ಕಲಿತಿದ್ದು, ರಂಗಪ್ರವೇಶ ಮಾಡಲಿದ್ದಾರೆ. ಅಲ್ಲದೆ, ಅಮೆರಿಕದಲ್ಲಿ ನಡೆದ ಬಾಲಿವುಡ್ ನೃತ್ಯ ಪ್ರದರ್ಶನ ಸ್ಪರ್ಧೆಗಳಲ್ಲಿ ವಿಜೇತರಾಗಿದ್ದಾರೆ.

ಮೈಸೂರು ಮಿತ್ರ

ಸಿಎಂ ವಿರುದ್ಧ ಪ್ರಾಸಿಕ್ಯೂಷನ್‌ಗೆ ಕೊಟ್ಟೇ ಕೊಡ್ತಾರೆ



ಟಿ.ಜೆ.ಅಬ್ರಹಾಂ

ಬೆಂಗಳೂರು: ಮುಡಾ ಹಗರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ದೂರು ನೀಡಿರುವ ಸಾಮಾಜಿಕ ಕಾರ್ಯಕರ್ತ ಅಬ್ರಹಾಂ, ರಾಜ್ಯಪಾಲರು ನನ್ನ ಬಳಿ ಮತ್ತಷ್ಟು ಕ್ಲಾರಿಫಿಕೇಷನ್ ಕೇಳಿದ್ದಾರೆ. ಕಳೆದ ಬಾರಿ ಕೇಳಿದ ದಾಖಲೆಗಳ ಬಗ್ಗೆ ಮತ್ತೆ ಮಾತನಾಡಿದ್ದು, ಸಿಎಂ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟೇ ಕೊಡುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನಾನು ಹಾಕಿದ ಪ್ರಾಸಿಕ್ಯೂಷನ್ ಮೇಲೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಶೋಕಾಸ್ ನೋಟಿಸ್ ಕೊಟ್ಟಿದ್ದರು. ಆದರೆ, 3 ಗಂಟೆ ಕ್ಯಾಬಿನೆಟ್ ಸಭೆ ನಡೆಸಿ ಗವರ್ನರ್ ನೋಟಿಸ್ ಕೊಟ್ಟಿದ್ದು ತಪ್ಪು ಅಂತಾರೆ. ಟಿ.ಜೆ. ಅಬ್ರಹಾಂ ಸರಿಯಿಲ್ಲ ಅಂತಾರೆ. ಸಿದ್ದರಾಮಯ್ಯ ಮೇಲೆ ಆರೋಪ ಸರಿಯಿದೆ, ಆದರೆ ಟಿ.ಜೆ.ಅಬ್ರಹಾಂ ಸರಿಯಿಲ್ಲ ಅಂತಾರೆ. ಮತ್ತಷ್ಟು ಕ್ಲಾರಿಫಿಕೇಷನ್ ಕೇಳಿದ್ದಾರೆ. ದಾಖಲೆಗಳ ಬಗ್ಗೆ ಮತ್ತೆ ಚರ್ಚೆ ಮಾಡಿದ್ರು, ಪ್ರಾಸಿಕ್ಯೂಷನ್‌ಗೆ ಕೊಟ್ಟೇ ಕೊಡುತ್ತಾರೆ ಎನ್ನುವ ವಿಶ್ವಾಸ ನನಗೆ ಇದೆ ಎಂದರು.

ಒಂದನೇ ಪುಟದಿಂದ

ಮತ್ತಷ್ಟು ಮಾಹಿತಿ ಪಡೆದ ರಾಜ್ಯಪಾಲರು

ಸ್ಪಷ್ಟನೆ ಕೇಳುತ್ತಾರೆ ಎಂದರೆ, ಅವರಿಗೆ ಇದನ್ನು ಮುಂದುವರೆಸಲು ಆಸಕ್ತಿ ಇದೆ ಎಂದಿದ್ದು, ನನ್ನ ವಿರುದ್ಧ ಮುಖ್ಯಮಂತ್ರಿ ಹಾಗೂ ಅವರ ಸಂಪುಟ ಕೆಲವು ಆರೋಪಗಳನ್ನು ಮಾಡಿದೆ, ಅದಕ್ಕೆ ಸಂಬಂಧಿಸಿದಂತೆಯೂ ನಾನು ಸ್ಪಷ್ಟನೆ ನೀಡಿದ್ದೇನೆ. ನನ್ನ ವಿರುದ್ಧ ರಾಜ್ಯದ ಯಾವುದೇ ಭಾಗದಲ್ಲಿ ಯಾವುದೇ ದೂರು ಇಲ್ಲ, ನಾನು ಸರ್ಕಾರಕ್ಕೆ ಸವಾಲು ಹಾಕುತ್ತೇನೆ, ಪ್ರಕರಣ ದಾಖಲಾಗಿದ್ದರೆ ಅದನ್ನು ಹುಡುಕಿಕೊಡಲಿ ಎಂದರು.

ಇದಕ್ಕೂ ಮುನ್ನ ಮುಡಾ ನಿವೇಶನಗಳ ಹಂಚಿಕೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಬಂದಿರುವ ಆರೋಪಕ್ಕೆ ರಾಜ್ಯಪಾಲರು ಎರಡನೇ ದಿನವಾದ ಇಂದೂ ಅಧಿಕಾರಿಗಳು ಮತ್ತು ಕಾನೂನು ತಜ್ಞರೊಂದಿಗೆ ಸುದೀರ್ಘ ಚರ್ಚೆ ನಡೆಸಿದರು.

ಕರ್ನಾಟಕದ ಅಡ್ವೊಕೇಟ್ ಜನರಲ್ ಆಗಿ ಸೇವೆ ಸಲ್ಲಿಸಿದ್ದ ಹಿರಿಯ ನ್ಯಾಯವಾದಿ ಹಾಗೂ ಸುಪ್ರೀಂಕೋರ್ಟ್‌ನ ಹಿರಿಯ ವಕೀಲರೊಬ್ಬರನ್ನು ರಾಜಭವನಕ್ಕೆ ಕರೆಸಿಕೊಂಡು ಪ್ರಕರಣಕ್ಕೆ ಸಂಬಂಧಿಸಿದಂತೆ ಸರ್ಕಾರ ನೀಡಿರುವ ಉತ್ತರಗಳ ಬಗ್ಗೆ ಕೂಲಂಕುಷ ಪರಿಶೀಲನೆ ನಡೆಸಿ, ಅಧಿಕಾರಿಗಳ ಸಮ್ಮುಖದಲ್ಲೇ ಕೆಲವು ಮಾಹಿತಿ ಪಡೆದುಕೊಂಡರು. ಇದಾದ ನಂತರ ರಾಜ್ಯಪಾಲರಿಗೆ ಪ್ರಕರಣ ಸಂಬಂಧ ಎದುರಾದ ಸಂಶಯಗಳ ಬಗ್ಗೆಯೂ ಕಾನೂನು ತಜ್ಞರೊಂದಿಗೆ ಮತ್ತೊಂದು ಸುತ್ತಿನ ಚರ್ಚೆ ನಡೆಸಿದರು. ರಾಜಭವನ ನೀಡಿದ ನೋಟಿಸ್‌ಗೆ ಸರ್ಕಾರ ಪ್ರತ್ಯೇಕವಾಗಿ ಮೂರು ಸಮಜಾಯಿಷಿ ನೀಡಿದೆ. ಅದರಲ್ಲಿ ಮುಖ್ಯಮಂತ್ರಿ ಅವರು, ಸ್ವಯಂಪ್ರೇರಿತವಾಗಿ 60 ಪುಟಗಳ ಉತ್ತರ ಹಾಗೂ ಸಂಪುಟ ಸಭೆಯಲ್ಲಿ ಕೈಗೊಂಡ ತೀರ್ಮಾನ ಹಾಗೂ ಮನವಿ ಕುರಿತು ಇಂದು ದಿನ ಪರಿಶೀಲನೆ ಮತ್ತು ಚರ್ಚೆಯೇ ನಡೆಯಿತು.

ಇದ ನಂತರ ಪ್ರಮುಖ ದೂರುದಾರ, ಸಾಮಾಜಿಕ ಕಾರ್ಯಕರ್ತ ಟಿ.ಜೆ. ಅಬ್ರಹಾಂ ಅವರನ್ನು ಸಂಪರ್ಕಿಸಿದ ರಾಜಭವನ, ಮಧ್ಯಾಹ್ನ 3 ಗಂಟೆಗೆ ರಾಜ್ಯಪಾಲರನ್ನು ಭೇಟಿ ಮಾಡುವಂತೆ ಸೂಚಿಸಿತು. ರಾಜಭವನಕ್ಕೆ ಆಗಮಿಸಿದ ಅಬ್ರಹಾಂ ಅವರಿಂದ, ರಾಜ್ಯಪಾಲರು ಮತ್ತು ಕಾನೂನು ತಜ್ಞರು ತಮ್ಮಲ್ಲಿ ಮೂಡಿದ್ದ ಸಂಶಯಗಳಿಗೆ ಸಂಬಂಧಿಸಿದಂತೆ ಹೆಚ್ಚಿನ ವಿವರಣೆ ಪಡೆದುಕೊಂಡರು.

ವಿನೇಶ್ ಪೋಗಟ್ ಫೈನಲ್‌ಗೆ

ಭಾರತೀಯ ಮಹಿಳಾ ಮತ್ತು ಎರಡನೇ ಕುಸ್ತಿಪಟು ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಇದಕ್ಕೂ ಮೊದಲು ಸುಶೀಲ್ ಕುಮಾರ್ ಫೈನಲ್ ತಲುಪಿದ್ದರು.

ವಿನೇಶ್ ಪೋಗಟ್ ಆರಂಭದಿಂದಲೇ ಎದುರಾಳಿ ವಿರುದ್ಧ ಬಿಗಿಪಟ್ಟು ಹಾಕಿದರು. ಕ್ಯೂಬಾದ ಕುಸ್ತಿಪಟು ಭಾರತದ ಪೈಲ್ವಾನ್ ಮುಂದೆ ಮಿಸುಕಾಡಲು ಆಗಲಿಲ್ಲ. ಇದರಿಂದ ಸತತ ಅಂಕ ಪಡೆಯುತ್ತಾ ಸಾಗಿದ ವಿನೇಶ್ 5 ಅಂಕ ಪಡೆದು ಏಕಮೇವಾಗಿ ಜಯ ಸಾಧಿಸಿದರು. ಇದಕ್ಕೂ ಮುನ್ನಾ ನಡೆದ ಫ್ರೀಸ್ಟೈಲ್ ಕುಸ್ತಿಯಲ್ಲಿ ಉಕ್ರೇನ್‌ನ ಒಕ್ಸಾನಾ ಲಿವಾಚ್ ಅವರನ್ನು 7–5 ಹಾಗೂ 50 ಕೆಜಿ ಕುಸ್ತಿಯ 16ನೇ ಸುತ್ತಿನ ಪಂದ್ಯದಲ್ಲಿ ಯುಯಿ ಸುಸಾಕಿ ಅವರನ್ನು 3–2 ಅಂತರದಿಂದ ಸೋಲಿಸಿದ್ದರು.

ಸರ್ಕಾರ ತೆಗೆಯೋ ಧಮ್ಮಿಲ್ಲ; ಧೈರ್ಯವಿಲ್ಲ

ಮಂಡ್ಯ ಜನ ಕಾವೇರಿ ಉಳಿವಿಗಾಗಿ ಹಲವು ದಶಕಗಳ ಹಿಂದೆ ಚಡ್ಡಿ ಚಳುವಳಿ ನಡೆಸಿದ್ದರು. ಎಸ್.ಎಂ.ಕೃಷ್ಣ ಮುಖ್ಯಮಂತ್ರಿಯಾಗಿದ್ದಾಗ ಕಾವೇರಿಗಾಗಿ ಪಾದಯಾತ್ರೆ ನಡೆಸಿದ್ದರು. ಈ ಹಿಂದೆ ನಾವು ಮೇಕೆದಾಟು ಯೋಜನೆಗಾಗಿ, ಕೃಷ್ಣ ನದಿ ನೀರಿಗಾಗಿ, ರಾಜ್ಯದ ಗಣಿ ಉಳಿವಿಗೆ ಬಳ್ಳಾರಿಗೆ ಹೀಗೆ ಹಲವು ಬಾರಿ ರಾಜ್ಯದ ಜನರ ಹಿತಕ್ಕಾಗಿ ಪಾದಯಾತ್ರೆ ಮಾಡಿದ್ದೇವೆ. ಆದರೆ ನೀವು ನಿಮ್ಮ ಸ್ವಾರ್ಥಕ್ಕೆ ಪಾದಯಾತ್ರೆ ಮಾಡುತ್ತಿದ್ದು, ನಿಮ್ಮ ಪಾದಯಾತ್ರೆಯಲ್ಲಿ ಧಮ್ಮಿಲ್ಲ ಎಂದು ಟೀಕಿಸಿದರು.

ಈಗಾಗಲೇ ನಾವು ತಮಿಳುನಾಡಿಗೆ 148 ಟಿಎಂಸಿ ನೀರು ಬಿಟ್ಟಿದ್ದೇವೆ. ಹೆಚ್ಚುವರಿಯಾಗಿ 99 ಟಿಎಂಸಿ ನೀರು ಹೋಗಿದ್ದು, 64 ಟಿಎಂಸಿ ನೀರು ನಮಗೂ ಬೇಕಿಲ್ಲದೇ, ತಮಿಳುನಾಡಿಗೂ ಬೇಕಿಲ್ಲದೇ ಸಮುದ್ರದ ಪಾಲಾಗಿದೆ. ಮೇಕೆದಾಟು ಬಳಿ ಡ್ಯಾಂ ಇದ್ದರೆ 64 ಟಿಎಂಸಿ ನೀರು ಪೋಲಾಗುತ್ತಿರಲಿಲ್ಲ. ಈ ನೀರನ್ನು ಉಳಿಸಲು ಬಿಜೆಪಿ ನಾಯಕರು ಕೇಂದ್ರದಲ್ಲಿ ಮೇಕೆದಾಟು ಯೋಜನೆಗೆ ಅನುಮತಿ ತೆಗೆದುಕೊಂಡು ಬರಲಿ. ಅದನ್ನು ಬಿಟ್ಟು ಪ್ರಯೋಜನಕ್ಕೆ ಬಾರದ ಪಾದಯಾತ್ರೆ ಏಕೆ ನಡೆಸಬೇಕೆಂದು ಪ್ರಶ್ನಿಸಿದರು.

ಸಂಸದರಾದ ಬಳಿಕ ಐದೇ ನಿಮಿಷದಲ್ಲಿ ಮೇಕೆದಾಟು ಯೋಜನೆಗೆ ಅನುಮತಿ ತೆಗೆದುಕೊಂಡು ಬರುವೆ ಎಂದಿದ್ದ ಕುಮಾರಸ್ವಾಮಿ ಇದೀಗ ಒಂದೇ ದಿನದಲ್ಲಿ ಅನುಮತಿ ತರಲು ಸಾಧ್ಯವೇ. ಐದೇ ನಿಮಿಷದಲ್ಲಿ ಅನುಮತಿ ತರುವುದಾಗಿ ಹೇಳಲು ನಾನು ಮೂರ್ಖನೇ ಎಂದಿದ್ದಾರೆ. ಅವರೇ ಹೇಳಿದ್ದ ಮಾತನ್ನು ಇದೀಗ ಒಪ್ಪಲು ಕುಮಾರಸ್ವಾಮಿ ಸಿದ್ಧರಿಲ್ಲ ಮೊದಲು ಮೇಕೆದಾಟು ಯೋಜನೆಗೆ ಅನುಮತಿ ತರುವ ಕೆಲಸವನ್ನು ಕುಮಾರಸ್ವಾಮಿ ಮಾಡಲಿ. ಜನ ಕೊಟ್ಟಿರುವ ಅಧಿಕಾರವನ್ನು ಸದ್ಬಳಕೆ ಮಾಡಿಕೊಳ್ಳಲಿ ಎಂದು ಸಲಹೆ ನೀಡಿದರು.

ಎಸ್.ಎಂ.ಕೃಷ್ಣ ಈ ಹಿಂದೆ ಮಂಡ್ಯದಿಂದ ಗೆದ್ದು ಕೇಂದ್ರದಲ್ಲಿ ಕೈಗಾರಿಕಾ ಮಂತ್ರಿಯಾಗಿದ್ದಾಗ ಮಂಡ್ಯದ ಗೆಜ್ಜಲಗೆರೆ, ಸೋಮನಹಳ್ಳಿ, ತೂಬಿನಕೆರೆಯಲ್ಲಿ ಕೈಗಾರಿಕಾ ಕಾರ್ಖಾನೆಗಳನ್ನು ತಂದರು. ಇದೀಗ ನಿಮಗೆ ಕ್ಯಾಬಿನೆಟ್ ದರ್ಜೆಯ ಕೈಗಾರಿಕಾ ಮಂತ್ರಿ ಸಿಕ್ಕಿದೆ. ಮಂಡ್ಯ ಯುವಕರಿಗೆ 10 ಸಾವಿರ ಉದ್ಯೋಗ ಸೃಷ್ಟಿ ಮಾಡುವುದಾಗಿ ಹೇಳಿದ್ದೀರಿ. ಮೊದಲು ಉದ್ಯೋಗ ಸೃಷ್ಟಿ ಮಾಡುವ ಕಡೆ ಗಮನ ಹರಿಸಿ. ಮಂಡ್ಯದಲ್ಲಿ ಫ್ಯಾಕ್ಟರಿಗಳನ್ನು ತೆರೆದು ಉದ್ಯೋಗ ಕೊಡುತ್ತೇವೆಂದರೆ ನಿಮ್ಮ ಜೊತೆಗೆ ನಮ್ಮ ಸರ್ಕಾರ ನಿಲ್ಲಲಿದೆ ಎಂದು ಹೇಳಿದರು.

ಹೆಚ್.ಡಿ.ಕುಮಾರಸ್ವಾಮಿ ನನ್ನ ವಿರುದ್ಧ ಭ್ರಷ್ಟಾಚಾರದ ಸರಣಿ ಆರೋಪಗಳನ್ನು ಮಾಡಿದ್ದಾರೆ. ಅವರು ಮತ್ತವರ ಕುಟುಂಬದವರು ಭ್ರಷ್ಟಾಚಾರದಿಂದ ಎಷ್ಟು ಹಣ ಮಾಡಿದ್ದಾರೆ. ನನಗೆ ಗೊತ್ತು ಆದ್ದರಿಂದಲೇ ಹೆಚ್ಡಿಕೆ ಕುಟುಂಬದ ಭ್ರಷ್ಟಾಚಾರದ ಬಗ್ಗೆ ಮಾತನಾಡುತ್ತಿರುವೆ. ಕುಮಾರಸ್ವಾಮಿಗೆ ತಾಕತ್ತಿದ್ದರೆ ನನ್ನ ಕುಟುಂಬದ ಭ್ರಷ್ಟಾಚಾರದ ಬಗ್ಗೆ ದಾಖಲೆ ಇದ್ದರೆ ಮಾತನಾಡಲಿ. ಹಾಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸಹ ನನ್ನನ್ನ ಭ್ರಷ್ಟಾಚಾರದ ಪಿತಾಮಹ ಎಂದಿದ್ದಾರೆ. ಶಿಕಾರಿಪುರದಲ್ಲಿ ನಾವು ಕಾಂಗ್ರೆಸ್‌ನ ಪ್ರಬಲ ಟಿಕೆಟ್ ಆಕಾಂಕ್ಷಿಯಾಗಿದ್ದ ನಾಗರಾಜ್‌ಗೌಡಗೆ ಟಿಕೆಟ್ ಕೊಟ್ಟಿದ್ದರೆ ವಿಜಯೇಂದ್ರ ವಿಧಾನಸೌಧದ ಒಳಗೇ ಬರುತ್ತಿರಲಿಲ್ಲ ಎಂದು ಕಿಡಿಕಾರಿದರು.

ಕ್ಯಾಬಿನೆಟ್ ಸಚಿವರ ದಂಡು: ಕಾರ್ಯಕ್ರಮದಲ್ಲಿ ಸಚಿವರಾದ ಎನ್.ಚಲುವರಾಯಸ್ವಾಮಿ, ಕೃಷ್ಣಬೈರೇಗೌಡ, ರಾಮಲಿಂಗಾರೆಡ್ಡಿ, ಕೆ.ಎಚ್.ಮುನಿಯಪ್ಪ, ಪ್ರಿಯಾಂಕ್ ಖರ್ಗೆ, ಸಂತೋಷ್ ಲಾಡ್, ಬೈರತಿ ಸುರೇಶ್, ಲಕ್ಷ್ಮಿ ಹೆಬ್ಬಾಳ್ಕರ್, ಶರಣಪ್ರಕಾಶ್ ಪಾಟೀಲ್, ಬೋಸರಾಜು, ಡಿ.ಸುಧಾಕರ್ ಸೇರಿದಂತೆ 12 ಕ್ಯಾಬಿನೆಟ್ ಸಚಿವರು ಭಾಗವಹಿಸಿದ್ದರು.

ಈ ವೇಳೆ ಸಂಸದ ಜಿ.ಸಿ.ಚಂದ್ರಶೇಖರ್, ಶಾಸಕರಾದ ಪಿ.ರವಿಕುಮಾರ್ ಗಣಿಗ, ಎ.ಬಿ.ರಮೇಶ್‌ಬಾಬು ಬಂಡಿಸಿದ್ದೇಗೌಡ, ಮಾಗಡಿ ಬಾಲಕೃಷ್ಣ, ಶರತ್ ಬಚ್ಚೇಗೌಡ, ರಿಜ್ವಾನ್ ಹರ್ಷದ್, ರಘುಮೂರ್ತಿ, ತಮ್ಮಣ್ಣ, ವಿಧಾನಪರಿಷತ್ ಸದಸ್ಯರಾದ ದಿನೇಶ್ ಗೂಳಿಗೌಡ, ಮಧು ಜಿ.ಮಾದೇಗೌಡ, ಪ್ರಕಾಶ್ ರಾಥೋಡ್, ಐವಾನ್ ಡಿಸೋಜಾ, ಯು.ಬಿ.ವೆಂಕಟೇಶ್, ನಸೀರ್ ಅಹ್ಮದ್, ಮಾಜಿ ಸಚಿವರಾದ ರಮಾನಾಥ್ ರೈ, ವಿನಯ್‌ಕುಮಾರ್ ಸೊರಕೆ, ಎಚ್.ಆಂಜನೇಯ, ಎಚ್.ಎಂ.ರೇವಣ್ಣ, ಬಿ.ಸೋಮಶೇಖರ್, ಮಾಜಿ ಶಾಸಕರಾದ ಬಿ.ರಾಮಕೃಷ್ಣ, ಎನ್.ಅಪ್ಪಾಜಿಗೌಡ, ಕೆ.ಬಿ.ಚಂದ್ರಶೇಖರ್, ಬಿ.ಪ್ರಕಾಶ್, ಮರಿತಿಬ್ಬೇಗೌಡ, ಯುವ ಕಾಂಗ್ರೆಸ್ ರಾಷ್ಟ್ರೀಯ ಘಟಕದ ಅಧ್ಯಕ್ಷ ಬಿ.ವಿ.ಶ್ರೀನಿವಾಸ್, ರಾಜ್ಯಾಧ್ಯಕ್ಷ ಮಹಮ್ಮದ್ ನಲಪಾಡ್, ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಪುಷ್ಪಾ ಅಮರ್‌ನಾಥ್, ಕೆಪಿಸಿಸಿ ಕಾರ್ಯಾಧ್ಯಕ್ಷ ವಸಂತ್‌ಕುಮಾರ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಕಾರ್ಯಾಧ್ಯಕ್ಷ ಎಂ.ಎಸ್.ಚಿದಂಬರ್ ಸೇರಿದಂತೆ ಹಲವು ಮಂದಿ ಗಣ್ಯರು ಉಪಸ್ಥಿತರಿದ್ದರು.

ಸರ್ವಪಕ್ಷ ಸಭೆಯಲ್ಲಿ ಮಹತ್ವದ ನಿರ್ಣಯ!

ನಡೆದ ಸರ್ವಪಕ್ಷ ಸಭೆಗೆ ಸಂಕ್ಷಿಪ್ತವಾಗಿ ತಿಳಿಸಲಾಗಿದೆ. ಸರ್ವಾನುಮತದ ಬೆಂಬಲ ಮತ್ತು ಈ ವೇಳೆ ಕೈಗೊಂಡ ನಿರ್ಣಯಗಳು ಮತ್ತು ತಿಳುವಳಿಕೆಯನ್ನು ಶ್ಲಾಘಿಸುತ್ತೇನೆ' ಎಂದು ಸಭೆಯ ನಂತರ ಜೈಶಂಕರ್ ಎಕ್ಸ್ (ಟ್ವಿಟರ್)ನಲ್ಲಿ ಪೋಸ್ಟ್ ಮಾಡಿದ್ದಾರೆ.

ಇದೇ ವಿಚಾರವಾಗಿ ಸುದ್ದಿಗಾರರೊಂದಿಗೆ ಮಾತನಾಡಿದ ಕಾಂಗ್ರೆಸ್ ನಾಯಕ ಕಾರ್ತಿ ಚಿದಂಬರಂ, 'ಬಾಂಗ್ಲಾದೇಶದ ಪರಿಸ್ಥಿತಿಯ ಬಗ್ಗೆ ಸರ್ಕಾರ ಸರ್ವಪಕ್ಷ ಸಭೆಗೆ ಮಾಹಿತಿ ನೀಡಿದೆ. ರಾಷ್ಟ್ರೀಯ ಭದ್ರತೆ ಮತ್ತು ರಾಷ್ಟ್ರೀಯ ಹಿತಾಸಕ್ತಿಗಳಿಗೆ ಸಂಬಂಧಿಸಿದಂತೆ ಕಾಂಗ್ರೆಸ್ ಪಕ್ಷವು ಸಂಪೂರ್ಣವಾಗಿ ಸರ್ಕಾರದ ಜೊತೆಗಿದೆ' ಎಂದು ಚಿದಂಬರಂ ಪಿಟಿಐ ಸುದ್ದಿ ಸಂಸ್ಥೆಗೆ ತಿಳಿಸಿದ್ದಾರೆ. ಆದರೆ ಇಂದಿನ ಸಭೆಗೆ ಕಾರ್ತಿ ಚಿದಂಬರಂ ಗೈರಾಗಿದ್ದರು.

ಇನ್ನು ಇಂದು ನಡೆದ ಸರ್ವಪಕ್ಷಗಳ ಸಭೆಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಡಿಎಂಕೆ ನಾಯಕ ಟಿ.ಆರ್.ಬಾಲು, ಎನ್‌ಸಿಪಿ ನಾಯಕಿ ಸುಪ್ರಿಯಾ ಸುಳೆ ಸೇರಿದಂತೆ ಹಲವು ನಾಯಕರು ಭಾಗವಹಿಸಿದ್ದರು.

ಬೆಂಗಾವಲು ವಾಹನ, ಅಂಗರಕ್ಷಕರಿಲ್ಲದೇ ಮೈಸೂರಲ್ಲಿ ಸಿಎಂ ಸಿದ್ದರಾಮಯ್ಯ ರೌಂಡ್ಸ್

ಮೈತ್ರಿ ಪಾದಯಾತ್ರೆಗೆ ಡೋಂಟ್ ಕೇರ್ ಸಂದೇಶ!



ಮೈಸೂರು,ಆ.6(ಪಿಎಂ)– ಬೆಂಗಾವಲು ವಾಹನ, ಅಂಗರಕ್ಷಕರಿಲ್ಲದೇ ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಸೂರಲ್ಲಿ ಸಂಚರಿಸುವ ಮೂಲಕ ಸಾರ್ವಜನಿಕರ ಗಮನ ಸೆಳೆದರು. ಅತ್ತ ಮುಡಾ ನಿವೇಶನ ವಿಚಾರದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಆರೋಪಗಳ ಸರಮಾಲೆ ಹೊರಿಸಿ ಅವರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ–ಜೆಡಿಎಸ್ ಮೈತ್ರಿ ಪಾದಯಾತ್ರೆ ನಡೆಸುತ್ತಿದ್ದರೆ, ಮಂಗಳವಾರ ಸಂಜೆ ಮೈಸೂರಿಗೆ ಆಗಮಿಸಿದ ಸಿಎಂ ಸಿದ್ದರಾಮಯ್ಯ ಮಾತ್ರ ರಿಲ್ಯಾಕ್ಸ್ ಮೂಡ್‌ನಲ್ಲಿ ರೌಂಡ್ಸ್ ಹೋಗಿ ನಾಗರಿಕರ ಗಮನ ಸೆಳೆದರು.

ಮಳವಳ್ಳಿ ತಾಲೂಕು ಪೂರಿಗಾಲಿ ಗ್ರಾಮದಲ್ಲಿ ಶಾಸಕ ನರೇಂದ್ರಸ್ವಾಮಿ ತಂದೆಯವರ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿ ಸರ್ಕಾರಿ ಕಾರಿನಲ್ಲಿ ಮೈಸೂರಿಗೆ ಆಗಮಿಸಿದ ಸಿಎಂ ಸಿದ್ದರಾಮಯ್ಯ, ಕೊನೆಗೆ ಟಿಕೆ ಲೇಔಟ್‌ನ ತಮ್ಮ ನಿವಾಸಕ್ಕೆ ಬಂದರು. ಬಳಿಕ ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್ ಅವರ ಕಾರಿನಲ್ಲಿ ಕುಳಿತು ನಗರದಲ್ಲಿ ಸುತ್ತಾಡಿದರು.

ಹೆಚ್.ಪಿ.ಮಂಜುನಾಥ್ ತಾವೇ ಕಾರು ಚಾಲನೆ ಮಾಡಿದರೆ, ಸಿದ್ದರಾಮಯ್ಯ ಕಾರಿನ ಮುಂಭಾಗದಲ್ಲಿ ಅವರೊಂದಿಗೆ ಕುಳಿತಿದ್ದರು. ಕುವೆಂಪುನಗರದ ವಿಶ್ವಮಾನವ ಜೋಡಿ ರಸ್ತೆಯಲ್ಲಿ ತಮ್ಮ ಹೊಸ ಮನೆಯ ನಿರ್ಮಾಣ ಕಾಮಗಾರಿ ವೀಕ್ಷಿಸಿದ ಸಿದ್ದರಾಮಯ್ಯ, ಬಳಿಕ ಅಲ್ಲಿಂದ ನಗರದ ಕೋರ್ಟ್ ಮುಂಭಾಗ ವಾಣಿವಿಲಾಸ ರಸ್ತೆಯಲ್ಲಿರುವ ಕಿಂಗ್ಸ್ ಕಾಫಿ ಎದುರು ಕಾರು ನಿಲುಗಡೆ ಮಾಡಿ, ಕಾರಿನಲ್ಲೇ ಕುಳಿತು ಕಾಫಿ ಸವಿದರು.

ಕಾರಿನಲ್ಲಿ ಸಿದ್ದರಾಮಯ್ಯ ಕಾಫಿ ಕುಡಿಯುತ್ತಿರುವುದನ್ನು ಕಂಡ ಸಾರ್ವಜನಿಕರು ಅವರ ಕಾರಿನತ್ತ ಲಗ್ಗೆ ಇಟ್ಟರು. ಅಲ್ಲದೆ, ಅವರಿಗೆ ನಮಸ್ಕರಿಸಿ, ಮಾತನಾಡಿಸಿ ತಮ್ಮ ಅಭಿಮಾನ ಮೆರೆದರು. ಮಕ್ಕಳು, ಮಹಿಳೆಯರು ಸೇರಿದಂತೆ ಹಲವರು ಮುಖ್ಯಮಂತ್ರಿಗಳೊಂದಿಗೆ ತಮ್ಮ ಮೊಬೈಲ್‌ನಲ್ಲಿ ಸೆಲ್ಫಿ ಕ್ಲಿಕ್ಕಿಸಿಕೊಂಡು ಸಂಭ್ರಮಿಸಿದರು. ಸಿದ್ದರಾಮಯ್ಯರ ಕಾರಿನ ಬಳಿ ಜನದಟ್ಟಣೆ ಉಂಟಾದ ಹಿನ್ನೆಲೆಯಲ್ಲಿ ಕೆಲಕಾಲ ಸಂಚಾರಕ್ಕೂ ಇಲ್ಲಿ ತೊಡಕಾಗಿತ್ತು. ಸಾರ್ವಜನಿಕರನ್ನು ಆತ್ಮೀಯತೆಯಿಂದ ಮಾತನಾಡಿಸಿದ ಸಿದ್ದರಾಮಯ್ಯ ಬಳಿಕ ಇಲ್ಲಿಂದ ನಿರ್ಗಮಿಸಿದರು.

ಅತಿಥಿ ಉಪನ್ಯಾಸಕರ ಪ್ರತಿಭಟನಾ ಸ್ಥಳಕ್ಕೂ ಭೇಟಿ: ಇದಕ್ಕೂ ಮುನ್ನ ಮೈಸೂರು ವಿವಿ ಕ್ರಾಫರ್ಡ್ ಭವನದ ಎದುರು ವಿವಿ ಅತಿಥಿ ಉಪನ್ಯಾಸಕರು ನಡೆಸುತ್ತಿರುವ ಪ್ರತಿಭಟನಾ ಸ್ಥಳಕ್ಕೂ ಸಿದ್ದರಾಮಯ್ಯ ಭೇಟಿ ನೀಡಿದ್ದರು. ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಅತಿಥಿ ಉಪನ್ಯಾಸಕರಾಗಿ ಮೈಸೂರು ವಿವಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನಮ್ಮನ್ನು ಮುಂದಿನ ಶೈಕ್ಷಣಿಕ ಸಾಲಿನಲ್ಲೂ ಕರ್ತವ್ಯದಲ್ಲಿ ಮುಂದುವರೆಸಬೇಕೆಂಬ ತಮ್ಮ ಬೇಡಿಕೆಯನ್ನು ಪ್ರತಿಭಟನಾಕಾರರು ಮುಖ್ಯಮಂತ್ರಿಗಳ ಗಮನಕ್ಕೆ ತಂದರು. ಅವರ ಅಹವಾಲು ಆಲಿಸಿದ ಮುಖ್ಯಮಂತ್ರಿಗಳು, ಉಸ್ತುವಾರಿ ಸಚಿವ ಹೆಚ್.ಸಿ. ಮಹದೇವಪ್ಪ, ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಅವರಿಗೂ ಈ ಬಗ್ಗೆ ಗಮನಹರಿಸಿ ಎಲ್ಲವನ್ನು ಬಗೆಹರಿಸುವಂತೆ ಸೂಚನೆ ನೀಡುವುದಾಗಿ ಭರವಸೆ ನೀಡಿ, ತೆರಳಿದರು.



ಮೈಮುಲ್ ಚುನಾವಣೆ ಚರ್ಚೆ

ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಆ.9ರಂದು ಕಾಂಗ್ರೆಸ್‌ನಿಂದ ಹಮ್ಮಿಕೊಂಡಿರುವ ಜನಾಂದೋಲನ ಸಮಾವೇಶ ಸಂಬಂಧ ಸಿಎಂ ಸಿದ್ದರಾಮಯ್ಯ ತಮ್ಮ ನಿವಾಸದಲ್ಲಿ ಮಂಗಳವಾರ ಸಂಜೆ ಸ್ಥಳೀಯ ಮುಖಂಡರೊಂದಿಗೆ ಚರ್ಚೆ ನಡೆಸಿದರು ಎನ್ನಲಾಗಿದೆ. ನಂತರ ಮೈಮುಲ್ ಅಧ್ಯಕ್ಷ ಸ್ಥಾನದ ಚುನಾವಣೆ ಬಗ್ಗೆಯೂ ಚರ್ಚೆ ನಡೆಸಿದರು. ಮೂವರು ಆಕಾಂಕ್ಷಿಗಳು ಇರುವ ಕಾರಣ ಯಾರನ್ನು ಕಣಕ್ಕಿಳಿಸಬೇಕೆಂಬ ಬಗ್ಗೆ ಮುಖ್ಯಮಂತ್ರಿಗಳು ಚರ್ಚಿಸಿರುವುದಾಗಿ ಮೂಲಗಳು ತಿಳಿಸಿವೆ.

ಜಯದೇವ ಹೃದ್ರೋಗ ಆಸ್ಪತ್ರೆಯಲ್ಲಿ ಹೃದಯಕ್ಕೆ ಆರ್‌ಬೈಟಲ್ ಅಥೆರೆಕ್ಟಮಿ ಚಿಕಿತ್ಸೆ ಯಶಸ್ವಿ

ಓಪನ್ ಹಾರ್ಟ್ ಸರ್ಜರಿ ಬದಲು ಕ್ಯಾಲ್ಸಿಯಂ ಪುಡಿಪುಡಿ ಮಾಡಿ ಸ್ಟಂಟ್ ಹಾಕಿ ಚಿಕಿತ್ಸೆ



ಮೈಸೂರಿನ ಜಯದೇವ ಹೃದ್ರೋಗ ಆಸ್ಪತ್ರೆಯಲ್ಲಿ ಪ್ರಥಮ ಬಾರಿಗೆ ಹೃದಯಕ್ಕೆ ಆರ್‌ಬೈಟಲ್ ಅಥೆರೆಕ್ಟಮಿ ಚಿಕಿತ್ಸೆಗೆ ಒಳಗಾದ ರೋಗಿಯೊಂದಿಗೆ ಆಸ್ಪತ್ರೆ ವೈದ್ಯಕೀಯ ಸಿಬ್ಬಂದಿಗಳ ತಂಡ.

ಮೈಸೂರು, ಆ,6(ಎಂಟಿವೈ)– ಮೈಸೂರಿನ ಜಯದೇವ ಹೃದ್ರೋಗ ಆಸ್ಪತ್ರೆಯಲ್ಲಿ ಪ್ರಥಮ ಬಾರಿಗೆ ರೋಗಿಯೊಬ್ಬರ ಹೃದಯಕ್ಕೆ ಆರ್‌ಬೈಟಲ್ ಅಥೆರೆಕ್ಟಮಿ ಚಿಕಿತ್ಸೆಯನ್ನು ಯಶಸ್ವಿಯಾಗಿ ಮಾಡಲಾಗಿದೆ ಎಂದು ಜಯದೇವ ಹೃದ್ರೋಗ ಸಂಸ್ಥೆಯ ವೈದ್ಯಕೀಯ ಅಧೀಕ್ಷಕ ಡಾ.ಕೆ.ಎಸ್.ಸದಾನಂದ ತಿಳಿಸಿದ್ದಾರೆ.

ಜಯದೇವ ಆಸ್ಪತ್ರೆಯಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಮೈಸೂರು ಜಯದೇವ ಹೃದ್ರೋಗ ಆಸ್ಪತ್ರೆಯಲ್ಲಿ ಆರ್‌ಬೈಟಲ್ ಅಥೆರೆಕ್ಟಮಿ ಚಿಕಿತ್ಸೆಗೆ ಒಳಗಾದ ಮೈಸೂರು ತಾಲೂಕು ಉತ್ತನಹಳ್ಳಿಯ 50 ವರ್ಷದ ಪುಟ್ಟಸ್ವಾಮಿಯವರಿಗೆ ಆಸ್ಪತ್ರೆಯ ವೈದ್ಯ ಡಾ.ಬಿ.ದಿನೇಶ್ ನೇತೃತ್ವದ ತಂಡ ಯಶಸ್ವಿಯಾಗಿ ಚಿಕಿತ್ಸೆ ನಡೆಸಿದೆ ಎಂದರು.

ಹೃದಯದ ರಕ್ತನಾಳದಲ್ಲಿ ಹೆಚ್ಚಿನ ಪ್ರಮಾಣದ ಕ್ಯಾಲ್ಸಿಯಂ ಇದ್ದರೆ ಈ ಹಿಂದೆ ಓಪನ್ ಹಾರ್ಟ್ ಸರ್ಜರಿ ಮಾಡಲಾಗುತ್ತಿತ್ತು. ಈಗ ರಕ್ತನಾಳದ ಕ್ಯಾಲ್ಸಿಯಂ ಅನ್ನು ಪುಡಿಪುಡಿ ಮಾಡಿ ಸ್ಟಂಟ್ ಹಾಕುವ ವಿಧಾನ ಅನುಸರಿಸಲಾಗುತ್ತಿದೆ. ಈ ವಿಧಾನದಿಂದ ರಕ್ತನಾಳಕ್ಕೆ ಅಪಾಯ ಕಡಿಮೆ ಇದ್ದು, ಇದರ ವೆಚ್ಚ ಸುಮಾರು 2.5 ಲಕ್ಷ ಆಗುತ್ತದೆ ಎಂದು ತಿಳಿಸಿದರು.

ಇದೇ ವೇಳೆ ಹೃದ್ರೋಗ ತಜ್ಞ ಡಾ.ಬಿ. ದಿನೇಶ್ ಮಾತನಾಡಿ, ರೋಗಿಗೆ ಬೈಪಾಸ್ ಮಾಡಲು ರಕ್ತನಾಳಗಳು ಸೂಕ್ತವಿಲ್ಲದ ಕಾರಣ ಆರ್‌ಬೈಟಲ್ ಅಥೆರೆಕ್ಟಮಿ ವಿಧಾನದಿಂದ ರಕ್ತನಾಳದಲ್ಲಿರುವ ಕ್ಯಾಲ್ಸಿಯಂ ಫ್ಯಾಟ್ ತೆಗೆದು ರಕ್ತನಾಳವನ್ನು ಶುದ್ಧೀಕರಿಸಿ ನಂತರ ಸ್ಟಂಟ್ ಅಳವಡಿಸಲಾಗುತ್ತದೆ. ರಕ್ತನಾಳದಲ್ಲಿ ಯಾವುದೇ ತರನಾದ ತಿರುವುಗಳಿದ್ದರೂ ಸಹ ಈ ಚಿಕಿತ್ಸೆ ಮಾಡಬಹುದು. ಇದರಿಂದ ರೋಗಿಗೆ ಯಾವುದೇ ತೊಂದರೆಯಾಗುವುದಿಲ್ಲ. ಶಸ್ತ್ರಚಿಕಿತ್ಸೆ ಆದ ನಂತರ ಮೂರೇ ದಿನದಲ್ಲಿ ರೋಗಿಯನ್ನು ಮನೆಗೆ ಕಳುಹಿಸಬಹುದು ಎಂದರು.

ಈ ಸಂದರ್ಭದಲ್ಲಿ ಜಯದೇವ ಹೃದ್ರೋಗ ಸಂಸ್ಥೆಯ ನಿರ್ದೇಶಕ ಡಾ. ಕೆ.ಎಸ್.ರವೀಂದ್ರನಾಥ್ ಆರ್ಥಿಕ ಸಲಹೆಗಾರರಾದ ಅವಿನಾಶ್ ಜೊಲ್ಲ್, ಡಾ. ಶ್ರೀಮಂತ್, ಡಾ. ಸ್ನೇಹಲ್, ಡಾ. ಭಾರತಿ, ಡಾ. ಅರ್ಪಿತ, ಡಾ. ನಂಜಪ್ಪ, ಡಾ. ಮಹೇಶ್, ಡಾ. ನಿತಿನ್, ಡಾ. ರಾಗಸುಧ, ನರ್ಸಿಂಗ್ ಅಧೀಕ್ಷಕಿ ಯೋಗಲಕ್ಷ್ಮಿ, ಗುರುಮೂರ್ತಿ, ಸಂತೋಷ್, ನವೀನ್, ಕೃಷ್ಣ, ಪ್ರತಾಪ್, ದೀಪಿಕಾ, ದಯಾನಂದ್ ಇದ್ದರು.

ಮಾನವನ ದೈಹಿಕ, ಮಾನಸಿಕ ಹಸಿವು ನೀಗದೆ ಜಗತ್ತಿನಲ್ಲಿ ಶಾಂತಿ ನೆಲೆಸಲ್ಲ

ಮಹಾರಾಜ ಕಾಲೇಜು ಪ್ರಾಧ್ಯಾಪಕ ಡಾ.ಕೆಂಪೇಗೌಡ ಅಭಿಮತ



ವಚನ ಶ್ರಾವಣ: ಮನೆಮನೆಗೆ ಶ್ರಾವಣ ಮಾಸದ ಶರಣ ಸಂದೇಶ ಕಾರ್ಯಕ್ರಮದಲ್ಲಿ ಮಹಾರಾಜ ಕಾಲೇಜಿನ ಪ್ರಾಧ್ಯಾಪಕ ಡಾ. ಟಿ.ಕೆ. ಕೆಂಪೇಗೌಡ, ಶರಣ ಸಾಹಿತ್ಯ ಪರಿಷತ್ ನಗರ ಘಟಕದ ಅಧ್ಯಕ್ಷ ಮ.ಗು.ಸದಾನಂದಯ್ಯ, ಹಿರಿಯ ಸಾಹಿತಿ ತ್ರಿಪುರಾಂತಕ ಸೇರಿದಂತೆ ಇತರರಿದ್ದರು.

ಮೈಸೂರು, ಆ.6(ಎಸ್‌ಪಿಎನ್)– ಮಾನವ ದೈಹಿಕ ಮತ್ತು ಮಾನಸಿಕ ಹಸಿವು ನೀಗದ ಹೊರತು ಜಗತ್ತಿನಲ್ಲಿ ಶಾಂತಿ ನೆಲೆಸುವುದಿಲ್ಲ ಎಂದು ಮಹಾರಾಜ ಕಾಲೇಜಿನ ಪ್ರಾಧ್ಯಾಪಕ ಡಾ. ಟಿ.ಕೆ. ಕೆಂಪೇಗೌಡ ಅಭಿಪ್ರಾಯಪಟ್ಟರು.

ಮೈಸೂರು ಶ್ರೀರಾಂಪುರ ಎರಡನೇ ಹಂತದಲ್ಲಿ ಶರಣ ಸಾಹಿತ್ಯ ಪರಿಷತ್ ನಗರ ಘಟಕ ಹಾಗೂ ಕದಳಿ ಮಹಿಳಾ ವೇದಿಕೆ ಸಹಯೋಗದೊಂದಿಗೆ ಎರಡನೇ ದಿನ ನಡೆದ ವಚನ ಶ್ರಾವಣ: ಮನೆಮನೆಗೆ ಶ್ರಾವಣ ಮಾಸದ ಶರಣ ಸಂದೇಶ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಮಾನವ ತನ್ನ ಹಸಿವು, ಬದುಕಿನ ಯಾತನೆಗಳನ್ನು ಶಮನ ಮಾಡಲು ಕ್ರೌರ್ಯದ ಅಡ್ಡದಾರಿ ಹಿಡಿಯುವ ಸಾಧ್ಯತೆ ಇದೆ. ಇದಕ್ಕೆ ಮಾನಸಿಕವಾಗಿಯೂ ಸದೃಢಗೊಂಡು ಜಗತ್ತಿನಲ್ಲಿ ಅಶಾಂತಿಗೆ ನಾಂದಿಯಾಡುತ್ತಾನೆ. ಹಾಗಾಗಿ, ಜಗತ್ತಿನಲ್ಲಿ ಶಾಂತಿ ಸ್ಥಾಪನೆಗೆ ವಚನ ಸಾಹಿತ್ಯ ಸೂಕ್ತ ಎಂದರು.

ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಹಿಂದೂಸ್ತಾನಿ ಗಾಯಕಿ ಸುನಿತಾ ಹಿರೇಮಠ ವಚನಗಾಯನ ನಡೆಸಿಕೊಟ್ಟರು. ಪಕ್ಕವಾದ್ಯದಲ್ಲಿ ವೀರಭದ್ರ ಹಿರೇಮಠ್, ಧನುರ್ ಸಾಥ್ ನೀಡಿದರು. ವೇದಿಕೆಯಲ್ಲಿ ಶರಣ ಸಾಹಿತ್ಯ ಪರಿಷತ್ ನಗರ ಘಟಕದ ಅಧ್ಯಕ್ಷ ಮ.ಗು. ಸದಾನಂದಯ್ಯ, ಹಿರಿಯ ಸಾಹಿತಿ ತ್ರಿಪುರಾಂತಕ, ಮಹದೇವಪ್ಪ, ಪ್ರಸಾದ್, ರಾಜರತ್ನಂ, ನಾಗರಾಜು, ತೇಜಸ್ವಿನಿ, ಉಮಾ ಮಹೇಶ್, ಚನ್ನಬಸಪ್ಪ, ನಂದೀಶ್, ಲೋಕೇಶ್, ಎನ್.ಜಿ.ಗಿರೀಶ್ ಸೇರಿದಂತೆ ಇತರರಿದ್ದರು.

ವಿವಿಧ ಶಾಲೆಗಳಿಗೆ ಎಂಎಲ್‌ಸಿ ಕೆ.ವಿವೇಕಾನಂದ ಭೇಟಿ; ಮಕ್ಕಳೊಂದಿಗೆ ಬಿಸಿ ಊಟ ಸೇವನೆ





ನಂಜನಗೂಡು ತಾಲೂಕಿನ ಶಾಲೆಯೊಂದರಲ್ಲಿ ಶಿಕ್ಷಕ ವರ್ಗದಿಂದ ಎಂಎಲ್‌ಸಿ ಕೆ.ವಿವೇಕಾನಂದರನ್ನು ಸನ್ಮಾನಿಸಲಾಯಿತು. ಮತ್ತೊಂದು ಚಿತ್ರದಲ್ಲಿ ನಂಜನಗೂಡು ತಾಲೂಕಿನ ಕುಪ್ಪರವಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ಮಕ್ಕಳೊಂದಿಗೆ ವಿವೇಕಾನಂದ ಬಿಸಿ ಊಟ ಸೇವಿಸುತ್ತಿರುವುದನ್ನು ಕಾಣಬಹುದು.

ಮೈಸೂರು,ಆ.6(ಪಿಎಂ)– ನಂಜನಗೂಡು ತಾಲೂಕಿನ ಕುಪ್ಪರವಳ್ಳಿ ಸರ್ಕಾರಿ ಪ್ರೌಢಶಾಲೆ ಸೇರಿದಂತೆ ವಿವಿಧ ಶಾಲೆಗಳಿಗೆ ಮಂಗಳವಾರ ಭೇಟಿ ನೀಡಿದ ದಕ್ಷಿಣ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ಅವರನ್ನು ಎಲ್ಲೆಡೆ ಸನ್ಮಾನಿಸಿ ಅಭಿನಂದಿಸಲಾಯಿತು. ಇದೇ ವೇಳೆ ಪರಿಷತ್ ಸದಸ್ಯರು ಶಿಕ್ಷಕ ವರ್ಗದ ಅಹವಾಲು ಆಲಿಸಿದರು.

ಕುಪ್ಪರವಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ಮಕ್ಕಳೊಂದಿಗೆ ವಿವೇಕಾನಂದ ಬಿಸಿ ಊಟವನ್ನು ಸೇವಿಸಿದರು. ನಂಜನಗೂಡು ತಾಲೂಕಿನ ಎಸ್.ಹೊಸಕೋಟೆ ಮೊರಾರ್ಜಿ ದೇಸಾಯಿ ಮಾದರಿ ವಸತಿ ಶಾಲೆ, ಸುತ್ತೂರಿನ ಜೆಎಸ್‌ಎಸ್ ಮಹಾಸಂಸ್ಥೆಯ ಪ್ರೌಢಶಾಲೆ, ಬಿಎಡ್ ಹಾಗೂ ಡಿಎಡ್ ಕಾಲೇಜಿಗೂ ಭೇಟಿ ನೀಡಿದ್ದರು.

ಅಂತೆಯೇ ತಗಡೂರು ಜನತಾ ಪ್ರೌಢಶಾಲೆ, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ತಗಡೂರು ಶ್ರೀ ಗುರು ಮಲ್ಲೇಶ್ವರ ಅನುದಾನಿತ ಬಾಲಕಿಯರ ಪ್ರೌಢಶಾಲೆ, ಮಲ್ಲುಪುರ ಸರ್ಕಾರಿ ಪ್ರೌಢಶಾಲೆ, ನಂಜನಗೂಡು ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಮತ್ತು ಆಂಗ್ಲ ಮಾಧ್ಯಮ ದಳವಾಯಿ ಶಾಲೆಗೂ ಭೇಟಿ ನೀಡಿದ ಅವರನ್ನು ಶಿಕ್ಷಕ ವರ್ಗದಿಂದ ಆತ್ಮೀಯವಾಗಿ ಸನ್ಮಾನಿಸಲಾಯಿತು.

ನಂಜನಗೂಡು ಪಟ್ಟಣದ ಸರ್ಕಾರಿ ಪ್ರೌಢಶಾಲೆ, ಸರ್ಕಾರಿ ಪಿಯು ಕಾಲೇಜು, ಶ್ರೀ ಗುರುಮಲ್ಲೇಶ್ವರ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆ, ಸಿಟಿಜನ್ ಶಿಕ್ಷಣ ಸಂಸ್ಥೆ, ಲಯನ್ಸ್ ಶಿಕ್ಷಣ ಸಂಸ್ಥೆ, ಜೆಎಸ್‌ಎಸ್ ಪದವಿ ಪೂರ್ವ ಕಾಲೇಜಿಗೆ ಭೇಟಿ ನೀಡಿ, ಅಭಿನಂದನ ಕಾರ್ಯಕ್ರಮದಲ್ಲಿ ಅಭಿನಂದನೆ ಸ್ವೀಕರಿಸಿ, ಆಯಾಯ ಸಂಸ್ಥೆಗಳ ಪ್ರಾಂಶುಪಾಲರು, ಮುಖ್ಯ ಶಿಕ್ಷಕರು ಸೇರಿದಂತೆ ಶಿಕ್ಷಕ ವೃಂದದವರಿಗೆ ಕೃತಜ್ಞತೆ ಸಲ್ಲಿಸಿದರು.

ನೇಣು ಬಿಗಿದುಕೊಂಡು ಟಾಲಿವುಡ್ ನಿರ್ಮಾಪಕ, ನಿರ್ದೇಶಕ 'ಕೊಮರಿ ಜಾನಯ್ಯ ನಾಯ್ಡು' ಆತ್ಮಹತ್ಯೆ..!



ಹೈದರಾಬಾದ್, ಆ.6–ತೆಲುಗು ಚಿತ್ರರಂಗದ ನಿರ್ಮಾಪಕ ಮತ್ತು ನಿರ್ದೇಶಕ ಕೊಮರಿ ಜನಯ್ಯ ನಾಯ್ಡು (44) ವಿಧಿವಶರಾಗಿದ್ದಾರೆ. ಅವರು ಮಂಗಳವಾರ ಕುಕಟ್ಪಲ್ಲಿಯ ಭಾಗ್ಯನಗರದ ಹೋಟೆಲ್‌ನಲ್ಲಿ ಶವವಾಗಿ ಪತ್ತೆಯಾಗಿದ್ದಾರೆ.

ವರದಿಗಳ ಪ್ರಕಾರ, ನಾಯ್ಡು ತಮ್ಮ ಹೋಟೆಲ್ ಕೋಣೆಯಲ್ಲಿ ಚಾವಣಿಗೆ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ.

ಮೃತಪಟ್ಟಿರುವುದನ್ನು ಗಮನಿಸಿದ ಹೋಟೆಲ್ ಆಡಳಿತ ಮಂಡಳಿ, ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡಿದೆ. ಪೊಲೀಸರು ಪ್ರಕರಣ ದಾಖಲಿಸಿದ್ದು, ಪ್ರಾಥಮಿಕ ತನಿಖೆ ನಡೆಸುತ್ತಿದ್ದಾರೆ.

ಹಲವಾರು ಚಲನಚಿತ್ರಗಳನ್ನು ನಿರ್ದೇಶಿಸಿದ ನಂತರ, ನಾಯ್ಡು ಅವರು ತೊಲು ಬೊಮ್ಮಲ ಸಿತ್ರಾಲು ಎಂಬ ನಿರ್ಮಾಣ ಸಂಸ್ಥೆಯನ್ನು ಪ್ರಾರಂಭಿಸಿದ್ದರು.

ರಾಜಕಾರಣವನ್ನೇ ಉದ್ಯೋಗಮಾಡಿಕೊಳ್ಳುವುದು ಆರೋಗ್ಯಕರವಲ್ಲ: ಸಾರಾ



ನೇಗಿಲಯೋಗಿ ಉದ್ಯಮಿ ಮತ್ತು ವೃತ್ತಿಪರರ ಸಮ್ಮಿಲನ ಕಾರ್ಯಕ್ರಮವನ್ನು ಮಾಜಿ ಸಚಿವ ಸಾ.ರಾ.ಮಹೇಶ್ ಉದ್ಘಾಟಿಸಿದರು

ಮೈಸೂರು, ಆ.6(ಎಸ್‌ಪಿಎನ್)– ರಾಜಕಾರಣವನ್ನು ಉದ್ಯೋಗ ಮಾಡಿಕೊಳ್ಳುವ ವಾತಾವರಣ ದಿನೇದಿನೆ ಹೆಚ್ಚಾಗುತ್ತಿದ್ದು, ಇದು ಆರೋಗ್ಯಕರ ಬೆಳವಣಿಗೆಯಲ್ಲ ಎಂದು ಮಾಜಿ ಸಚಿವ ಸಾ.ರಾ. ಮಹೇಶ್ ಆತಂಕ ವ್ಯಕ್ತಪಡಿಸಿದರು.

ಮೈಸೂರು ಹೊರವಲಯದ ಖಾಸಗಿ ಹೋಟೆಲ್‌ನಲ್ಲಿ ಸೋಮವಾರ ಏರ್ಪಡಿಸಿದ್ದ ನೇಗಿಲಯೋಗಿ ಉದ್ಯಮಿ ಮತ್ತು ವೃತ್ತಿಪರರ ಸಮ್ಮಿಲನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಉದ್ಯೋಗ ಮತ್ತು ರಾಜಕಾರಣವನ್ನು ಪ್ರತ್ಯೇಕವಾಗಿ ನಿರ್ವಹಣೆ ಮಾಡಬೇಕಾದ ಅವಶ್ಯಕತೆ ಇದೆ. ರಾಜಕಾರಣಿಗಳು ಜೀವನೋಪಾಯಕ್ಕೆ ಒಂದು ಉದ್ಯೋಗವನ್ನು ಆಶ್ರಯಿಸಿರುವುದರಿಂದ ರಾಜಕಾರಣವನ್ನು ಪ್ರತ್ಯೇಕವಾಗಿ ಒಂದು ಸೇವಾಕ್ಷೇತ್ರವನ್ನಾಗಿ ರೂಢಿಸಿಕೊಳ್ಳಬೇಕು. ಆದರೆ, ಬಹಳಷ್ಟು ಮಂದಿ ರಾಜಕಾರಣವನ್ನೇ ತಮ್ಮ ಉದ್ಯೋಗ ಕ್ಷೇತ್ರವನ್ನಾಗಿಸಿ, ಅದನ್ನೇ ತಮ್ಮ ಸಂಪಾದನೆಯ ಮಾರ್ಗವನ್ನಾಗಿಸಿಕೊಂಡಿದ್ದಾರೆ. ಇದು ಅಪಾಯಕಾರಿ ನಡೆ ಎಂದರು.

ರಾಜಕಾರಣಿಗಳ ಮೇಲೆ ಜನಸಾಮಾನ್ಯರು ಅನುಮಾನದಿಂದ ನೋಡುವ ದೃಷ್ಟಿಕೋನ ಬೆಳೆಸಿಕೊಂಡಿದ್ದಾರೆ. ಇದರ ನಡುವೆ ಕೆಲ ರಾಜಕಾರಣಿಗಳು, ರಾಜಕಾರಣವನ್ನು ಇಂದಿಗೂ ಸೇವಾಕ್ಷೇತ್ರವನ್ನಾಗಿಯೇ ನೋಡುತ್ತಿರುವುದು ಉತ್ತಮ ಬೆಳವಣಿಗೆ ಎಂದರಲ್ಲದೆ, ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ಪದಾಧಿಕಾರಿಗಳು, ಸಮುದಾಯ ಸೇವೆಯಲ್ಲಿ ತೊಡಗಿಸಿಕೊಂಡಿರುವುದು ಸಂತೋಷ ಸಂಗತಿ ಎಂದರು.

ಮೈಸೂರು ಮಾತ್ರವಲ್ಲದೆ ಮಂಡ್ಯ, ಬೆಂಗಳೂರು, ರಾಮನಗರ, ಹಾಸನ ಮತ್ತಿತರ ಜಿಲ್ಲೆಗಳಲ್ಲಿಯೂ ನೇಗಿಲಯೋಗಿ ಶಾಖೆಗಳನ್ನು ತೆರೆದು ಸಮುದಾಯದ ಒಳಿತಿಗೆ ಶ್ರಮಿಸುತ್ತಿದೆ. ಹಿಂದಿನಿಂದಲೂ ಸಂಸ್ಥೆಯ ಎಲ್ಲಾ ಉತ್ತಮ ಕಾರ್ಯಗಳಿಗೆ ಸಹಕಾರ ನೀಡುತ್ತಿದ್ದೇನೆ. ಮುಂದಿನ ದಿನಗಳಲ್ಲಿಯೂ ಸಂಸ್ಥೆ ಹಮ್ಮಿಕೊಳ್ಳುವ ಎಲ್ಲಾ ರಚನಾತ್ಮಕ ಕಾರ್ಯಗಳಿಗೆ ಇನ್ನೂ ಹೆಚ್ಚಿನ ಸಹಕಾರ ನೀಡುವುದಾಗಿ ಅವರು ಭರವಸೆ ನೀಡಿದರು.

ಮೈಸೂರು ಜಿಲ್ಲಾ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ ಮಾತನಾಡಿ, ನಮ್ಮ ಸಮುದಾಯದ ಯುವಕರು ಸರ್ಕಾರದ ನೌಕರಿಗಾಗಿ ನೆಚ್ಚಿಕೊಳ್ಳದೇ ಬೇರೆಬೇರೆ ಉದ್ಯಮಗಳಲ್ಲಿ ತೊಡಗಿಸಿಕೊಳ್ಳಬೇಕು. ಒಂದೇ ಬಗೆಯ ಉದ್ಯಮವನ್ನು ಎಲ್ಲರೂ ಸ್ಥಾಪಿಸುವ ಬದಲಾಗಿ ಭಿನ್ನ–ಭಿನ್ನ ಉದ್ಯಮಗಳನ್ನು ಆರಂಭಿಸಬೇಕು. ಈ ನಿಟ್ಟಿನಲ್ಲಿ ಮುಂದೆ ಬರುವ ಯುವಕರಿಗೆ ಎಲ್ಲ ಬಗೆಯ ನೆರವನ್ನು ಒದಗಿಸುವ ಮೂಲಕ ಯುವಕರ ಶಕ್ತಿ ಸಾಮರ್ಥ್ಯಗಳನ್ನು ಸದ್ಬಳಕೆ ಮಾಡಿಕೊಳ್ಳುವತ್ತ ನಮ್ಮ ಸಮುದಾಯ ಹೆಚ್ಚು ಗಮನ ನೀಡಬೇಕು ಎಂದರು.

ನೇಗಿಲಯೋಗಿ ಅಧ್ಯಕ್ಷ ಡಿ.ರವಿಕುಮಾರ್ ಪ್ರಾಸ್ತಾವಿಕ ನುಡಿಗಳಾಡಿದರು. ಸಂಸ್ಥೆಯ ಟ್ರಸ್ಟಿ ಇಂದ್ರೇಶ್, ಮೈಸೂರು ಇಂಡಸ್ಟ್ರೀಸ್ ಅಸೋಸಿಯೇಷನ್ ಅಧ್ಯಕ್ಷ ಪಿ.ವಿಶ್ವನಾಥ್, ಮುಡಾ ಮಾಜಿ ಅಧ್ಯಕ್ಷ ಯಶಸ್ವಿನಿ ಸೋಮಶೇಖರ್, ಕೆಎಸ್‌ಎಸ್‌ಎಫ್‌ಐ ಜಂಟಿ ನಿರ್ದೇಶಕ ಸತೀಶ್, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕರಾದ ಮಂಜೇಗೌಡ, ಗಂಗಾಧರ ಗೌಡ, ಡಾ.ಮೀನಾಕುಮಾರಿ, ಡಾ. ಎಸ್. ಯಶಸ್ವಿನಿ, ಮಂಜುನಾಥ್, ನಿಂಗರಾಜು, ಶಿವಶಂಕರ್ ಮತ್ತಿತರರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಅಲ್ಲದೆ, ಮಂಡ್ಯ, ರಾಮನಗರ, ಬೆಂಗಳೂರು, ಪಾಂಡವಪುರ, ಚನ್ನಪಟ್ಟಣ, ಕನಕಪುರ, ಮಾಗಡಿ, ಕೃಷ್ಣರಾಜಪೇಟೆ ಮತ್ತಿತರ ಸ್ಥಳಗಳಿಂದ ಉದ್ಯಮಿಗಳು ಆಗಮಿಸಿದ್ದರು. ಸಾಹಿತಿ ಡಾ ಬಲ್ಲೇನಹಳ್ಳಿ ವಿಜಯಕುಮಾರ್ ಕಾರ್ಯಕ್ರಮ ನಿರೂಪಿಸಿದರು. ನೇಗಿಲಯೋಗಿ ಮಹಿಳಾ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷೆ ಶೋಭ ರಮೇಶ್ ವಂದಿಸಿದರು.

ಹೋರಾಟದಿಂದಾಗಿ ಶ್ರೀನಿವಾಸ ಪ್ರಸಾದ್ ಇಂದಿಗೂ ಜೀವಂತ

ದಲಿತ ಸಮುದಾಯದ ಹಿರಿಯಣ್ಣ ಪ್ರಸಾದ್: ಬೌದ್ಧ ಗುರು ಬೋಧಿರತ್ನ ಭಂತೇಜಿ



ದಿ.ವಿ.ಶ್ರೀನಿವಾಸ ಪ್ರಸಾದ್ ಹುಟ್ಟುಹಬ್ಬದ ಅಂಗವಾಗಿ ನಗರದ ಅಂಬೇಡ್ಕರ್ ಭವನದ ಆವರಣದಲ್ಲಿ ಭೋಧಿ ವೃಕ್ಷ ನೆಡಲಾಯಿತು.

ನಂಜನಗೂಡು, ಆ.6– ಜೀವನದಲ್ಲಿ ಸಾಧನೆ ಮಾಡಿದ ಜಾಗೃತ ಮನಸ್ಸಿಗೆ ಸಾವಿಲ್ಲ. ಹೀಗಾಗಿ ಶ್ರೀನಿವಾಸ ಪ್ರಸಾದ್ ಅವರು ರಾಜಕಾರಣಿಯಾಗಿ ಶೋಷಿತರ ಪರವಾಗಿ ನಡೆಸಿದ ಹೋರಾಟಗಳಿಂದಾಗಿ ಇಂದಿಗೂ ಅವರು ನಮ್ಮ ನಡುವೆ ಜೀವಂತವಾಗಿದ್ದಾರೆ ಎಂದು ಬೌದ್ಧ ಗುರು ಬೋಧಿರತ್ನ ಭಂತೇಜಿ ತಿಳಿಸಿದರು.

ನಗರದ ಅಂಬೇಡ್ಕರ್ ಭವನದಲ್ಲಿ ಮಂಗಳವಾರ ಮಾಜಿ ಸಂಸದ ವಿ.ಶ್ರೀನಿವಾಸ ಪ್ರಸಾದ್ ಅವರ 77ನೇ ಹುಟ್ಟುಹಬ್ಬದ ಅಂಗವಾಗಿ ಶ್ರೀನಿವಾಸ ಪ್ರಸಾದ್ ಅಭಿಮಾನಿಗಳು ಆಯೋಜಿಸಿದ್ದ ಭೋಧಿ ವೃಕ್ಷ ನೆಡುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ತಮ್ಮ ರಾಜಕೀಯ ಜೀವನದಲ್ಲಿ ಅಸಮಾನತೆ ವಿರುದ್ಧ ಹೋರಾಡಿದ ಶ್ರೀನಿವಾಸ ಪ್ರಸಾದ್ ದಲಿತ ಸಮುದಾಯದ ಹಿರಿಯಣ್ಣನಾಗಿದ್ದರು. ಅವರು ನಮ್ಮ ಬೆನ್ನ ಹಿಂದೆ ಇದ್ದಾರೆ ಎಂಬ ಧೈರ್ಯ ದಲಿತ ಸಮಾಜಕ್ಕಿತ್ತು. ಶೋಷಿತರ ಪರ ಅಂತಃಕರಣ ಹೊಂದಿದ್ದರು. 'ನೀನು ಒಳ್ಳೆಯವನಾಗಿದ್ದರೆ ನಾನು ಒಳ್ಳೆಯವನು ಕೆಟ್ಟವನಾಗಿದ್ದರೆ ನಾನು ನಿನಗಿಂತ ಕೆಟ್ಟವನು' ಎನ್ನುತ್ತಿದ್ದರು. ಅವರು ನಮ್ಮ ಚೇತನ, ಸ್ಫೂರ್ತಿಯ ಸೆಲೆಯಾಗಿದ್ದರು. ಇಂದಿನ ಯುವ ರಾಜಕಾರಣಿಗಳಿಗೆ ಮಾದರಿಯಾಗಿದ್ದರು. ಬೌದ್ಧ ದಮ್ಮದಿಂದ ಮಾತ್ರ ಜನರಿಗೆ ಬೆಳಕು ತೋರಿಸಲು ಸಾಧ್ಯ ಎಂದು ಪ್ರತಿಪಾದಿಸುತ್ತಿದ್ದರು. ಅವರು ತೋರಿದ ತತ್ವ, ಆದರ್ಶಗಳ ಹಾದಿಯಲ್ಲಿ ಸಾಗುವ ಮೂಲಕ ಅವರಿಗೆ ಗೌರವ ಸಲ್ಲಿಸೋಣ ಎಂದರು.

ಮಾಜಿ ಶಾಸಕ ಬಿ.ಹರ್ಷವರ್ಧನ್ ಮಾತನಾಡಿ, ನಂಜನಗೂಡಿನಲ್ಲಿ ಸುಸಜ್ಜಿತ ಅಂಬೇಡ್ಕರ್ ಭವನ, ಅಂಬೇಡ್ಕರ್ ಪುತ್ಥಳಿ, ಮಿನಿ ವಿಧಾನಸೌಧ, ಹೈಟೆಕ್ ಬಸ್ ನಿಲ್ದಾಣ, ಫ್ಲೈ ಓವರ್‌ಗಳನ್ನು ನಿರ್ಮಿಸಿದ ಶ್ರೀನಿವಾಸ ಪ್ರಸಾದ್ ಅವರಿಗೆ ಮೈಸೂರು–ಚಾಮರಾಜನಗರ ಜಿಲ್ಲೆಗಳಲ್ಲಿ ಸಾವಿರಾರು ಸಂಖ್ಯೆಯ ಅಭಿಮಾನಿಗಳಿದ್ದಾರೆ. ಅವರ ಪ್ರತಿ ಹುಟ್ಟುಹಬ್ಬದಂದು ರಾತ್ರಿ 12 ಗಂಟೆಗೆ ಇಡೀ ಕುಟುಂಬ ಸೇರಿ ಕೇಕ್ ಕತ್ತರಿಸಿ, ಅವರಿಗೆ ಶುಭಾಶಯ ಹೇಳುತ್ತಿದ್ದೆವು. ಈ ಬಾರಿ ಅವರಿಲ್ಲ ಎಂಬ ಶೂನ್ಯ ನನ್ನನ್ನು ಕಾಡುತ್ತಿದೆ. ಅವರ ಜೊತೆಗೆ ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಪ್ರವಾಸ ಮಾಡುವ ಸಂದರ್ಭಗಳಲ್ಲಿ ಅವರು ಕಟ್ಟಿಸಿದ ಸಮುದಾಯ ಭವನ, ಸರ್ಕಾರಿ ಕಟ್ಟಡಗಳನ್ನು ತೋರಿಸಿ ಹುರಿದುಂಬಿಸುತ್ತಿದ್ದರು. ನಾನು ಶಾಸಕನಾಗಿ ಅವಕಾಶ ಪಡೆದಾಗ ನಂಜನಗೂಡು ಕ್ಷೇತ್ರದಲ್ಲಿ ಕೈಗೊಂಡ ಅಭಿವೃದ್ಧಿ ಕೆಲಸಗಳನ್ನು ಅವರು ಗಮನಿಸಿದಾಗ ನನಗೆ ಸಮಾಧಾನವಾಗಿತ್ತು. ಅವರ ಕನಸಾದ ಬಟಾನಿಕ್ ಗಾರ್ಡನ್ ಪೂರ್ಣಗೊಳಿಸುವಂತೆ ಯಾವಾಗಲೂ ಹೇಳುತ್ತಿದ್ದರು. ನಂಜನಗೂಡು ಕ್ಷೇತ್ರ ಅವರ ಅಚ್ಚುಮೆಚ್ಚಿನ ಕ್ಷೇತ್ರವಾಗಿತ್ತು ಅದರ ಅಭಿವೃದ್ಧಿ ಬಗ್ಗೆ ಯಾವಾಗಲೂ ಯೋಚಿಸುತ್ತಿದ್ದರು ಎಂದರು.

ಶ್ರೀನಿವಾಸ ಪ್ರಸಾದ್ ನೆನಪಿಗಾಗಿ ಈ ದಿನ ಅಂಬೇಡ್ಕರ್ ಭವನದ ಆವರಣದಲ್ಲಿ ಬೋಧಿ ವೃಕ್ಷ ನೆಟ್ಟಿದ್ದೇವೆ. ಚಾಮರಾಜನಗರ ಹಾಗೂ ಮೈಸೂರು ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಬೋಧಿ ವೃಕ್ಷಗಳನ್ನು ನೆಡುವ ಮೂಲಕ ಅವರನ್ನು ಸ್ಮರಿಸಲಾಗುವುದು.
-ಬಿ.ಹರ್ಷವರ್ಧನ್, ಮಾಜಿ ಶಾಸಕ.

ಕಾರ್ಯಕ್ರಮದಲ್ಲಿ ದಸಂಸ ಜಿಲ್ಲಾ ಸಂಚಾಲಕ ಶಿವಣ್ಣ, ಜೆಡಿಎಸ್ ಜಿಲ್ಲಾಧ್ಯಕ್ಷ ಎನ್.ನರಸಿಂಹಸ್ವಾಮಿ, ಜಿಪಂ ಮಾಜಿ ಸದಸ್ಯ ಸಿ.ಚಿಕ್ಕರಂಗನಾಯಕ, ತಾಲೂಕು ಬಿಜೆಪಿ ಅಧ್ಯಕ್ಷ ಕೆಂಡಗಣ್ಣಪ್ಪ, ನಗರಾಧ್ಯಕ್ಷ ಸಿದ್ದರಾಜು, ನಿಕಟಪೂರ್ವ ಅಧ್ಯಕ್ಷ ಪಿ.ಮಹೇಶ್, ಬಿಜೆಪಿ ಯುವಮೋರ್ಚಾ ಅಧ್ಯಕ್ಷ ಗೋವರ್ಧನ್, ನಗರಸಭಾ ಮಾಜಿ ಅಧ್ಯಕ್ಷ ಹೆಚ್.ಎಸ್.ಮಹದೇವಸ್ವಾಮಿ, ಸದಸ್ಯರಾದ ಮಹದೇವಪ್ರಸಾದ್, ದೇವು, ಗಾಯಿತ್ರಿ, ಮುಖಂಡರಾದ ಬಾಲಚಂದ್ರು, ಬಿ.ಎಸ್.ಪಿ.ಶ್ರೀಕಂಠ, ಚಂದ್ರು, ಮಹದೇವು, ಮಲ್ಲಿಕಾರ್ಜುನ, ಶಿವರುದ್ರ, ಸಿದ್ದರಾಜು, ಪುಟ್ಟಸ್ವಾಮಿ, ಪ್ರಜ್ವಲ್‌ಶಶಿ, ವಿಷ್ಣು, ತಾಪಂ ಮಾಜಿ ಸದಸ್ಯರಾದ ಬಸವರಾಜು, ಮಹದೇವನಾಯಕ ಉಪಸ್ಥಿತರಿದ್ದರು.

ಕೇಂದ್ರ, ರಾಜ್ಯ ಸರ್ಕಾರದ ವಿರುದ್ಧ ದಸಂಸ ಪ್ರತಿಭಟನೆ



ದಸಂಸದಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲಾಯಿತು.

ಹೆಚ್.ಡಿ.ಕೋಟೆ, ಆ.6– ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ದಲಿತರಿಗೆ ನ್ಯಾಯ ಕೊಡಿಸುವಲ್ಲಿ ವಿಫಲವಾಗಿವೆ ಎಂದು ಆರೋಪಿಸಿ ತಾಲೂಕು ದಲಿತ ಸಂಘರ್ಷ ಸಮಿತಿಯಿಂದ ಪಟ್ಟಣದಲ್ಲಿ ಮಂಗಳವಾರ ನಡೆಸಲಾಯಿತು.

ಪಟ್ಟಣದ ಆಡಳಿತಸೌಧದ ಆವರಣದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಸರ್ಕಾರಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಅಲ್ಲದೇ 2014ರಲ್ಲಿ ಅಭಿವೃದ್ಧಿ ಹೆಸರಿನಲ್ಲಿ ಅಧಿಕಾರ ಹಿಡಿದ ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ಸರ್ಕಾರ ನಂತರದ ದಿನಗಳಲ್ಲಿ ಭಾರತದ ಸಂವಿಧಾನ ಬದಲಿಸಲು ಹುನ್ನಾರ ನಡೆಸಿ ಕೋಮುವಾದ, ಜಾತಿವಾದಗಳನ್ನು ಗಟ್ಟಿಗೊಳಿಸಲು ಭಾರತೀಯ ಮನಸ್ಸುಗಳನ್ನು ಛಿದ್ರಗೊಳಿಸಲು ಪ್ರಾರಂಭಿಸಿತು. ಹಾಗಾಗಿ ದೇಶದಲ್ಲಿ 10 ವರ್ಷಗಳ ಕಾಲ ದಲಿತರು, ರೈತರು, ಕಾರ್ಮಿಕರು, ಅಲ್ಪಸಂಖ್ಯಾತರು, ಶೋಷಿತ ಸಮುದಾಯಗಳು ಎರಡನೇ ದರ್ಜೆ ಪ್ರಜೆಗಳಂತೆ ಬದುಕಬೇಕಾಯಿತು ಎಂದು ಆರೋಪಿಸಿದರು.

ರಾಜ್ಯದಲ್ಲಿ ಸಂವಿಧಾನ ರಕ್ಷಣೆ, ಸಾಮಾಜಿಕ ನ್ಯಾಯದಿಂದ ದಲಿತರ ಓಟು ಪಡೆದು ಅಧಿಕಾರಕ್ಕೆ ಬಂದ ಕಾಂಗ್ರೆಸ್ ಕೆಲವೇ ದಿನಗಳಲ್ಲಿ ಭ್ರಮನಿರಸನಗೊಳಿಸಿ, ವಂಚನೆ ಮಾಡುವ ಚಾಳಿ ಮುಂದುವರಿಸಿಕೊಂಡು ಬಂದಿದೆ ಎಂದು ದೂರಿದರು.

ದಸಂಸ ಜಿಲ್ಲಾ ಸಂಚಾಲಕ ಬೆಟ್ಟಯ್ಯ ಕೋಟೆ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಒಂದು ವರ್ಷ ಕಳೆದರೂ ಪರಿಶಿಷ್ಟ ಜಾತಿ ಮತ್ತು ವರ್ಗಗಳ ಅಭಿವೃದ್ಧಿಗೆ ಶಾಶ್ವತ ಕ್ರಿಯಾಯೋಜನೆ ರೂಪಿಸುವ ಬದಲು ಬಜೆಟ್‌ನಲ್ಲಿ ಮೀಸಲಿಟ್ಟಿದ್ದ 2023ರಲ್ಲಿ 11 ಸಾವಿರ ಕೋಟಿ ಹಾಗೂ 2024ರಲ್ಲಿ 25 ಸಾವಿರ ಕೋಟಿ ರೂ.ಗಳನ್ನು ಗ್ಯಾರಂಟಿ ಯೋಜನೆಗೆ ಬಳಕೆ ಮಾಡಿಕೊಂಡು ಪರಿಶಿಷ್ಟ ಜಾತಿ ಮತ್ತು ವರ್ಗಗಳ ಜನರಿಗೆ ಮೋಸ ಮಾಡಿದ್ದಾರೆ ಎಂದು ದೂರಿದರು. ಬ್ಯಾಕ್ ಲಾಗ್ ಹುದ್ದೆ ಭರ್ತಿ ಮಾಡುವುದು, ಗ್ರಾಮ ಸಹಾಯಕರ ಹುದ್ದೆ ಖಾಯಂಗೊಳಿಸಲು ಯಾವುದೇ ಕ್ರಮ ಕೈಗೊಂಡಿಲ್ಲ. ಅದೇ ರೀತಿ ದಲಿತರ ಮಕ್ಕಳ ಉನ್ನತ ವ್ಯಾಸಂಗ, ಪ್ರತಿಭಾ ಪುರಸ್ಕಾರಗಳಿಗೆ ಕತ್ತರಿ ಹಾಕಿದೆ. ದಲಿತರ ಭೂ ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರ ವಿಫಲವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇದೇ ವೇಳೆ ತಮ್ಮ ಬೇಡಿಕೆ ಈಡೇರಿಸುವಂತೆ ತಹಸೀಲ್ದಾರ್ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಮುಖಂಡರಾದ ನಿಂಗರಾಜು, ಜೀವಿಕ ಬಸವರಾಜು, ಮಹೇಶ್, ಡಿ.ಎಂ. ಶಿವಶಂಕರ್, ಕಾಳಸ್ವಾಮಿ, ಕಲ್ಲೇಶ, ಜೀವಿಕ ಶಿವಣ್ಣ, ಶಿವಣ್ಣ, ಮಹೇಶ್, ರಾಜಶೇಖರ, ದಾಸಯ್ಯ, ಸಿದ್ದರಾಜು ಇದ್ದರು.

ಮನೆ ಗೋಡೆ ಕುಸಿದು ವ್ಯಕ್ತಿಗೆ ಗಾಯ



ಸ್ಥಳಕ್ಕೆ ಕಂದಾಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ, ಪರಿಶೀಲಿಸಿದರು.

ಹಿರೀಕ್ಯಾತನಹಳ್ಳಿ, ಆ.6– ಮನೆ ಗೋಡೆ ಕುಸಿದು ವ್ಯಕ್ತಿ ಗಾಯಗೊಂಡಿರುವ ಘಟನೆ ಇಲ್ಲಿಗೆ ಸಮೀಪದ ಶಿರೇನಹಳ್ಳಿ ಗ್ರಾಮದಲ್ಲಿ ಸೋಮವಾರ ರಾತ್ರಿ ನಡೆದಿದೆ. ಗ್ರಾಮದ ನಿವಾಸಿ ಉಜನೀಗೌಡ ಗಾಯಗೊಂಡವರು. ಕಳೆದ 20 ದಿನಗಳಿಂದ ಸುರಿದ ಭಾರಿ ಮಳೆಗೆ ಗೋಡೆ ಸಂಪೂರ್ಣ ಶೀತಗೊಂಡು ಸೋಮವಾರ ಮಧ್ಯರಾತ್ರಿ ಕುಸಿದಿದೆ. ಪರಿಣಾಮ ಉಜನೀಗೌಡರ ಕೈ ಮುರಿದು ಹೋಗಿದ್ದು, ಮನೆಯಲ್ಲಿದ್ದವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎನ್ನಲಾಗಿದೆ. ಅಲ್ಲದೇ ಮನೆಯಲ್ಲಿದ್ದ ಪಾತ್ರೆಗಳು, ದವಸ ಧಾನ್ಯ ಸೇರಿದಂತೆ ದಿನಬಳಕೆಯ ವಸ್ತುಗಳು ನಾಶವಾಗಿದೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಕಂದಾಯ ಇಲಾಖೆ ಗ್ರಾಮ ಆಡಳಿತಾಧಿಕಾರಿ ಪಲ್ಲವಿ, ಹಿರೀಕ್ಯಾತನಹಳ್ಳಿ ಗ್ರಾಪಂ ಲೆಕ್ಕ ಸಹಾಯಕ ಮಹದೇವ್ ಪರಿಶೀಲಿಸಿ ಸರ್ಕಾರದಿಂದ ಪರಿಹಾರಕೊಡಿಸುವ ಭರವಸೆ ನೀಡಿದರು.

ಸಿ ಆಂಡ್ ಆರ್ ನಿಯಮ ತಿದ್ದುಪಡಿಗೆ ಒತ್ತಾಯಿಸಿ ಪ್ರತಿಭಟನೆ



ಸರಗೂರಲ್ಲಿ ಶಿಕ್ಷಕರ ಸಂಘದಿಂದ ಪ್ರತಿಭಟನೆ ನಡೆಸಲಾಯಿತು.

ಸರಗೂರು, ಆ.6– ಸಿ ಆಂಡ್ ಆರ್ ನಿಯಮಕ್ಕೆ ತಿದ್ದುಪಡಿಗೆ ಒತ್ತಾಯಿಸಿ ಪಟ್ಟಣದಲ್ಲಿ ತಾಲೂಕು ಪ್ರಾಥಮಿಕ ಶಿಕ್ಷಕರ ಸಂಘದಿಂದ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ತಾಲೂಕು ಕಚೇರಿ ಆವರಣದಲ್ಲಿ ಜಮಾಯಿಸಿದ ತಾಲೂಕು ಪ್ರಾಥಮಿಕ ಶಿಕ್ಷಕರ ಸಂಘದ ಸದಸ್ಯರು ಸಿ ಆಂಡ್ ಆರ್ ನಿಯಮಕ್ಕೆ ತಿದ್ದುಪಡಿ ತರುವಂತೆ ಆಗ್ರಹಿಸಿದರು. ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸತೀಶ್ ಕುಮಾರ್ ಮಾತನಾಡಿದರು. ಇದೇ ವೇಳೆ ಶಾಸಕ ಅನಿಲ್, ತಹಸೀಲ್ದಾರ್, ಕ್ಷೇತ್ರ ಶಿಕ್ಷಣಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ಶಿಕ್ಷಕರ ಸಂಘದ ಕಾರ್ಯದರ್ಶಿ ರಾಮೇಗೌಡ, ಉಪಾಧ್ಯಕ್ಷ ಟಿ.ಎಂ.ಸುರೇಶ್ ಕುಮಾರ್, ಖಜಾಂಚಿ ಹೆಚ್.ಎಸ್.ಜ್ಯೋತಿ, ಜಿಲ್ಲಾ ಬಡ್ತಿ ಮುಖ್ಯ ಶಿಕ್ಷಕರ ಸಂಘದ ಉಪಾಧ್ಯಕ್ಷ ಸಿದ್ದರಾಜು, ದೈಹಿಕ ಶಿಕ್ಷಕರ ಸಂಘದ ನಿಕಟಪೂರ್ವ ಅಧ್ಯಕ್ಷ ವಾಸುದೇವ್, ಗುರುಸ್ವಾಮಿ, ಮಹೇಂದ್ರ ಉಪಾಧ್ಯಾಯ ಸಹಕಾರ ಸಂಘದ ನಿಕಟಪೂರ್ವ ಅಧ್ಯಕ್ಷ ನಾರಾಯಣ್, ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಲೋಕೇಶ್, ಮಂಜುನಾಥ್ ಇನ್ನಿತರರಿದ್ದರು.

ಪ್ರಕೃತಿ ವಿಕೋಪಕ್ಕೆ ಮನುಷ್ಯರೇ ಕಾರಣ

ರೋಟರಿ ಕ್ಲಬ್ ಅಧ್ಯಕ್ಷ ಕೆ.ಪಿ.ಪ್ರಸನ್ನ ವಿಷಾದ



ಹುಣಸೂರಿನಲ್ಲಿ ಮೆರವಣಿಗೆ ನಡೆಸಲಾಯಿತು

ಹುಣಸೂರು, ಆ.6– ಪ್ರಕೃತಿ ವಿಕೋಪಕ್ಕೆ ಮನುಷ್ಯರೇ ಕಾರಣ ಹೊರತು ಬೇರೆ ಯಾರೂ ಅಲ್ಲ ಪ್ರಕೃತಿ ಭಾಗವಾಗಿ ನಾವು ಬದುಕಬೇಕಿತ್ತು ಆದರೆ ಎಲ್ಲವೂ ನನ್ನದೇ ಎಂಬ ನಾನತ್ವ ನಮ್ಮನ್ನು ಜಲ ಪ್ರಳಯದಂತ ಅವಘಡಕ್ಕೆ ನೂಕಿದೆ ಎಂದು ರೋಟರಿ ಕ್ಲಬ್ ಅಧ್ಯಕ್ಷ ಕೆ.ಪಿ.ಪ್ರಸನ್ನ ವಿಷಾದಿಸಿದರು.

ನಗರದ ಸಂವಿಧಾನ ವೃತ್ತದಲ್ಲಿ ರೋಟರಿ ಕ್ಲಬ್ ಮತ್ತು ಟ್ಯಾಲೆಂಟ್ ವಿದ್ಯಾಸಂಸ್ಥೆ ಹಾಗೂ ಎನ್‌ಎಸ್‌ಎಸ್ ಸಹಯೋಗದಲ್ಲಿ ಶಾಲಾ ಮಕ್ಕಳೊಂದಿಗೆ ಇಲ್ಲಿನ ಬಜಾರ್ ರಸ್ತೆ ಜೆಎಲ್‌ಬಿ ಸಿಲ್ವರ್ ಜುಬ್ಲಿ ರಸ್ತೆ ಮೇಣದ ಬತ್ತಿ ಮೆರವಣಿಗೆ ನಡೆಸಿ ಮಾತನಾಡಿದ ಅವರು, ಕೇರಳದ ವೈನಾಡಲ್ಲಿ ಮಳೆ ಅರ್ಭಟಕ್ಕೆ ಮಾನವ ಕುಲ ನಲುಗಿ ಹೋಗಿದ್ದು, ಅದಕ್ಕೆ ನಾವೇ ನೇರ ಹೊಣೆ ಎಂದರು.

ಕಾಡು ಮೇಡುಗಳ ಅಗೆದು ಕಟ್ಟಡ ನಿರ್ಮಿಸಿ ಪ್ರಕೃತಿ ಸೌಂದರ್ಯಕ್ಕೆ ಧಕ್ಕೆ ಬರುವಂತೆ ಮಾಡಿದ್ದೇವೆ. ಮನುಷ್ಯ ಅತೀ ಆಸೆಗೆ ಬಿದ್ದ ಕಾರಣ ಇಂದು ತಲ ತಲಾಂತರದಿಂದ ಇದ್ದ ಬೆಟ್ಟ–ಗುಡ್ಡಗಳು ಕುಸಿಯುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ರೋಟರಿ ಕಾರ್ಯದರ್ಶಿ ಹೆಚ್.ಆರ್. ಕೃಷ್ಣಕುಮಾರ್ ಮಾತನಾಡಿ, ಇಂತಹ ದುರಂತಗಳಿಂದ ನಾವು ಪಾಠ ಕಲಿಯಬೇಕು. ಆದರೆ ನಾವುಗಳು ಕ್ಷಣಾರ್ಧದಲ್ಲಿ ಮರೆತು ನಮ್ಮ ಹಳೇ ಚಾಳಿ ಶುರು ಮಾಡುವುದರಿಂದ ಪ್ರತಿವರ್ಷ ಪ್ರಕೃತಿ ನಮಗೆ ಒಂದೊಂದು ಪಾಠ ಕಲಿಸುತ್ತಿದೆ. ಇದಕ್ಕೆ ಮಕ್ಕಳು ಮರಿ ಎನ್ನದೆ ಬಲಿಯಾಗುತ್ತಿರುವುದು ನೋವಿನ ಸಂಗತಿ ಎಂದರು.

ಟ್ಯಾಲೆಂಟ್ ವಿದ್ಯಾಸಂಸ್ಥೆ ಮುಖ್ಯಸ್ಥ ನವೀನ್ ರೈ ಮಾತನಾಡಿದರು. ಕಾರ್ಯಕ್ರಮದಲ್ಲಿ ಸಹಾಯಕ ಗವರ್ನರ್ ಆನಂದ್, ವಲಯ ಸೇನಾನಿ ಪಾಂಡು ಕುಮಾರ್, ಹಿರಿಯ ರೋಟರಿ ಸದಸ್ಯರಾದ ರಾಜಶೇಖರ್, ಡಾ.ವೃಷಬೇಂದ್ರಸ್ವಾಮಿ, ಹೋಟೆಲ್ ಮಂಜಣ್ಣ, ಶ್ಯಾಮ್, ಬಿಆರ್‌ಸಿ ಸಂತೋಷ್ ಕುಮಾರ್, ತಾಲೂಕು ಕಸಾಪ ಅಧ್ಯಕ್ಷ ಹೆಚ್.ಕೆ.ಮಹದೇವ್, ಪ್ರಾಂಶುಪಾಲ ಮಂಜುನಾಥ್, ಟ್ಯಾಲೆಂಟ್ ವಿದ್ಯಾ ಸಂಸ್ಥೆಯ ನಿರ್ದೇಶಕ ಎನ್.ಆರ್.ಮಂಜುನಾಥ್ ಇಂಟರಾಕ್ಟ್ ಕ್ಲಬ್ ಸಂಚಾಲಕ ಮಂಜುನಾಥ ಡಿ., ಎನ್‌ಎಸ್‌ಎಸ್ ಸಂಚಾಲಕ ಜಗದೀಶ್, ಶಿಕ್ಷಕರಾದ ಲೋಹಿತ್, ವಾಣಿಶ್ರೀ, ವಿಂದ್ಯಾ, ಫರ್ಹೀನ್ ತಾಜ್, ಚೈತ್ರ ಇದ್ದರು.

ಆದಿವಾಸಿ ಹಕ್ಕಿಪಿಕ್ಕಿ ಜನಾಂಗದಿಂದ 50 ಗ್ಯಾಸ್ ಸ್ಟವ್ ವಿತರಣೆ



ಹುಣಸೂರು, ಆ.6– ಕೇರಳದ ವೈನಾಡಿನಲ್ಲಿ ಪ್ರವಾಹದಿಂದ ಹಾನಿಗೊಳಗಾದವರಿಗೆ ತಾಲೂಕಿನ ಪಕ್ಷಿರಾಜಪುರದ ಒಂದನೇ ಬ್ಲಾಕ್‌ನ ಆದಿವಾಸಿ ಹಕ್ಕಿಪಿಕ್ಕಿ ಜನಾಂಗದಿಂದ 50 ಗ್ಯಾಸ್ ಸ್ಟವ್ ವಿತರಿಸಲಾಗಿದೆ ಎಂದು ಕೆಎಂಸಿಸಿ ಸಂಸ್ಥೆ ಅಧ್ಯಕ್ಷ ಸಿ.ಟಿ.ಶಂಶುದ್ದೀನ್ ತಿಳಿಸಿದರು.

ನಗರದ ಶಾಫಿ ಮಸೀದಿ ಸಭಾಂಗಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾಲೂಕಿನ ಆದಿವಾಸಿ ಹಕ್ಕಿಪಿಕ್ಕಿ ಜನಾಂಗದವರು ದೇಶ–ವಿದೇಶದಲ್ಲಿ ವ್ಯಾಪಾರ ಮಾಡುತ್ತಿದ್ದು, ಕಷ್ಟ ಸುಖದ ಅರಿವಿರುವುದರಿಂದ ಕೇರಳದ ವೈನಾಡಿನಲ್ಲಿ ಪ್ರವಾಹದಿಂದ ಹಾನಿಗೊಳಗಾದವರಿಗೆ ತಮ್ಮ ಕೈಲಾದ ಸಹಾಯ ಮಾಡಲು ಮುಂದಾಗಿರುವುದು ಸಂತಸದ ವಿಷಯ ಎಂದರು.

ಆದಿವಾಸಿ ಜನಾಂಗದ ಸತ್ಯ ಮಾತನಾಡಿ, ನಮ್ಮ ಸಮಾಜದಿಂದ ನಮ್ಮ ಕುಟುಂಬ ಸದಸ್ಯರ ವೈಯಕ್ತಿಕ ಹಣದಿಂದ ಸಹಾಯ ಮಾಡಿದ್ದೇವೆ ಎಂದರು. ಶಾಫಿ ಮಸೀದಿ ಅಧ್ಯಕ್ಷ ಸಿ.ಟಿ.ಇಸ್ಮಾಯಿಲ್ ಮಾತನಾಡಿದರು. ಈ ಸಂದರ್ಭ ಕೆಎಂಸಿಸಿ ಕಾರ್ಯದರ್ಶಿ ನಾಸೀರ್, ಖಜಾಂಚಿ ಇಬ್ರಾಹಿಂ, ಸದಸ್ಯರಾದ ಶಫೀಕ್, ಶಾಕೀರ್, ಸುಹೇಲ್, ರಕ್ಷಣಾ ವೇದಿಕೆಯ ಆರ್.ಕೆ.ಮುಯಿದುಲ್ಲಾ ಖಾನ್, ಸುದೀಪ್, ವಿಜಯ್, ಸ್ಟೆಲ್ವರಾಜ್ ಹಾಜರಿದ್ದರು.

ಆಕಸ್ಮಿಕ ಬೆಂಕಿಗೆ ಬ್ಯಾರನ್ ಭಸ್ಮ



ಹಿರೀಕ್ಯಾತನಹಳ್ಳಿ, ಆ.6– ಆಕಸ್ಮಿಕ ಬೆಂಕಿಗೆ ತಂಬಾಕು ಹದಗೊಳಿಸುವ ಬ್ಯಾರನ್ ಸುಟ್ಟು ಹೋಗಿರುವ ಘಟನೆ ಇಲ್ಲಿಗೆ ಸಮೀಪದ ಮರೂರು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಿವಾಸಿ ತಿಮ್ಮೇಗೌಡರಿಗೆ ಸೇರಿದ ಬ್ಯಾರನ್ ಸುಟ್ಟು ಹೋಗಿರುವುದು. ಮಂಗಳವಾರ ಬೆಳಗ್ಗೆ ತಂಬಾಕು ಹದಗೊಳಿಸುತ್ತಿದ್ದ ವೇಳೆ ಆಕಸ್ಮಿಕ ಬೆಂಕಿ ತಗುಲಿ ಬ್ಯಾರನ್ ಸಂಪೂರ್ಣ ಸುಟ್ಟು ಹೋಗಿದೆ. ಇದಕ್ಕಾಗಿ ತಿಮ್ಮೇಗೌಡರು ಕಟ್ಟೆಮಳಲವಾಡಿ ಐಓಬಿ ಬ್ಯಾಂಕಿನಲ್ಲಿ 5 ಲಕ್ಷ, 2 ಲಕ್ಷ ಕೈ ಸಾಲ ಮಾಡಿದ್ದು, ಇದೀಗ ಬ್ಯಾರನ್ ಸಂಪೂರ್ಣ ಸುಟ್ಟು ಹೋಗಿರುವುದರಿಂದ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ ಸರ್ಕಾರದಿಂದ ಸೂಕ್ತ ಪರಿಹಾರ ಕೊಡಿಸಬೇಕು ಎಂದು ಒತ್ತಾಯಿಸಿದ್ದಾರೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಹುಣಸೂರು ಅಗ್ನಿಶಾಮಕ ಠಾಣೆ ಸಿಬ್ಬಂದಿ ಬೆಂಕಿ ನಂದಿಸಿ ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ.

ಬಡವರ ಏಳಿಗೆಗೆ ಕಾಂಗ್ರೆಸ್ ಸದಾ ಸಿದ್ಧ

ಪುರಸಭೆ ಮಾಜಿ ಅಧ್ಯಕ್ಷ ಎನ್.ಸೋಮು



ಪುರಸಭಾ ಮಾಜಿ ಅಧ್ಯಕ್ಷ ಎನ್.ಸೋಮು ಮಾತನಾಡಿದರು.

ತಿ.ನರಸೀಪುರ, ಆ.6– ಬಡವರ ಏಳಿಗೆಗೆ ಕಾಂಗ್ರೆಸ್ ಸದಾ ಸಿದ್ಧ ಎಂದು ಪುರಸಭೆ ಮಾಜಿ ಅಧ್ಯಕ್ಷ ಎನ್.ಸೋಮು ತಿಳಿಸಿದರು.

ಪಟ್ಟಣದ ಬಂಗಾರಪ್ಪ ಬಡಾವಣೆಯ ನಿವಾಸಿಗಳ ಸಮಸ್ಯೆಗಳನ್ನು ಆಲಿಸಿ ನಂತರ ಸಿಎಂ ಸಿದ್ದರಾಮಯ್ಯ ಹುಟ್ಟು ಹಬ್ಬ ಅಂಗವಾಗಿ ಇಡೀ ಬಡಾವಣೆಗೆ ಸಿಹಿ ಹಂಚಿ ಮಾತನಾಡಿದ ಅವರು, ಕಾಂಗ್ರೆಸ್ ಹೊರತುಪಡಿಸಿ ಯಾವುದೇ ಪಕ್ಷ ನಿಮಗೆ ಸಹಾಯ ಮಾಡಲು ಸಾಧ್ಯವಿಲ್ಲ. ಕಾಂಗ್ರೆಸ್‌ನಿಂದ ಮಾತ್ರ ಕ್ಷೇತ್ರದ ಸಮಗ್ರ ಅಭಿವೃದ್ಧಿ ಸಾಧ್ಯ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಎಂಎಲ್‌ಸಿ ಡಾ.ಯತೀಂದ್ರ ಅವರು ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಗ್ರಾಮದ ಯುವಕರು ಒಬ್ಬರ ಮೇಲೊಬ್ಬರು ಅನುಮಾನಪಡಬೇಡಿ. ಸಾಮೂಹಿಕ ನಾಯಕತ್ವದಲ್ಲಿ ಊರನ್ನು ಕಟ್ಟೋಣ. ಅಭಿವೃದ್ಧಿ ಮಾಡೋಣ. ಮನೆ ಇಲ್ಲ ಎನ್ನುವ ಸಂಕಷ್ಟದಿಂದ ಹೊರತರುವ ಕೆಲಸ ಮಾಡೋಣ ಎಂದರು.

ಭೈರಾಪುರ ಗ್ರಾಪಂ ಮಾಜಿ ಸದಸ್ಯ ಬೇಬಿ ಹೇಮಂತ್ ಕುಮಾರ್, ಬಂಗಾರಪ್ಪ ಬಡಾವಣೆ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಪ್ರಶಾಂತ್ ಈಡಿಗಾರ್, ಪ್ರಧಾನ ಕಾರ್ಯದರ್ಶಿ ಕಾಂತರಾಜ್ ಅರಸ್, ನಿರ್ದೇಶಕರಾದ ನಾಗರತ್ನಮ್ಮ ಜೋಗಿ, ನಾಗಣ್ಣ ಮಹದೇವ, ಕೃಷ್ಣನಾಯಕ್, ಸಿದ್ದರಾಜು, ಆಸೀಫ್, ಪಾಷ ಇತರರಿದ್ದರು.

ಒಳ ಮೀಸಲಾತಿ ಸಂಬಂಧ ಹೈಕೋರ್ಟ್ ತೀರ್ಪು ಸ್ವಾಗತಾರ್ಹ

ರಾಜ್ಯ ಸರ್ಕಾರ ಪರಿಶಿಷ್ಟರಿಗೆ ಒಳಮೀಸಲಾತಿ ಜಾರಿಗೊಳಿಸಲಿ

ವಿಧಾನಪರಿಷತ್ ಮಾಜಿ ಸದಸ್ಯ ಸಿ.ರಮೇಶ್ ಒತ್ತಾಯ



ಸುದ್ದಿಗೋಷ್ಠಿಯಲ್ಲಿ ಮಾಜಿ ಎಂಎಲ್‌ಸಿ ಸಿ.ರಮೇಶ್ ಮಾತನಾಡಿದರು.

ರಾಜ್ಯದಲ್ಲಿ ನ್ಯಾ. ಸದಾಶಿವ ಆಯೋಗ ನೀಡಿದ್ದ ವರದಿ ನ್ಯಾಯ ಸಮ್ಮತವಾಗಿತ್ತು. ಇಲ್ಲಿಯವರೆಗೂ ಆ ವರದಿಯನ್ನು ಸರ್ಕಾರ ಒಪ್ಪಿಲ್ಲ. ಒಳ ಮೀಸಲಾತಿಗೆ ಹಿಂದಿನಿಂದಲೂ ವಿರೋಧ ಮಾಡದ ಸಿಎಂ ಸಿದ್ದರಾಮಯ್ಯ ಸಮಾಜವಾದ ನಿಲುವುಳ್ಳ ವ್ಯಕ್ತಿಯಾಗಿದ್ದು, ಅವರು ಕೂಡಲೇ ಸದಾಶಿವ ಆಯೋಗ ವರದಿಯನ್ನು ವಿಧಾನಸಭೆ ಅಧಿವೇಶನದಲ್ಲಿಟ್ಟು ಅಧ್ಯಯನ ನಡೆಸಿ ಜಾರಿ ಮಾಡಿ, ಕೇಂದ್ರಕ್ಕೂ ಶಿಫಾರಸ್ಸು ಮಾಡಬೇಕು.
- ಸಿ.ರಮೇಶ್, ವಿಧಾನ ಪರಿಷತ್ ಮಾಜಿ ಸದಸ್ಯ

ತಿ.ನರಸೀಪುರ, ಆ.6– ಪ.ಜಾತಿ ಮೀಸಲಾತಿಯಲ್ಲಿ ಒಳ ಮೀಸಲಾತಿ ಮಾಡುವುದು ಕಾನೂನಿಗಾಗಲೀ ಅಥವಾ ರಾಜ್ಯಾಂಗಕ್ಕೆ ವಿರೋಧವಲ್ಲ ಎಂದು ಸುಪ್ರೀಂಕೋರ್ಟ್ ಸ್ಪಷ್ಟಪಡಿಸಿರುವುದರಿಂದ ಕೂಡಲೇ ರಾಜ್ಯ ಸರ್ಕಾರ ಹೊಸ ಕಾನೂನು ರೂಪಿಸಿ, ಪರಿಶಿಷ್ಟರ ಒಳ ಮೀಸಲಾತಿ ಕಾನೂನನ್ನು ಜಾರಿಗೊಳಿಸಬೇಕು. ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಇತ್ಯಾದಿ ಕ್ಷೇತ್ರಗಳಲ್ಲಿ ಮೀಸಲಾತಿ ವರ್ಗೀಕರಿಸಲು ಕಾರ್ಯೋನ್ಮುಖವಾಗಬೇಕು ಎಂದು ವಿಧಾನಪರಿಷತ್ ಮಾಜಿ ಸದಸ್ಯ ಸಿ.ರಮೇಶ್ ಒತ್ತಾಯಿಸಿದರು.

ಪಟ್ಟಣದ ಗೋಪಾಲಪುರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಲವು ವರ್ಷಗಳಿಂದ ಒಳ ಮೀಸಲಾತಿ ಸಂಬಂಧ ರಾಷ್ಟ್ರದಲ್ಲಿ ದೊಡ್ಡ ಹೋರಾಟ ಎದ್ದಿತ್ತು. ಅದರಲ್ಲೂ ರಾಜ್ಯದಲ್ಲಿ ಮಾದಿಗ ಸಮುದಾಯ ಒಳ ಮೀಸಲಾತಿಗಾಗಿ ನಿರಂತರ ಹೋರಾಟ ಮಾಡುತ್ತಿತ್ತು. ಇದೀಗ ನ್ಯಾಯಾಲಯದಿಂದ ನ್ಯಾಯ ಸಿಕ್ಕಿದ್ದು, ಇದೊಂದು ದೊಡ್ಡ ಗೆಲುವಾಗಿದೆ. ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಹಂಚಿಕೆಯಾಗಿಲ್ಲ ಎಂಬುದನ್ನು ಅರಿತು ಒಳ ಮೀಸಲಾತಿ ನೀಡಬೇಕೆಂಬ ಆದೇಶ ನೀಡಿರುವ ಸುಪ್ರೀಂಕೋರ್ಟ್ ತೀರ್ಪನ್ನು ನಾನಷ್ಟೆಯಲ್ಲ, ಪರಿಶಿಷ್ಟರೆಲ್ಲರೂ ಸ್ವಾಗತಿಸಬೇಕು ಎಂದರು.

ಡಾ.ಬಿ.ಆರ್.ಅಂಬೇಡ್ಕರ್ ರೂಪಿಸಿರುವ ಕಾನೂನಿನಲ್ಲಿ ಜನಸಂಖ್ಯೆಗೆ ತಕ್ಕಂತೆ ಒಳ ಮೀಸಲಾತಿ ಕೊಡಬಾರದೆಂದು ಎಲ್ಲಿಯೂ ಹೇಳಿಲ್ಲ. ಈ ಹಿಂದೆಯೂ ನೆರೆಯ ಆಂಧ್ರ ಪ್ರದೇಶದಲ್ಲಿ ಒಳ ಮೀಸಲಾತಿ ನೀಡಿದ್ದಕ್ಕೆ ಕೆಲವು ವಿರೋಧಿಗಳು ಸುಪ್ರೀಂಕೋರ್ಟ್ ಮೊರೆ ಹೋಗಿದ್ದರಿಂದ ತಡೆ ಹಿಡಿಯಲಾಗಿತ್ತು. ಇದೀಗ ವಾಸ್ತವ ಅರಿತ 7 ಮಂದಿ ನ್ಯಾಯಾಧೀಶರಿರುವ ಸುಪ್ರೀಂ ಕೋರ್ಟ್‌ನಲ್ಲಿ 6 ಮಂದಿ ನ್ಯಾಯಾಧೀಶರು ಒಳ ಮೀಸಲಾತಿ ಅಂತಿಮಗೊಳಿಸಿದ್ದಾರೆ. ಒಬ್ಬರಷ್ಟೇ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಒಳ ಮೀಸಲಾತಿ ವಿರೋಧಿಸುವವರು ನಿಜವಾದ ಪ್ರಜಾಪ್ರಭುತ್ವ ಮತ್ತು ಸಂವಿಧಾನದ ವಿರೋಧಿಗಳಾಗಿದ್ದಾರೆ ಎಂದು ಆರೋಪಿಸಿದರು.

ಒಳ ಮೀಸಲಾತಿಗಾಗಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಹೋರಾಟಗಳು ನಡೆದಿದ್ದವು. ಸುಪ್ರೀಂಕೋರ್ಟ್ ತೀರ್ಪಿನ ಬಳಿಕ ನಾವಾಗಲಿ, ಸಮುದಾಯದ ಜನಪ್ರತಿನಿಧಿಗಳಾಗಲಿ ಸುಮ್ಮನೆ ಕೂರುವುದಿಲ್ಲ. ಸಭೆ ಸಮಾರಂಭಗಳನ್ನು ಆಯೋಜಿಸಿ ಆಡಳಿತರೂಢ ಸರ್ಕಾರಗಳಿಗೆ ಒತ್ತಾಯವನ್ನು ಬರವಣಿಗೆ ಮತ್ತು ಮೆರವಣಿಗೆ ಮೂಲಕ ನಿರಂತರವಾಗಿ ಮಾಡುತ್ತೇವೆ. ಹಿಂದಿನ ಹೋರಾಟದಲ್ಲಿ ಜನಸಂಖ್ಯೆಯ ಪ್ರಮಾಣ ನೀಡಿ ಮೀಸಲಾತಿಗಾಗಿ ಮಾದಿಗ ಸಮುದಾಯ ಹೋರಾಟ ಮಾಡಿಲ್ಲ ಎಂಬುದನ್ನು ವಿರೋಧಿಸುವವರು ಅರಿಯಬೇಕು ಎಂದು ವಿರೋಧಿಗಳ ವರ್ತನೆ ಖಂಡಿಸಿದರು.

ಸುದ್ದಿಗೋಷ್ಠಿಯಲ್ಲಿ ತಾಪಂ ಮಾಜಿ ಸದಸ್ಯ ಬಿ.ಎಲ್.ಮಹದೇವ, ತಾಲೂಕು ಬಾಬೂಜಿ ಸಂಘದ ಅಧ್ಯಕ್ಷ ಪುಟ್ಟಯ್ಯ, ಪ್ರಧಾನ ಕಾರ್ಯದರ್ಶಿ ಸಿ.ಡಿ.ವೆಂಕಟೇಶ್, ಮುಖಂಡರಾದ ಚಿನ್ನಸ್ವಾಮಿ ಹಾಗೂ ನಾರಾಯಣ್ ಉಪಸ್ಥಿತರಿದ್ದರು.

ದೇವಾಲಯದ ಹುಂಡಿಯಲ್ಲಿ ಸಮಸ್ಯೆಗಳ ಬಗ್ಗೆ ಪತ್ರ!

ಶ್ರೀಕಂಠಪ್ಪ ನಿನ್ನ ಬಡ ಭಕ್ತರ ಕಷ್ಟ ನೀನೇ ಪರಿಹರಿಸಪ್ಪ ಎಂದು ಮನವಿ

ನಂಜನಗೂಡು, ಆ.6– ಉಳ್ಳವರು ಲಾಡ್ಜ್‌ನಲ್ಲಿ ಉಳಿಯುವರು, ನಾನೇನು ಮಾಡಲಿ ಬಡವನಯ್ಯ, ದೇವಾಲಯದ ಮುಂದೆ ಮಲಗಿದರೆ ಲಾಠಿಯಲ್ಲಿ ತಿವಿಯುವರು, ಬೂಟಿನಲ್ಲಿ ಒದೆಯುವರು, ಲಾಡ್ಜ್‌ಗೆ ಹೋಗೆಂದು ಅಡ್ರೆಸ್ ಕೊಡುವರು, ನಾ ಹೇಗೆ ಹೋಗಲಿ ಬಡವನಯ್ಯಾ... ಶ್ರೀಕಂಠಪ್ಪ ನಿನ್ನ ಬಡ ಭಕ್ತರ ಕಷ್ಟ ನೀನೇ ಪರಿಹರಿಸಪ್ಪ...

ಇದೇನಿದು ವಚನ ಎಂದು ಭಾವಿಸಬೇಡಿ. ಇದು ಬಡ ಭಕ್ತನೊಬ್ಬನ ನಂಜನಗೂಡಿನ ಶ್ರೀಕಂಠೇಶ್ವರಸ್ವಾಮಿ ಬಳಿ ವಿನಮ್ರವಾಗಿ ಬೇಡಿಕೊಂಡಿರುವ ಪರಿ.

ಹೌದು, ನಂಜನಗೂಡಿನ ಶ್ರೀಕಂಠೇಶ್ವರಸ್ವಾಮಿ ದೇವಾಲಯದ ದಾಸೋಹ ಭವನದಲ್ಲಿ ಮಂಗಳವಾರ ನಡೆದ ಹುಂಡಿ ಎಣಿಕೆ ವೇಳೆ ಭಕ್ತರೊಬ್ಬರು 100 ರೂ. ನೋಟಿನೊಂದಿಗೆ ಸೇರಿಸಿ ಬರೆದಿದ್ದ ಪತ್ರ. ಇದೊಂದೇ ಮಾತ್ರವಲ್ಲ. ದೇವಾಲಯದಲ್ಲಿ ಭಕ್ತರು ಎದುರಿಸುತ್ತಿರುವ ವಸತಿ ಸಮಸ್ಯೆ, ಮೂಲ ಸೌಲಭ್ಯಗಳ ಬಗ್ಗೆ ಪರಿ ಪರಿಯಾಗಿ ತಮ್ಮ ಪತ್ರಗಳ ಮೂಲಕ ವ್ಯಕ್ತಗೊಳಿಸುವ ಮೂಲಕ ಜಡ್ಡುಗಟ್ಟಿರುವ ದೇವಾಲಯದ ಆಡಳಿತ ವ್ಯವಸ್ಥೆ ವಿರುದ್ಧ ಭಕ್ತರು ಹರಿಹಾಯ್ದಿದ್ದಾರೆ.

ಪ್ರತಿ ತಿಂಗಳು ನಡೆಯುವ ಹುಂಡಿ ಎಣಿಕೆ ಸಂದರ್ಭ ಇಂತಹ ಅನೇಕ ಪತ್ರಗಳು ಭಕ್ತರಿಂದ ಸಲ್ಲಿಕೆಯಾಗುತ್ತಿವೆ. ಈ ಬಾರಿ 150ಕ್ಕೂ ಹೆಚ್ಚು ಪತ್ರಗಳು ಎಣಿಕೆ ವೇಳೆ ಲಭ್ಯವಾಗಿದ್ದು, ಬೆಂಗಳೂರು, ಮಂಡ್ಯ, ಕೆ.ಎಂ.ದೊಡ್ಡಿ ಸೇರಿದಂತೆ ರಾಜ್ಯದ ನಾನಾ ಮೂಲೆಗಳ ವಿಳಾಸದಲ್ಲಿ ಪತ್ರ ಬರೆದಿರುವ ಭಕ್ತರು ಆ ಪತ್ರಕ್ಕೆ 500 ರೂ., 100 ರೂ., 50 ರೂ. ನೋಟುಗಳನ್ನು ಟ್ಯಾಗ್ ಮಾಡಿ ತಮ್ಮ ನಿವೇದನೆಯನ್ನು ದೇವರಲ್ಲಿ ಹೇಳಿಕೊಂಡಿದ್ದಾರೆ. ಇನ್ನು ಈ ಹಣವನ್ನು ದೇವಾಲಯಕ್ಕೆ ಆಗಮಿಸುವ ಭಕ್ತರ ಅನುಕೂಲಕ್ಕೆ ಬಳಕೆ ಮಾಡುವಂತಾಗಲಿ ಎಂಬ ಆಶಯವನ್ನೂ ಭಕ್ತರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.



ಹುಂಡಿ ಎಣಿಕೆಯಲ್ಲಿ ಭಕ್ತರು ಹುಂಡಿ ಹಣದ ಜೊತೆಗೆ ಸಲ್ಲಿಸಿರುವ ಪತ್ರ.

ಮಾಸಿಕ ಕೋಟಿಗೂ ಅಧಿಕ ಆದಾಯವಿರುವ ಶ್ರೀಕಂಠೇಶ್ವರಸ್ವಾಮಿ ದೇವಾಲಯದಲ್ಲಿ ದೂರದ ಊರುಗಳಿಂದ ಬರುವವರಿಗೆ ಸರಿಯಾದ ವಸತಿ ವ್ಯವಸ್ಥೆ ಇಲ್ಲ ಕೈಸಾಲೆ ಹಾಗೂ ದೇವಾಲಯ ಮುಂದೆ ಮಲಗಿದರೆ ಪೊಲೀಸರು ಲಾಠಿಯಲ್ಲಿ ತಿವಿದು, ಬೂಟಿನಲ್ಲಿ ಒದ್ದು ಎಬ್ಬಿಸಿ ಲಾಡ್ಜ್‌ಗೆ ಹೋಗಿ ರೂಮು ಪಡೆದು ಮಲಗಿ ಎಂದು ಭಕ್ತರಿಗೆ ಕಿರುಕುಳ ಕೊಡುತ್ತಾರೆ. ಆದರೆ ಲಾಡ್ಜ್‌ಗಳಲ್ಲಿ ಅಷ್ಟು ಹಣ ಕೊಟ್ಟು ವಾಸ್ತವ್ಯ ಹೂಡುವಷ್ಟು ನಾವು ಶಕ್ತರಲ್ಲ. ಇನ್ನು ಕಪಿಲಾ ನದಿ ಸ್ನಾನ ಘಟ್ಟದಲ್ಲಿ ಪುಣ್ಯಸ್ನಾನ ಮಾಡುವ ಮಹಿಳೆಯರಿಗೆ ಬಟ್ಟೆ ಬದಲಾಯಿಸಲು ಅನುಕೂಲಕರ ವಾತಾವರಣವಿಲ್ಲ. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ. ಉರುಳು ಸೇವೆ ಮಾಡಲು ಸರಿಯಾದ ವ್ಯವಸ್ಥೆ ಮಾಡಿಲ್ಲ. ಸಮಸ್ಯೆಗಳ ಬಗ್ಗೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳಿಗೆ ಪತ್ರ ಬರೆದರೂ ಏನೂ ಪ್ರಯೋಜನವಾಗಿಲ್ಲ. ಇದರಿಂದ ಬೇಸತ್ತು ನಿನಗೆ ಪತ್ರ ಬರೆಯುತ್ತಿರುವೆ ಎಂದು ಅನೇಕ ಸಮಸ್ಯೆಗಳನ್ನು ಭಕ್ತರು ಪತ್ರದಲ್ಲಿ ಉಲ್ಲೇಖಿಸಿರುವುದನ್ನು ಕಾಣಬಹುದಾಗಿದೆ.

ವಸತಿ ಸಮಸ್ಯೆ ವಾಸ್ತವದಲ್ಲಿ ನಿಜ: ಭಕ್ತರು ಶ್ರೀಕಂಠೇಶ್ವರಸ್ವಾಮಿಗೆ ಬರೆದಿರುವ ಪತ್ರದಲ್ಲಿ ತಮ್ಮ ಮನದಾಳದ ವೇದನೆ ಹಂಚಿಕೊಂಡಿರುವುದು ವಾಸ್ತವದಲ್ಲಿ ಸತ್ಯವಾಗಿದೆ. ದೇವಾಲಯದಲ್ಲಿ ಸರಿಯಾದ ವಸತಿ ವ್ಯವಸ್ಥೆ ಇಲ್ಲ. ಕಳೆದ ಒಂದೂವರೆ ವರ್ಷಗಳ ಹಿಂದೆ 75 ಕೊಠಡಿಗಳ ವಸತಿ ಸಮುಚ್ಛಯ ನಿರ್ಮಾಣಕ್ಕೆ ಶಿಲಾನ್ಯಾಸ ನೆರವೇರಿಸಲಾಗಿತ್ತು. ಆದರೆ ಆ ಯೋಜನೆ ಇನ್ನೂ ಜಾರಿಯಾಗಿಲ್ಲ. ಇಲ್ಲಿನ ಅವ್ಯವಸ್ಥೆ, ಮೂಲ ಸೌಕರ್ಯಗಳ ಕೊರತೆ ಬಗ್ಗೆ ಭಕ್ತರು ಬೇಸರ ಮಾಡಿಕೊಳ್ಳುತ್ತಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ. ಭಕ್ತರಿಂದ ಕೋಟ್ಯಾಂತರ ರೂ. ಆದಾಯವಿದ್ದರೂ ಭಕ್ತರಿಗೆ ಮೂಲ ಸೌಕರ್ಯ ಒದಗಿಸಲು ಏಕಿಷ್ಟು ತಾತ್ಸಾರ ಎಂಬುದು ಭಕ್ತರ ಪ್ರಶ್ನೆಯೂ ಆಗಿದೆ.

ಹುಂಡಿಯಲ್ಲಿ 1.13 ಕೋಟಿ ಸಂಗ್ರಹ

ಮಂಗಳವಾರ ಶ್ರೀಕಂಠೇಶ್ವರ ದೇವಾಲಯದ 35 ಹುಂಡಿಗಳ ಪರ್ಕಾವಣೆ ಕಾರ್ಯ ನಡೆಸಲಾಯಿತು. ಹುಂಡಿಯಲ್ಲಿ ಸುಮಾರು 1 ಕೋಟಿ 12 ಲಕ್ಷದ 92 ಸಾವಿರ ನಗದು, 51 ಗ್ರಾಂ ಚಿನ್ನ, 1 ಕೆಜಿ 800 ಗ್ರಾಂ ಬೆಳ್ಳಿ, 46 ವಿದೇಶಿ ಕರೆನ್ಸಿಗಳು ಸಂಗ್ರಹಗೊಂಡಿದೆ.

ಸಂವಿಧಾನ ದುರ್ಬಲಗೊಳಿಸುವ ಅಪಾಯಕಾರಿ ಪರಿಸ್ಥಿತಿ

ಡಾ.ಬಿ.ಆರ್.ಅಂಬೇಡ್ಕರ್, ಶ್ರೀನಿವಾಸಪ್ರಸಾದ್ ಕೊಟ್ಟ ಧೈರ್ಯದಿಂದ ಶೋಷಿತ ಸಮುದಾಯ ಘರ್ಜಿಸಬೇಕು

ಸಮಾಜ ಕಲ್ಯಾಣ ಸಚಿವ ಡಾ. ಮಹದೇವಪ್ಪ ಸಲಹೆ

ಮೈಸೂರು, ಆ.6(ಬಿಎಲ್‌ಯು)– ಸಂವಿಧಾನವನ್ನು ದುರ್ಬಲಗೊಳಿಸುವ ಈಗಿನ ಅಪಾಯಕಾರಿ ಸಂದರ್ಭದಲ್ಲಿ ಅಂಬೇಡ್ಕರ್ ಹಾಗೂ ಶ್ರೀನಿವಾಸ ಪ್ರಸಾದ್ ನೀಡಿರುವ ಧೈರ್ಯ ಮೈಗೂಡಿಸಿಕೊಂಡು ಶೋಷಿತ ಸಮುದಾಯ ಗಟ್ಟಿ ಧ್ವನಿಯಿಂದ ಘರ್ಜಿಸಬೇಕು ಎಂದು ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಸಲಹೆ ನೀಡಿದರು.



ಮೈಸೂರಿನ ಮಾನಸ ಗಂಗೋತ್ರಿಯ ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ವಿಶ್ವಜ್ಞಾನಿ ಸಭಾಂಗಣದಲ್ಲಿ ಮಂಗಳವಾರ ಶ್ರೀನಿವಾಸ ಪ್ರಸಾದ್ ಅವರ 77ನೇ ಜನ್ಮ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ವಿ.ಶ್ರೀನಿವಾಸ ಪ್ರಸಾದ್ ವ್ಯಕ್ತಿತ್ವ ಮತ್ತು ಹೋರಾಟ ಕುರಿತ ವಿಚಾರ ಮಂಥನ ಕಾರ್ಯಕ್ರಮವನ್ನು ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಉದ್ಘಾಟಿಸಿದರು.

ಮೈಸೂರಿನ ಮಾನಸ ಗಂಗೋತ್ರಿಯ ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ವಿಶ್ವಜ್ಞಾನಿ ಸಭಾಂಗಣದಲ್ಲಿ ಇಂದು ಶ್ರೀನಿವಾಸ ಪ್ರಸಾದ್ ಅವರ 77ನೇ ಜನ್ಮ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ವಿ.ಶ್ರೀನಿವಾಸ ಪ್ರಸಾದ್ ವ್ಯಕ್ತಿತ್ವ ಮತ್ತು ಹೋರಾಟ ಕುರಿತ ವಿಚಾರ ಮಂಥನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಈ ಇಬ್ಬರು ನಾಯಕರು ಶೋಷಿತ ಸಮುದಾಯಕ್ಕೆ ನಂಬಿಕೆ, ಭರವಸೆ ಹಾಗೂ ಗಟ್ಟಿ ಧ್ವನಿ ನೀಡಿದ್ದಾರೆ ಎಂದರು.

ಶ್ರೀನಿವಾಸ ಪ್ರಸಾದ್ ಪಕ್ಷಾಂತರ ಮಾಡಿದರೂ ತಮ್ಮ ತತ್ವಸಿದ್ಧಾಂತ ಬಿಡಲಿಲ್ಲ. ತಮ್ಮಲ್ಲಿರುವ ಶಕ್ತಿಯನ್ನು ತಾವು ಸೇರುವ ರಾಜಕೀಯ ಪಕ್ಷದ ಶಕ್ತಿಗೆ ಕ್ರೂಢಿಕರಿಸುತ್ತಿದ್ದರು. ನೇರ ನಡೆಯ ಶ್ರೀನಿವಾಸ ಪ್ರಸಾದ್ ತಮಗೆ ಅನಿಸಿದ ವಿಚಾರವನ್ನು ನಿಷ್ಠೂರವಾಗಿ ಹೇಳುತ್ತಿದ್ದರು. ತಮ್ಮ ಜೀವಿತಾವಧಿಯ ರಾಜಕಾರಣದಲ್ಲಿ ಸಣ್ಣ ಕಪ್ಪುಚುಕ್ಕೆ ಇಲ್ಲದೆ ಬದುಕು ಕಂಡಿದ್ದ ಪ್ರಾಮಾಣಿಕ ರಾಜಕಾರಣಿಯಾಗಿದ್ದರು ಎಂದು ಡಾ.ಮಹದೇವಪ್ಪ ಅಭಿಪ್ರಾಯಪಟ್ಟರು.

ಶ್ರೇಷ್ಠ ಸಾಂಸ್ಕೃತಿಕ, ಗುಣಾತ್ಮಕ ನಾಯಕತ್ವ ಹೊಂದಿದ್ದ ಮಹಾನ್ ವ್ಯಕ್ತಿಯಾಗಿದ್ದ ಶ್ರೀನಿವಾಸ ಪ್ರಸಾದ್ ಇಂದು ದೈಹಿಕವಾಗಿ ನಮ್ಮ ಜೊತೆ ಇಲ್ಲದಿದ್ದರೂ ಅವರ ಜನಪರ ಕಾರ್ಯ, ಶೋಷಿತ ಸಮುದಾಯದ ಪರ ಮೊಳಗಿಸಿದ ಧ್ವನಿ ಚರಿತ್ರೆಯಲ್ಲಿ ಉಳಿಯಲಿದೆ ಎಂದು ಹೇಳಿದರು.

ಹಳೇ ಮೈಸೂರು ಭಾಗದಲ್ಲಿ ಶೋಷಿತ ಸಮುದಾಯದವರು ಅನ್ಯಾಯಕ್ಕೊಳಗಾದಾಗ ಶ್ರೀನಿವಾಸ ಪ್ರಸಾದ್ ಬಳಿ ಬರುತ್ತಿದ್ದರು. ಅವರ ಮೇಲೆ ಜನರಿಗಿದ್ದ ಭರವಸೆ ಹಾಗೂ ನಂಬಿಕೆಯ ನಾಯಕತ್ವ ಗುಣ ಇದಕ್ಕೆ ಮೂಲ ಕಾರಣವಾಗಿತ್ತು ಶ್ರೀನಿವಾಸ ಪ್ರಸಾದ್ ನೀಡಿದ ಈ ಶಕ್ತಿಯಿಂದ ಶೋಷಿತ ಸಮುದಾಯಕ್ಕೆ ಪ್ರಶ್ನೆ ಮಾಡುವ ಅಧಿಕಾರ ದೊರೆಯಿತು ಎಂದು ತಿಳಿಸಿದರು.

ಶ್ರೀನಿವಾಸ ಪ್ರಸಾದ್ ಯಾರೊಂದಿಗೂ ರಾಜೀ ಆಗುತ್ತಿರಲಿಲ್ಲ. ಯಾರ ಮುಲಾಜು ಹಾಗೂ ಹಂಗಿನಲ್ಲಿ ಬದುಕುತ್ತಿರಲಿಲ್ಲ. ದಲಿತರ ಬಗ್ಗೆ ಮಾತ್ರ ಮಾತನಾಡದೆ ಪ್ರಜಾಪ್ರಭುತ್ವ, ಸಂವಿಧಾನ, ಮಹಿಳೆಯರು, ಕಾರ್ಮಿಕರು ಸೇರಿದಂತೆ ಅನ್ಯಾಯಕ್ಕೊಳಗಾದವರ ಬಗ್ಗೆ ಧ್ವನಿ ಎತ್ತುತ್ತಿದ್ದರು ಎಂದು ಡಾ.ಮಹದೇವಪ್ಪ ಹೇಳಿದರು.

ಇದೇ ವೇಳೆ ಮಾತನಾಡಿದ ಸಂಸ್ಕೃತಿ ಚಿಂತಕ ಡಾ.ಬಂಜಗೆರೆ ಜಯಪ್ರಕಾಶ್, ಬಿಜೆಪಿ, ಜೆಡಿಎಸ್, ಕಾಂಗ್ರೆಸ್ ಪಕ್ಷದಲ್ಲಿದ್ದರೂ ಶ್ರೀನಿವಾಸ ಪ್ರಸಾದ್ ಅಂಬೇಡ್ಕರ್ ವಾದಿಯಾಗಿದ್ದರು. ಸ್ವಾಭಿಮಾನದ ಕಾರಣದಿಂದ ಕೆಲವರೊಂದಿಗೆ ಭಿನ್ನಾಭಿಪ್ರಾಯ ಹೊಂದಿದ್ದರು ಎಂದು ಹೇಳಿದರು.

ಶ್ರೀನಿವಾಸ ಪ್ರಸಾದ್ ಅಂದರೆ ಪ್ರಾಮಾಣಿಕತೆ, ರಾಜೀ ಆಗದಿರುವುದು. ಸ್ವಾಭಿಮಾನಕ್ಕೆ ಧಕ್ಕೆ ಆಗುತ್ತಿದೆ ಎಂದಾಗ ಶ್ರೀನಿವಾಸ ಪ್ರಸಾದ್ ಅಲ್ಲಿರುತ್ತಿರಲಿಲ್ಲ ಎಂದು ಹೇಳಿದರು.

ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರ 25 ವರ್ಷ ಪೂರೈಸುತ್ತಿರುವ ಹಿನ್ನೆಲೆಯಲ್ಲಿ ವರ್ಷಪೂರ್ತಿ ವಿಶಿಷ್ಟ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಇದಕ್ಕೆ ಸರ್ಕಾರದಿಂದ 10 ಕೋಟಿ ರೂಪಾಯಿ ನೀಡುವಂತೆ ಕೇಂದ್ರದ ನಿರ್ದೇಶಕ ಪ್ರೊ.ಜೆ.ಸೋಮಶೇಖರ್ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರಲ್ಲಿ ಮನವಿ ಮಾಡಿದರು.


ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರ, ಡಾ.ಬಿ.ಆರ್. ಅಂಬೇಡ್ಕರ್ ಎಜುಕೇಷನಲ್ ಮತ್ತು ಕಲ್ಚರಲ್ ಟ್ರಸ್ಟ್, ಸಮಾನತೆ–ಸ್ವಾಭಿಮಾನ–ಸ್ವಾವಲಂಬನೆ ಪ್ರತಿಷ್ಠಾನ, ಸಮಾನತೆ ಪ್ರಕಾಶನ ಸಂಯುಕ್ತವಾಗಿ ಈ ಕಾರ್ಯಕ್ರಮ ಆಯೋಜಿಸಿತ್ತು.

ವಿಶ್ವಮೈತ್ರಿ ಬುದ್ಧ ವಿಹಾರದ ಡಾ.ಕಲ್ಯಾಣಸಿರಿ ಭಂತೇಜಿ ಸಾನ್ನಿಧ್ಯ ವಹಿಸಿದ್ದ ಕಾರ್ಯಕ್ರಮದಲ್ಲಿ ಪತ್ರಕರ್ತ ರವೀಂದ್ರ ಭಟ್ಟ, ಶ್ರೀನಿವಾಸ ಪ್ರಸಾದ್ ಪುತ್ರಿ ಪ್ರತಿಮಾ ಪ್ರಸಾದ್, ಸಮಾನತೆ–ಸ್ವಾಭಿಮಾನ–ಸ್ವಾವಲಂಬನೆ ಪ್ರತಿಷ್ಠಾನದ ಅಧ್ಯಕ್ಷ ಪ್ರೊ.ಸಿ.ಬಸವರಾಜು, ಸಮಾನತೆ ಪ್ರಕಾಶನದ ಪ್ರಕಾಶಕ ಭರತ್ ರಾಮಸ್ವಾಮಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಶ್ರೀಮಂತರಿಗೆ ಟಿಕೆಟ್ ನೀಡಲು ರಾಜಕೀಯ ಪಕ್ಷಗಳಲ್ಲಿ ಪೈಪೋಟಿ

ಮಾಜಿ ವಿಧಾನಸಭಾಧ್ಯಕ್ಷ ರಮೇಶ್ ಕುಮಾರ್ ಬೇಸರ

ಮೈಸೂರು, ಆ.6(ಬಿಎಲ್‌ಯು)– ಚುನಾವಣೆಗಳಲ್ಲಿ ಯಥೇಚ್ಛವಾಗಿ ಹಣ ಖರ್ಚು ಮಾಡುವ ಶ್ರೀಮಂತರನ್ನು ಸ್ಪರ್ಧೆಗಿಳಿಸಲು ರಾಜಕೀಯ ಪಕ್ಷಗಳಲ್ಲಿ ಪೈಪೋಟಿ ನಡೆಯುತ್ತಿದೆ ಎಂದು ಮಾಜಿ ಸ್ಪೀಕರ್ ಕೆ.ಆರ್. ರಮೇಶ್ ಕುಮಾರ್ ಬೇಸರ ವ್ಯಕ್ತಪಡಿಸಿದ್ದಾರೆ.



ಒಂದು ಪಕ್ಷದವರು ಶ್ರೀಮಂತನನ್ನು ಸ್ಪರ್ಧೆಗಿಳಿಸಿದರೆ, ಅಷ್ಟೇ ಪ್ರಬಲರಾಗಿರುವ ಮತ್ತೊಬ್ಬ ಶ್ರೀಮಂತನಿಗೆ ಪ್ರತಿಸ್ಪರ್ಧಿ ಪಕ್ಷ ಟಿಕೆಟ್ ನೀಡುತ್ತದೆ. ಆರ್ಕೆಸ್ಟ್ರಾದಲ್ಲಿ ತಬಲ, ವಾದ್ಯಗಳ ಸಂಯೋಜನೆಯಂತೆ ರಾಜಕೀಯ ಪಕ್ಷಗಳಲ್ಲಿ ಒಡಂಬಡಿಕೆ ಏರ್ಪಡುತ್ತದೆ. ತರುವಾಯ ಸ್ಪರ್ಧೆಗಿಳಿಯುವ ಶ್ರೀಮಂತ ಮಾರುಕಟ್ಟೆಯಲ್ಲಿ ವಸ್ತುಗಳನ್ನು ಖರೀದಿ ಮಾಡಿದಂತೆ ಮತದಾರರನ್ನು ಖರೀದಿ ಮಾಡುತ್ತಾನೆ ಎಂದು ಹೇಳಿದರು.

ತಮ್ಮ ಮನೆಯಲ್ಲಿ ಇರುವ ಮತದಾರರ ಸಂಖ್ಯೆಯನ್ನು ನಮೂದಿಸಿ ಅದಕ್ಕೆ ಬೆಲೆ ಕಟ್ಟಿ ಫಲಕ ಹಾಕುವ ದಿನ ದೂರವಿಲ್ಲ ಎಂದು ನೊಂದು ನುಡಿದ ರಮೇಶ್ ಕುಮಾರ್, ಡೆಪಾಸಿಟ್ ಕಟ್ಟಲು ಸಾಧ್ಯವಾಗದ ವ್ಯಕ್ತಿಯನ್ನು ಆಯ್ಕೆ ಮಾಡುವ ಶಕ್ತಿ ಜನರಿಗಿದ್ದರೂ ಚುನಾಯಿಸುತ್ತಿಲ್ಲವೇಕೆ ಎಂಬ ಪ್ರಶ್ನೆ ಮೂಡಿದೆ ಎಂದರು.

ಇಂತಹ ವಾತಾವರಣದಿಂದ ಮುಕ್ತ ಮಾಡಿ ರಾಜಕಾರಣಿಗಳು ಪ್ರಾಮಾಣಿಕವಾಗಿ ಚುನಾವಣೆ ನಡೆಸಬಹುದು. ಆದರೆ ಚುನಾವಣೆಯಲ್ಲಿ ಸುಧಾರಣೆ ತಂದರೆ ನಮ್ಮ ಕಾರ್ಖಾನೆ ನಿಂತು ಹೋಗುತ್ತದೆ ಎಂಬ ಸ್ವಾರ್ಥದಿಂದ ಚುನಾವಣೆಯಲ್ಲಿ ಸುಧಾರಣೆ ತರಲು ಮುಂದಾಗುತ್ತಿಲ್ಲ ಎಂದು ಆರೋಪಿಸಿದರು.

ಇದನ್ನೆಲ್ಲಾ ನೋಡಿದರೆ ಗಾಂಧಿ, ಅಂಬೇಡ್ಕರ್ ಅವರ ತತ್ವಾದರ್ಶ ಎಲ್ಲಿ ಹೋಯಿತು. ಇದನ್ನು ಜನರೇಕೆ ಅನುಸರಿಸುತ್ತಿಲ್ಲ ಎಂಬ ಪ್ರಶ್ನೆಗಳು ಕಾಡುತ್ತಿವೆ ಎಂದು ಹೇಳಿದರು.

ಈ ಎಲ್ಲಾ ಬೆಳವಣಿಗೆಗಳಿಂದ ಆಂತರಿಕ ಪ್ರಜಾಪ್ರಭುತ್ವ, ವಿಚಾರ ಮಂಡನೆ, ಚರ್ಚೆ, ಆರೋಗ್ಯಕರ ವಿರೋಧ ಅಭಿಪ್ರಾಯಗಳೆಲ್ಲಾ ಮರೆಯಾಗಿವೆ. ಭ್ರಷ್ಟಾಚಾರ ಹಾಗೂ ಚುನಾವಣೆ ಒಂದಕ್ಕೊಂದು ಬೆರೆತು ಹೋಗಿದೆ ಎಂದು ರಮೇಶ್‌ಕುಮಾರ್ ಹೇಳಿದರು.

ಲೋಕಸಭೆ, ರಾಜ್ಯಸಭೆ ಹಾಗೂ ದೇಶದ ರಾಜ್ಯಗಳ ಮೂರನೇ ಒಂದು ಭಾಗದ ಬೆಂಬಲ ಇದ್ದಾಗ ಮಾತ್ರ ಸಂವಿಧಾನ ಬದಲಾವಣೆ ಸಾಧ್ಯ ಎಂದು ಸಂವಿಧಾನ ರಚನೆಯಲ್ಲಿ ಅಂಬೇಡ್ಕರ್ ಹೇಳಿದ್ದಾರೆ. ಈ ವಿಚಾರ ಉಲ್ಲೇಖಿಸದೇ ಹೋಗಿದ್ದರೆ ಇಂದು ಸಂವಿಧಾನ ಬದಲಾವಣೆ ಮಾಡುತ್ತಿದ್ದರು. ಇದರಿಂದ ದೇಶದಲ್ಲಿ ನಾಗರಿಕ ದಂಗೆಯಾಗುತ್ತಿತ್ತು ಎಂದರು.

ಪ್ರಸ್ತುತ ಶ್ರೀನಿವಾಸಪ್ರಸಾದ್ ಅವರಂತೆ ಸವಾಲುಗಳನ್ನು ದಿಟ್ಟತನದಿಂದ ಎದುರಿಸಬೇಕು. ಅವರಂತೆ ಸ್ವಾಭಿಮಾನದ ಗುಣಗಳನ್ನು ಮೈಗೂಡಿಸಿಕೊಳ್ಳಬೇಕು. ಆಗ ಇಂತಹ ವೇದಿಕೆಗಳ ಅವಶ್ಯಕತೆ ಇರುವುದಿಲ್ಲ ಎಂದು ರಮೇಶ್ ಕುಮಾರ್ ಅಭಿಪ್ರಾಯಪಟ್ಟರು.

ನಾನು ಬಾಂಬ್‌ಗೆ ಹೆದರುವುದಿಲ್ಲ, ಆದರೆ...

ನಾನು ಬಾಂಬ್‌ಗೆ ಹೆದರುವುದಿಲ್ಲ, ಆದರೆ ಇವರಿಗೆ ಹೆದರುತ್ತೇನೆ ಎಂದು ಮಾಜಿ ವಿಧಾನಸಭಾಧ್ಯಕ್ಷ ರಮೇಶ್ ಕುಮಾರ್ ಪತ್ರಕರ್ತರತ್ತ ಬೊಟ್ಟು ಮಾಡಿ ಹೇಳಿದರು.

ಹೊರಗಿನ ವಾತಾವರಣ ಪ್ರಕ್ಷುಬ್ಧವಾಗಿದೆ. ಯಾವುದೇ ಪಕ್ಷ ಅಥವಾ ಸರ್ಕಾರವನ್ನು ದೃಷ್ಟಿಯಲ್ಲಿಟ್ಟುಕೊಂಡು ನಾನು ಮಾತನಾಡುವುದಿಲ್ಲ. ಮಾತನಾಡಿ ಈಗಾಗಲೇ ಬೆಲೆ ತೆತ್ತಿದ್ದೇನೆ ಅದಕ್ಕೇ ಮಾತನಾಡುವುದಿಲ್ಲ ಎಂದರು.

ನಾನು ಹೇಳುವುದನ್ನು ಇವರು ಬರೆದು ಬಿಡುತ್ತಾರೆ. ನಾನು ಬಾಂಬ್‌ಗೆ ಹೆದರುವುದಿಲ್ಲ, ಇವರಿಗೆ ಹೆದರುತ್ತೇನೆ ಎಂದು ಪತ್ರಕರ್ತರ ಕಡೆ ನೋಡಿ ಹೇಳಿದರು. ಒಬ್ಬ ರಾಜಕಾರಣಿಗೆ ಚುನಾವಣೆಗೆ ನಿಂತ ಸಂದರ್ಭದಲ್ಲಿ ಒಂದು ಸಣ್ಣ ಮನೆ ಹಾಗೂ ಮೋಟಾರು ವಾಹನ ಇರುತ್ತದೆ. ಅದೇ ಐದು ವರ್ಷದಲ್ಲಿ 38 ಕೋಟಿಯಾಗುತ್ತದೆ, ಇನ್ನೈದು ವರ್ಷಕ್ಕೆ 78 ಕೋಟಿಯಾಗುತ್ತದೆ. ಹಣ ಮಾಡುವ ಈ ಕಲೆ ಹೇಗೆ ಎಂಬ ಚಿಂತೆ ನನ್ನನ್ನು ಕಾಡುತ್ತಿದೆ ಎಂದರು.

ಇವತ್ತು ಕಾರ್ಪೊರೇಷನ್, ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಚುನಾವಣೆಗೆ ಕೋಟಿ ಹಣ ಬೇಕಾಗಿದೆ. ಇಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಸಂವಿಧಾನ ರಚನೆಯಲ್ಲಿ ಭಿನ್ನಾಭಿಪ್ರಾಯ ಬಂದಾಗ ಡಾ. ಅಂಬೇಡ್ಕರ್ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ ಹೊರಬಂದರು. ಆದರೆ ಈಗಿನ ನಮ್ಮ ಸಚಿವರಿಗೆ ಕತ್ತು ಹಿಡಿದು ಹೊರಗೆ ದಬ್ಬಿದರೂ ಹೋಗುವುದಿಲ್ಲ ಎಂದು ಹೇಳಿದರು.

ಸಂವಿಧಾನವನ್ನು ದುರ್ಬಲಗೊಳಿಸುವ ಪ್ರಯತ್ನ ನಡೆಯುತ್ತಿದೆ. ಈ ಹಿನ್ನೆಲೆಯಲ್ಲಿ ದಿಟ್ಟತನದಿಂದ ಜನರು ಹೋರಾಟ ಮಾಡಬೇಕು. ಹೋರಾಟ ಮಾಡದಿದ್ದರೆ ಸಂವಿಧಾನವನ್ನು ಕಾಪಾಡುವವರು ಯಾರು ಎಂದು ಪ್ರಶ್ನಿಸಿದರು.

ಆದರೆ ನಮ್ಮನ್ನು ಆಯ್ಕೆ ಮಾಡಿ ಕಳುಹಿಸುವ ಜನಪ್ರತಿನಿಧಿಗಳು ಓಲೈಕೆ ರಾಜಕಾರಣ ಮಾಡುತ್ತಿದ್ದಾರೆ. ಸಂಸತ್ ಹಾಗೂ ವಿಧಾನಸಭೆಯಲ್ಲಿ ನಾಯಕರನ್ನು ಹೊಗಳುತ್ತಿದ್ದಾರೆ. ನೀವು ಅಮಾವಾಸ್ಯೆಯಲ್ಲಿ ಬೆಳಗುವ ಬೆಳದಿಂಗಳು ಎಂದೇಳುವ ಹೊಗಳುಭಟ್ಟರಾಗಿದ್ದಾರೆ ಎಂದು ರಮೇಶ್ ಕುಮಾರ್ ಹೇಳಿದರು.

ವಿವಿಧ ಸೌಲಭ್ಯಗಳಿಗೆ ಅರ್ಜಿ ಆಹ್ವಾನ

ಮೈಸೂರು,ಆ.6– ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮದ ವತಿಯಿಂದ 2024–25ನೇ ಸಾಲಿಗೆ ವಿವಿಧ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಯೋಜನೆಯಡಿ ಸ್ವಯಂ ಉದ್ಯೋಗ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ) ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗಗಳ ಅರ್ಜಿದಾರರು ಸೇವಾಸಿಂಧು ಪೋರ್ಟಲ್ https://sevasindhu.Karnataka.gov.in ಮೂಲಕ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಗಸ್ಟ್ 31 ರೊಳಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ https://kaad.Karnataka.gov.in ಅಥವಾ ನಿಗಮದ ಸಹಾಯವಾಣಿ ಸಂಖ್ಯೆ 080–22374832, 80507 70004, 8050 770005 ಹಾಗೂ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ 0821–2341194 ಅನ್ನು ಸಂಪರ್ಕಿಸಬಹುದು

ರೈತರಿಗೆ ಮೂರು ದಿನಗಳ ತರಬೇತಿ ಕಾರ್ಯಕ್ರಮ

ಮೈಸೂರು, ಆ.6–ನಾಗನಹಳ್ಳಿಯ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಆಗಸ್ಟ್ 12 ರಿಂದ 14 ರವರೆಗೆ ಶುಂಠಿ ಬೆಳೆಯಲ್ಲಿ ಸೂಕ್ಷ್ಮ ನೀರಾವರಿ, ರಸಾವರಿ ತಾಂತ್ರಿಕತೆಗಳು ಮತ್ತು ಆಧುನಿಕ ಬೇಸಾಯ ಪದ್ಧತಿಗಳ ಅಳವಡಿಕೆ ಮೂಲಕ ಅಧಿಕ ಲಾಭ ಎಂಬ ವಿಷಯದ ಬಗ್ಗೆ ರೈತ, ರೈತಮಹಿಳೆಯರಿಗೆ ಮೂರು ದಿನಗಳ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ತರಬೇತಿಯಲ್ಲಿ ಭಾಗವಹಿಸುವ ರೈತ, ರೈತಮಹಿಳೆಯರಿಗೆ ಊಟ ಮತ್ತು ವಸತಿ ವ್ಯವಸ್ಥೆಯನ್ನು ಒದಗಿಸಲಾಗುವುದು. ಆಸಕ್ತ ರೈತ, ರೈತಮಹಿಳೆಯರು ತಮ್ಮ ಹೆಸರನ್ನು ತರಬೇತಿ ಕೇಂದ್ರದ ಕೃಷಿ ಅಧಿಕಾರಿ ದೂ.ಸಂ: 8277933205ಗೆ ಕರೆಮಾಡಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬಹುದು. ರೈತರು ತರಬೇತಿಗೆ ಬರುವಾಗ FID ನಂಬರ್, ಆಧಾರ್ ಮತ್ತು ಬ್ಯಾಂಕ್ ಪಾಸ್ ಪುಸ್ತಕ ಜೆರಾಕ್ಸ್ ಪ್ರತಿಗಳನ್ನು ತಪ್ಪದೇ ತರುವುದು. ಮೈಸೂರು ಜಿಲ್ಲೆಯ 45 ರೈತ, ರೈತ ಮಹಿಳೆಯರಿಗೆ ಮಾತ್ರ ಅವಕಾಶವಿದ್ದು, ಮೊದಲು ನೋಂದಣಿ ಮಾಡಿದವರಿಗೆ ಆದ್ಯತೆ ನೀಡಲಾಗುವುದು ಎಂದು ನಾಗನಹಳ್ಳಿಯ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶಾಸಕರಾದ ದದ್ದಲ್, ಚೆನ್ನಾರೆಡ್ಡಿ ಬಂಧಿಸದಿದ್ದರೆ ಜನರು ಬೀದಿಗಿಳಿದು ಹೋರಾಟ ಮಾಡುತ್ತಾರೆ


ಸರ್ಕಾರಕ್ಕೆ ಮಾಜಿ ಶಾಸಕ ಸಾ.ರಾ.ಮಹೇಶ್ ಎಚ್ಚರಿಕೆ

ಮೈಸೂರು, ಆ.6(ಬಿಎಲ್‌ಯು)– ವಾಲ್ಮೀಕಿ ಹಗರಣದಲ್ಲಿ ಭಾಗಿಯಾಗಿರುವ ಶಾಸಕ ದದ್ದಲ್ ಹಾಗೂ ಪಿಎಸ್‌ಐ ಪರಶುರಾಮ್ ಸಾವಿಗೆ ಕಾರಣರಾಗಿರುವ ಶಾಸಕ ಚೆನ್ನಾರೆಡ್ಡಿಯನ್ನು ಕೂಡಲೇ ಬಂಧಿಸದಿದ್ದರೆ ರಾಜ್ಯದ ಜನರು ಬೀದಿಗಿಳಿದು ಹೋರಾಟ ಮಾಡಲಿದ್ದಾರೆ ಎಂದು ಮಾಜಿ ಶಾಸಕ ಸಾ.ರಾ.ಮಹೇಶ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಎಚ್ಚರಿಸಿದರು.

ನಗರದ ರಮಾವಿಲಾಸ ರಸ್ತೆಯ ತಮ್ಮ ಕಚೇರಿಯಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಕರಣ ಗಂಭೀರತೆ ಪಡೆಯುವ ಮುನ್ನ ಎಚ್ಚೆತ್ತುಕೊಳ್ಳಿ ಎಂದರು.

ವಾಲ್ಮೀಕಿ ನಿಗಮ ಹಗರಣದಲ್ಲಿ ಇಡಿಯವರು ನನ್ನನ್ನು ಬಂಧಿಸುವ ಮುನ್ನ ನೀವೇ ಬಂಧಿಸಿ ಎಂದು ದದ್ದಲ್ ಎಸ್‌ಐಟಿಗೆ ದುಂಬಾಲು ಬಿದ್ದರು. ಆದರೂ ಈ ತನಕ ದದ್ದಲ್‌ನನ್ನು ಬಂಧಿಸಿಲ್ಲವೇಕೆ? ಎಂದು ಪ್ರಶ್ನಿಸಿದರು.

ಹಾಗೆಯೇ ಯಾದಗಿರಿ ಪೊಲೀಸ್ ಠಾಣೆಯ ಪಿಎಸ್‌ಐ ಪರಶುರಾಮ್ ಸಾವಿಗೆ ಕಾರಣರಾದ ಶಾಸಕ ಚೆನ್ನಾರೆಡ್ಡಿಯನ್ನು ಇನ್ನೂ ಬಂಧಿಸಿಲ್ಲವೇಕೆ? ಎಂದು ಪ್ರಶ್ನಿಸಿದ ಸಾ.ರಾ.ಮಹೇಶ್, ಎರಡು ಪ್ರಕರಣದಲ್ಲಿ ಶಾಸಕರನ್ನು ರಕ್ಷಿಸುವುದು ನಿಮ್ಮ ಉದ್ದೇಶ ಎಂಬುದು ಸ್ಪಷ್ಟವಾಗಿದೆ.



ಮೈಸೂರಿನ ತಮ್ಮ ಕಚೇರಿಯಲ್ಲಿ ಮಂಗಳವಾರ ಮಾಜಿ ಶಾಸಕ ಸಾ.ರಾ.ಮಹೇಶ್ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಪಿಎಸ್‌ಐ ಪರಶುರಾಮ್ ಪತ್ನಿಗೆ ಸರ್ಕಾರಿ ಉದ್ಯೋಗ ನೀಡುವುದಾಗಿ ಗೃಹ ಸಚಿವ ಡಾ.ಪರಮೇಶ್ವರ್ ಭರವಸೆ ನೀಡುತ್ತಾರೆ. ಸರ್ಕಾರಿ ಕೆಲಸದಲ್ಲಿರುವ ಪತಿ ಮೃತಪಟ್ಟರೆ ಪತ್ನಿಗೆ ಉದ್ಯೋಗ ನೀಡಬೇಕೆಂಬುದು ಸರ್ಕಾರದ ನಿಯಮದಲ್ಲೇ ಇದೆ. ಆದರೂ ಡಾ.ಪರಮೇಶ್ವರ್ ದೊಡ್ಡ ಉಪಕಾರ ಮಾಡುವಂತೆ ಹೇಳುತ್ತಿದ್ದಾರೆ ಎಂದರು.

ಪೊಲೀಸ್ ಅಧಿಕಾರಿಗಳಿಗೆ ರಕ್ಷಣೆ ನೀಡದ ಈ ಸರ್ಕಾರ ಇನ್ನು ಜನ ಸಾಮಾನ್ಯರಿಗೆ ಯಾವ ರೀತಿ ರಕ್ಷಣೆ ನೀಡುತ್ತದೆ. ಹೆಚ್.ಡಿ.ರೇವಣ್ಣ ಪ್ರಕರಣದಲ್ಲಿ ತರಾತುರಿಯಲ್ಲಿ ಆರೋಪ ಪಟ್ಟಿ ಸಲ್ಲಿಸುತ್ತಾರೆ. ಆದರೆ ಆರೋಪಿ ಸ್ಥಾನದಲ್ಲಿರುವ ಈ ಇಬ್ಬರು ಶಾಸಕರನ್ನು ಇನ್ನು ಏಕೆ ಬಂಧಿಸಿಲ್ಲ ಎಂದು ಪ್ರಶ್ನಿಸಿದರು.

ಇಂತಹ ಜನ ವಿರೋಧಿ ನೀತಿಯಿಂದ ಜನರು ಬೇಸತ್ತಿದ್ದಾರೆ. ಬೀದಿಗಿಳಿದು ಹೋರಾಟ ಮಾಡುವ ಮುನ್ನ ಎಚ್ಚೆತ್ತುಕೊಳ್ಳಿ. ತಪ್ಪಿತಸ್ಥ ಶಾಸಕರನ್ನು ಕೂಡಲೇ ಬಂಧಿಸಿ ಎಂದು ಆಗ್ರಹಿಸಿದರು.

ಮುಡಾ ಹಾಗೂ ವಾಲ್ಮೀಕಿ ಹಗರಣದ ವಿರುದ್ಧ ಬಿಜೆಪಿ ಹಾಗೂ ಜೆಡಿಎಸ್ ನಡೆಸುತ್ತಿರುವ ಪಾದಯಾತ್ರೆಯ ಸಮಾವೇಶ ಆಗಸ್ಟ್ 10 ರಂದು ಮೈಸೂರಿನಲ್ಲಿ ನಡೆಯಲಿದೆ ಎಂದು ಹೇಳಿದರು. ಸರ್ಕಾರದ ವಿರುದ್ಧ ಪ್ರಶ್ನೆ ಮಾಡಿದರೆ ನಿಮ್ಮ ವಿಚಾರ ಕೆದಕುತ್ತೇವೆ ಎಂದು ವಿರೋಧ ಪಕ್ಷಗಳನ್ನು ಕಾಂಗ್ರೆಸ್‌ನವರು ಬ್ಲ್ಯಾಕ್‌ಮೇಲ್ ಮಾಡುತ್ತಾರೆ. ಅಧಿಕಾರ ಯಾವತ್ತೂ ಶಾಶ್ವತವಲ್ಲ. ಇರುವಷ್ಟು ದಿನ ಜನಪರ ಕೆಲಸ ಮಾಡಿ ಎಂದು ಸಾ.ರಾ.ಮಹೇಶ್ ಸಲಹೆ ನೀಡಿದರು.

ಎಸ್‌ಐಟಿ ಅಲ್ಲ ಇದು ಎಸ್‌ಎಸ್‌ಐಟಿ

ರಾಜ್ಯ ಸರ್ಕಾರ ರಚನೆ ಮಾಡಿರುವುದು ಎಸ್‌ಐಟಿ ಅಲ್ಲ, ಇದು ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಇನ್ವೆಸ್ಟಿಗೇಷನ್ ಟೀಂ (ಎಸ್‌ಎಸ್‌ಐಟಿ). ಇವರಿಬ್ಬರ ಮಾರ್ಗದರ್ಶನದ ಮೇರೆಗೆ ಎಸ್‌ಐಟಿ ಕಾರ್ಯನಿರ್ವಹಿಸುತ್ತಿದೆ ಎಂದು ಸಾರಾ ಮಹೇಶ್ ಆರೋಪಿಸಿದರು.

ತಮ್ಮ ಮಾತು ಕೇಳುವ ಅಧಿಕಾರಿಗಳಿಗೆ ಆಯಕಟ್ಟಿನ ಸ್ಥಳದಲ್ಲಿ ನಿಯುಕ್ತಿ ಮಾಡುತ್ತಾರೆ. ರಾಜಕಾರಣಿಗಳ ಓಲೈಸಿ ವರ್ಗಾವಣೆ ಪಡೆದುಕೊಳ್ಳುವ ವ್ಯವಸ್ಥೆ ದೂರವಾಗುವ ತನಕ ಪರಶುರಾಮ್‌ರಂತಹ ಅಧಿಕಾರಿಗಳು ಬಲಿಯಾಗುತ್ತಾರೆ ಎಂದು ಆಪಾದಿಸಿದರು.

ಒಂದೊಂದು ಹುದ್ದೆಯ ವರ್ಗಾವಣೆಗೆ ಇಂತಿಷ್ಟು ಹಣ ನಿಗದಿ ಮಾಡಿದ್ದಾರೆ. ಹೀಗೆ ಹಣ ಕೊಟ್ಟು ವರ್ಗಾವಣೆಗೊಳ್ಳುವ ಅಧಿಕಾರಿ ಪ್ರಾಮಾಣಿಕವಾಗಿ ಕೆಲಸ ಮಾಡಲು ಹೇಗೆ ಸಾಧ್ಯ?

ಹೀಗೆ ವರ್ಗಾವಣೆಯಲ್ಲಿ ಹಣ ದೋಚುವ ಬದಲು ಭಿಕ್ಷೆ ಬೇಡುವುದು ಲೇಸು. ನನ್ನ ರಾಜಕೀಯ ಜೀವನದಲ್ಲಿ ಇಂತಹ ಕೆಟ್ಟ ಸರ್ಕಾರವನ್ನು ಎಂದೂ ನೋಡಿಲ್ಲ ಎಂದು ಬೇಸರಿಸಿದರು.

ಶಾಸಕ ಸಿ.ಎನ್.ಮಂಜೇಗೌಡ, ಜೆಡಿಎಸ್ ನಗರಾಧ್ಯಕ್ಷ ಕೆ.ಟಿ.ಚಲುವೇಗೌಡ, ಮಾಜಿ ಮೇಯರ್ ಎಂ.ಜೆ.ರವಿಕುಮಾರ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	**(ದೂ: 2521923)**
ಪೇಚಿ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ರಾಯನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ಔರಾನ್ ಮೇ ಕಹಾನ್ ದಮ್ ಥಾ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ಕಲ್ಕಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಫ್ಯಾಮಿಲಿ ಡ್ರಾಮಾ (ಕ)	4 ಪ್ರದರ್ಶನಗಳು
ರಾಜಕಮಲ್	
ಬೋಟ್ (ತ)	4 ಪ್ರದರ್ಶನಗಳು
ಸಂಗಂ	
ಪೇಚಿ (ತ)	4 ಪ್ರದರ್ಶನಗಳು
ಲಿಡೋ	
ಹೆಬ್ಬುಲಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಪೇಚಿ (ತ)	4 ಪ್ರದರ್ಶನಗಳು
ಪ್ರಭಾ	
ಅಡವಿಕಟ್ಟೆ (ಕ)	2 ಪ್ರದರ್ಶನಗಳು
ಇಷ್ಕ್ (ಕ)	2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ರಾಯನ್ (ತ): ಬೆ.10.40ಕ್ಕೆ, ಮ.1.30ಕ್ಕೆ, ರಾ.10ಕ್ಕೆ, ಔರಾನ್ ಮೇ ಕಹಾನ್ ದಮ್ ಥಾ (ಹಿಂ): ಸಂ.4.20ಕ್ಕೆ, ರಾ.7.10ಕ್ಕೆ.
ಸ್ಕ್ರೀನ್ 2	ಮರ್ಫ್ಯು ಪಿಡಿಕಥಾ ಮನಿಥನ್ (ತ): ಮ.1ಕ್ಕೆ, ಕಲ್ಕಿ 2898 ಎಡಿ(3ಡಿ) (ತೆ): ಮ.3.35ಕ್ಕೆ, ಕಲ್ಕಿ 2898 ಎಡಿ (ಕ): ರಾ.7ಕ್ಕೆ, ಔರಾನ್ ಮೇ ಕಹಾನ್ ದಮ್ ಥಾ (ಹಿಂ): ಬೆ.10.25ಕ್ಕೆ.
ಸ್ಕ್ರೀನ್ 3	ಇಷ್ಕ್ (ಕ): ಬೆ.10.45ಕ್ಕೆ, ಹೆಬ್ಬುಲಿ (ಕ): ಮ.1.40ಕ್ಕೆ, ಬಡ್ಡಿ (ತೆ): ಸಂ.4.30ಕ್ಕೆ, ಶಿವಂ ಭಜೆ (ತೆ): ರಾ.7.20ಕ್ಕೆ, ರೂಪಾಂತರ (ಕ): ರಾ.9.55ಕ್ಕೆ.
ಸ್ಕ್ರೀನ್ 4	ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಬೆ.10.45ಕ್ಕೆ, ಮ.1.30ಕ್ಕೆ, ಸಂ.4.15ಕ್ಕೆ, ರಾ.7ಕ್ಕೆ, ರಾ.9.45ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ರೂಪಾಂತರ (ಕ): ಬೆ.10.35ಕ್ಕೆ, ಲವ್ ಲಿ (ಕ): ಮ.1ಕ್ಕೆ, ಕೆಂಡ (ಕ): ಮ.3.50ಕ್ಕೆ, ಫ್ಯಾಮಿಲಿ ಡ್ರಾಮ (ಕ): ಸಂ.6.25ಕ್ಕೆ, ವಿದ್ಯಾರ್ಥಿ ವಿದ್ಯಾರ್ಥಿನಿಯರೆ (ಕ): ರಾ.9.15ಕ್ಕೆ.
ಸ್ಕ್ರೀನ್ 2	ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಬೆ.10.30ಕ್ಕೆ, ರಾ.7ಕ್ಕೆ, ರಾಯನ್ (ತೆ): ಮ.1.15ಕ್ಕೆ, ಸಂ.4.10ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಮ.1.25ಕ್ಕೆ, ಸಂ.4ಕ್ಕೆ, ರಾ.9.20ಕ್ಕೆ, ರಾಯನ್ (ತ): ಸಂ.6.30ಕ್ಕೆ.
ಸ್ಕ್ರೀನ್ 4	ರಾಯನ್ (ತ): ಬೆ.10.30ಕ್ಕೆ, ಕಲ್ಕಿ 2898 ಎಡಿ (ಕ): ಮ.1.15ಕ್ಕೆ, ರೂಪಾಂತರ (ಕ): ಸಂ.4.35ಕ್ಕೆ, ರಾ.9ಕ್ಕೆ, ರುದ್ರವೀಣ (ತೆ): ರಾ.7ಕ್ಕೆ.

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.



ಮೈಸೂರು ಬೇಸಿಗೆ ರೇಸ್

5ನೇ ದಿನ, ಬುಧವಾರ, 7–8–2024

ಇಂದಿನ ರೇಸ್‌ಗೆ ನಮ್ಮ ಆಯ್ಕೆ

ಮೊದಲನೇ ರೇಸ್ ಮಧ್ಯಾಹ್ನ 1.30 ಗಂಟೆಗೆ

I. ಆಲ್ ಬರೇಟೊ ಪ್ಲೇಟ್–1600 ಮೀ. ರೇಟೆಡ್ 00 ರಿಂದ 25. ಮಧ್ಯಾಹ್ನ 1.30ಕ್ಕೆ
1. ಗೋಲ್ಡನ್ ಬರ್ಡ್ 2. ಪೋಲಾರ್ ವಿಂಡ್ 3. ಸಾರೊ ಬರ್ಡ್

II. ಗೋವಾ ಪ್ಲೇಟ್ ಡಿII–1400 ಮೀ. ರೇಟೆಡ್ 20 ರಿಂದ 45.(ನೋ ವ್ಹಿಪ್) ಮ.2.00ಕ್ಕೆ
1. ವಿಜಯ ಬ್ರೇವ್ 2. ಸ್ಪಾರ್ಕ್‌ಲಿಂಗ್ ನೈಟ್ 3. ಡಿ ಲಾರ್ಡ್

III. ಕಪಿಲಾ ಪ್ಲೇಟ್ –1100 ಮೀ. ರೇಟೆಡ್ 20 ರಿಂದ 45. ಮ.2.30ಕ್ಕೆ
1. ಶೇರ್ ಬ್ಲಿಸ್ 2. ಸೈಂಟ್ ಎಮಿಲಿಯನ್ 3. ಕೌಂಟ್ರಿ ಮ್ಯಾಜಿಕ್

IV. ಗೋವಾ ಪ್ಲೇಟ್ ಡಿI–1400 ಮೀ. ರೇಟೆಡ್ 20 ರಿಂದ 45. (ನೋ ವ್ಹಿಪ್) ಮ.3.00ಕ್ಕೆ
1. ಬ್ರೈಟೆಸ್ಟ್ ಸ್ಟಾರ್ 2. ಡಿ.ರೋಮನ್ಸ್ ರೀಜೆನ್ಸ್ 3. ಕಾನ್ಫಿಡೆಂಟ್ ಗೇಮ್

V. ಹೆಗ್ಗಡದೇವನಕೋಟೆ ಪ್ಲೇಟ್ ಡಿII–1100 ಮೀ. ರೇಟೆಡ್ 40 ರಿಂದ 65. ಮ.3.30ಕ್ಕೆ
1. ಪ್ಯೂರಿಯಸ್ ಪನ್ 2. ಎಮರಾಲ್ಡ್ ಕ್ವೀನ್ 3. ಸಿಯೋಲ್ ಫಾರ್ ಬುಲೆಟ್

VI. ಎಸ್.ವಿ.ಸುಬ್ರಹ್ಮಣ್ಯಂ ಮೆಮೋರಿಯಲ್ ಟ್ರೋಫಿ –1400 ಮೀ. 3 ವರ್ಷ (ಟರ್ಮ್ಸ್). ಸಂಜೆ.4.00ಕ್ಕೆ
1. ಶಿರೋಕ್ 2. ಎನ್‌ಆರ್‌ಐ ವಿಕ್ಟರಿ 3. ಬೇಸಿಕ್ ಇನ್‌ಸ್ಟಿಂಟ್

VII. ರಾಣಿ ಬೆನ್ನೂರು ಪ್ಲೇಟ್–1200 ಮೀ. ರೇಟೆಡ್ 80 ಮತ್ತು ಮೇಲ್ವರ್ಗ. ಸಂ.4.30ಕ್ಕೆ
1. ಬಹನ್‌ಸಿನಿ 2. ಸೆಗೇರಾ 3. ವಿಜಯ ಪಾಲ್ಕನ್

VIII. ಹೆಗ್ಗಡದೇವನಕೋಟೆ ಪ್ಲೇಟ್ ಡಿI–1100 ಮೀ. ರೇಟೆಡ್ 40 ರಿಂದ 65. ಸಂ.5.00ಕ್ಕೆ
1. ಎಡ್ಡಿ ದಿ ಈಗಲ್ 2. ಸ್ಮಾರ್ಟ್ ಕ್ಯಾಡಿಲಾಕ್ 3. ಬ್ಲೂ ಆರಿಜಿನ್

ದಿನದ ಅತ್ಯುತ್ತಮ	ಬ್ರೈಟೆಸ್ಟ್ ಸ್ಟಾರ್
ಡಬ್ಬಲ್	ಶೇರ್ ಬ್ಲಿಸ್, ಬಹನ್‌ಸಿನಿ
ಜಾಕ್‌ಪಾಟ್	4, 5, 6, 7 ಮತ್ತು 8
ಮಿನಿ ಜಾಕ್‌ಪಾಟ್	5, 6, 7 ಮತ್ತು 8
I ಟ್ರಿಬಲ್	1, 2 ಮತ್ತು 3
II ಟ್ರಿಬಲ್	3, 4 ಮತ್ತು 5
III ಟ್ರಿಬಲ್	6, 7 ಮತ್ತು 8
ಎಕ್ಸ್‌ಆಕ್ಟ್	1 ರಿಂದ 8

ಟಿಪ್‌ಸ್ಟರ್ ಪಿಜಿಸಿ

ಮೈಸೂರಲ್ಲಿ ಸಿಗ್ನಲ್ ಲೈಟ್‌ಗಳು ಬಂದ್; ಆತಂಕದಲ್ಲೇ ಸರ್ಕಲ್ ದಾಟುತ್ತಿರುವ ವಾಹನ ಚಾಲಕರು

ಹಲವೆಡೆ ಕೂದಲೆಳೆ ಅಂತರದಲ್ಲಿ ತಪ್ಪಿದ ಅಪಘಾತ; ಚಾಲಕರು ನಿಟ್ಟುಸಿರು

ಮೈಸೂರು, ಆ.6– ಮೈಸೂರು ನಗರದಲ್ಲಿ ಟ್ರಾಫಿಕ್ ಸಿಗ್ನಲ್ ಅವ್ಯವಸ್ಥೆಯಿಂದ ವಾಹನ ಸವಾರರಿಗೆ ಸಂಚಕಾರ ಎದುರಾಗಿದೆ.

ನಗರದಲ್ಲಿ ದಿನೇ ದಿನೇ ವಾಹನಗಳ ಸಂಖ್ಯೆ ಹೆಚ್ಚುತ್ತಲೇ ಇದೆ. ಪ್ರಮುಖ ರಸ್ತೆಗಳಲ್ಲಿ ವಾಹನ ದಟ್ಟಣೆ ನಿರ್ಮಾಣವಾಗುತ್ತಿದೆ. ಆದರೆ ಸುಗಮ ಸಂಚಾರಕ್ಕೆ ಅನುವಾಗುವ ಟ್ರಾಫಿಕ್ ಸಿಗ್ನಲ್ ಲೈಟ್‌ಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸದಿರುವುದು ದೊಡ್ಡ ಸಮಸ್ಯೆಯಾಗಿ ಪರಿಣಮಿಸಿದೆ. ವಾಹನ ಸಂಚಾರ ಅಸ್ತವ್ಯಸ್ತಗೊಂಡು ಸವಾರರು ಪರಿತಪಿಸುತ್ತಿದ್ದಾರೆ. ಸಣ್ಣ–ಪುಟ್ಟ ಅಪಘಾತಗಳು ಸಂಭವಿಸುತ್ತಲೇ ಇವೆ. ಕೆಲವರು ಕೂದಲೆಳೆ ಅಂತರದಲ್ಲಿ ಅಪಘಾತದಿಂದ ಪಾರಾಗಿರುವುದಾಗಿ ತಿಳಿದುಬಂದಿದೆ.



ಸಾಂದರ್ಭಿಕ ಚಿತ್ರ

ರೈಲ್ವೆ ನಿಲ್ದಾಣ ಸಮೀಪದ ದಾಸಪ್ಪ ವೃತ್ತ ಹಾಗೂ ಮೆಟ್ರೋಪೋಲ್ ವೃತ್ತದಲ್ಲೂ ಆಗಾಗ್ಗೆ ಸಿಗ್ನಲ್ ಲೈಟ್ ಕೆಟ್ಟು ಹೋಗುತ್ತಿವೆ. ನಿರಂತರ ಮಳೆಯಿಂದ ಸೋಲಾರ್ ಪ್ಯಾನಲ್‌ನಲ್ಲಿ ಸಮಸ್ಯೆಯಾಗುತ್ತಿದ್ದು, ದುರಸ್ತಿ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆದರೆ ರಿಪೇರಿಯಾಗಿ ಕೆಲವೇ ಗಂಟೆಯಲ್ಲಿ ಮತ್ತೆ ಸಿಗ್ನಲ್ ಲೈಟ್ ಆಫ್ ಆಗುತ್ತಿದೆ. ಇನ್ನು ಕೆಆರ್‌ಎಸ್ ಮುಖ್ಯರಸ್ತೆ, ಯಾದವಗಿರಿ ಜಂಕ್ಷನ್ ಹಾಗೂ ಒಂಟಿಕೊಪ್ಪಲು ದೇವಸ್ಥಾನದ ಬಳಿಯ ಜಂಕ್ಷನ್‌ನಲ್ಲಿ ಸಿಗ್ನಲ್ ಲೈಟ್ ಕೆಟ್ಟು ಹಲವು ದಿನಗಳಾಗಿದ್ದು, ಇನ್ನೂ ರಿಪೇರಿಯಾಗಿಲ್ಲ. ಇಲ್ಲಿ ಪ್ರವಾಸಿ ವಾಹನಗಳು, ಸಾರಿಗೆ ಬಸ್‌ಗಳು ಸೇರಿದಂತೆ ಹೆಚ್ಚು ವಾಹನ ಸಂಚಾರ ಇರುವುದರಿಂದ ಸ್ವಲ್ಪ ಎಚ್ಚರ ತಪ್ಪಿದರೂ ಅಪಘಾತ ಸಂಭವಿಸುವ ಆತಂಕ ಸೃಷ್ಟಿಯಾಗಿದೆ.

ಬೋಗಾದಿ ರಸ್ತೆ–ವಿಶ್ವಮಾನವ ಜೋಡಿ ರಸ್ತೆ ಜಂಕ್ಷನ್, ಕುಕ್ಕರಗಳ್ಳಿ ಕೆರೆ ಸಿಗ್ನಲ್ ಕೂಡ ಇದಕ್ಕೆ ಹೊರತಾಗಿಲ್ಲ. ಒಮ್ಮೆ ಇಲ್ಲಿನ ಸಿಗ್ನಲ್ ಕಂಟ್ರೋಲರ್ ಯೂನಿಟ್ ಅನ್ನು ಕಿಡಿಗೇಡಿಗಳು ಒಡೆದು ಹಾಕಿದ್ದರಿಂದ ಹಲವು ದಿನ ತೊಂದರೆಯಾಗಿತ್ತು. ಎಲ್ಲಾ ಕಡೆಯಿಂದ ವಾಹನಗಳು ಬಂದು ಜಾಮ್ ಆಗುತ್ತಿದ್ದವು. ಇತ್ತೀಚೆಗೆ ಸರಿಪಡಿಸಲಾಗಿದೆಯಾದರೂ ಸಮರ್ಪಕವಾಗಿ ನಿರ್ವಹಿಸುತ್ತಿಲ್ಲ ಎಂದು ಸಾರ್ವಜನಿಕರು ತಿಳಿಸಿದ್ದಾರೆ.

ನಗರದ ಹಲವು ಸಿಗ್ನಲ್‌ಗಳು ಸರಿಯಾಗಿ ಕಾರ್ಯ ನಿರ್ವಹಿಸುತ್ತಿಲ್ಲ. ಕೆಂಪು ದೀಪ ಬೆಳಗಿದರೆ ಹಸಿರು ದೀಪ ಆನ್ ಆಗುವುದೇ ಇಲ್ಲ. ಹಳದಿ ದೀಪ ಮಾಯವಾಗಿ ಬಹಳ ದಿನಗಳಾಗಿವೆ. ನಿರಂತರ ಮಳೆಯಿಂದ ಸಮಸ್ಯೆಯಾಗಿತ್ತು. ವಾರ್ಷಿಕ ನಿರ್ವಹಣೆ ಗುತ್ತಿಗೆ(ಎಎಂಸಿ) ಪಡೆದಿರುವ ಸಂಸ್ಥೆ ಮೂಲಕ ದುರಸ್ತಿ ಮಾಡಿಸಲಾಗುತ್ತಿದೆ ಎಂಬುದು ಪೊಲೀಸರ ಮಾತು. ಆದರೆ ಎಎಂಸಿ ಅವಧಿ ವಿಸ್ತರಣೆಯಲ್ಲಿ ಏನೋ ತೊಡಕಾಗಿರುವುದರಿಂದ ಸರಿಯಾಗಿ ನಿರ್ವಹಣೆ ಮಾಡುತ್ತಿಲ್ಲ ಎಂಬುದು ಮತ್ತೊಂದು ಮೂಲದ ಮಾಹಿತಿ.

ಇದೇನೇ ಇರಲಿ ಮೈಸೂರು ನಗರದ ಸುರಕ್ಷಿತ ಹಾಗೂ ಸುಗಮ ಸಂಚಾರ ವ್ಯವಸ್ಥೆ ಬರಬೇಕು. ಎಲ್ಲರೂ ಕಡ್ಡಾಯವಾಗಿ ಸಂಚಾರ ನಿಯಮ ಪಾಲನೆ ಮಾಡಬೇಕು ಎಂದು ನೀತಿಪಾಠ ಹೇಳುವ ಪೊಲೀಸರು, ಭಾರಿ ದಂಡದ ಮೂಲಕವೂ ಎಚ್ಚರಿಸುತ್ತಿದ್ದಾರೆ. ಇತ್ತೀಚೆಗೆ ಇನ್ನೂ ಒಂದು ಹೆಜ್ಜೆ ಮುಂದೆ ಹೋಗಿ ಅತ್ಯಾಧುನಿಕ ಎಐ ಕ್ಯಾಮರಾಗಳ ಮೂಲಕ ಸಂಚಾರ ನಿಯಮ ಉಲ್ಲಂಘಿಸುವವರ ಮೇಲೆ ಹದ್ದಿನ ಕಣ್ಣಿಟ್ಟಿದ್ದಾರೆ. ಆದರೆ ಸಿಗ್ನಲ್ ಲೈಟ್‌ಗಳೇ ಸರಿ ಇಲ್ಲದಿರುವಾಗ ನಿಯಮ ಪಾಲನೆ ಹಾಗೂ ಉಲ್ಲಂಘನೆಯನ್ನು ಯಾವ ಮಾನದಂಡದಲ್ಲಿ ನಿರ್ಧರಿಸುತ್ತಾರೆ. ಸಾರ್ವಜನಿಕರ ಸುರಕ್ಷತೆ ದೃಷ್ಟಿಯಿಂದ ಕೂಡಲೇ ಎಲ್ಲಾ ಸಿಗ್ನಲ್ ಲೈಟ್‌ಗಳನ್ನು ಸುಸ್ಥಿತಿಯಲ್ಲಿಡುವ ಕೆಲಸಕ್ಕೆ ಮುಂದಾಗಬೇಕು ಎಂದು ಒತ್ತಾಯಿಸಿದ್ದಾರೆ.

ವೃತ್ತಿಪರ ತರಬೇತಿ

ಮೈಸೂರು, ಆ.6–ಕೇಂದ್ರೀಯ ಪೆಟ್ರೋಕೆಮಿಕಲ್ಸ್ ತಂತ್ರಜ್ಞಾನ ಸಂಸ್ಥೆ (ಸಿಪೆಟ್), ರಾಜ್ಯದ 8th/10th/PUC/ITI/JOC/Diploma/BE/Any Degree (Pass/Fail) ವಿದ್ಯಾರ್ಹತೆ ಹೊಂದಿರುವ ನಿರುದ್ಯೋಗಿ ಯುವಕ, ಯುವತಿಯರಿಗೆ ಮೈಸೂರಿನಲ್ಲಿ ವಿವಿಧ ವೃತ್ತಿಪರ ಯೋಜನೆಯಡಿ 6 ತಿಂಗಳ ಅವಧಿಯ ಪಾಲಿಮರ್ ವಸ್ತುಗಳ ತಯಾರಿಕಾ ತಂತ್ರಜ್ಞಾನ, ವಾಹನದ ಬಿಡಿ ಭಾಗಗಳು, ವಿದ್ಯುತ್ ಉಪಕರಣದ ಬಿಡಿ ಭಾಗಗಳು ಇತ್ಯಾದಿ ವಸ್ತುಗಳ ತಯಾರಿಕೆಯ ಬಗ್ಗೆ ತರಬೇತಿಯನ್ನು ಉಚಿತ ಊಟ, ವಸತಿಯೊಂದಿಗೆ ನೀಡುತ್ತಿದೆ.

ತರಬೇತಿ ನಂತರ ಉದ್ಯೋಗಾವಕಾಶಕ್ಕೆ ನೆರವು ನೀಡಲಾಗುವುದು. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ತಿಂಗಳಿಗೆ 500 ರೂಪಾಯಿ ಶಿಷ್ಯವೇತನ ನೀಡಲಾಗುವುದು. ಆಸಕ್ತಿಯುಳ್ಳ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕಪಟ್ಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಮೂಲ ದಾಖಲೆಗಳು ಮತ್ತು 6 ಪಾಸ್‌ಪೋರ್ಟ್ ಅಳತೆಯ ಫೋಟೋಗಳೊಂದಿಗೆ ನೇರವಾಗಿ ಬಂದು ದಾಖಲಾತಿ ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ಸೆಂಟ್ರಲ್ ಇನ್‌ಸ್ಟಿಟ್ಯೂಟ್ ಆಫ್ ಪೆಟ್ರೋಕೆಮಿಕಲ್ಸ್ ಇಂಜಿನಿಯರಿಂಗ್ ಅಂಡ್ ಟೆಕ್ನಾಲಜಿ, 437/A, ಹೆಬ್ಬಾಳು ಕೈಗಾರಿಕಾ ಪ್ರದೇಶ, ಮೈಸೂರು–570 016. ದೂರವಾಣಿ ಸಂಖ್ಯೆಗೆ ಕರೆ ಮಾಡಿ 9380756024, 9845873498, 7899669920, 0821–2510619.

ಮೈಸೂರು ವಾರಿಯರ್ಸ್ ತಂಡಕ್ಕೆ ಕಿಶನ್ ಬೇಡರೆ, ಗೌತಮ್ ಸಾಗರ್ ಆಯ್ಕೆ

ಮೈಸೂರು,ಆ.6(ಪಿಎಂ)– ಮೈಸೂರು ವಾರಿಯರ್ಸ್ ಕ್ರಿಕೆಟ್ ತಂಡದ ಮಾಲೀಕತ್ವ ಹೊಂದಿರುವ ಎನ್.ಆರ್.ಗ್ರೂಪ್ ವತಿಯಿಂದ ಮಹಾರಾಜ ಟ್ರೋಫಿ ಕೆಎಸ್‌ಸಿಎ ಟಿ20–2024ರ ಪಂದ್ಯಾವಳಿಯಲ್ಲಿ ತಂಡದ ಪರವಾಗಿ ಆಟವಾಡಲು ಕ್ಯಾಚ್‌ಮೆಂಟ್ ಏರಿಯಾ (ತಂಡದ ಮೂಲ ನಗರಗಳ ಆಟಗಾರರು) ನಿಯಮದಂತೆ ಮೈಸೂರು ವಲಯದ ಇಬ್ಬರು ಪ್ರತಿಭಾವಂತ ಆಟಗಾರರಾದ ಕಿಶನ್ ಬೇಡರೆ ಮತ್ತು ಗೌತಮ್ ಸಾಗರ್ ಅವರನ್ನು ಆಯ್ಕೆ ಮಾಡಲಾಗಿದೆ.

ಈ ಇಬ್ಬರು ಯುವ ಆಟಗಾರರು ತಂಡದ ಪರವಾಗಿ ತಮ್ಮ ಕೌಶಲ ಪ್ರದರ್ಶನಕ್ಕೆ ಸಜ್ಜಾಗಿದ್ದಾರೆ. ಕರ್ನಾಟಕ ರಣಜಿ ಟ್ರೋಫಿ ಆಟಗಾರ ಕಿಶನ್ ಬೇಡರೆ ತಮ್ಮ ಆಕರ್ಷಕ ಆಟ ಮತ್ತು ಕೌಶಲಗಳಿಂದ ಕ್ರಿಕೆಟ್ ವಲಯದ ಗಮನ ಸೆಳೆದಿದ್ದಾರೆ. ಅವರ ಅನುಭವ ಮತ್ತು ಆಟದ ಪರಿಣಿತಿ ಮೈಸೂರು ವಾರಿಯರ್ಸ್ ತಂಡಕ್ಕೆ



ಕಿಶನ್ ಬೇಡರೆ



ಗೌತಮ್ ಸಾಗರ್

ಹೆಚ್ಚಿನ ಲಾಭ ದೊರೆಯುವ ವಿಶ್ವಾಸವನ್ನು ತಂಡ ಹೊಂದಿದೆ. ಅಂತೆಯೇ ಗೌತಮ್ ಸಾಗರ್ ಅವರು ಅಸಾಧಾರಣ ಪ್ರತಿಭೆ ಹೊಂದಿರುವ ರಾಜ್ಯದ ಜೂನಿಯರ್ ತಂಡದ ಕ್ರಿಕೆಟ್‌ಪಟು ಆಗಿದ್ದಾರೆ. ಈ ಇಬ್ಬರು ಜೂನಿಯರ್ ಹಂತದಲ್ಲಿ ಪ್ರದರ್ಶಿಸಿರುವ ಅದ್ಭುತ ಪ್ರದರ್ಶನದಿಂದ ತಂಡಕ್ಕೆ ಸೇರ್ಪಡೆಯಾಗಿದ್ದಾರೆ.

ಈ ಕುರಿತಂತೆ ಮೈಸೂರು ವಾರಿಯರ್ಸ್ ತಂಡದ ಮಾಲೀಕರೂ ಆದ ಸೈಕಲ್ ಪ್ಯೂರ್ ಅಗರಬತ್ತಿ ವ್ಯವಸ್ಥಾಪಕ ನಿರ್ದೇಶಕ ಅರ್ಜುನ್ ರಂಗ ಮಾತನಾಡಿ, ಉದಯೋನ್ಮುಖ ಕ್ರಿಕೆಟ್ ಪಟುಗಳಿಗೆ ಅವಕಾಶ ಕಲ್ಪಿಸಲು 'ಟ್ಯಾಲೆಂಟ್ ಹಂಟ್' ಶೀರ್ಷಿಕೆಯಡಿ ಬೆಂಗಳೂರು ಮತ್ತು ಮೈಸೂರಿನಲ್ಲಿ ಪ್ಲೇಯರ್ ಸೆಲೆಕ್ಷನ್ ಕ್ಯಾಂಪ್ ಆಯೋಜಿಸಲಾಗಿತ್ತು. ಈ ಕ್ಯಾಂಪ್‌ನಲ್ಲಿ ಕಿಶನ್ ಬೇಡರೆ ಮತ್ತು ಗೌತಮ್ ಸಾಗರ್ ಅಭೂತಪೂರ್ವ ಪ್ರದರ್ಶನ ತೋರಿದ್ದರು. ಇದೀಗ ಅವರಿಬ್ಬರು ನಮ್ಮ ತಂಡಕ್ಕೆ ಸೇರ್ಪಡೆಯಾಗಿದ್ದು, ಸ್ಥಳೀಯ ಪ್ರತಿಭೆಗಳನ್ನು ಬೆಳೆಸುವ ನಮ್ಮ ಬದ್ಧತೆಗೆ ಇದು ಪುರಾವೆಯಾಗಿದೆ ಎಂದು ಹೇಳಿದರು.

ಆ.15ರಿಂದ ಸೆ.1ರವರೆಗೆ ಬೆಂಗಳೂರು ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಮಹಾರಾಜ ಟ್ರೋಫಿಯ ಮೂರನೇ ಆವೃತ್ತಿಯ ಪಂದ್ಯಾವಳಿ ನಡೆಯಲಿದೆ. ಪಂದ್ಯಾವಳಿಯಲ್ಲಿ ಮೈಸೂರು ವಾರಿಯರ್ಸ್, ಹುಬ್ಬಳ್ಳಿ ಟೈಗರ್ಸ್, ಬೆಂಗಳೂರು ಬ್ಲಾಸ್ಟರ್ಸ್, ಮಂಗಳೂರು ಡ್ರಾಗನ್ಸ್, ಗುಲ್ಬರ್ಗಾ ಮಿಸ್ಟಿಕ್ಸ್ ಮತ್ತು ಶಿವಮೊಗ್ಗ ಲಯನ್ಸ್ ಸೇರಿದಂತೆ ಕರ್ನಾಟಕದ 6 ತಂಡಗಳು ಪ್ರಶಸ್ತಿಗಾಗಿ ಹಣಾಹಣಿ ನಡೆಸಲಿವೆ.

ಗರ್ಭಗುಡಿಯಲ್ಲಿ ದರ್ಶನ್ ಫೋಟೋ ಇಟ್ಟು ಪೂಜೆ!

ಅರ್ಚಕನನ್ನು ವಜಾಗೊಳಿಸಿದ ಮುಜರಾಯಿ ಇಲಾಖೆ

ಬೆಂಗಳೂರು: ಚಿತ್ರದುರ್ಗದ ರೇಣುಕಾಸ್ವಾಮಿ ಪ್ರಕರಣದಲ್ಲಿ ಜೈಲು ಸೇರಿರುವ ನಟ ದರ್ಶನ್ ಫೋಟೋ ಇಟ್ಟು ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದ್ದಾರೆ.

ಬಳ್ಳಾರಿ ಜಿಲ್ಲೆಯ ಕುರುಗೋಡು ಪಟ್ಟಣದ ಐತಿಹಾಸಿಕ ದೊಡ್ಡಬಸವೇಶ್ವರ ದೇವಸ್ಥಾನದಲ್ಲಿನ ಬೃಹತ್ ನಂದಿ ವಿಗ್ರಹದ ಎದುರು ಅಮವಾಸ್ಯೆಯಂದು ನಟ ದರ್ಶನ್ ಫೋಟೋಗಳನ್ನು ಇಟ್ಟು ಪೂಜೆ ಮಾಡಿರುವ ದೃಶ್ಯಗಳು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಈ ಬಗ್ಗೆ ಹಲವು ಭಕ್ತರು ಅಸಮಾಧಾನ ಹೊರಹಾಕಿದ್ದಾರೆ. ದೊಡ್ಡಬಸವೇಶ್ವರ ದೇವಸ್ಥಾನದಲ್ಲಿ ಮಲ್ಲಿ ಎಂಬ ಅರ್ಚಕ ನಟ ದರ್ಶನ್ ಫೋಟೋ ಇಟ್ಟು ಪೂಜೆ ಮಾಡಿದ್ದಾರೆ. ಪೂಜೆ ಮಾಡಿ ಮಂಗಳಾರತಿ ಎತ್ತಿದ್ದಾರೆ. ಈ ಫೋಟೋಗಳು ವೈರಲ್ ಆಗುತ್ತಿದ್ದಂತೆ ಧಾರ್ಮಿಕ ದತ್ತಿ ಇಲಾಖೆ ಕಾರ್ಯ ನಿರ್ವಾಹಕ ಅಧಿಕಾರಿ ಹನುಮಂತಪ್ಪ ರವರು ಅರ್ಚಕ ಮಲ್ಲಿ ಅವರನ್ನು ಅಮಾನತು ಮಾಡಿದ್ದಾರೆ. ವಿಚಾರಣೆ ಮುಗಿಯೋವರೆಗೂ ದೇವಸ್ಥಾನಕ್ಕೆ ಬಾರದಂತೆ ನಿಷೇಧ ಹೇರಿದ್ದಾರೆ ಎನ್ನಲಾಗಿದೆ.

ಸರ್ಕಾರದ ಧಾರ್ಮಿಕ ಇಲಾಖೆಯ ಸುಪರ್ದಿಯಲ್ಲಿರುವ ದೇವಸ್ಥಾನದಲ್ಲಿ ಹೀಗೆ ಮಾಡುವುದು ಸರಿಯೇ ಎನ್ನುವ ಪ್ರಶ್ನೆ ಎದ್ದಿದೆ. ದರ್ಶನ್ ಅವರಿಗೆ ಒಳ್ಳೆಯದಾಗಲಿ, ಸಂಕಷ್ಟಗಳು ದೂರವಾಗಲಿ ಎಂದು ಪೂಜೆ ಮಾಡಿಸಲಿ. ಅದು ಬಿಟ್ಟು ದೇವರ ಮುಂದೆ ಫೋಟೋ ಇಟ್ಟು ಪೂಜೆ ಮಾಡಿರುವುದು ಎಷ್ಟು ಸರಿ ಎಂದು ಅನೇಕರು ಅಸಮಾಧಾನ ಹೊರಹಾಕಿದ್ದಾರೆ.

ಅವಾಮಿ ಲೀಗ್ ನಾಯಕನ ಹೋಟೆಲ್‌ನಲ್ಲಿ ಬೆಂಕಿ ಹಚ್ಚಿ 24 ಮಂದಿಯ ಹತ್ಯೆ

ಢಾಕಾ: ಅರಾಜಕತೆ ಸೃಷ್ಟಿಯಾಗಿರುವ ಬಾಂಗ್ಲಾದೇಶದ ಭೀಕರ ಪರಿಸ್ಥಿತಿ ಕುರಿತಾದ ಒಂದೊಂದೇ ವರದಿಗಳು ಹೊರಬೀಳುತ್ತಿವೆ.

ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ಪಕ್ಷ ಅವಾಮಿ ಲೀಗ್‌ನ ನಾಯಕರೊಬ್ಬರ ಒಡೆತನದಲ್ಲಿರುವ ಢಾಕಾದ ಹೋಟೆಲ್‌ನಲ್ಲಿ ಒಬ್ಬ ಇಂಡೋನೇಷ್ಯಾ ನಾಗರಿಕ ಸೇರಿ 24 ಮಂದಿಯನ್ನು ಉದ್ರಿಕ್ತರ ಗುಂಪು ಜೀವಂತ ಸುಟ್ಟು ಹಾಕಿರುವ ಪ್ರಕರಣ ಬಯಲಾಗಿದೆ. ಶೇಖ್ ಹಸೀನಾ ಪ್ರಧಾನಿ ಹುದ್ದೆಗೆ ರಾಜೀನಾಮೆ ಸಲ್ಲಿಸಿ ದೇಶ ತೊರೆಯುತ್ತಿದ್ದಂತೆ ಈ ಕುಕೃತ್ಯ ನಡೆದಿದೆ ಎಂದು ಸ್ಥಳೀಯ ಪತ್ರಕರ್ತರು ಮತ್ತು ಆಸ್ಪತ್ರೆಯ ಮೂಲಗಳು ತಿಳಿಸಿವೆ. ಸೋಮವಾರ ರಾತ್ರಿ ಉದ್ರಿಕ್ತರ ಗುಂಪು ಜಬೀರ್ ಇಂಟರ್‌ನ್ಯಾಷನಲ್ ಹೋಟೆಲ್‌ಗೆ ನುಗ್ಗಿ ಸಿಬ್ಬಂದಿಗೆ ಬೆಂಕಿ ಹಚ್ಚಿ, ಬಳಿಕ, ಹೋಟೆಲ್‌ಗೂ ಬೆಂಕಿ ಹಚ್ಚಿದ್ದಾರೆ. ಈ ಹೋಟೆಲ್ ಅವಾಮಿ ಲೀಗ್‌ನ ಜೊಶೋರ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಹೀನ್ ಚಕ್ಲದಾರ್‌ಗೆ ಸೇರಿದ್ದಾಗಿದೆ.

ಜೋಶರ್ ಸರ್ಕಾರಿ ಆಸ್ಪತ್ರೆಯ ವೈದ್ಯರು 24 ಸುಟ್ಟ ಮೃತದೇಹಗಳು ಆಸ್ಪತ್ರೆಗೆ ಬಂದಿರುವುದಾಗಿ ಖಚಿತಪಡಿಸಿದ್ದಾರೆ. ಮತ್ತಷ್ಟು ಜನರು ಸಾವಿಗೀಡಾಗಿರುವ ಆತಂಕ ಸಹ ಇದೆ. ಅವಾಮಿ ಲೀಗ್ ನೇತೃತ್ವದ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದ ಉದ್ರಿಕ್ತರ ಗುಂಪು ಹೋಟೆಲ್‌ನ ನೆಲಮಹಡಿಗೆ ಬೆಂಕಿ ಹಚ್ಚಿದ್ದು, ಅದು ಕೆಲವೇ ಸಮಯದಲ್ಲಿ ಪೂರ್ತಿ ಹೋಟೆಲ್ ಅನ್ನು ವ್ಯಾಪಿಸಿದೆ. ರಾಜಧಾನಿ ಢಾಕಾದ ಬಂಗಬಂಧು ಅವೆನ್ಯೂನಲ್ಲಿರುವ ಅವಾಮಿ ಲೀಗ್ ಕೇಂದ್ರ ಕಚೇರಿ, ಪಕ್ಷದ ನಾಯಕರು ಮತ್ತು ಕಾರ್ಯಕರ್ತರಿಗೆ ಸೇರಿದ ಮನೆಗಳು, ವ್ಯಾಪಾರಿ ಕೇಂದ್ರಗಳನ್ನು ಪ್ರತಿಭಟನಾಕಾರರು ಧ್ವಂಸಗೊಳಿಸಿದ್ದಾರೆ. ಹಸೀನಾ ರಾಜೀನಾಮೆಗೆ ಒತ್ತಾಯಿಸಿ ವಿದ್ಯಾರ್ಥಿಗಳು ಭಾನುವಾರದಿಂದ ಅಸಹಕಾರ ಚಳವಳಿ ಆರಂಭಿಸಿದ್ದರು. ಪ್ರತಿಭಟನೆ ತೀವ್ರ ಸ್ವರೂಪ ಪಡೆಯುತ್ತಿದ್ದಂತೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ ದೇಶ ತೊರೆದಿದ್ದರು. ಸದ್ಯ, ಸೇನಾ ಮುಖ್ಯಸ್ಥರು ಮಧ್ಯಂತರ ಸರ್ಕಾರ ರಚಿಸಿದ್ದಾರೆ. ಹಸೀನಾ ನಿರ್ಗಮನದ ಸುದ್ದಿ ಹರಡುತ್ತಿದ್ದಂತೆ ಅರಾಜಕತೆ ತಾಂಡವವಾಗಿದ್ದು, ಮತ್ತಷ್ಟು ಹಿಂಸಾಚಾರ ನಡೆದಿದೆ.

ನಿಧನ

ಬಿ.ಕೆ.ಹುಚ್ಚಪ್ಪ



ಮೈಸೂರು, ಆ.6–ಕೆಇಬಿ ನಿವೃತ್ತ ನೌಕರರು ಹಾಗೂ ಹೂಟಗಳ್ಳಿ ನಿವಾಸಿ ಬಿ.ಕೆ.ಹುಚ್ಚಪ್ಪ(67) ಅವರು ಇಂದು ರಾತ್ರಿ ನಿಧನರಾದರು. ಮೃತರು ಪುತ್ರ, ಪುತ್ರಿ, ಸೊಸೆ, ಅಳಿಯ, ಮೊಮ್ಮಕ್ಕಳು ಸೇರಿ ಅಪಾರ ಬಂಧು ವರ್ಗ ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ನಾಳೆ (ಬುಧವಾರ) ಮಧ್ಯಾಹ್ನ 12 ಗಂಟೆಗೆ ಹೂಟಗಳ್ಳಿ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸಿ.ಎಸ್.ಕೃಷ್ಣಮೂರ್ತಿ



ಮೈಸೂರು, ಆ.6–ಮೈಸೂರು ನಾರಾಯಣಶಾಸ್ತ್ರಿ ರಸ್ತೆ ಹಾಗೂ ನಿವೃತ್ತ ಮುಖ್ಯ ಶಿಕ್ಷಕ ಸಿ.ಎಸ್.ಕೃಷ್ಣಮೂರ್ತಿ(83) ನಿನ್ನೆ ಸೋಮವಾರ ಬೆಂಗಳೂರಿನಲ್ಲಿ ನಿಧನರಾದರು. ಹಲವಾರು ಸಾಮಾಜಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದು, ಬಡಗನಾಡು ಬಳಗ ಕಾರ್ಯದರ್ಶಿಯೂ ಆಗಿದ್ದರು. ಮೃತರು ಇಬ್ಬರು ಪುತ್ರರು, ಮೊಮ್ಮಕ್ಕಳು ಹಾಗೂ ಬಂಧು ಮಿತ್ರರನ್ನು ಅಗಲಿದ್ದಾರೆ. ಇವರ ಪತ್ನಿ 2018ರಲ್ಲಿ ನಿಧನ ಹೊಂದಿದ್ದರು. ಇವರ ಅಂತ್ಯಕ್ರಿಯೆ ಬೆಂಗಳೂರು ಚಾಮರಾಜಪೇಟೆ ಚಿತಾಗಾರದಲ್ಲಿ ಇಂದು ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.